ಸಂಪುಟ: 05 ಸಂಚಿಕೆ: 96 ಪುಟಗಳು: 08 ಗುರುವಾರ 19 ಜೂನ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

**ಮುಂಜಾನೆ ಮಾತು**
ಕನಸು, ಕನಸು, ಕನಸು.
ಕನಸುಗಳು ಆಲೋಚನೆಗಳಾಗಿ ರೂಪಾಂತರಗೊಳ್ಳುತ್ತವೆ ಮತ್ತು ಆಲೋಚನೆಗಳು ಕಾರ್ಯರೂಪಕ್ಕೆ ಬರುತ್ತವೆ.

ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಸಾಕಪ್ಪಾ ಸಾಕು ಸಿಎಂ ಸ್ಥಾನ ಸಚಿವರ ಖಾತೆ ಕ್ಯಾತೆಗೆ ಹೈರಾಣ!

• ಉದಯವಾಹಿನಿ, ಬೆಂಗಳೂರು

ಸಂಪುಟ ವಿಸ್ತರಣೆ ಅಥವಾ ಪುನಾರಚನೆ ಚರ್ಚೆಯ ನಡುವೆ ಖಾತೆ ಕ್ಯಾತೆ ಶುರುವಾಗಿದೆ. ಕೆಲವು ಸಚಿವರು ತಮ್ಮ ಖಾತೆ ಬದಲಾವಣೆಗೆ ಇಚ್ಛೆ ವ್ಯಕ್ತಪಡಿಸುತ್ತಿದ್ದಾರೆ. ಪ್ರಭಾವಿ ಖಾತೆಗಳನ್ನೇ ನಿರ್ವಹಿಸುತ್ತಿರುವ ಸಚಿವರು ಈ ಖಾತೆ ಬೇಡ, ಬೇರೆ ಖಾತೆ ಕೊಡಿ ಎಂದು ದಂಬಾಲು ಬೀಳುತ್ತಿದ್ದಾರೆ. ಅದಕ್ಕೆ ಅವರದ್ದೇ ಆದ ಕಾರಣಗಳನ್ನು ಕೊಡುತ್ತಿದ್ದಾರಂತೆ. ಪರಿಣಾಮ ಸಿಎಂ ಸಿದ್ದರಾಮಯ್ಯ ಕೂಡಾ ಖಾತೆ ಕ್ಯಾತೆಯಿಂದ ಸುಸ್ತಾಗಿದ್ದಾರೆ. ಕೆಲವು ಸಚಿವರಿಗೆ ತಮ್ಮ ಖಾತೆಯ ಬಗ್ಗೆ ಭಿನ್ನ ಕಾರಣಗಳಿಗಾಗಿ ಬೇಸರ ಮೂಡಿದೆ.

ಸಾರ್ವಜನಿಕ ಹಾಗೂ ಮಾಧ್ಯಮಗಳ ಒತ್ತಡವು ಕೆಲವು ಸಚಿವರಿಗೆ ತಮ್ಮ ಖಾತೆಯನ್ನು ತೊರೆಯುವಂತೆ ಪ್ರೇರೇಪಿಸಿದೆ. ಮತ್ತೆ ಕೆಲವರು ನಿರೀಕ್ಷಿತ ಖಾತೆ ಸಿಗದೆ ಇರುವ ಬೇಸರದಲ್ಲಿದ್ದಾರೆ. ಸಂಪುಟ ಪುನಾರಚನೆಯ ಸಂದರ್ಭದಲ್ಲಿ ಖಾತೆಯನ್ನು ಬದಲಾವಣೆ ಮಾಡಿ ಎಂಬ ಬೇಡಿಕೆ ಇಡುತ್ತಿದ್ದಾರೆ. ಇನ್ನು ಖಾತೆ ವಿಚಾರವಾಗಿ ಸಚಿವರೊಬ್ಬರು ಸಂಪುಟ ಸಭೆಯಲ್ಲೂ ಪ್ರಸ್ತಾಪ ಮಾಡಿದ್ದರು ಎಂಬ ಮಾಹಿತಿ ಇದೆ. ಕಳೆದ ಸಚಿವ ಸಂಪುಟ ಸಭೆಯಲ್ಲಿ ಜಾತಿ ಗಣತಿ ವಿಚಾರವಾಗಿ ಗಂಭೀರ ಚರ್ಚೆ ನಡೆಯುತ್ತಿತ್ತು. ಮರು ಸಮೀಕ್ಷೆಗೆ ಸಿಎಂ ಸಿದ್ದರಾಮಯ್ಯ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಂಡಿದ್ದರು. ಈ ಸಂದರ್ಭದಲ್ಲಿ ಹಿರಿಯ ಸಚಿವರೊಬ್ಬರು ಖಾತೆ ಬದಲಾವಣೆಯ ಬಗ್ಗೆ ಪ್ರಸ್ತಾಪ ಮಾಡಿದ್ದಾರೆ.

## 35 ಸಾವಿರ ಖಾಲಿ ಹುದ್ದೆ ಹಂತ ಹಂತವಾಗಿ ಭರ್ತಿ

• ಉದಯವಾಹಿನಿ, ಬೆಂಗಳೂರು

ಇಂಧನ ಇಲಾಖೆಯಲ್ಲಿ ಖಾಲಿ ಇರುವ 35,000 ಸಾವಿರ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುವುದು.

ಇಲಾಖೆಯ 532 ಮಂದಿ ಪೌರಕಾರ್ಮಿಕರ ಹುದ್ದೆ ಖಾಯಂ ಮಾಡುತ್ತೇವೆ ಎಂದು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವವನ್ನು ಉದ್ಘಾಟಿಸಿ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ಇಲಾಖೆಯಲ್ಲಿ ಖಾಲಿ ಇರೋ 35,000 ಹುದ್ದೆ ಹಂತ ಹಂತವಾಗಿ ಭರ್ತಿ ಮಾಡುತ್ತೇವೆ. ಜೊತೆಗೆ ಇಲಾಖೆಯಲ್ಲಿರೋ 532 ಪೌರ ಕಾರ್ಮಿಕರ ಹುದ್ದೆ ಖಾಯಂ ಮಾಡುತ್ತೇವೆ ಎಂದು ಭರವಸೆ ನೀಡಿದ್ದಾರೆ. ನಮ್ಮದು ನುಡಿದಂತೆ ನಡೆಯುವ ಸರ್ಕಾರ. ನಿಮ್ಮ ಬೇಡಿಕೆಗಳ ಪರಿಶೀಲಿಸಿ ಕ್ರಮ ತೆಗೆದುಕೊಳ್ಳುತ್ತೇವೆ. ಎನ್‌ಪಿಎಸ್ ಜಾರಿ ಮಾಡಿದ್ದು ಕೇಂದ್ರ ಸರ್ಕಾರ. ನಾವು ಒಪಿಎಸ್ ಜಾರಿಯನ್ನು ಪ್ರಣಾಳಿಕೆಯಲ್ಲೇ ಘೋಷಿಸಿದ್ದೇವೆ. ಈ ಬಗ್ಗೆ ಚರ್ಚಿಸಿ ಅಗತ್ಯ ಕ್ರಮ ತೆಗೆದುಕೊಳ್ಳುತ್ತೇವೆ ಎಂದಿದ್ದಾರೆ.

## ಸಾರಿಗೆ ಇಲಾಖೆ ಮಾದರಿಯಲ್ಲಿ ಕುಡಿಯುವ ನೀರಿನ ದರ ಪರಿಷ್ಕರಣೆ


• ಉದಯವಾಹಿನಿ, ಬೆಂಗಳೂರು

ಕಾವೇರಿ ನೀರಿನ ದರ ಪರಿಷ್ಕರಣೆಯಿಂದ ವಾರ್ಷಿಕವಾಗಿ 500 ಕೋಟಿ ರೂ.ನಷ್ಟು ನಷ್ಟ ಕಡಿಮೆ ಮಾಡುವ ಪ್ರಯತ್ನ ಮಾಡಲಾಗಿದೆ. ನಷ್ಟವನ್ನು ಸಂಪೂರ್ಣವಾಗಿ ನಿಲ್ಲಿಸಲು ಸಾಧ್ಯವಾಗದಿದ್ದರೂ ಅದನ್ನು ನಿಯಂತ್ರಿಸುವ ಪ್ರಯತ್ನ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಸಾರಿಗೆ ಇಲಾಖೆ ಮಾದರಿಯಲ್ಲಿ ದರ ಪರಿಷ್ಕರಣೆ ಮಾಡಲು ತೀರ್ಮಾನ ಮಾಡಿದ್ದೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರು ಜಲಮಂಡಳಿ ವತಿಯಿಂದ ಕಳೆದ ಮಾ.21 ರಿಂದ 28 ರವರೆಗೆ ನಡೆದ ಜಲ ಸಂರಕ್ಷಣೆ ಅಭಿಯಾನ ಸಪ್ತಾಹದಲ್ಲಿ 5,33,642 ಪ್ರತಿಜ್ಞೆ ಸ್ವೀಕರಿಸಿ, ಜಲ ಸಂರಕ್ಷಣೆಯಲ್ಲಿ ಗಿನ್ನಿಸ್ ವಿಶ್ವದಾಖಲೆ ಬರೆದ ಹಿನ್ನೆಲೆಯಲ್ಲಿ ಬೆಂಗಳೂರು ನಗರಾಭಿವೃದ್ಧಿ ಸಚಿವ, ಡಿಸಿಎಂ ಡಿ.ಕೆ. ಶಿವಕುಮಾರ್ ಅಧಿಕೃತ ಪ್ರಮಾಣ ಪತ್ರ ಸ್ವೀಕರಿಸಿ ಮಾತನಾಡಿದರು. ಬೆಂಗಳೂರಿನ ಖಾಸಗಿ ಹೋಟೇಲ್‌ನಲ್ಲಿ ನಡೆದ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಗಿನ್ನಿಸ್ ವರ್ಲ್ಡ್ ರೆಕಾರ್ಡ್ ತೀರ್ಪುಗಾರ ಸ್ವಪನಿಲ್ ದಂಗರಿಕರ್ ಪ್ರಮಾಣ ಪತ್ರ ವಿತರಿಸಿದರು.

## ನಾನು ಪಾಕಿಸ್ತಾನವನ್ನು ಪ್ರೀತಿಸ್ತೀನಿ, ನಾನೇ ಯುದ್ಧ ನಿಲ್ಲಿಸಿದ್ದು: ಟ್ರಂಪ್

• ಉದಯವಾಹಿನಿ, ಬೆಂಗಳೂರು

ಭಾರತ ಮತ್ತು ಪಾಕಿಸ್ತಾನ ಎರಡೂ ದೇಶಗಳ ಸೇನೆಗಳ ನಡುವಿನ ನೇರ ಮಾತುಕತೆಯ ನಂತರ ಮಿಲಿಟರಿ ದಾಳಿಯನ್ನು ನಿಲ್ಲಿಸಿ ಕದನವಿರಾಮ ಘೋಷಿಸಲಾಗಿದೆ. ಭಾರತ ಎಂದಿಗೂ ಮೂರನೇ ದೇಶದ ಮಧ್ಯಸ್ಥಿಕೆಯನ್ನು ಬಯಸಿಲ್ಲ, ಮುಂದೆ ಬಯಸುವುದೂ ಇಲ್ಲ ಎಂದು ಭಾರತದ ಪ್ರಧಾನಿ ನರೇಂದ್ರ ಮೋದಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ಮಂಗಳವಾರ ರಾತ್ರಿ ದೂರವಾಣಿ ಕರೆಯಲ್ಲಿ ಹೇಳಿದ್ದರು. ಆದರೆ, ಅದಾಗಿ ಒಂದೇ ದಿನದೊಳಗೆ ಡೊನಾಲ್ಡ್ ಟ್ರಂಪ್ ಮತ್ತೆ ಭಾರತ-ಪಾಕಿಸ್ತಾನದ ಯುದ್ಧವನ್ನು ನಾನೇ ನಿಲ್ಲಿಸಿದ್ದು ಎಂದು ಹೇಳಿಕೆ ನೀಡಿದ್ದಾರೆ. ಕಾಶ್ಮೀರದ ಮಾರಕ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಕೆಲವು ವಾರಗಳ ನಂತರ, ಮೇ ತಿಂಗಳಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಮಿಲಿಟರಿ ಸಂಘರ್ಷವನ್ನು ನಿಲ್ಲಿಸುವ ತಮ್ಮ ಹೇಳಿಕೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪುನರುಚ್ಚರಿಸಿದ್ದಾರೆ.



# ವರುಣನ ಅಬ್ಬರ ಸಂಚಾರ ದುಸ್ತರ

• ರಾಜ್ಯಾದ್ಯಂತ ಮುಂಗಾರು ಮಳೆ ಅಬ್ಬರ • ಅನಾಹುತಗಳ ಸರಮಾಲೆ • ಆಲಮಟ್ಟಿ ಡ್ಯಾಂಗೆ ಒಳಹರಿವು ಅಧಿಕ • ಭರ್ತಿಯತ್ತ ಜಲಾಶಯ ಭಾರೀ ಮಳೆ • ಕಬಿನಿ ಜಲಾಶಯ ಭರ್ತಿಗೆ ಕ್ಷಣಗಣನೆ • ನದಿ ಪಾತ್ರದ ಜನರಿಗೆ ಪ್ರವಾಹದ ಮುನ್ನೆಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ಈ ಮುಂಗಾರು ಆರಂಭಕ್ಕೂ ಮೊದಲೇ ಭರ್ಜರಿ ಮಳೆಯಾಗಿದೆ. ರಾಜ್ಯದ ಹಲವೆಡೆ ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಅನಾಹುತಗಳ ಸರಮಾಲೆಯನ್ನೇ ತಂದೊಡ್ಡಿದೆ. ಮಡಿಕೇರಿ, ಹಾಸನ, ಚಿಕ್ಕಮಂಗಳೂರು, ಕೊಡಗು, ಮಂಗಳೂರು, ಭಟ್ಕಳ, ಉಡುಪಿ, ಶಿವಮೊಗ್ಗ, ಕಾರವಾರ, ಬಳ್ಳಾರಿ, ಬೆಳಗಾವಿ ಸೇರಿ ವಿವಿಧೆಡೆ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

**ಮಡಿಕೇರಿ:** ವರ್ಣನ ಆರ್ಭಟಕ್ಕೆ ಕೊಡಗಿನ ಬಾಗಮಂಡಲದ ತ್ರಿವೇಣಿ ಸಂಗಮ ಸಂಪೂರ್ಣ ಮುಳುಗಡೆಯಾಗಿದ್ದು, ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯ ಪ್ರಮಾಣ ಹೆಚ್ಚಾಗಿದ್ದು, ಹಾರಂಗಿ ಡ್ಯಾಮ್‌ನಿಂದ ಸುಮಾರು 18 ಸಾವಿರ ಕ್ಯೂಸೆಕ್ ನೀರನ್ನು ಕಾವೇರಿ ನದಿಗೆ ಹರಿಸಲಾಗುತ್ತಿದೆ. ಕಾವೇರಿಯ ಉಗಮಸ್ಥಾನ ತಲಕಾವೇರಿಯಲ್ಲಿ ನೀರು ಉಕ್ಕಿ ಹರಿಯುತ್ತಿದೆ. ತ್ರಿವೇಣಿ ಸಂಗಮದ ಉದ್ಯಾನವನ, ಭಂಗಂಡೇಶ್ವರ ದೇವಾಲಯ ಆವರಣಕ್ಕೂ ನೀರು ನುಗ್ಗಿದೆ. ಆವರಣದಲ್ಲಿನ ಅಂಗಡಿ ಮುಗ್ಗಟ್ಟುಗಳನ್ನು ತೆರವು ಮಾಡುವಂತೆ ಸೂಚನೆ ನೀಡಲಾಗಿದೆ.ನಾಪೊಕ್ಲು, ಅಯ್ಯಂಗೇರಿ, ಸಣ್ಣಪುಲಿಕೊಟ್ಟು ರಸ್ತೆ ಮೇಲೆ ನೀರು ಹರಿಯುತ್ತಿದ್ದು, ಸಂಪರ್ಕ ಕಡಿತಗೊಂಡಿದೆ. ಹಾರಂಗಿ ಜಲಾಶಯದ ಒಳಹರಿವು ಹೆಚ್ಚಾಗಿದ್ದು, ಭದ್ರತಾ ದೃಷ್ಟಿಯಿಂದ ಈಗಾಗಲೇ 4 ಕ್ರಸ್ಟ್ ಗೇಟ್‌ಗಳ ಮೂಲಕ ನೀರು ಹರಿಬಿಡಲಾಗುತ್ತಿದೆ.

### ನಾರಾಯಣಪುರ ಡ್ಯಾಂ ಬಹುತೇಕ ಭರ್ತಿ

ನಾರಾಯಣಪುರ ಜಲಾಶಯದಲ್ಲಿ ಶೇ.77.25ರಷ್ಟು ನೀರು ಸಂಗ್ರಹವಾಗಿದ್ದು, ಸಂಪೂರ್ಣ ಭರ್ತಿಯಾಗಲು ಅಂದಾಜು 8 ಟಿಎಂಸಿ ನೀರಷ್ಟೇ ಬಾಕಿ ಇದೆ. ಬುಧವಾರ ಆಲಮಟ್ಟಿಯಿಂದ 50 ಸಾವಿರ ಕ್ಯುಸೆಕ್ ನೀರು ಹರಿಬಿಟ್ಟದ್ದರಿಂದ ನಾರಾಯಣಪುರ ಡ್ಯಾಂನ 13 ಗೇಟ್‌ಗಳಿಂದ 34,775 ಕ್ಯುಸೆಕ್ ಹಾಗೂ ವಿದ್ಯುದಾಗಾರದಿಂದ 6,000 ಕ್ಯುಸೆಕ್ ಸೇರಿ ಒಟ್ಟು 40,775 ಕ್ಯುಸೆಕ್ ನೀರನ್ನು ನದಿ ಪಾತ್ರಕ್ಕೆ ಹರಿಸಲಾಗುತ್ತಿದೆ. ಗರಿಷ್ಠ 492.25 ಮೀಟರ್ ಎತ್ತರದಲ್ಲಿ 33.313 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ



ನಾರಾಯಣಪುರ ಡ್ಯಾಂನಲ್ಲಿ ಬುಧವಾರ ಮಧ್ಯಾಹ್ನ 490.46 ಮೀಟರ್ ಎತ್ತರದಲ್ಲಿ 25.73 ಟಿಎಂಸಿ ನೀರು ಸಂಗ್ರಹವಾಗಿತ್ತು. ಒಳಹರಿವು 40 ಸಾವಿರ ಕ್ಯುಸೆಕ್ ಇದ್ದರೆ, ಹೊರಹರಿವು 40,775 ಕ್ಯುಸೆಕ್ ಇತ್ತು. ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯದ ನಾನಾ ಕಾಲುವೆಗಳಿಂದ ವಿಜಯಪುರ ಜಿಲ್ಲೆಯ ಸಾಕಷ್ಟು ಕೃಷಿ ಭೂಮಿ ನೀರಾವರಿಗೆ ಒಳಪಟ್ಟಿದೆ.

**ಬೆಳಗಾವಿ:** ಮಹಾರಾಷ್ಟ್ರದ ಪಶ್ಚಿಮಘಟ್ಟ ಮತ್ತು ಬೆಳಗಾವಿ ಜಿಲ್ಲೆಯಲ್ಲಿ ಮಳೆ ಜೋರಾಗಿ ಸುರಿಯುತ್ತಿದ್ದು, ಸಪ್ತನದಿಗಳು ಉಕ್ಕಿ ಹರಿಯುತ್ತಿವೆ. ಮಹಾರಾಷ್ಟ್ರದಲ್ಲಿ ಭಾರೀ ಮಳೆಯಿಂದ ಕೃಷ್ಣ, ವೇದಗಂಗ, ದೂದ್‌ಗಂಗ ನದಿಗಳಲ್ಲಿ ಒಳಹರಿವು ಹೆಚ್ಚಾಗಿದೆ. ಚಿಕ್ಕೋಡಿ ವಿಭಾಗ ವ್ಯಾಪ್ತಿಯ ಆರು ತಳಹಂತದ ಸೇತುವೆಗಳು ಜಲಾವೃತವಾಗಿದ್ದು, 12 ಗ್ರಾಮಗಳ ಸಂಪರ್ಕ ಕಡಿತಗೊಂಡಿದೆ.



ಕೃಷ್ಣಾನದಿಯ ಒಳಹರಿವು ಕೂಡ ದಿನೇ ದಿನೇ ಹೆಚ್ಚಾಗುತ್ತಿದೆ. ಖಾನಾಪುರದ ಕಾಡಂಚಿನಲ್ಲಿ ಮಳೆಯಾಗುತ್ತಿರುವುದರಿಂದ ಮಲಪ್ರಭ ನದಿ ಉಕ್ಕಿ ಹರಿಯುತ್ತಿದ್ದು, ಖಾನಾಪುರ ತಾಲ್ಲೂಕಿನ ಹಬ್ಬಾನಟ್ಟಿ ಗ್ರಾಮದಲ್ಲಿ ಆಂಜನೇಯ ಜಲಾವೃತಗೊಂಡಿದೆ.

**ಚಿಕ್ಕಮಗಳೂರು:** ಜಿಲ್ಲೆಯ ಕೊಪ್ಪ ತಾಲ್ಲೂಕಿನ ಹೊಸೂರು ಗ್ರಾಮದಲ್ಲಿ ತಡರಾತ್ರಿ ಸುರಿದ ಮಳೆಗೆ ಗಿಡ್ಡಪ್ಪ ಎಂಬುವರ ಮನೆಯ ಗೋಡೆ ಕುಸಿದಿದ್ದು, ಧವಸಧಾನ್ಯ, ಪೀಠೋಪಕರಣಗಳು ನಾಶವಾಗಿದ್ದು, ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಕಳಸಾ ತಾಲ್ಲೂಕಿನ ನೇರಸಣಿಗೆಯಲ್ಲಿ ಮರ ಬಿದ್ದು ಮನೆಯ ಮೇಲ್ಛಾವಣಿಗೆ ಹಾನಿಯಾಗಿದೆ. ತರಿಕೇರಿ ತಾಲ್ಲೂಕಿನ ಪ್ರವಾಸಿತಾಣ ಕಲತ್ತಗಿರಿ ಫಾಲ್ಸ್ ಧುಮುಕ್ಕಿ ಹರಿಯುತ್ತಿದ್ದು, ಪ್ರವಾಸಿಗರನ್ನು ತನ್ನತ್ತ ಆಕರ್ಷಿಸುತ್ತಿದೆ.

ಶೃಂಗೇರಿ ತಾಲ್ಲೂಕಿನ ನೆಮಾರು, ತನಿಕೋಡು ಬಳಿ ಗುಡ್ಡ ಕುಸಿದಿದ್ದು, ಮುಂಜಾಗ್ರತಾ ಕ್ರಮವಾಗಿ ರಾಷ್ಟ್ರೀಯ ಹೆದ್ದಾರಿ 169ರಲ್ಲಿ ಜೂ.20ರ ಬೆಳಗ್ಗೆ 8 ಗಂಟೆವರೆಗೂ ಸಂಚಾರ ನಿರ್ಬಂಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ.

**ಶಿವಮೊಗ್ಗ:** ನಿರಂತರ ಮಳೆಯಿಂದ ತುಂಗಾ ನದಿ ಮೈದುಂಬಿ ಹರಿಯುತ್ತಿದ್ದು, ಈಗಾಗಲೇ ಡ್ಯಾಮ್‌ನಿಂದ 37 ಸಾವಿರ ಕ್ಯೂಸೆಕ್ ನೀರು ಹೊರಬಿಟ್ಟಿದ್ದು, ನದಿ ಪಾತ್ರದಲ್ಲಿ ಪ್ರವಾಹದ ಆತಂಕ ಮನೆ ಮಾಡಿದೆ. ಹೊಸನಗರ ತಾಲ್ಲೂಕಿನ ಹುಲಿಕಲ್‌ಘಾಟ್ ಬಳಿ ಗುಡ್ಡ ಕುಸಿದಿದ್ದು, ಮತ್ತೆ ಅದೇ ಜಾಗದಲ್ಲಿ ಲಾರಿಯೊಂದು ಕೆಟ್ಟು ನಿಂತಿದ್ದರಿಂದ ಕಿಲೋಮೀಟರ್‌ಗಟ್ಟಲೇ ವಾಹನಗಳು ನಿಂತಿದ್ದ ದೃಶ್ಯ ಕಂಡುಬಂತು.

**ಹಾಸನ:** ಜಿಲ್ಲೆಯಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಹೇಮಾವತಿ ಜಲಾಶಯದ ಒಳಹರಿವು ಹೆಚ್ಚಳವಾಗಿದೆ. 26.120 ಟಿಎಂಸಿ ನೀರು ಸಂಗ್ರಹವಾಗಿದ್ದು, ಭದ್ರತಾ ದೃಷ್ಟಿಯಿಂದ ಯಾವುದೇ ಸಮಯದಲ್ಲಾದರೂ ನೀರು ಹೊರ ಬಿಡಲಾಗುವುದು. ನದಿಪಾತ್ರದ ಜನರು ಸುರಕ್ಷಿತ ಸ್ಥಳಗಳಿಗೆ ತೆರಳುವಂತೆ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

**ಬಳ್ಳಾರಿ:** ತಾಲ್ಲೂಕಿನ ಶಿರಾವಾರ ಗ್ರಾಮದ ಸರ್ಕಾರಿ ಶಾಲೆಯ ಕೊಠಡಿಯ ಮೇಲ್ಛಾವಣಿ ಕುಸಿದು ವಿದ್ಯಾರ್ಥಿ ತಲೆಗೆ ಪೆಟ್ಟಾಗಿದೆ.

**ಕಲಬುರಗಿ:** ತಾಲ್ಲೂಕಿನಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಯಿಂದ ಗೋಡೆಗೆ ನೀರು ಇಳಿದು ಕುಸಿದು ಬಿದ್ದ ಪರಿಣಾಮ ಗುಡೂರು ಗ್ರಾಮದ ಚಂದ್ರಶೇಖರ್ ಎಂಬ ಬಾಲಕ ಮೃತಪಟ್ಟಿದ್ದಾನೆ.

### ಮಹಾರಾಷ್ಟ್ರದಲ್ಲಿ ಮಳೆ

ಮಹಾಬಳೇಶ್ವರ, ಕೊಯ್ನಾ, ನವಜಾ, ರಾಧನಗರಿ, ವಾರಣಾ, ತಾರಳಿ, ದೂಧಗಂಗಾ ಸೇರಿದಂತೆ ಮಹಾರಾಷ್ಟ್ರದ ಕೃಷ್ಣಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಕಳೆದ ಕೆಲ ದಿನಗಳಿಂದ ಸುರಿಯುತ್ತಿರುವ ಮಳೆ ಮುಂದುವರಿದಿದೆ. ಹೀಗಾಗಿ ಅಪಾರ ಪ್ರಮಾಣದ ನೀರು ಆಲಮಟ್ಟಿ ಜಲಾಶಯಕ್ಕೆ ಹರಿದು ಬರುತ್ತಿದೆ. ಗರಿಷ್ಠ 519.60 ಮೀಟರ್ ಎತ್ತರದಲ್ಲಿ 123.081 ಟಿಎಂಸಿ ಸಂಗ್ರಹ ಸಾಮರ್ಥ್ಯದ ಆಲಮಟ್ಟಿ ಜಲಾಶಯದಲ್ಲಿ ಬುಧವಾರ ಬೆಳಗ್ಗೆ 515.36 ಮೀಟರ್ ಎತ್ತರದಲ್ಲಿ 66.504 ಟಿಎಂಸಿ ನೀರು ಸಂಗ್ರಹವಾಗಿತ್ತು. ಒಳಹರಿವು 45,733 ಕ್ಯುಸೆಕ್ ಇದ್ದರೆ ಹೊರಹರಿವಿನ ಪ್ರಮಾಣ 27,500 ಕ್ಯುಸೆಕ್‌ನಷ್ಟಿತ್ತು. ನಂತರ ಹೊರಹರಿವಿನ ಪ್ರಮಾಣವನ್ನು 50 ಸಾವಿರ ಕ್ಯುಸೆಕ್‌ಗೆ ಏರಿಸಲಾಯಿತು.

### ಭಾರೀ ವಾಹನಗಳ ಸಂಚಾರ ರದ್ದು

**ಕಬಿನಿ ಜಲಾಶಯದಿಂದ 25 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಡುತ್ತಿರುವುದರಿಂದ, ನುಗು ಜಲಾಶಯದ ಸೇತುವೆ, ಹುಲ್ಲಹಳ್ಳಿಯ ಸೇತುವೆ ಮೇಲೆ ಭಾರೀ ವಾಹನಗಳ ಸಂಚಾರವನ್ನು ರದ್ದುಪಡಿಸುವ ಸಾಧ್ಯತೆ ಇದೆ. 40 ಸಾವಿರ ಕ್ಯೂಸೆಕ್ ನೀರನ್ನು ಹೊರಬಿಟ್ಟರೆ, ಮೈಸೂರು-ಗುಂಡ್ಲುಪೇಟೆ, ಕೇರಳ, ಊಟಿ ರಸ್ತೆ ಸಂಚಾರ ಮಾಡುವ ನಂಜನಗೂಡು ಸೇತುವೆ ಮೇಲೆ ಭಾರೀ ವಾಹನಗಳ ಸಂಚಾರ ನಿರ್ಬಂಧಿಸಿ, ಬೇರೆ ಮಾರ್ಗಗಳ ಮೂಲಕ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಲು ಅಧಿಕಾರಿಗಳು ಚಿಂತಿಸಿದ್ದಾರೆ. ಕಬಿನಿ ನೀರು ತುಂಬಿ ಹರಿದಷ್ಟು, ನದಿ ಪಾತ್ರದ ಜನರು ಭಯದಿಂದ ತಮ್ಮ ಸಂಬಂಧಿಕರ ಮನೆಗಳಿಗೆ ತೆರಳಿ, ಮಳೆಯ ಪ್ರಮಾಣ ಕಡಿಮೆ ಹಾಗೂ ಕಬಿನಿ ಜಲಾಶಯದ ಹೊರ ಹರಿವಿನ ಪ್ರಮಾಣ ಕಡಿಮೆಯಾದಾಗ ತಮ್ಮ ಮನೆಗಳಿಗೆ ಹಿಂತಿರುಗುತ್ತಾರೆ.**



## ಶಿರಾಡಿಯಲ್ಲಿ ಗುಡ್ಡ ಕುಸಿತ ಆತಂಕ; ಮಳೆ ತಗ್ಗಿದರೂ ರಸ್ತೆಯಲ್ಲಿ ಬಿರುಕು

• ಉದಯವಾಹಿನಿ, ಹಾಸನ

ಮಲೆನಾಡಿನಲ್ಲಿ ಮಳೆ ಅಬ್ಬರ ಕಡಿಮೆಯಾಗಿದ್ದರೂ, ರಾಷ್ಟ್ರೀಯ ಹೆದ್ದಾರಿ ಶಿರಾಡಿಯಲ್ಲಿ ಗುಡ್ಡ ಕುಸಿತ ಆತಂಕ ಹೆಚ್ಚಾಗಿದೆ. ಅಲ್ಲದೆ ಸಣ್ಣ ಪ್ರಮಾಣದಲ್ಲಿ ಮಣ್ಣು ರಸ್ತೆಗೆ ಜಾರಿದ್ದು, ಜೆಸಿಬಿ ಮೂಲಕ ತೆರವು ಕಾರ್ಯ ಮುಂದುವರಿದಿದೆ.

ಮಳೆಗಾಲಕ್ಕೂ ಮುನ್ನವೇ ಶಿರಾಡಿ ಹೆದ್ದಾರಿಯಲ್ಲಿ ಸುರಕ್ಷತೆ ಕಾಪಾಡುವ ಸಂಬಂಧ ಹತ್ತಾರು ಬಾರಿ ಪೂರ್ವಭಾವಿ ಸಭೆ ನಡೆಸಲಾಗಿತ್ತು. ಖುದ್ದು ಜಿಲ್ಲಾಧಿಕಾರಿ ಸಹಿತ ಅಧಿಕಾರಿ ವರ್ಗ ಸ್ಥಳಕ್ಕೆ ತೆರಳಿ ಪರಿಶೀಲಿಸಿ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲಾಗಿತ್ತು. ಆದರೂ ಅಪೂರ್ಣ ಕಾಮಗಾರಿಯಿಂದ ಅಲ್ಲಲ್ಲಿ ಗುಡ್ಡ ಕುಸಿತ ಮುಂದುವರಿದಿದೆ. ರಸ್ತೆ ಬಿರುಕು ಬಿಡುವ ಜತೆಗೆ ಮರಗಳು ಧರೆಗುರುಳುತ್ತಿವೆ. ಗುಡ್ಡದ ಮಣ್ಣು ಕುಸಿಯುವುದನ್ನು ತಡೆಗಟ್ಟಲು ನಿರ್ಮಿಸಿರುವ ತಡೆಗೋಡೆ ಅವೈಜ್ಞಾನಿಕವಾಗಿ ಕೂಡಿದೆ. ಪರಿಣಾಮ



ಮಳೆ ಅಬ್ಬರಕ್ಕೆ ಅಲ್ಲಲ್ಲಿ ಗುಡ್ಡದ ಮಣ್ಣು ಕುಸಿಯುತ್ತಲೇ ಇದೆ. ಮಳೆಯೂ ಹೆಚ್ಚಿರುವ ಕಾರಣ ಕೆಸರುಮಣ್ಣು ರಸ್ತೆಗೆ ಜಾರಿದ್ದು, ವಾಹನ ಸಂಚಾರಕ್ಕೆ ಅಡ್ಡಿಯಾಗಿದೆ. ಜೆಸಿಬಿ ಮೂಲಕ ಮಣ್ಣು ತೆರವು ಕಾರ್ಯಾಚರಣೆ ನಿರಂತರವಾಗಿ ನಡೆದಿದೆ.

**ಟಾರ್ಪಲ್ ಹೊದಿಕೆ:** ಆನೆಮಹಲ್, ದೋಣಿಗಾಲ್, ಹೆಗ್ಗದ್ದೆ ನಡುವೆ ರಸ್ತೆ ಬದಿ ಬಿರುಕು ಕಾಣಿಸಿಕೊಂಡಿದ್ದು, ತಡೆಗೋಡೆಗೆ ಟಾರ್ಪಲ್ ಹೊದಿಕೆ ಹಾಕಲಾಗಿದೆ. ರಸ್ತೆ ಬದಿ ಬಾಯ್ದೆರೆದಿರುವುದರಿಂದ ಮುಂದಿನ ದಿನದಲ್ಲಿ ಹೆಚ್ಚಿನ ಮಳೆಯಾದರೆ ಅಪಾಯ ನಿಶ್ಚಿತ ಎಂಬ ಮುನ್ಸೂಚನೆ ಜತೆಗೆ ಆತಂಕಕ್ಕೂ ಕಾರಣವಾಗಿದೆ.

**ಶಾಸಕರ ಭೇಟಿ:** ಸಕಲೇಶಪುರ-ಆಲೂರು ಕ್ಷೇತ್ರದ ಶಾಸಕ ಸಿಮೆಂಟ್ ಮಂಜು ಶಿರಾಡಿ ರಸ್ತೆ ಬದಿ ಕುಸಿತ ಪ್ರದೇಶಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಯಾವುದೇ ಅನಾಹುತ ಸಂಭವಿಸಿದಂತೆ ಮುನ್ನೆಚ್ಚರಿಕೆ ವಹಿಸುವಂತೆ ಗುತ್ತಿಗೆದಾರರು ಹಾಗೂ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**ಕ್ಷೀಣಿಸಿದ ಆರ್ಭಟ:** ಕಳೆದ ನಾಲ್ಕೈದು ದಿನದಿಂದ ಬಿಡುವು ನೀಡದೆ ಆರ್ಭಟಿಸಿದ್ದ ಮಳೆ ಬುಧವಾರ ಸ್ವಲ್ಪಮಟ್ಟಿಗೆ ಬಿಡುವು ನೀಡಿತ್ತು. ಸಕಲೇಶಪುರ, ಶಿರಾಡಿ ಹೆದ್ದಾರಿಯಲ್ಲಿ ತುಂತುರು ಮಳೆಯಾಗಿದ್ದು, ಸಕಲೇಶಪುರ, ಹಾಸನ ಮತ್ತಿತರ ಭಾಗದಲ್ಲಿ ಮಳೆ ಬಹುತೇಕ ಬಿಡುವು ನೀಡಿತ್ತು. ಆಗಾಗ್ಗೆ ಮೋಡ ಕವಿದ ವಾತಾವರಣ ಕಂಡುಬಂತು.

### ಒಳ ಹರಿವು ಹೆಚ್ಚಳ

**ಹೇಮಾವತಿ ನದಿ ಪಾತ್ರದ ಮೂಡಿಗೆರೆ, ಚಿಕ್ಕಮಗಳೂರು ಭಾಗದಲ್ಲಿ ಮಳೆ ಜೋರಾಗಿರುವ ಕಾರಣ ಗೊರೂರಿನ ಹೇಮಾವತಿ ಜಲಾಶಯಕ್ಕೆ ಒಳಹರಿವು 19,546 ಕ್ಯುಸೆಕ್‌ಗೆ ಏರಿಕೆಯಾಗಿದೆ. ಕಳೆದ ವರ್ಷ ಕೇವಲ 623 ಕ್ಯುಸೆಕ್ ಒಳಹರಿವು ಇತ್ತು. 2922 ಅಡಿ ಸಾಮರ್ಥ್ಯದ ಜಲಾಶಯದಲ್ಲಿ ಪ್ರಸ್ತುತ 2911.35 ಅಡಿ ನೀರಿನ ಸಂಗ್ರಹವಿದೆ. ಕಳೆದ ವರ್ಷ 2882.21 ಅಡಿ ನೀರಿನ ಸಂಗ್ರಹವಿತ್ತು.**

## ಕರ್ನಾಟಕದಲ್ಲಿ ಸ್ವೀಡನ್‌ನ ಎಪಿರಾಕ್‌ನಿಂದ 1,500 ಕೋಟಿ ಹೂಡಿಕೆ: ಎಂ.ಬಿ. ಪಾಟೀಲ್

• 2030ರ ವೇಳೆಗೆ ರಾಜ್ಯದಲ್ಲಿ 1,500 ಕೋಟಿ ರೂ.ಗಳ ಬಂಡವಾಳವನ್ನು ಹೂಡಿಕೆ ಮಾಡಲಿದೆ ಸ್ವೀಡನ್‌ನ ಎಪಿರಾಕ್

• ಉದಯವಾಹಿನಿ, ಬೆಂಗಳೂರು

ಗಣಿಗಾರಿಕೆ ಮತ್ತು ಮೂಲಸೌಲಭ್ಯ ವಲಯಗಳಲ್ಲಿ ಬಳಕೆಯಾಗುವ ಯಂತ್ರೋಪಕರಣ ತಯಾರಿಸುವ ಸ್ವೀಡನ್ನಿನ ಎಪಿರಾಕ್ ಕಂಪನಿಯು, ರಾಜ್ಯದಲ್ಲಿ 2030ರ ವೇಳೆಗೆ ಒಟ್ಟು 1,500 ಕೋಟಿ ರೂ. ಮೊತ್ತದ ಬಂಡವಾಳ ಹೂಡಿಕೆ ಮಾಡಲಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಬಂಡವಾಳ ಹೂಡಿಕೆ ಆಕರ್ಷಿಸುವ ಸಲುವಾಗಿ ಸ್ವೀಡನ್ ಪ್ರವಾಸದಲ್ಲಿ ಇರುವ ಸಚಿವ ಪಾಟೀಲ್ ಅವರ ನೇತೃತ್ವದಲ್ಲಿನ ರಾಜ್ಯದ ಉನ್ನತ ಮಟ್ಟದ ನಿಯೋಗದ ಜೊತೆ ಬುಧವಾರ ನಡೆದ ಸಭೆಯಲ್ಲಿ, ಎಪಿರಾಕ್‌ನ ಭಾರತದ ಕಾರ್ಯಾಚರಣೆಗಳ ಮುಖ್ಯಸ್ಥ ಅರುಣ್ ಕುಮಾರ್ ಅವರು ಈ ಮಾಹಿತಿ ಹಂಚಿಕೊಂಡಿದ್ದಾರೆ.

ಬೆಂಗಳೂರಿನಲ್ಲಿರುವ 500 ಉದ್ಯೋಗಿಗಳು ಕಾರ್ಯನಿರ್ವಹಿಸುತ್ತಿರುವ ಎಪಿರಾಕ್‌ನ ಸಂಶೋಧನೆ ಹಾಗೂ ಅಭಿವೃದ್ಧಿ ಕೇಂದ್ರವು (ಆರ್‌ಆ್ಯಂಡ್‌ಡಿ) ಕಂಪನಿಯ ಜಾಗತಿಕ ಆರ್‌ಆ್ಯಂಡ್‌ಡಿ ಉತ್ಪಾದನೆಗೆ ಶೇ. 25ರಷ್ಟು ಕೊಡುಗೆ ನೀಡುತ್ತಿದೆ. ಪ್ರಸಕ್ತ ಸಾಲಿನಲ್ಲಿ 500 ಕೋಟಿ ರೂ. ಹೂಡಿಕೆ ಮಾಡಲಾಗುವುದು.

2030ರ ವೇಳೆಗೆ ಹೆಚ್ಚುವರಿಯಾಗಿ 1,000 ಕೋಟಿ ರೂ. ಮೊತ್ತದ ಬಂಡವಾಳವನ್ನು ಹೂಡಿಕೆ ಮಾಡಲಾಗುವುದು ಎಂದು ಅರುಣ್ ಕುಮಾರ್ ಅವರು ಕರ್ನಾಟಕ ರಾಜ್ಯದ ನಿಯೋಗಕ್ಕೆ ಭರವಸೆ ನೀಡಿದ್ದಾರೆ ಎಂದು ಸಚಿವರು ತಿಳಿಸಿದ್ದಾರೆ. ಆಹಾರ ಸಂಸ್ಕರಣೆ ಹಾಗೂ ಪ್ಯಾಕೇಜಿಂಗ್ ಕ್ಷೇತ್ರದ ಜಾಗತಿಕ ದಿಗ್ಗಜ ಕಂಪನಿ ಟೆಟ್ರಾ ಪ್ಯಾಕ್‌ನ ಮುಖ್ಯಸ್ಥರ ಜೊತೆ ಸಚಿವರು ನಾವೀನ್ಯತೆ, ಸುಸ್ಥಿರತೆ ಮತ್ತು ಅತ್ಯಾಧುನಿಕ ತಂತ್ರಜ್ಞಾನ ಕ್ಷೇತ್ರಗಳಲ್ಲಿ ಕರ್ನಾಟಕ ರಾಜ್ಯ ಸರಕಾರದ ಜೊತೆಗಿನ ಪಾಲುದಾರಿಕೆ ಸಾಧ್ಯತೆಗಳನ್ನು ಚರ್ಚಿಸಿದ್ದಾರೆ.

ರಾಜ್ಯದಲ್ಲಿನ ಅತ್ಯಾಧುನಿಕ ಡಿಸೈನ್ ಮತ್ತು ತಯಾರಿಕಾ ವಲಯದ ಸಾಮರ್ಥ್ಯಗಳನ್ನು, ಬಂಡವಾಳ ಹೂಡಿಕೆಗೆ ಇರುವ ವಿಪುಲ ಅವಕಾಶಗಳನ್ನು ಸಚಿವರು ಸ್ವೀಡನ್ನಿನ ಬಹುರಾಷ್ಟ್ರೀಯ ಕಂಪನಿಗಳ ಮುಖ್ಯಸ್ಥರಿಗೆ ವಿವರಿಸಿದ್ದಾರೆ. ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ.ಎಸ್. ಸೆಲ್ವಕುಮಾರ್, ಕೈಗಾರಿಕಾ ಇಲಾಖೆ ಆಯುಕ್ತರಾದ ಗುಂಜನ್ ಕೃಷ್ಣ, ಕೆಐಎಡಿಬಿ ಮುಖ್ಯ ಎಂಜಿನಿಯರ್ ವೀರಭದ್ರಯ್ಯ ಸೇರಿದಂತೆ ಇತರರು ನಿಯೋಗದಲ್ಲಿ ಇದ್ದಾರೆ.



**ಬಂಡವಾಳ ಆಕರ್ಷಿಸುವ ಸಂಬಂಧ ಸ್ವೀಡನ್ ಪ್ರವಾಸ**

### ಮನದಟ್ಟು ಮಾಡಿಕೊಟ್ಟ ರಾಜ್ಯದ ನಿಯೋಗ

**ತನ್ನ ಬಹುತೇಕ ಎಂಜಿನಿಯರಿಂಗ್ ಮತ್ತು ಡಿಸೈನ್ ಕೆಲಸಗಳನ್ನು ಭಾರತಕ್ಕೆ ವರ್ಗಾಯಿಸಲು ಉದ್ದೇಶಿಸಿರುವುದಾಗಿ ಸ್ವೀಡನ್ನಿನ ವೈಮಾಂತರಿಕ್ಷ ಹಾಗೂ ರಕ್ಷಣಾ ವಲಯದ ಕಂಪನಿ 'ಎಸ್ಎಬಿ ಮುಖ್ಯ ಕಾರ್ಯತಂತ್ರ ಅಧಿಕಾರಿ ಕ್ರಿಸ್ತಿಯನ್ ಹೆಡೆಲಿನ್ ಅವರು ನಿಯೋಗದ ಗಮನಕ್ಕೆ ತಂದಿದ್ದಾರೆ. ಈ ಎರಡೂ ವಲಯಗಳಲ್ಲಿನ ರಾಜ್ಯದ ಸಾಮರ್ಥ್ಯಗಳನ್ನು ಹಾಗೂ ವಹಿವಾಟು ವಿಸ್ತರಣೆಗೆ ಇರುವ ವಿಪುಲ ಅವಕಾಶಗಳನ್ನು ಮನದಟ್ಟು ಮಾಡಿಕೊಟ್ಟ ರಾಜ್ಯದ ನಿಯೋಗದ ವಿವರಣೆಗಳಿಂದ ಪ್ರಭಾವಿತರಾದ ಹೆಡೆಲಿನ್ ಅವರು, ರಾಜ್ಯದಲ್ಲಿ ಬಂಡವಾಳ ಹೂಡಿಕೆ ಮಾಡುವುದನ್ನು ಗಂಭೀರವಾಗಿ ಪರಿಶೀಲಿಸುವುದಾಗಿ ಭರವಸೆ ನೀಡಿದ್ದಾರೆ.**

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹10,091/Gram24ct ₹9,250/Gram22ct | ಬೆಳ್ಳಿ: ₹111.00/Gram

# ಅರಮನೆ ಮೈದಾನದ ಸಂಚಾರ ಮಾರ್ಗ ಬದಲಾವಣೆ

• ಉದಯವಾಹಿನಿ, ಬೆಂಗಳೂರು

ಸದಾಶಿವನಗರ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ಅರಮನೆ ಮೈದಾನದ ತ್ರಿಪುರ ವಾಸಿನಿಯಲ್ಲಿ ಜೂನ್ 18ರಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ನೌಕರರ ಸಂಘದ ವಜ್ರ ಮಹೋತ್ಸವ ನಡೆಯಲಿದ್ದು, ಅರಮನೆ ಮೈದಾನದ ಸುತ್ತಮುತ್ತಲ ರಸ್ತೆಗಳಲ್ಲಿ ವಾಹನ ದಟ್ಟಣೆಯಾಗುವ ಸಾಧ್ಯತೆಯಿದೆ. ಕಾರ್ಯಕ್ರಮಕ್ಕೆ 10 ಸಾವಿರ ಮಂದಿ ಸೇರುವ ನಿರೀಕ್ಷೆಯಿದ್ದು, ಸಂಚಾರ ಮಾರ್ಗ ಬದಲಾವಣೆ ಮಾಡಲಾಗಿದೆ. ವಾಹನ ಸವಾರರು ಪರ್ಯಾಯ ಮಾರ್ಗದಲ್ಲಿ ಸಂಚರಿಸುವಂತೆ ಪೊಲೀಸರು ಕೋರಿದ್ದಾರೆ. **ವಾಹನ ನಿಲುಗಡೆ ನಿಷೇಧ ಮಾಡಿರುವ ರಸ್ತೆಗಳು:** ಪ್ಯಾಲೇಸ್ ರಸ್ತೆ, ಜಯಮಹಲ್ ರಸ್ತೆ, ರಮಣ ಮಹರ್ಷಿ ರಸ್ತೆ, ಮೌಂಟ್ ಕಾರ್ಮೆಲ್ ಕಾಲೇಜ್ ರಸ್ತೆ, ಎಂ.ವಿ.ಜಯರಾಮ ರಸ್ತೆ, ಸಿ.ವಿ.ರಾಮನ್ ರಸ್ತೆ, ನಂದಿದುರ್ಗ ರಸ್ತೆ, ಮೇಖಿ ವೃತ್ತದಿಂದ ಯಶವಂತಪುರ ಬಸ್ ನಿಲ್ದಾಣದ ವರೆಗೆ, ವಸಂತನಗರ ರಸ್ತೆ, ಬಳ್ಳಾರಿ ರಸ್ತೆ, ತರಳಬಾಳು ರಸ್ತೆಗಳಲ್ಲಿ ವಾಹನ ಸಂಚಾರ ನಿಷೇಧಿಸಲಾಗಿದೆ ಎಂದು ಸಂಚಾರ ಪೊಲೀಸರು ತಿಳಿಸಿದ್ದಾರೆ.

# ಮಹಿಳೆಗೆ ಬ್ಲ್ಯಾಕ್‌ಮೇಲ್

• ಉದಯವಾಹಿನಿ, ಬೆಂಗಳೂರು

ವಿಚ್ಛೇದಿತೆಯನ್ನು ವಿವಾಹ ಆಗುವುದಾಗಿ ನಂಬಿಸಿ ಖಾಸಗಿ ವಿಡಿಯೋ ಸೆರೆ ಹಿಡಿದು ಹಣಕ್ಕಾಗಿ ಬ್ಲ್ಯಾಕ್‌ಮೇಲ್ ಮಾಡುತ್ತಿದ್ದ ಆರೋಪಿಯನ್ನು ಕಾಡುಗೋಡಿ ಠಾಣೆ ಪೊಲೀಸರು ಬಂಧಿಸಿದ್ದಾರೆ.ಕಾಡುಗೋಡಿಯ ಶ್ರೀನಿವಾಸ್ ಬಂಧಿತ ಆರೋಪಿ.

ಆಂಧ್ರಪ್ರದೇಶದ ಸಂತ್ರಸ್ತೆ ನೀಡಿರುವ ದೂರು ಆಧರಿಸಿ ಆರೋಪಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು.

ದೂರುದಾರೆ 2014ರಲ್ಲಿ ಮದುವೆ ಆಗಿದ್ದರು. ಕೌಟುಂಬಿಕ ಕಲಹದಿಂದ ದಂಪತಿ ನಡುವೆ ವೈಮನಸ್ಸು ಉಂಟಾಗಿತ್ತು. 2016ರಲ್ಲಿ ವಿಚ್ಛೇದನ ಪಡೆದುಕೊಂಡಿದ್ದರು ಎಂದು ಪೊಲೀಸರು ಹೇಳಿದರು. ಕಾಡುಗೋಡಿಯಲ್ಲಿರುವ ಡಿಜಿಟಲ್ ಸೇವಾ ಕೇಂದ್ರದಲ್ಲಿ ಆರೋಪಿ ಕೆಲಸ ಮಾಡುತ್ತಿದ್ದ. ಪತಿಯಿಂದ ದೂರವಾದ ನಂತರ ಜೀವನ ನಿರ್ವಹಣೆಗಾಗಿ ಕೆಲಸ ಹುಡುಕುತ್ತಿದ್ದ ಸಂತ್ರಸ್ತೆಗೆ ಆರೋಪಿ ಕೆಲಸ ಮಾಡುತ್ತಿದ್ದ ಕೇಂದ್ರದಲ್ಲಿಯೇ ಕೆಲಸ ಸಿಕ್ಕಿತ್ತು. ಮಹಿಳೆಯನ್ನು ಆರೋಪಿ ಪರಿಚಯಿಸಿಕೊಂಡು ಸಲುಗೆ ಬೆಳೆಸಿದ್ದ. ವಿವಾಹ ಆಗುವುದಾಗಿ ನಂಬಿಸಿದ್ದ. ಬಾಡಿಗೆ ಮನೆ ಮಾಡಿ ಆಕೆಯೊಂದಿಗೆ ವಾಸಿಸುತ್ತಿದ್ದ. ಈ ನಡುವೆ ಮಹಿಳೆಯ ಗಮನಕ್ಕೆ ಬಾರದಂತೆ ಖಾಸಗಿ ವಿಡಿಯೋವನ್ನು ಮೊಬೈಲ್‌ನಲ್ಲಿ ಚಿತ್ರೀಕರಿಸಿಕೊಂಡಿದ್ದ. ಆ ದೃಶ್ಯಾವಳಿಯನ್ನು ತೋರಿಸಿ ಹಣಕ್ಕಾಗಿ ಬ್ಲಾಕ್‌ಮೇಲ್ ಮಾಡುತ್ತಿದ್ದ. ಹಣ ಕೊಡದಿದ್ದರೆ ಖಾಸಗಿ ವಿಡಿಯೋವನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಡುವುದಾಗಿ ಬೆದರಿಕೆ ಹಾಕುತ್ತಿದ್ದ' ಎಂದು ಪೊಲೀಸರು ಹೇಳಿದರು.

# ಬೇಡಿಕೆ ಈಡೇರಿಕೆ: ಸರ್ಕಾರಕ್ಕೆ ಸಾರಿಗೆ ನೌಕರರ ಪತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರ ವಿಳಂಬ ಮಾಡದೆ ಕೂಡಲೇ ತ್ರಿಪಕ್ಷೀಯ ಸಭೆ ಕರೆದು ನೌಕರರ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮಗಳ ಕಾರ್ಮಿಕ ಸಂಘಟನೆಗಳ ಜಂಟಿ ಕ್ರಿಯಾ ಸಮಿತಿ ಆಗ್ರಹಿಸಿದೆ.ಈ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರಿಗೆ ಸಂಬಂಧ ಪತ್ರ ಬರೆದಿರುವ ಕ್ರಿಯಾ ಸಮಿತಿ ಸಂಚಾಲಕ ಬಿ.ಜಯದೇವರಾಜೇ ಅರಸು, 'ಏಪ್ರಿಲ್ 15ರಂದು ನಡೆದ ಜಂಟಿ ಕ್ರಿಯಾ ಸಮಿತಿ ಪ್ರತಿನಿಧಿಗಳ ತ್ರಿಪಕ್ಷೀಯ ಸಭೆಯಲ್ಲಿ ನಾಲ್ಕು ಸಾರಿಗೆ ನಿಗಮಗಳ ನೌಕರರ ಬೇಡಿಕೆ ಈಡೇರಿಸುವ ಭರವಸೆ ನೀಡಲಾಗಿತ್ತು. ಕಳೆದ ವರ್ಷ ಡಿಸೆಂಬರ್ 31ರಂದು ಮುಷ್ಕರ ನಡೆಸುವುದಾಗಿ ನೋಟಿಸ್ ನೀಡಲಾಗಿತ್ತು. ಆದರೆ, ಇನ್ನೂ ಬೇಡಿಕೆ ಈಡೇರಿಲ್ಲ. ಹಾಗಾಗಿ ಮುಷ್ಕರ ನಡೆಸುವ ಕುರಿತು ಚಿಂತನೆ ನಡೆದಿದೆ' ಎಂದು ತಿಳಿಸಿದ್ದಾರೆ. ಕೆಎಸ್ ಆರ್‌ಟಿಸಿ ವ್ಯವಸ್ಥಾಪಕ ನಿರ್ದೇಶಕ ಅಕ್ರಂ ಪಾಷಾ ಅವರನ್ನು ಭೇಟಿ ಮಾಡಿ, ಪರಿಸ್ಥಿತಿ ಬಗ್ಗೆ ವಿವರಿಸಲಾಗಿದೆ. ಸರ್ಕಾರ ಕೂಡಲೇ ಬೇಡಿಕೆ ಈಡೇರಿಕೆ ಕುರಿತು ತ್ರಿಪಕ್ಷೀಯ ಸಭೆ ಕರೆಯಬೇಕು ಎಂದು ಒತ್ತಾಯಿಸಿದ್ದಾರೆ. ಪತ್ರಕ್ಕೆ ಸಂಘಟನೆಗಳ ಪ್ರತಿನಿಧಿಗಳಾದ ಎಚ್.ವಿ.ಅನಂತ ಸುಬ್ಬರಾವ್, ಎಚ್.ಡಿ.ರೇವಪ್ಪ, ವೆಂಕಟರಮಣಪ್ಪ, ಎ.ಸೋಮಣ್ಣ, ಕೆ.ಆರ್.ಜಗದೀಶ್ ಸಹಿ ಹಾಕಿದ್ದಾರೆ.

# ಗಾಳಿ ಇಲ್ಲ, ಮಳೆ ಇಲ್ಲ : ಸಿಎಂ ನಿವಾಸದ ಮುಂದೆ ಧರೆಗುರುಳಿದ ಬೃಹತ್ ಮರ

• ಉದಯವಾಹಿನಿ, ಬೆಂಗಳೂರು

ಗಾಳಿ ಇಲ್ಲ, ಮಳೆ ಇಲ್ಲ ಅಂದ್ರೂ ಸಿಎಂ ಸಿದ್ದರಾಮಯ್ಯ ಸರ್ಕಾರಿ ನಿವಾಸದ ಬಳಿಯೇ ಬೃಹತ್ ಮರವೊಂದು ಧರೆಗುರುಳಿ ಅನಾಹುತ ಸಂಭವಿಸಿದೆ. ಬೃಹತ್ ಮರ ಧರೆಗುರುಳಿದ ಪರಿಣಾಮ ರಸ್ತೆಯಲ್ಲಿ ಹೋಗುತ್ತಿದ್ದ ಟಿಟಿ ಹಾಗೂ ಇನ್ನೋವಾ ಮೇಲೆ ಮರದ ಕೊಂಬೆಗಳು ಬಿದ್ದಿವೆ. ಮರ ಬಿದ್ದ ಹಿನ್ನೆಲೆ ಶಿವಾನಂದ ಬಳಿಯೇ ಪೊಲೀಸರು ರಸ್ತೆ ಬಂದ್ ಮಾಡಿದ್ದಾರೆ.

ಜೂ.15ರಂದು ದ್ವಿಚಕ್ರ ವಾಹನದಲ್ಲಿ ಚಲಿಸುತ್ತಿದ್ದಾಗಲೇ ಮರದ ಕೊಂಬೆ ಬಿದ್ದು ಬಸವನಗುಡಿಯ ಬ್ರಹ್ಮ ಚೈತನ್ಯ ಮಂದಿರದ ಬಳಿ ಸವಾರ ಗಂಭೀರವಾಗಿ ಗಾಯಗೊಂಡಿದ್ದರು. 29 ವರ್ಷದ ಅಕ್ಷಯ್ ಗಂಭೀರವಾಗಿ ಗಾಯಗೊಂಡ ಸವಾರ. ಕೊಂಬೆ ಬೀಳುತ್ತಿದ್ದಂತೆ ನಿಯಂತ್ರಣ ತಪ್ಪಿ ಎದುರುಗಡೆ ನಿಲ್ಲಿಸಿದ್ದ ಕಾರಿಗೆ ದ್ವಿಚಕ್ರ ವಾಹನ ಡಿಕ್ಕಿ ಹೊಡೆದಿದೆ. ಶ್ರೀನಿವಾಸನಗರದ ನಿವಾಸಿಯಾಗಿರುವ ಅಕ್ಷಯ್ ರಾಜಾಜಿನಗರದಲ್ಲಿ ಕಂಪನಿಯೊಂದದರಲ್ಲಿ ಹೆಚ್‌ಆರ್ ಆಗಿ ಕೆಲಸ ಮಾಡುತ್ತಿದ್ದರು. ತಲೆಯ ಮಧ್ಯ ಭಾಗಕ್ಕೆ ತೀವ್ರ ಹಾನಿಯಾಗಿದೆ. ಮೂಗು, ಬಾಯಿ, ಕಿವಿಯಲ್ಲಿ ರಕ್ತಸ್ರಾವವಾಗಿದೆ. ಅಕ್ಷಯ್ ತಂದೆಗೆ ಡಯಾಲಿಸಿಸ್ ನಡೆಯುತ್ತಿದ್ದು, ಕುಟುಂಬಕ್ಕೆ ಅಕ್ಷಯ್ ಆಧಾರವಾಗಿದ್ದರು.

# ನಾವಿರುವವರೆಗೂ ಎಸ್ಕಾಂಗಳ ಖಾಸಗೀಕರಣಕ್ಕೆ ಅವಕಾಶವಿಲ್ಲ

## ಅರಮನೆ ಮೈದಾನದಲ್ಲಿ ನಡೆದ ಕರ್ನಾಟಕ ಪ್ರಸರಣ ನಿಗಮ ನೌಕರರ ಸಂಘದ 60ನೇ ವಜ್ರ ಮಹೋತ್ಸವ ಸಂಭ್ರಮ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ನಾನು, ಸಿದ್ದರಾಮಯ್ಯ ಅವರು ಅಧಿಕಾರದಲ್ಲಿರುವವರೆಗೂ ರಾಜ್ಯದಲ್ಲಿರುವ ಎಸ್ಕಾಂಗಳನ್ನು ಖಾಸಗೀಕರಣ ಮಾಡಲು ಅವಕಾಶ ನೀಡುವುದಿಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಭರವಸೆ ನೀಡಿದ್ದಾರೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ಬುಧವಾರ ನಡೆದ ಕರ್ನಾಟಕ ಪ್ರಸರಣ ನಿಗಮ ನೌಕರರ ಸಂಘದ 60ನೇ ವಜ್ರ ಮಹೋತ್ಸವ ಸಂಭ್ರಮ, ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಾನು ಇಂಧನ ಸಚಿವನಾದ ಬಳಿಕ ಕೇಂದ್ರದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಿತ್ತು. ಮುಂಬೈ ದೆಹಲಿ ಸೇರಿದಂತೆ ದೇಶದ ವಿವಿಧ ನಗರಗಳಲ್ಲಿ ಎಸ್ಕಾಂಗಳನ್ನು ಖಾಸಗಿಯವರಿಗೆ ನೀಡಲಾಗಿದೆ.

**ವಜ್ರಜ್ಯೋತಿ ಸ್ಮರಣ ಸಂಚಿಕೆ ಲೋಕಾರ್ಪಣೆ**

ಹೀಗಾಗಿ ಬೆಂಗಳೂರಿನಲ್ಲೂ ಖಾಸಗಿಯವರಿಗೆ ನೀಡಬೇಕು ಎಂದು ನನ್ನ ಮೇಲೆ ಒತ್ತಡ ಹೇರಲಾಗಿತ್ತು ಎಂದಿದ್ದಾರೆ. ಆಗ ನಾನು ನಮ್ಮ ನೌಕರರು, ಇಂಜಿನಿಯರ್‌ಗಳು ವ್ಯವಸ್ಥಾಪಕ ಮಂಡಳಿಯವರು ಬಹಳ ಶಕ್ತಿಶಾಲಿಯಾಗಿದ್ದು, ಎಸ್ಕಾಂಗಳನ್ನು ಸಮರ್ಥವಾಗಿ ಮುನ್ನಡೆಸಲಿದ್ದಾರೆ ಎಂದು ಹೇಳಿದ್ದೆ. ರಾಜ್ಯದಲ್ಲಿ ಈ ಡಿ.ಕೆ ಶಿವಕುಮಾರ್, ಸಿಎಂ ಸಿದ್ದರಾಮಯ್ಯ ಅವರು ಇರುವವರೆಗೂ ಎಸ್ಕಾಂಗಳನ್ನು ಖಾಸಗೀಕರಣಗೊಳಿಸಲು ಅವಕಾಶ ನೀಡುವುದಿಲ್ಲ ಎಂದು ಹೇಳಿದ್ದಾರೆ.

ನಾನು ಈ ಇಲಾಖೆ ಜವಾಬ್ದಾರಿ ವಹಿಸಿಕೊಂಡಾಗ, 19ರಿಂದ 20% ಟ್ರಾನ್ಸ್ಮಿಷನ್ ನಷ್ಟ ಆಗುತ್ತಿತ್ತು. ನಾವು ಅದನ್ನು 10%ಗೆ ಇಳಿಸಿದ್ದೇವೆ. ಇದು ದೇಶಕ್ಕೆ ಮಾದರಿ. ಬೇರೆ ರಾಜ್ಯಗಳಲ್ಲಿ ಇಂದಿಗೂ 17ರಿಂದ 18% ನಷ್ಟವಾಗುತ್ತಿದೆ. ನಿಮ್ಮೆಲ್ಲರ ಶ್ರಮದಿಂದ ಈ ಇಂಧನ ಇಲಾಖೆ ಶಕ್ತಿಶಾಲಿಯಾಗಿ ಬೆಳೆಯುತ್ತಿದೆ. ಜಾರ್ಜ್ ಅವರು ಈ ಇಲಾಖೆಯ ಜವಾಬ್ದಾರಿ ತೆಗೆದುಕೊಂಡು ಪಾರದರ್ಶಕವಾಗಿ ಬಹಳ ಉತ್ತಮ ರೀತಿಯಲ್ಲಿ ಮುನ್ನಡೆಸುತ್ತಿದ್ದಾರೆ. ನಾವು ಈ ಹಿಂದೆ ಅನೇಕ ಕ್ರಾಂತಿಕಾರಕ ತೀರ್ಮಾನ ಮಾಡಿದ್ದೆವು ಎಂದು ವಿವರಿಸಿದ್ದಾರೆ. ದೀಪ ಜಗತ್ತನ್ನೇ ಬೆಳಗುತ್ತದೆ. ಈ ದೀಪಕ್ಕೆ ಬೆಳಕು ಪೂರೈಸುತ್ತಿರುವವರು ನೀವು. ದೀಪದ ಬೆಳಕು ಎಲ್ಲರಿಗೂ ಕಾಣುತ್ತದೆ. ಆದರೆ ಅದರ ಹಿಂದೆ ಇರುವ ಎಣ್ಣೆ ಹಾಗೂ ಬತ್ತಿ ಯಾರಿಗೂ ಕಾಣುವುದಿಲ್ಲ. ಅದೇ ರೀತಿ ಇಂಧನ ಇಲಾಖೆ ನೌಕರರ ಶ್ರಮದಿಂದ ಇಡೀ ಸಮಾಜಕ್ಕೆ ಬೆಳಕು ನೀಡಲಾಗುತ್ತಿದೆ. ನಾನು ಹಾಗೂ ಸಿಎಂ ಸಿದ್ದರಾಮಯ್ಯ ಅವರು ಬಂದಾಗಿನಿಂದ ನೀವು ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸುತ್ತಿದ್ದೀರಿ ಎಂದಿದ್ದಾರೆ.

ಪ್ರೀತಿ ವಿಶ್ವಾಸ ಎಂಬುದು ಮರದಲ್ಲೂ ಸಿಗುವುದಿಲ್ಲ, ಮಾರುಕಟ್ಟೆಯಲ್ಲೂ ಸಿಗುವುದಿಲ್ಲ. ಕೇವಲ ಜನರ ಹೃದಯದಲ್ಲಿ ಮಾತ್ರ ಸಿಗುತ್ತದೆ. ನಾವು ನಿಮಗಾಗಿ ಮಾಡಿದ ಸೇವೆ, ತೀರ್ಮಾನವನ್ನು ನೀವು ಸ್ಮರಿಸಿ, ನಮ್ಮ ಮೇಲೆ ವಿಶ್ವಾಸವಿಟ್ಟಿರುವುದಕ್ಕೆ ಸರ್ಕಾರದ ಪರವಾಗಿ ನಮಿಸುತ್ತೇನೆ. ಸಿದ್ದರಾಮಯ್ಯ ಅವರ ಈ ಹಿಂದಿನ ಸರ್ಕಾರದಲ್ಲಿ ನಾನು ನಾಲ್ಕೂವರೆ ವರ್ಷ ಇಂಧನ ಇಲಾಖೆ ಜವಾಬ್ದಾರಿ ವಹಿಸಿಕೊಂಡಿದ್ದೆ. ನಾನು ಈ ಇಲಾಖೆ ಜವಾಬ್ದಾರಿ ತೆಗೆದುಕೊಂಡಾಗ, ಇದರ ಜವಾಬ್ದಾರಿ ಹೊತ್ತವರೆಲ್ಲರೂ ವಿಫಲರಾಗಿದ್ದಾರೆ. ನೀವು ಯಾಕೆ ಇದರ ಜವಾಬ್ದಾರಿ ವಹಿಸಿಕೊಂಡಿದ್ದೀರಿ ಎಂದು ಕೇಳಿದ್ದರು. ಅದಕ್ಕೆ ನಾನು ಎಲ್ಲಿ ಶ್ರಮವಿದೆಯೋ ಅಲ್ಲಿ ಫಲವಿದೆ ಎಂದು ಹೇಳಿದ್ದೆ. ಕಷ್ಟದ ಜವಾಬ್ದಾರಿ ವಹಿಸಿಕೊಂಡು ಅದನ್ನು ಸರಿಪಡಿಸುವುದೇ ನಾಯಕನ ಗುಣ ಎಂದು ಹೇಳಿದ್ದಾರೆ.

ಇಲಾಖೆಯ ನೌಕರರು ಇಂದಿರಾ ಗಾಂಧಿ ಅವರನ್ನು ಸ್ಮರಿಸಬೇಕು. ನಿಮ್ಮ ಇಲಾಖೆಗೆ ಹೊಸ ರೂಪ ಕೊಟ್ಟಾಗ ನೌಕರರ ಸಂಘದ ಪದಾಧಿಕಾರಿಗಳು, ಇಂಜಿನಿಯರ್ ಪದಾಧಿಕಾರಿಗಳು ವ್ಯವಸ್ಥಾಪಕ ಮಂಡಳಿಯಲ್ಲಿ ಇರಬೇಕು ಎಂದು ಆದೇಶ ಕೊಟ್ಟಿದ್ದರು.

ಇಂದು ಬಲರಾಮ್, ಶಿವಣ್ಣ ಅವರು ಮಂತ್ರಿಗಳು ಹಾಗೂ ಮುಖ್ಯಮಂತ್ರಿಗಳ ಜತೆ ಕೂತು ನಿಮ್ಮ ಭವಿಷ್ಯದ ಬಗ್ಗೆ ತೀರ್ಮಾನ ಮಾಡುವಲ್ಲಿ ಭಾಗಿಯಾಗಲು ಅವಕಾಶ ಕಲ್ಪಿಸಿದರು. ಇಂತಹ ತೀರ್ಮಾನ ಮಾಡಿದವರನ್ನು ನೀವು ಸ್ಮರಿಸಿಕೊಳ್ಳಬೇಕು. ನಾನು ಸಚಿವನಾಗಿ ಬಂದಾಗ 7 ವರ್ಷಕ್ಕೊಮ್ಮೆ ವೇತನ ಪರಿಷ್ಕರಣೆ ಮಾಡಲಾಗುತ್ತಿತ್ತು.

ಅದನ್ನು 5 ವರ್ಷಕ್ಕೆ ಇಳಿಸಿ, ಒಂದೇ ಬಾರಿಗೆ 26%ನಷ್ಟು ವೇತನ ಏರಿಕೆ ಮಾಡಲಾಯಿತು. ಇದನ್ನು ಮಾಡಿದ್ದು ಕಾಂಗ್ರೆಸ್ ಸರ್ಕಾರ ಎಂದು ತಿಳಿಸಿದ್ದಾರೆ.

### ಪಾರದರ್ಶಕವಾಗಿ 24 ಸಾವಿರ ಸಿಬ್ಬಂದಿ ನೇಮಕ

**ನಾನು ಇಂಧನ ಇಲಾಖೆ ಜವಾಬ್ದಾರಿ ವಹಿಸಿಕೊಂಡಾಗ ರಾಜ್ಯದಲ್ಲಿ 11 ಸಾವಿರ ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿತ್ತು. ಆದರೆ ಇಲಾಖೆ ಜವಾಬ್ದಾರಿ ಬಿಡುವಾಗ ರಾಜ್ಯದಲ್ಲಿ 23 ಸಾವಿರ ಮೆ.ವ್ಯಾಟ್ ವಿದ್ಯುತ್ ಉತ್ಪಾದನೆಯಾಗುತ್ತಿತ್ತು. ಇಲಾಖೆಯಲ್ಲಿ ಒಂದು ರೂಪಾಯಿ ಲಂಚ ಪಡೆಯದೇ, ಪಾರದರ್ಶಕವಾಗಿ 24 ಸಾವಿರ ನೌಕರರನ್ನು ನೇಮಕಾತಿ ಮಾಡಿದೆ. ಈ ಹಿಂದೆ ಇದ್ದ ವಿದ್ಯುತ್ ಶಕ್ತಿ ಮಂತ್ರಿಗಳು ನೇಮಕಾತಿಗೆ ವಸೂಲಿ ಮಾಡುತ್ತಿದ್ದರು. ನಾನು ಅದನ್ನು ತಪ್ಪಿಸಿ, ನಿಮ್ಮ ಮನೆ ಬಾಗಿಲಿಗೆ ನೌಕರಿಯನ್ನು ಕೊಟ್ಟ ತೃಪ್ತಿ ನನಗಿದೆ ಎಂದಿದ್ದಾರೆ.**

# ಶ್ರೀ ಅಭಯಹಸ್ತ ಬಲಮುರಿ ಗಣಪತಿ ರಥೋತ್ಸವ ಸುಸಂಪನ್ನ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕೆಂಗೇರಿ ಉಪನಗರದ ಜ್ಞಾನಭಾರತಿ ಬಡಾವಣೆಯ ಶ್ರೀ ಅಭಯಹಸ್ತ ಬಲಮುರಿ ಗಣಪತಿ ರಥೋತ್ಸವ ಸುಸಂಪನ್ನವಾಯಿತು. 18ನೇ ವಾರ್ಷಿಕೋತ್ಸವದ ಅಂಗವಾಗಿ ವಿಶೇಷ ಪೂಜೆ ಹೋಮ ಹವನಾದಿಗಳನ್ನು ಮಾಡಲಾಯಿತು, ಇದೇ ಸಂದರ್ಭದಲ್ಲಿ ಸಾಮೂಹಿಕ ಆಶ್ಲೇಷ ಪೂಜೆಯನ್ನು ಕೈಗೊಳ್ಳಲಾಗಿತ್ತು, ಗಣಪತಿಗೆ ಪಂಚಾಮೃತ ಅಭಿಷೇಕ, ಸಾಮೂಹಿಕ ಗಣಹೋಮ, ಅನ್ನ ಸಂತರ್ಪಣೆ ಯನ್ನು ಮಾಡಲಾಯಿತು. ಈ ಸಂದರ್ಭದಲ್ಲಿ ಆಲಯದ ಆಡಳಿತ ಮಂಡಳಿಯ ಗೌರವಾಧ್ಯಕ್ಷ ಡಿ.ರಾಮಪ್ಪ, ಕಾರ್ಯದರ್ಶಿ ಸಂಜೀವ ರೆಡ್ಡಿ, ಅಧ್ಯಕ್ಷ ಎಸ್. ಕುಮಾರ್, ಈಶ್ವರಪ್ಪ, ಶಾಂತಕುಮಾರ್, ರಜನಿ ಸೇರಿದಂತೆ ಸದಸ್ಯರು ಹಾಗು ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು, ಪ್ರಧಾನ ಅರ್ಚಕ ಮಂಜುನಾಥ ಶಾಸ್ತ್ರೀ ಹಾಗು ಅರ್ಚಕ ಸುದರ್ಶನ ಭಟ್ ನೇತೃತ್ವದಲ್ಲಿ ಪೂಜಾ ಕಾರ್ಯಗಳು ಯಶಸ್ವಿಯಾಗಿ ನಡೆಯಿತು.

# ವಿಶ್ವೇಶ್ವರಯ್ಯ ಜಲ ನಿಗಮಕ್ಕೆ ಐಐಎನ್ ಪ್ಲಾಟಿನಂ 2025 ರಾಷ್ಟ್ರೀಯ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು

ಅಕ್ವಡಕ್ಟ್ ಇಂಜಿನಿಯರಿಂಗ್ ತಂತ್ರಜ್ಞಾನದ ಮೂಲಕ ಆರೋಗ್ಯ, ಸುರಕ್ಷತೆ, ಪರಿಸರ ಸ್ನೇಹಿ ಮಾದರಿಯಲ್ಲಿ ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ ಜಾರಿ ಮಾಡಿರುವ ಹಿನ್ನೆಲೆಯಲ್ಲಿ ರಾಜ್ಯ ಜಲ ಸಂಪನ್ಮೂಲ ಇಲಾಖೆ ವ್ಯಾಪ್ತಿಯ ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತಕ್ಕೆ 2025ನೇ ಸಾಲಿನ ಪ್ರತಿಷ್ಠಿತ ಐಐಎನ್ ಪ್ಲಾಟಿನಮ್ ರಾಷ್ಟ್ರೀಯ ಪ್ರಶಸ್ತಿ ಲಭಿಸಿದೆ.

ಮೂಲಸೌಕರ್ಯ ಕ್ಷೇತ್ರದಲ್ಲಿ ಕೌಶಲ್ಯ ಅಭಿವೃದ್ಧಿ, ತಂತ್ರಜ್ಞಾನ ಆವಿಷ್ಕಾರಕ್ಕೆ ಆದ್ಯತೆ ನೀಡುವ ಉದ್ದೇಶದಿಂದ ರೂಪಿತವಾಗಿರುವ ಇನ್ಫ್ರಾಸ್ಟ್ರಕ್ಚರ್ ಸ್ಕಿಲ್ ಡೆವಲಪ್ಮೆಂಟ್ ಅಕಾಡಮಿ ಸಂಸ್ಥೆಯು ವಿಜೆಎನ್‌ಎಲ್ ಗೆ ಕಳೆದ ಜೂನ್ 14 ರಂದು ನವದೆಹಲಿಯಲ್ಲಿ ಈ ಪ್ರಶಸ್ತಿಯನ್ನು ನೀಡಿದೆ.

ವಿಜೆಎನ್‌ಎಲ್ ವ್ಯವಸ್ಥಾಪಕ ನಿರ್ದೇಶಕರಾದ ಸಣ್ಣಚಿತ್ತಯ್ಯ, ಅಧಿಕಾರಿಗಳ ತಂಡ ಜಲಸಂಪನ್ಮೂಲ ಸಚಿವರೂ ಆಗಿರುವ ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಪ್ರಶಸ್ತಿ ಫಲಕದೊಂದಿಗೆ ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದರು.


ಉದಯವಾಹಿನಿ ಚಿತ್ರ

ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ ಗುರುತ್ವಾ ಕಾಲುವೆ ಸರಪಳಿಯ 199.620 ಕಿ.ಮೀ ನಿಂದ 210.090 ಕಿ.ಮೀ ವರೆಗೆ ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಚೇಳೂರು ಸಮೀಪ 10.47 ಕಿ.ಮೀ ಉದ್ದದ 3300 ಕ್ಯೂಸೆಕ್ ಸಾಮರ್ಥ್ಯದ ಬೃಹತ್ ಮೇಲ್ಗಾಲುವೆ ನಿರ್ಮಾಣ ಕಾಮಗಾರಿಯನ್ನು ವಿಶ್ವೇಶ್ವರಯ್ಯ ಜಲ ನಿಗಮ ನಿಯಮಿತದಿಂದ 2018ರಲ್ಲಿ ಆರಂಭಿಸಿ 2023ರಲ್ಲಿ ಪೂರ್ಣಗೊಳಿಸಲಾಗಿದೆ. ಎತ್ತಿನಹೊಳೆ ಯೋಜನೆಯಲ್ಲಿ ಅಕ್ವಡಕ್ಟ್ ಇಂಜಿನಿಯರಿಂಗ್ ತಂತ್ರಜ್ಞಾನದ ಮೂಲಕ 10.47 ಕಿ.ಮೀ ಉದ್ದದ ಉನ್ನತ ಗುರುತ್ವಾಕರ್ಷಣ ಕಾಲುವೆ 520 ವಿಶೇಷ ಸೇತುಬಂಧಗಳನ್ನು ನಿರ್ಮಿಸಲಾಗಿದೆ. ಈ ಯೋಜನೆಯಲ್ಲಿ ಅವಳಿ ತೊಟ್ಟಿಗಳು, ಸರ್ವಿಸ್ ರಸ್ತೆಗಳ ಸಮನ್ವಯತೆಯಿಂದ ಕಾರ್ಯಾಚರಣೆ ದಕ್ಷತೆಗಾಗಿ ಹೊಸ ವಿನ್ಯಾಸವನ್ನು ರೂಪಿಸಲಾಗಿದೆ.

10.47 ಕಿ.ಮೀ ಉದ್ದದ ಬೃಹತ್ ಮೇಲ್ಗಾಲುವೆ ಕಾಮಗಾರಿಯನ್ನು ಪೂರ್ಣಗೊಳಿಸಲು 1162.69 ಕೋಟಿ ಭೂಸ್ವಾಧೀನಕ್ಕೆ 40.99 ಕೋಟಿ ಸೇರಿ ಒಟ್ಟು 1203.68 ಕೋಟಿ ರೂಪಾಯಿ ವೆಚ್ಚವಾಗಿದೆ

# ಕನ್ನಡ ಪರ ಸಂಘಟನೆಯ ಪ್ರಮುಖರಿಗೆ ಪೊಲೀಸರಿಂದ ನೋಟಿಸ್

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಕಮಲ್ ಹಾಸನ್ ನಟನೆಯ 'ಥಗ್‌ಲೈಫ್' ಸಿನಿಮಾ ರಿಲೀಸ್‌ಗೆ ಸುಪ್ರೀಂ ಗ್ರೀನ್ ಸಿಗ್ನಲ್ ನೀಡಿದ ಬೆನ್ನಲ್ಲೇ ಕನ್ನಡ ಪರ ಸಂಘಟನೆಯ ಪ್ರಮುಖರಿಗೆ ಪೊಲೀಸರು ನೋಟಿಸ್ ನೀಡಿದ್ದು, ಆಕ್ರೋಶಕ್ಕೆ ಕಾರಣವಾಗಿದೆ.

ಕರವೇ ನಾರಾಯಣ ಗೌಡ ಪ್ರವೀಣ್ ಶೆಟ್ಟಿ ಸೇರಿದಂತೆ ಕನ್ನಡ ಪರ ಸಂಘಟನೆಯ ಪ್ರಮುಖರಿಗೆ ನೋಟಿಸ್ ಕೊಟ್ಟಿದ್ದಾರೆ. ಈ ಮೂಲಕ ಚಿತ್ರ ಬಿಡುಗಡೆಗೆ ತಡೆ ನೀಡುವ ನಿಟ್ಟಿನಲ್ಲಿ ಆದೇಶ ಮೀರಿ ಹೋರಾಟಕ್ಕೆ ಮುಂದಾದರೆ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದಾರೆ.

ಪ್ರತಿಭಟನೆ ಮಾಡುವ ಹಾಗಿದ್ದರೆ ಕೋರ್ಟ್ ಆದೇಶದಂತೆ ನೀವು ನಿಗದಿತ ಸ್ಥಳದಲ್ಲಿ ಅಂದರೆ ಫ್ರೀಡಂ ಪಾರ್ಕ್‌ನಲ್ಲಿ ಮಾತ್ರ ಪ್ರತಿಭಟನೆ ಮಾಡಬೇಕು. ಒಂದು ವೇಳೆ ಥಗ್ ಲೈಫ್ ಸಿನಿಮಾ ಬಿಡುಗಡೆ ಆಗಿರುವ ಚಿತ್ರಮಂದಿರದ ಬಳಿ ಹೋಗಿ ಪ್ರತಿಭಟನೆ ಮಾಡಿದರೆ, ಕಾನೂನು ಕ್ರಮ ಕೈಗೊಳ್ಳುವುದಾಗಿ ನೋಟಿಸ್‌ನಲ್ಲಿ ಉಲ್ಲೇಖಿಸಿದ್ದಾರೆ. ಪೊಲೀಸರ ನೋಟಿಸ್ ಬೆನ್ನಲ್ಲೇ ಇಲಾಖೆ ವಿರುದ್ಧ ಕರವೇ ಪ್ರವೀಣ್ ಶೆಟ್ಟಿ ಆಕ್ರೋಶ ಹೊರ ಹಾಕಿದ್ದಾರೆ. ಜೊತೆ ಮಾತನಾಡಿದ ಅವರು, ಕನ್ನಡ ಪರ ಹೋರಾಟಗಾರರು ಉಗ್ರಾಗಾಮಿಗಳೋ, ದೇಶದ್ರೋಹಿಗಳೋ ಅಲ್ಲ. ಕನ್ನಡದ ವಿಚಾರಗಳಿಗಾಗಿ ಎದೆ ತಟ್ಟಿ ನಿಂತಿರುವವರು.

ಸಿನಿಮಾ ಬಿಡುಗಡೆ ವಿಚಾರವಾಗಿ, ನಾವು ಇನ್ನೂ ಹೋರಾಟಕ್ಕೆ ನಿರ್ಧಾರವನ್ನೇ ಮಾಡಿಲ್ಲ. ಆಗಲೇ ನೋಟಿಸ್ ಕೊಟ್ಟಿದ್ದಾರೆ ಎಂದರು. ಬೆಂಗಳೂರಿಗೆ ಥಗ್‌ಲೈಫ್ ಸಿನಿಮಾ ಪ್ರಮೋಷನ್‌ಗಾಗಿ ಬಂದಿದ್ದ ನಟ ಕಮಲ್ ಹಾಸನ್ 'ತಮಿಳಿನಿಂದಲೇ ಕನ್ನಡ ಹುಟ್ಟಿದ್ದು' ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ದರು. ಇದರಿಂದ ಕನ್ನಡಿಗರಲ್ಲಿ ಆಕ್ರೋಶದ ಕಟ್ಟೆಯೊಡೆದಿತ್ತು. ಬಳಿಕ ಹೈಕೋರ್ಟ್ ಮೆಟ್ಟಿಲೇರಿದ್ದ ಕಮಲ್‌ಗೆ, ಥಗ್‌ಲೈಫ್ ರಿಲೀಸ್‌ಗೆ ಒಂದು ವಾರಗಳ ಕಾಲ ತಡೆ ನೀಡಿ ಆದೇಶ ಹೊರಡಿಸಿ ಶಾಕ್ ನೀಡಿತ್ತು. ಬಳಿಕ ಆದೇಶ ಪ್ರಶ್ನಿಸಿ ನಟ ಸುಪ್ರೀಂ ಮೊರೆ ಹೋಗಿದ್ದರು. ವಿಚಾರಣೆ ನಡೆಸಿದ ಕೋರ್ಟ್ ಸಿನಿಮಾ ಬಿಡುಗಡೆಗೆ ಅನುಮತಿಸಿ ಆದೇಶ ಹೊರಡಿಸಿದೆ.

**ಸರ್ಕಾರವೇ ನಟನ ವಿರುದ್ಧ ಆಕ್ರೋಶ ವ್ಯಕ್ತಪಡಿಸಿತ್ತು. ಆದರೇ ಈಗ ಹೀಗ್ಯಾಕೆ ಮಾಡಿದ್ದಾರೋ ಗೊತ್ತಿಲ್ಲ. ರಾತ್ರಿಯೇ ಮನೆ ಬಳಿ ಬಂದು ನೋಟಿಸ್ ಅಂಟಿಸಿ, ಪೊಲೀಸರು ನೋಟಿಸ್ ಕೊಟ್ಟಿದ್ದಾರೆ. ಜನ ಈಗಾಗಲೇ ಸಿನಿಮಾ ತಿರಸ್ಕಾರ ಮಾಡಿದ್ದಾರೆ. ಆದರೂ ಹುಂಬತನಕ್ಕೆ ಬಿದ್ದು, ಸಿನಿಮಾ ರಿಲೀಸ್‌ಗೆ ಮುಂದಾಗಿದ್ದಾರೆ. ಥಿಯೇಟರ್‌ಗೂ ಕೂಡ ನಮ್ಮ ಜನ ಹೋಗಲ್ಲ ಎನ್ನುವ ನಂಬಿಕೆ ಇದೆ. ವಾಣಿಜ್ಯ ಮಂಡಳಿಯವರು ಕೂಡ ಥಿಯೇಟರ್‌ನವರು ಮುಂದೆ ಬರುತ್ತಿಲ್ಲ ಅಂತ ಹೇಳಿದ್ದಾರೆ. ಹಾಗಾಗಿ ನಮ್ಮ ಜನ ಕೂಡ ತಿರಸ್ಕಾರ ಮಾಡಲಿದ್ದಾರೆ ಎಂದರು.**

# ಜೂನ್ 23ರಂದು ಇಡಿ ವಿಚಾರಣೆಗೆ ಹಾಜರಾಗುವೆ- ಡಿ.ಕೆ ಸುರೇಶ್



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಐಶ್ವರ್ಯ ಗೌಡ ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಜಾರಿ ನಿರ್ದೇಶನಾಲಯದಿಂದ ಸಮನ್ಸ್ ಜಾರಿಯಾಗಿರುವುದು ನಿಜ. ಅದರಂತೆ ಜೂನ್ 23ರಂದು ವಿಚಾರಣೆಗೆ ಹಾಜರಾಗುತ್ತೇನೆ ಎಂದು ಮಾಜಿ ಸಂಸದ ಡಿ.ಕೆ. ಸುರೇಶ್ ಅವರು ಮಂಗಳವಾರ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಧ್ಯಾಹ್ನವಷ್ಟೇ ಇಡಿ ಸಮನ್ಸ್ ಜಾರಿ ಮಾಡಿದೆ. ಅಧಿಕಾರಿಗಳು ಮನೆಗೆ ಬಂದು ಸಮನ್ಸ್ ನೀಡಿದಾಗ, ನಾನು ಮನೆಯಲ್ಲಿ ಇರಲಿಲ್ಲ. ಅನಂತರ ಮನೆಗೆ ಬಂದು ಭೇಟಿಯಾಗಿ, ಯಾವ ವಿಚಾರವಾಗಿ ಸಮನ್ಸ್ ಎಂದು ನೋಡಿದಾಗ ಐಶ್ವರ್ಯಗೌಡ ಕೇಸ್ ಎಂಬುದು ಗೊತ್ತಾಯಿತು ಎಂದು ಹೇಳಿದರು. ಜೂನ್ 19ಕ್ಕೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದ್ದಾರೆ. ಆದರೆ, ಅಂದು ಪೂರ್ವನಿಯೋಜಿತ ಕಾರ್ಯಕ್ರಮ ಇರುವುದರಿಂದ ಬರುವ ಸೋಮವಾರ (ಜೂನ್ 23) ಹಾಜರಾಗುವುದಾಗಿ ಹೇಳಿದ್ದೇನೆ. ಈಗ ಮೌಖಿಕವಾಗಿ ತಿಳಿಸಿದ್ದೇನೆ. ನಂತರ ಮೇಲ್ ಮೂಲಕ ಅಧಿಕೃತವಾಗಿ ತಿಳಿಸುತ್ತಿದ್ದೇನೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಆರೋಪ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಯಾವುದೇ ಅಕೌಂಟ್ ಟ್ರಾನ್ಸಾಕ್ಷನ್ ನಡೆಸಿರಲಿಲ್ಲ. ಅವರು ನಮ್ಮ ಕ್ಷೇತ್ರದವರು. ಒಂದೆರಡು ಕಾರ್ಯಕ್ರಮಕ್ಕೆ ಹೋಗಿದ್ದೆ. ನನ್ನ ತಂಗಿ ಎನ್ನುವ ಹೆಸರಲ್ಲಿ ಹೀಗೆಲ್ಲ ಮಾಡಿದ್ದಾರೆಂಬುದು ತಿಳಿದ ಕೂಡಲೇ ಸ್ವತಃ ನಾನೇ ದೂರು ಕೊಟ್ಟಿದ್ದೇನೆ. ಇಡಿಯವರು 7 ರಿಂದ 8 ದಾಖಲೆಗಳನ್ನು ಕೇಳಿದ್ದಾರೆ. ನನ್ನ ಬಳಿ ದಾಖಲೆ ಕೇಳಿದ್ದು ಅಸಂಬದ್ಧ. ಅದನ್ನ ಹೋದಾಗ ಅಲ್ಲಿ ಮಾತನಾಡುತ್ತೇನೆ ಎಂದು ಹೇಳಿದ್ದಾರೆ.

# ಅಕ್ರಮ ವಾಸ: ವಿದೇಶದ 11 ಪ್ರಜೆಗಳ ವಿರುದ್ಧ ಕ್ರಮ

• ಉದಯವಾಹಿನಿ, ಬೆಂಗಳೂರು



ನಗರದಲ್ಲಿ ಅಕ್ರಮವಾಗಿ ನೆಲಸಿರುವ ವಿದೇಶದ 11 ಪ್ರಜೆಗಳನ್ನು ಪತ್ತೆ ಹಚ್ಚಿರುವ ಸಿಸಿಬಿ ಪೊಲೀಸರು, ಅವರ ವಿರುದ್ಧ ಕ್ರಮ ಕೈಗೊಂಡಿದ್ದಾರೆ. ಕ್ಯಾಮರೂನ್, ಸುಡಾನ್ ದೇಶದ ನಾಲ್ವರನ್ನು ನೆಲಮಂಗಲ ಬಳಿಯ ವಲಸಿಗರ ಬಂಧನ ಕೇಂದ್ರಕ್ಕೆ ಕಳುಹಿಸಲಾಗಿದೆ. ನೈಜೀರಿಯಾ ಹಾಗೂ ಸೆನೆಗಲ್ ದೇಶದ ಇಬ್ಬರ ಗಡಿಪಾರಿಗೆ ಕ್ರಮ ತೆಗೆದುಕೊಳ್ಳಲಾಗಿದೆ. ನೈಜೀರಿಯಾ ಹಾಗೂ ಐವರಿ ಕೋಸ್ಟ್‌ನ ಐವರ ವಿರುದ್ಧ ಡಿ.ಜೆ.ಹಳ್ಳಿ, ಕುಮಾರಸ್ವಾಮಿ ಲೇಔಟ್, ಹೆಣ್ಣೂರು, ಬನಶಂಕರಿ, ರಾಮಮೂರ್ತಿ ನಗರ ಪೊಲೀಸ್ ಠಾಣೆಯಲ್ಲಿ ಮಾದಕ ದ್ರವ್ಯ ನಿಗ್ರಹ ಕಾಯ್ದೆ(ಎನ್‌ಡಿಪಿಎಸ್) ಹಾಗೂ ಶಸ್ತ್ರಾಸ್ತ್ರ ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲಾಗುತ್ತಿದೆ. ಅಕ್ರಮ ವಾಸಿಗಳ ವಿರುದ್ಧ ಕಾರ್ಯಾಚರಣೆ ಮುಂದುವರಿಸಲಾಗುವುದು ಎಂದು ಪೊಲೀಸರು ಹೇಳಿದರು.

# ಲಂಗುಲಗಾಮಿಲ್ಲದೇ ಗಗನಕ್ಕೇರುತ್ತಿರುವ ಆಟೋ ದರಗಳು

## ಬೈಕ್ ಟ್ಯಾಕ್ಸಿ ಸೇವೆ ಹಿಂದಕ್ಕೆ ಪಡೆದ ಬೆನ್ನಲ್ಲೇ ಆಟೋ ಪ್ರಯಾಣ ದರ ಏರಿಕೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಬೈಕ್ ಟ್ಯಾಕ್ಸಿ ಬಂದ್**

ಕರ್ನಾಟಕ ಉಚ್ಚನ್ಯಾಯಾಲಯದ ಆದೇಶದಂತೆ ಬೈಕ್ ಟ್ಯಾಕ್ಸಿಗಳು ಸೋಮವಾರದಿಂದ ಬಂದ್ ಆಗಿವೆ. ಆದರೂ, ನ್ಯಾಯಾಲಯದ ಆದೇಶ ಮೀರಿ, ಕಾರ್ಯನಿರ್ವಹಿಸುತ್ತಿದ್ದ ಸುಮಾರು 200ಕ್ಕೂ ಹೆಚ್ಚು ವಾಹನಗಳನ್ನು ಬೆಂಗಳೂರು ಟ್ರಾಫಿಕ್ ಪೊಲೀಸರು ಜಪ್ತಿ ಮಾಡಿದ್ದಾರೆ.

ಮೊದಲೇ, RTO ಆದೇಶಕ್ಕಿಂತ ಹೆಚ್ಚಿನ ದರದಲ್ಲಿ ಸೇವೆ ಸಲ್ಲಿಸುತ್ತಿರುವ ಅಗ್ರೆಗೇಟರ್ ಸಂಸ್ಥೆಗಳು, ಈಗ ಸಿಕ್ಕಿದ್ದೇ ಚಾನ್ಸ್ ಎಂದು ಏಕಾಏಕಿ ದರವನ್ನು ಏರಿಸಿವೆ. ಇದಕ್ಕೆ ಕಾರಣ, ಬೈಕ್ ಟ್ಯಾಕ್ಸ್ ನಿಷೇಧ. ಕನಿಷ್ಠ ದರಗಳು 70 ರೂಪಾಯಿಯವರೆಗೂ ಏರಿಕೆಯಾಗಿದೆ. ಇದು, ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಕೆಲವು ದಿನಗಳ ಹಿಂದೆ, ಮುಂಗಡ ಹಣ ಪಡೆಯುವುದಕ್ಕೆ ಕೇಂದ್ರ ಸರ್ಕಾರ ನಿಷೇಧವನ್ನು ಹೇರಿತ್ತು. ದರ ಏರಿಕೆಯ ಬಗ್ಗೆ ಸಾರ್ವಜನಿಕರಿಗೆ ದೂರು ನೀಡಲು ಅವಕಾಶವಿದೆ. ಬೈಕ್ ಟ್ಯಾಕ್ಸಿ ಬಂದ್ ಆಗಿದ್ದರಿಂದ, ಆಟೋಗಳಿಗೆ ಬೇಡಿಕೆ ಹೆಚ್ಚಾಗಿದೆ. ಇದರಿಂದ ಆಟೋಗಳ ಬೆಲೆ ಹೆಚ್ಚಾಗಿದೆ. ಇದು ಸಾರ್ವಜನಿಕರನ್ನು ಸುಲಿಗೆ ಮಾಡುವ ಹಗಲು ದರೋಡೆ ಎಂದು ಪ್ರಯಾಣಿಕರು ದೂರುತ್ತಿದ್ದಾರೆ.

ರಾಜ್ಯ ಸರ್ಕಾರವು ಮೋಟಾರು ವಾಹನ ಕಾಯ್ದೆಯಡಿ 2019 ಸೆಕ್ಷನ್ 2(47) ) ನಿಯಮಗಳನ್ನು ರೂಪಿಸದ ಹೊರತು, ಬೈಕ್ ಟ್ಯಾಕ್ಸಿಗಳು ಕಾರ್ಯಾಚರಣೆ ಮಾಡುವಂತಿಲ್ಲ. ಮುಂದಿನ ಆರು ವಾರ ಸೇವೆಯನ್ನು ನಿಲ್ಲಿಸಬೇಕು ಎಂದು ಕರ್ನಾಟಕ ಹೈಕೋರ್ಟಿನ ಏಕಸದಸ್ಯ ಪೀಠ ಆದೇಶವನ್ನು ನೀಡಿತ್ತು. ಆದಾಗ್ಯೂ, ಕೆಲವೊಂದು ಬೈಕ್ ಟ್ಯಾಕ್ಸಿಗಳು ಸದ್ದಿಲ್ಲದೇ ಕಾರ್ಯನಿರ್ವಹಿಸಿತ್ತು. ಪೊಲೀಸರು ಅಂತಹ ವಾಹನಗಳನ್ನು ಜಪ್ತಿ ಮಾಡಿದ್ದಾರೆ. ಏಕಾಏಕಿ ಆಟೋ ದರ ಏರಿಕೆಯ ಬಗ್ಗೆ ಹಲವರು ತಮ್ಮ ನೋವುಗಳನ್ನು ಸಾಮಾಜಿಕ ಜಾಲತಾಣದಲ್ಲಿ ತೋಡಿಕೊಂಡಿದ್ದಾರೆ. ಇದು ನೇರ ನಮ್ಮ ಜೇಬಿಗೆ ಕತ್ತರಿ ಹಾಕುವ ಕೆಲಸವಾಗಿದೆ. ಸಾಮಾನ್ಯ ಆಟೋದಲ್ಲಿ ಒಂದು ದರ, ಓಲಾ ಉಬರ್ ನಮ್ಮ ಯಾತ್ರಿಯಲ್ಲಿ ಬೇರೊಂದು ದರ ಎಂದು ದೂರಲಾಗುತ್ತಿದೆ.

ಸಾಮಾನ್ಯವಾಗಿ ಕೋರಮಂಗಲದಿಂದ ಲಾಂಫೋರ್ಡ್ ರಸ್ತೆಗೆ ಮೀಟರ್ ದರ 140 – 150 ರೂಪಾಯಿ. ಅದೇ, ಉಬರ್‌ನಲ್ಲಿ 190 –200 ರೂಪಾಯಿವರೆಗೆ ತೋರಿಸುತ್ತಿದೆ.


ನಮ್ಮ ಯಾತ್ರಿ ಮತ್ತು ರಯಾಪಿಡೋದಲ್ಲೂ ಇದೇ ರೀತಿಯ ಸಮಸ್ಯೆ ಎಂದು ಸಾಮಾಜಿಕ ಜಾಲತಾಣದಲ್ಲಿ ನೆಟ್ಟಿಗರು ಸಿಟ್ಟು ಹೊರಹಾಕುತಿದ್ದಾರೆ. ಜನರ ಬೇಡಿಕೆಯ ಮೇಲೆ ಆಪ್ ಆಧಾರಿತ ಸೇವೆ ನೀಡುವ ಈ ಸಂಸ್ಥೆಗಳು ದರವನ್ನು ಹೆಚ್ಚಿಸುತ್ತದೆ.

ಮಧ್ಯಾಹ್ನದ ಹೊತ್ತಿಗೆ ಹಿಂದಿನ ಬೆಲೆಯೇ ಇರುತ್ತದೆ. ಬೆಳಗ್ಗೆ, ಸಾಯಂಕಾಲ ಡಿಮಾಂಡ್ ನೋಡಿ, ದರವನ್ನು ಏರಿಸಲಾಗುತ್ತದೆ. ಜನರ ಬೇಡಿಕೆಯೇ ಇವರಿಗೆ ಹೆಚ್ಚಿನ ಆದಾಯದ ಮೂಲ ಎಂದು ಮತ್ತೋರ್ವ ಪ್ರಯಾಣಿಕರು ಅಳಲು ತೋಡಿಕೊಂಡಿದ್ದಾರೆ.

**ಬೆಂಗಳೂರಿನಲ್ಲಿ ಸೇವೆ ನೀಡುತ್ತಿರುವ ಪ್ರಮುಖ ನಾಲ್ಕು ಅಗ್ರೆಗೇಟರ್ ಸಂಸ್ಥೆಗಳಾದ ನಮ್ಮ ಯಾತ್ರಿ, ಓಲಾ, ಉಬರ್ ಮತ್ತು ರ್ಯಾಪಿಡೋಗಳು ತಮ್ಮ ದರವನ್ನು ಕನಿಷ್ಠ 20 – 30 ರೂಪಾಯಿವರೆಗೆ ಹೆಚ್ಚಿಸಿದೆ. ಇದಲ್ಲದೇ, ಹೆಚ್ಚು ಟಿಪ್ಸ್ ನೀಡಿದರೆ ಬೇಗ ಸೇವೆ ಎನ್ನುವ ಇನ್ನೊಂದು ಆಪ್ಷನ್ ಇರೋದರಿಂದ, ಪ್ರಯಾಣಿಕರಿಗೆ ಇದರಿಂದ ತುಂಬಾ ತೊಂದರೆಯಾಗುತ್ತಿದೆ ಎಂದು ದೂರಲಾಗಿದೆ. ಅಕ್ಷಯ ನಗರದಿಂದ ಮಹಾತ್ಮ ಗಾಂಧಿ ರಸ್ತೆಗೆ ಸಾಮಾನ್ಯ ಆಟೋಅದಲ್ಲಿ 160 – 170 ರೂಪಾಯಿ ಆಗುತ್ತದೆ. ಆದರೆ, ಮಂಗಳವಾರ 230 ರೂಪಾಯಿ ತೋರಿಸುತ್ತಿದೆ. ವಿದ್ಯಾಪೀಠದಿಂದ ಟ್ರಿನಿಟಿ ವೃತ್ತಕ್ಕೆ 165 – 170 ರೂಪಾಯಿ ಉಬರ್‌ನಲ್ಲಿತ್ತು. ಮಂಗಳವಾರದಿಂದ ಇದರಲ್ಲೂ ಏರಿಕೆಯನ್ನು ಕಂಡಿದೆ.**

# ತ್ಯಾಜ್ಯ ಆಯುವವರ ಸನ್ಮಾನಿಸಿದ ಹಸಿರು ದಳ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಹವಾಮಾನ ಬದಲಾವಣೆಗೆ ಕೊಡುಗೆ**

ಮಂಗಳವಾರ ನಡೆದ ಹಸಿರು ಹಬ್ಬ ಹಸಿರು ಉತ್ಸವ 2025ರಲ್ಲಿ, ಹಸಿರು ದಳದ ವತಿಯಿಂದ 1,500 ಕ್ಕೂ ಹೆಚ್ಚು ತ್ಯಾಜ್ಯ ಆಯುವವರನ್ನು ಸನ್ಮಾನಿಸಲಾಯಿತು. ಅದೃಶ್ಯ ಹವಾಮಾನ ಯೋಧರಾಗಿ ತಮ್ಮ ಪಾತ್ರ ನಿರ್ವಹಣೆಗೆ ಮತ್ತು ತ್ಯಾಜ್ಯ ನಿರ್ವಹಣೆ ಮತ್ತು ಪರಿಸರ ಸುಸ್ಥಿರತೆಗೆ ಅವರ ಕೊಡುಗೆಗಳನ್ನು ಶ್ಲಾಘಿಸಿ ಸನ್ಮಾನಿಸಲಾಯಿತು. ಹಸಿರು ದಳ ಆಯೋಜಿಸಿದ ಈ ಕಾರ್ಯಕ್ರಮವು ಕರ್ನಾಟಕದ 4.23 ಲಕ್ಷ ತ್ಯಾಜ್ಯ ಆಯುವವರು, ಅವರಲ್ಲಿ ಹಲವರು ದಲಿತರು, ಆದಿವಾಸಿಗಳು ಮತ್ತು ಮಹಿಳೆಯರು, ವೃತ್ತಾಕಾರದ ಆರ್ಥಿಕತೆಯನ್ನು ಹೇಗೆ ಬಲಪಡಿಸುತ್ತಾರೆ ಎಂಬುದನ್ನು ಎತ್ತಿ ತೋರಿಸುವ ಮೂಲಕ ವಿಶ್ವ ಪರಿಸರ ದಿನವನ್ನು ಗುರುತಿಸಿತು.

ಅವರ ಕೆಲಸ– ತ್ಯಾಜ್ಯವನ್ನು ಸಂಗ್ರಹಿಸುವುದು ವಿಂಗಡಿಸುವುದು ಮತ್ತು ಸಂಸ್ಕರಿಸುವುದು. ವಾರ್ಷಿಕವಾಗಿ ಸಾವಿರಾರು ಟನ್ ಮರುಬಳಕೆ ಮಾಡಬಹುದಾದ ವಸ್ತುಗಳನ್ನು ಭೂಕುಸಿತಗಳಿಂದ ಬೇರೆಡೆಗೆ ತಿರುಗಿಸುತ್ತದೆ. ಹಸಿರು ದಳದ ದತ್ತಾಂಶದ ಪ್ರಕಾರ, ಬೆಂಗಳೂರಿನಲ್ಲಿ ಮಾತ್ರ, ಪ್ರತಿ ತಿಂಗಳು 3,000 ಟನ್‌ಗಳಿಗೂ ಹೆಚ್ಚು ಪ್ಲಾಸ್ಟಿಕ್ ತ್ಯಾಜ್ಯವನ್ನು ಅನೌಪಚಾರಿಕ ವಲಯದಿಂದ ಸಂಸ್ಕರಿಸಲಾಗುತ್ತದೆ. ಇದರ ಹೊರತಾಗಿಯೂ, ಹೆಚ್ಚಿನ ತ್ಯಾಜ್ಯ ಆಯುವವರು ಔಪಚಾರಿಕ ವ್ಯವಸ್ಥೆಗಳ ಹೊರಗೆ ಉಳಿದಿದ್ದಾರೆ. ಶೇ. 95 ರಷ್ಟು ಜನರು ಆರೋಗ್ಯ ವಿಮೆಯನ್ನು ಹೊಂದಿಲ್ಲ ಮತ್ತು ಅರ್ಧಕ್ಕಿಂತ ಹೆಚ್ಚು ಜನರು ವಿದ್ಯುತ್, ಶೌಚಾಲಯಗಳು ಅಥವಾ ಕುಡಿಯುವ ನೀರಿನಂತಹ ಮೂಲಭೂತ ಮೂಲಸೌಕರ್ಯಗಳಿಲ್ಲದೆ ಬದುಕುತ್ತಿದ್ದಾರೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಪತ್ರಿಕಾ ಪ್ರಕಟಣೆಯ ಪ್ರಕಾರ, ಸಮುದಾಯವು ತ್ಯಾಜ್ಯ ಆಯುವವರನ್ನು ಹವಾಮಾನ ನಗರ ನೀತಿ ಚೌಕಟ್ಟುಗಳಲ್ಲಿ ಸಂಯೋಜಿಸುವ ಗುರಿಯನ್ನು ಹೊಂದಿರುವ ಬೇಡಿಕೆಗಳನ್ನು ಮುಂದಿಟ್ಟಿತು. ಎರಡನೇ ಹಂತದ ನಗರಗಳಲ್ಲಿ ಒಣ ತ್ಯಾಜ್ಯ ಸಂಗ್ರಹಣಾ ಕೇಂದ್ರಗಳನ್ನು ಸ್ಥಾಪಿಸುವುದು, ವಿಂಗಡಣೆಯಲ್ಲಿ ತೊಡಗಿರುವ ಆಯುವವರನ್ನು ಒಳಗೊಂಡ ಮೂರು-ಮಾರ್ಗದ ತ್ಯಾಜ್ಯ ವಿಂಗಡಣೆ ಮತ್ತು ಸುರಕ್ಷಿತ, ಸುಸಜ್ಜಿತ ಮರುಬಳಕೆ ಕೇಂದ್ರಗಳನ್ನು ರಚಿಸುವುದು ಪ್ರಮುಖ ಬೇಡಿಕೆಗಳಾಗಿವೆ. ವುಮೆನ್ಸ್ ವಾಯ್ಸ್‌ನ ಸಂಘಟನಾ ಕಾರ್ಯದರ್ಶಿ ಲೀಲಾವತಿ, ನಾವು ನಮ್ಮನ್ನು ಬಲಪಡಿಸಿಕೊಳ್ಳಬೇಕು. ನಮಗೆ ಸರ್ಕಾರಗಳಿಂದ ಪ್ರಾತಿನಿಧ್ಯವಿಲ್ಲ, ನಾವು ಅದನ್ನು ಒತ್ತಾಯಿಸುತ್ತೇವೆ. ನಾವು ಶಿಕ್ಷಣ ಮತ್ತು ನಮ್ಮ ಹಕ್ಕುಗಳನ್ನು ಒತ್ತಾಯಿಸುತ್ತೇವೆ ಎಂದು ಹೇಳಿದರು.

# ಮಳೆ ಕೊರತೆ: ಆರಂಭವಾಗದ ಕೃಷಿ ಚಟುವಟಿಕೆ


## ಹೆಚ್ಚಾಗಿ ಮಳೆ ಬಿದ್ದರೂ ಕಷ್ಟ, ಕಡಿಮೆ ಮಳೆಯಾದರೂ ರೈತರಿಗೆ ಸಂಕಷ್ಟ

• ಉದಯವಾಹಿನಿ, ಕೊಡಿಗೇನಹಳ್ಳಿ

ಪ್ರತಿ ವರ್ಷ ಮುಂಗಾರು ಪೂರ್ವ, ಮುಂಗಾರು ನಂತರ ಬೀಳುವ ಮಳೆಗೆ ಈ ಭಾಗದಲ್ಲಿ ಕೃಷಿ ಚಟುವಟಿಕೆ ಬಿರುಸಿನಿಂದ ಆರಂಭಗೊಳ್ಳುತ್ತಿತ್ತು. ಆದರೆ ಈ ಬಾರಿ ಮುಂಗಾರು ಆರಂಭಗೊಂಡು 20 ದಿನ ಕಳೆದರೂ ಉತ್ತಮ ಮಳೆಯಾಗಿಲ್ಲ.ಹೋಬಳಿಯ ಬಹುತೇಕ ಕುಟುಂಬಗಳು ಹಿಂದಿನಿಂದಲೂ ಕೃಷಿಯನ್ನೇ ನಂಬಿ ಬದುಕುತ್ತಿವೆ.

ಈ ಪ್ರದೇಶದಲ್ಲಿ ಹೆಚ್ಚಾಗಿ ಮಳೆ ಬಿದ್ದರೂ ಕಷ್ಟ, ಕಡಿಮೆ ಮಳೆಯಾದರೂ ರೈತರಿಗೆ ಸಂಕಷ್ಟ ತಪ್ಪಿದಲ್ಲ. ಹಾಗಾಗಿ ಬೇಸಾಯದಿಂದ ನಷ್ಟ ಅನುಭವಿಸಿದ ಅನೇಕ ಕುಟುಂಬಗಳು ಗ್ರಾಮಗಳನ್ನು ತೊರೆದು ಪಟ್ಟಣ ಸೇರಿದ್ದಾರೆ. ಇನ್ನು ಕೆಲವರು ಹಳ್ಳಿಗಳಲ್ಲೇ ಇದ್ದುಕೊಂಡು 20ರಿಂದ 40 ಕಿ.ಮೀ ದೂರದಲ್ಲಿರುವ ಗಾರ್ಮೆಂಟ್ ಹಾಗೂ ಕಾರ್ಖಾನೆಗಳಿಗೆ ಹೋಗಿ ಬಂದರೆ, ಮತ್ತೆ ಕೆಲವರು ಕೃಷಿ ಜೊತೆಗೆ ಹೈನುಗಾರಿಕೆ, ಕುರಿ-ಮೇಕೆ ಕಟ್ಟಿಕೊಂಡು ಜೀವನ ನಡೆಸುತ್ತಿದ್ದಾರೆ.

ಈ ಭಾಗ ಬಯಲುಸೀಮೆ ಜೊತೆಗೆ ಮಳೆಯಾಶ್ರಿತ ಪ್ರದೇಶ ಇಲ್ಲಿ ಯಾವುದೇ ನೀರಾವರಿ ಸೌಲಭ್ಯವಿಲ್ಲ. ಮುಂಗಾರು ಅಥವಾ ಹಿಂಗಾರಿನಲ್ಲಿ ಉತ್ತಮ ಮಳೆಯಾದರೆ ಮಾತ್ರ ರೈತರಿಗೆ ಒಂದಷ್ಟು ಲಾಭ. ಕಳೆದ ಕೆಲವು ದಿನಗಳಿಂದ ಪ್ರತಿದಿನ


☛ ಉದಯವಾಹಿನಿ ಚಿತ್ರ

ಮೋಡವಾಗುತ್ತದೆ. ಇನ್ನೇನು ಮಳೆ ಆರಂಭವಾಗಬೇಕು ಎನ್ನುವಷ್ಟರಲ್ಲಿ ಜೋರಾದ ಗಾಳಿಗೆ ಮೋಡಗಳು ಚದುರಿ ಹೋಗುತ್ತಿವೆ. ರೈತರಿಗೆ ಪ್ರತಿದಿನ ಆಕಾಶ ದಿಟ್ಟಿಸುವುದೇ ಕಾಯಕವಾಗಿದೆ. ಮೆಕ್ಕೆಜೋಳ, ರಾಗಿ, ಶೇಂಗಾ ಜೊತೆಗೆ ದ್ವಿದಳ ದಾನ್ಯಗಳಾದ ತೊಗರಿ, ಅವರೆ, ಅಲಸಂದೆ ಹಾಗೂ ಸಿರಿಧಾನ್ಯಗಳನ್ನು ಬೆಳೆಯುವುದು ಈ ಭಾಗದಲ್ಲಿ ವಾಡಿಕೆ. ಆದರೆ ಇದುವರೆಗೂ ಜಮೀನುಗಳನ್ನು ಉಕ್ಕೆ ಮಾಡಿಸಿ ಅಚ್ಚುಕಟ್ಟು ಮಾಡದಿರುವುದು ಬೇಸರ ಮೂಡಿಸಿದೆ ಎನ್ನುತ್ತಾರೆ ರೈತ ನಾಗರಾಜು.

ಕಳೆದ ವರ್ಷ ಹಾಗೂ 2021-22ನೇ ಸಾಲಿನಲ್ಲಿ ಈ ಭಾಗದಲ್ಲಿ ಉತ್ತಮ ಮಳೆಯಾಗಿ ಕೆರೆ-ಕುಂಟೆ ಜೊತೆಗೆ ನದಿಗಳು ತುಂಬಿ ಹರಿದಿದ್ದರಿಂದ ಕೊಳವೆ ಬಾವಿಗಳು ಮತ್ತು ಕುಡಿಯುವ ನೀರಿಗೆ ಸಮಸ್ಯೆ ಇಲ್ಲ. ಇಲ್ಲವಾಗಿದ್ದರೆ ಕುಡಿಯುವ ನೀರಿಗೂ ಜನರು ಪರದಾಡುವಂತಾಗುತ್ತಿತ್ತು.

**ಬಿತ್ತನೆ ಬೀಜ ರಸಗೊಬ್ಬರ ಶೇಖರಣೆ**

**ಈ ವರ್ಷ ಉತ್ತಮ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ಮುನ್ಸೂಚನೆ ನೀಡಿದ್ದು ರೈತರು ಯಾವುದೇ ಆತಂಕಪಡುವ ಅಗತ್ಯವಿಲ್ಲ. ಉತ್ತಮ ಮಳೆಯಾಗಿ ಜಮೀನುಗಳನ್ನು ಅಚ್ಚುಕಟ್ಟು ಮಾಡಿಕೊಂಡ ತಕ್ಷಣ ಶೇಖರಣೆ ಮಾಡಿಕೊಂಡಿರುವ ಅಗತ್ಯ ಬಿತ್ತನೆಬೀಜ ಹಾಗೂ ರಸಗೊಬ್ಬರ ವಿತರಿಸಲಿದ್ದೇವೆ ಎಂದು ಕೃಷಿ ಇಲಾಖೆ ಅಧಿಕಾರಿ ತಿಳಿಸಿದರು.**

# ಸಿಎಂ, ಡಿಸಿಎಂ ರಾಜೀನಾಮೆಗೆ ಪಟ್ಟು

• ಉದಯವಾಹಿನಿ, ಮುಳಬಾಗಿಲು

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಆರ್‌ಸಿಬಿ ವಿಜಯೋತ್ಸವದ ವೇಳೆ ಸಂಭವಿಸಿದ ಕಾಲ್ತುಳಿತ ಘಟನೆ ಖಂಡಿಸಿ, ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಕಾರ್ಯಕರ್ತರು ಮಂಗಳವಾರ ಪ್ರತಿಭಟನೆ ನಡೆಸಿದರು.

ಆರ್‌ಸಿಬಿ ಗೆಲುವಿನ ಸಂಭ್ರಮದಲ್ಲಿ 11 ಜನರ ಸಾವಿಗೆ ಸಿದ್ದರಾಮಯ್ಯ ಮತ್ತು ಡಿಕೆಶಿ ಅವರೇ ಕಾರಣವಾಗಿದ್ದು, ಈ ಇಬ್ಬರು ಕೂಡಲೇ ರಾಜೀನಾಮೆ ನೀಡಬೇಕು. ಈ ಮೂಲಕ ಈ ದುರಂತದಲ್ಲಿ ಸಾವನ್ನಪ್ಪಿದವರ ಆತ್ಮಕ್ಕೆ ಶಾಂತಿ ಸೂಚಿಸಬೇಕು ಎಂದು ಪ್ರತಿಭಟನಕಾರರು ಆಗ್ರಹಿಸಿದರು.

ಮುಳಬಾಗಿಲು ನಗರದ ಅಂಬೇಡ್ಕರ್ ವೃತ್ತದಿಂದ ಜಾಥಾ ನಡೆಸಿದ ಪ್ರತಿಭಟನಕಾರರು ನಗರದ ಕೆಇಬಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಸರ್ಕಾರ, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ವಿರುದ್ಧ ಧಿಕ್ಕಾರ ಕೂಗಿದರು.

ಬಿಜೆಪಿ ನಗರ ಘಟಕದ ಅಧ್ಯಕ್ಷ ಕಾಪರ್ತಿ ಅಮರ್ ಮಾತನಾಡಿ, ಕಾಂಗ್ರೆಸ್ ಸರ್ಕಾರವು ಯಾವುದೇ ಕಾರ್ಯಕ್ರಮ ಮಾಡಿದರೂ ಹೆಚ್ಚು ಜನ ಸೇರುವುದಿಲ್ಲ. ಹೀಗಾಗಿ ರಾಜ್ಯದ ಒಂದು ಖಾಸಗಿ ಫ್ರಾಂಚೈಸಿ ಆರ್‌ಸಿಬಿ ವಿಜಯೋತ್ಸವಕ್ಕೆ




ಅನುಮತಿ ನೀಡುವ ಮೂಲಕ ಸರ್ಕಾರ ಬಿಟ್ಟಿ ಪ್ರಚಾರ ಪಡೆಯಲು, ಕ್ರಿಕೆಟಿಗರ ವಿಜಯೋತ್ಸವ ಬಳಸಿಕೊಂಡಿತು.

ಇದರಿಂದ 11 ಜನ ಅಮಾಯಕರು ಮೃತಪಟ್ಟರು ಎಂದರು. ಅಮಾಯಕ ಕ್ರಿಕೆಟ್ ಪ್ರೇಮಿಗಳ ಸಾವಿಗೆ ಕಾರಣರಾದ ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಘಟನೆಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಹಾಗೂ ಮೃತರಿಗೆ ತಲಾ 15 ಕೋಟಿ ಪರಿಹಾರ ನೀಡಬೇಕು ಎಂದು ಪಿ.ಎಂ.ರಘುನಾಥ್ ಒತ್ತಾಯಿಸಿದರು. ವಕೀಲ ವಿ.ಜಯಪ್ಪ, ಕಲ್ಲುಪಲ್ಲಿ ಮೋಹನ್, ವಕೀಲ ಜಯಪ್ಪ. ಶಂಕರಪ್ಪ,ಮೈಕ್ ಶಂಕರ್, ವಿಶ್ವನಾಥ್ ಕುಮಾರ್, ಶ್ರೀನಿವಾಸ್, ಗಂಗಾಧರ, ಜಯರಾಮ, ಮಂಜುನಾಥ.. ಕಾಡು ಕಚ್ಚನಹಳ್ಳಿ ವಿಶ್ವನಾಥ ರೆಡ್ಡಿ ಮತ್ತಿತರರು ಇದ್ದರು.

## ಮಿನಿ ನ್ಯೂಸ್

### 111 ಅಡಿ ದಾಟಿದ ಕೆಆರ್‌ಎಸ್ ಅಣೆಕಟ್ಟೆ



• ಉದಯವಾಹಿನಿ, ಶ್ರೀರಂಗಪಟ್ಟಣ

ತಾಲ್ಲೂಕಿನ ಕೆಆರ್‌ಎಸ್ ಅಣೆಕಟ್ಟೆಗೆ ನೀರಿನ ಒಳ ಹರಿವಿನ ಪ್ರಮಾಣ ಸಂಜೆಯಿಂದ ಏರಿಕೆಯಾಗಿದ್ದು. ಜಲಾಶಯದ ನೀರಿನ ಮಟ್ಟ 111 ಅಡಿ ದಾಟಿದೆ. ಜಲಾಶಯಕ್ಕೆ 16,936 ಕ್ಯುಸೆಕ್ ನೀರು ಹರಿದು ಬರುತ್ತಿದೆ. ಇದೇ ಪ್ರಮಾಣದಲ್ಲಿ ನೀರು ಹರಿದು ಬಂದರೆ ಜಲಾಶಯದ ನೀರಿನ ಮಟ್ಟದ ಇನ್ನು 24 ಗಂಟೆಗಳಲ್ಲಿ 113 ಅಡಿ ತಲುಪಲಿದೆ' ಎಂದು ಕಾವೇರಿ ನೀರಾವರಿ ನಿಗಮದ ಅಧಿಕಾರಿಗಳು ತಿಳಿಸಿದ್ದಾರೆ. ಎರಡು ದಿನಗಳ ಹಿಂದೆ ಜಲಾಶಯದ ಒಳ ಹರಿವು 3500 ಕ್ಯುಸೆಕ್ ಇತ್ತು. 124.80 5 1 (49.45 ) ? 32.68 ಟಿಎಂಸಿ ನೀರು ಸಂಗ್ರಹವಾಗಿದೆ. ನದಿ ಮತ್ತು ಕುಡಿಯುವ ಉದ್ದೇಶಕ್ಕೆ 951 ಕ್ಯುಸೆಕ್ ನೀರನ್ನು ಹೊರಗೆ ಬಿಡಲಾಗುತ್ತಿದೆ.

### ಪರಿಶಿಷ್ಟರಿಗೆ ನ್ಯಾಯ ಒದಗಿಸಲು ಸೂಚನೆ

• ಉದಯವಾಹಿನಿ, ತುಮಕೂರು

ತಾಲ್ಲೂಕಿನ ಅನುಪನಹಳ್ಳಿ, ಅರೆಗುಜ್ಜನಹಳ್ಳಿ ಗ್ರಾಮಗಳಿಗೆ ಶಾಸಕ ಬಿ.ಸುರೇಶ್‌ಗೌಡ ಭೇಟಿ ನೀಡಿ ಜನರ ಸಮಸ್ಯೆ ಆಲಿಸಿದರು. ಅನುಪನಹಳ್ಳಿಯಲ್ಲಿ ಪರಿಶಿಷ್ಟರ ಜಮೀನನ್ನು ಬಲಾಢ್ಯರು ಕಬಳಿಸಿದ್ದಾರೆ ಎಂಬ ದೂರಿನ ಮೇರೆಗೆ ತಹಶೀಲ್ದಾರ್ ರಾಜೇಶ್ವರಿ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳ ಜತೆಗೆ ಗ್ರಾಮಕ್ಕೆ ತೆರಳಿ ಸ್ಥಳ ಪರಿಶೀಲಿಸಿದರು. ಪರಿಶಿಷ್ಟರಿಗೆ ಆಗಿರುವ ಅನ್ಯಾಯ ಸರಿಪಡಿಸಿ, ಜಮೀನು ಅವರ ವಶಕ್ಕೆ ನೀಡಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶಿಸಿದರು. 'ಅರೆಗುಜನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 35 ಮಂದಿ ಪರಿಶಿಷ್ಟರು ನಿವೇಶನದ ಹಕ್ಕುಪತ್ರ ಪಡೆದಿದ್ದು, ಗ್ರಾ.ಪಂ ಪಿಡಿಒ ನಿವೇಶನ ಖಾತೆ ಮಾಡಿಕೊಡಲು ಸತಾಯಿಸುತ್ತಿದ್ದಾರೆ ಎಂದು ಫಲಾನುಭವಿಗಳು ದೂರಿದರು.ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯನ್ನು ಶಾಸಕರು ತರಾಟೆಗೆ ತೆಗೆದುಕೊಂಡರು. ಫಲಾನುಭವಿಗಳಿಗೆ ಶೀಘ್ರವೇ ಖಾತೆ ಮಾಡಿಸಿಕೊಡಬೇಕು, ಪಿಡಿಒಗೆ ನೋಟಿಸ್ ಜಾರಿ ಮಾಡುವಂತೆ ತಹಶೀಲ್ದಾರ್‌ಗೆ ಸೂಚಿಸಿದರು.

# ಅಂಗವಿಕಲರ ಮನೆ ಬಾಗಿಲಿಗೆ ಐಡಿ ಕಾರ್ಡ್

• ಉದಯವಾಹಿನಿ, ತುಮಕೂರು

ಮನೆಯಿಂದ ಹೊರ ಬರಲಾಗದ ಅಂಗವಿಕಲರಿಗೆ ಅವರ ಬಳಿಯೇ ತೆರಳಿ ಆಧಾರ್ ಕಾರ್ಡ್ ಮತ್ತು ಯುಡಿಐಡಿ ಕಾರ್ಡ್‌ಗಳನ್ನು ವಿತರಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ಹೇಳಿದರು. ನಗರದ ಜಿಲ್ಲಾ ಪಂಚಾಯಿತಿಯಲ್ಲಿ ಮಂಗಳವಾರ ಅಂಗವಿಕಲರ ಪುನರ್ವಸತಿ ಕುರಿತು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ಗ್ರಾ.ಪಂ, ತಾ.ಪಂ ಕಚೇರಿಗಳಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಮೂಲಭೂತ ಸೌಲಭ್ಯ ಒದಗಿಸಬೇಕು. ಖಾಲಿ ಇರುವ ಎಂಆಡಬ್ಲ್ಯೂ, ವಿಆರ್‌ಡಬ್ಲ್ಯೂ ಹುದ್ದೆ ಭರ್ತಿ ಮಾಡಬೇಕು. ಆರೋಗ್ಯ ಇಲಾಖೆ ಜತೆಗೆ ಸಮನ್ವಯತೆ ಸಾಧಿಸಿ ತ್ವರಿತವಾಗಿ ಯುಡಿಐಡಿ ಕಾರ್ಡ್ ವಿತರಿಸಬೇಕು ಎಂದು ಸೂಚಿಸಿದರು. ಸ್ವಯಂ ಉದ್ಯೋಗ ಕೈಗೊಳ್ಳುವವರಿಗೆ ವಸತಿಯುತ ತರಬೇತಿ, ಸಾಲ ಸೌಲಭ್ಯ ನೀಡಲಾಗುತ್ತಿದೆ. ಅರ್ಹರು ಇದರ ಸದುಪಯೋಗ ಪಡೆದುಕೊಳ್ಳಬೇಕು. ನಿವೇಶನ ರಹಿತರಿಗೆ ಗ್ರಾ.ಪಂ ಮಟ್ಟದಲ್ಲಿ ಜಾಗ ನೀಡುತ್ತಿದ್ದು, ನಿವೇಶನ ರಹಿತರು ಅರ್ಜಿ ಸಲ್ಲಿಸಬಹುದು. ಶೇ 5ರ


☛ ಉದಯವಾಹಿನಿ ಚಿತ್ರ

ಮೀಸಲಾತಿಯಂತೆ ಅಂಗವಿಕಲರಿಗೆ ನಿಗದಿಪಡಿಸಿ ಯೋಜನೆಗಳಲ್ಲಿ ಸೌಲಭ್ಯ ಒದಗಿಸಲು ಎಲ್ಲಾ ಇಲಾಖೆಗಳಿಗೆ ಪತ್ರ ರವಾನಿಸುವಂತೆ ನಿರ್ದೇಶಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಚೇತನ್‌ಕುಮಾರ್, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಮನಮೋಹನ್, ಗಿರಿಜಾ, ಡಿಎಚ್ಒ ಡಾ.ಬಿ.ಎಂ.ಚಂದ್ರಶೇಖರ್, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಅಸ್ಕರ್ ಬೇಗ್ ಇತರರು ಭಾಗವಹಿಸಿದ್ದರು.

# ನ್ಯಾಯಯುತ ಪರಿಹಾರ ನೀಡಿ: ರೈತ ಸಂಘ ಆಗ್ರಹ

• ಉದಯವಾಹಿನಿ, ಶಿಡ್ಲಘಟ್ಟ

ಹೋಬಳಿಯಲ್ಲಿ ಕೈಗಾರಿಕೆ ಪ್ರದೇಶವನ್ನು ಅಭಿವೃದ್ಧಿಪಡಿಸಿ ಕೈಗಾರಿಕೆಗಾಗಿ ಭೂಮಿ ಬಿಟ್ಟುಕೊಡುವ ಎಲ್ಲಾ ರೈತರಿಗೂ ನ್ಯಾಯಯುತವಾಗಿ ಪರಿಹಾರದ ಹಣವನ್ನು ಸಕಾಲಕ್ಕೆ ನೀಡಬೇಕು. ಪ್ರತಿ ಕುಟುಂಬಕ್ಕೂ ಒಂದು ಉದ್ಯೋಗ ನೀಡಬೇಕೆಂದು ರೈತ ಸಂಘದ ಸಾಮೂಹಿಕ ನಾಯಕತ್ವದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪ್ರತೀಶ್ ಆಗ್ರಹಿಸಿದರು.

ತಾಲ್ಲೂಕಿನ ನಡಿಪಿನಾಯಕನಹಳ್ಳಿ ಗ್ರಾಮದಲ್ಲಿ ಸಂಘದ ರೈತರ ಸಭೆ ನಡೆಸಿ ಸರ್ಕಾರಕ್ಕೆ ಹಕ್ಕೊತ್ತಾಯ ಮಂಡಿಸಿ ಮಾತನಾಡಿದರು.

ಸಿದ್ದರಾಮಯ್ಯ ನೇತೃತ್ವದ ಸಂಪೂರ್ಣ ಸಚಿವ ಸಂಪುಟ ಜೂನ್ 19 ರಂದು ನಂದಿಗಿರಿಧಾಮದಲ್ಲಿ ಸಚಿವ ಸಂಪುಟ ನಡೆಸುತ್ತಿರುವುದು ಖುಷಿಯ ವಿಚಾರ. ಈ ಜಿಲ್ಲೆಯ ಅಭಿವೃದ್ಧಿಗೆ ಮತ್ತು ಅನೇಕ ಸಮಸ್ಯೆಗಳಿಗೆ ಪರಿಹಾರ ಸಿಗುವ ಆಶಯ ವ್ಯಕ್ತಪಡಿಸಿದರು. ಆರು



**ಗ್ರಾಮದಲ್ಲಿ ಸಂಘದ ರೈತರ ಸಭೆ**

ತಿಂಗಳಿನಿಂದ ಬಾಕಿ ಉಳಿದಿರುವ ಹಾಲಿನ ಪ್ರೋತ್ಸಾಹ ಧನವನ್ನು ತಕ್ಷಣ ಬಿಡುಗಡೆ ಮಾಡಿ. ಪ್ರತಿ ಲೀಟರ್ ಹಾಲಿಗೆ ಕನಿಷ್ಠ ರೂ.50 ಬೆಂಬಲ ಬೆಲೆ ನಿಗದಿ ಮಾಡಬೇಕು ಎಂದು ಮನವಿ ಮಾಡಿದರು.

ಡಿಸಿಸಿ ಬ್ಯಾಂಕ್ ಮೂಲಕ ನೀಡುತ್ತಿದ್ದ ಸ್ತ್ರೀಶಕ್ತಿ ಸಂಘಗಳ ಸಾಲ ಮರುಪ್ರಾರಂಭಿಸಿ ಮಹಿಳಾ ಸಬಲೀಕರಣಕ್ಕೆ ನೆರವಾಗಬೇಕು. ಮಾವು ಬೆಳೆಯುಲು ನಿರ್ಬಂಧದಿಂದ ನಷ್ಟ ಅನುಭವಿಸುತ್ತಿರುವ ಕೋಲಾರ

**ಚಿಕ್ಕಬಳ್ಳಾಪುರ ಮತ್ತು ಕೋಲಾರ ಜಿಲ್ಲೆಗೆ ಕೃಷ್ಣಾ ನದಿಯಿಂದ ಕನಿಷ್ಠ 24 ಟಿಎಂಸಿ ನೀರನ್ನು ತಂದು ಕೆರೆಗಳಿಗೆ ತುಂಬಿಸಿ ಕುಡಿಯಲು ಮತ್ತು ಕೃಷಿಗೆ ಬಳಸಿ ರೈತರ ನೀರಾವರಿ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕು. ಕೆ.ಸಿ ವ್ಯಾಲಿ ಮತ್ತು ಎಚ್.ಎನ್ ವ್ಯಾಲಿ ಯೋಜನೆಯ ನೀರಿನಲ್ಲಿ ಫ್ಲೋರೈಡ್ ಹಾನಿಕರ ಅಂಶಗಳು ಕಂಡುಬಂದಿರುವುದರಿಂದ ವಿಜ್ಞಾನಿಗಳ ಶಿಫಾರಸ್ಸಿನಂತೆ ಮೂರನೇ ಹಂತದ ಶುದ್ಧೀಕರಣ ಘಟಕವನ್ನು ಕೂಡಲೇ ಸ್ಥಾಪಿಸಲು ಒತ್ತಾಯಿಸಿದರು.**

ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ರೈತರಿಗೆ ಬೆಂಬಲ ಬೆಲೆ ಘೋಷಿಸಬೇಕು ಎಂದು ಒತ್ತಾಯಿಸಿದರು. ಜಂಗಮಕೋಟೆ ಹೋಬಳಿ ಕೈಗಾರಿಕಾ ಪ್ರದೇಶದ ಜಮೀನುಗಳ ರೈತ ಹೋರಾಟ ಸಮಿತಿ ಹಾಗೂ ರೈತ ಸಂಘದ ಪ್ರಮುಖ ಮುಖಂಡರು ಭಾಗವಹಿಸಿದ್ದರು.

# ಬ್ರಿಗೇಡ್ ಟ್ರಸ್ಟ್ ವತಿಯಿಂದ ನಿರ್ಮಿಸಲಾದ ಸಮುದಾಯ ಭವನ ಉದ್ಘಾಟನೆ

• ಉದಯವಾಹಿನಿ, ನಾಗಮಂಗಲ

ತಾಲ್ಲೂಕಿನ ಮಾದಹಳ್ಳಿ ಬ್ರಿಗೇಡ್ ಟ್ರಸ್ಟ್ ವತಿಯಿಂದ ನಿರ್ಮಿಸಲಾದ ಸಮುದಾಯ ಭವನ ಉದ್ಘಾಟನೆ ಹಾಗೂ ಸುಮಾರು 450 ಸರ್ಕಾರಿ ಶಾಲಾ ಮಕ್ಕಳಿಗೆ ಸಮವಸ್ತ್ರ ಹಾಗೂ ನೋಟ್ ಪುಸ್ತಕ ವಿತರಣೆ ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಪರಮಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ.ನಿಶ್ಚಲಾನಂದನಾಥ ಮಹಾಸ್ವಾಮೀಜಿಗಳು, ಹಾಗೂ ಮುಖ್ಯ ಅತಿಥಿಗಳಾಗಿ ಡಾ.ಅಪ್ಪಗೆರೆ ತಿಮ್ಮರಾಜುರವರು, ಸಮ್ಮುಖದಲ್ಲಿ ಬಹಳ ವಿಜೃಂಭಣೆಯಿಂದ ಜರುಗಿತು,

ಈ ಸಂದರ್ಭದಲ್ಲಿ ವಿಶ್ವ ಒಕ್ಕಲಿಗ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಡಾಕ್ಟರ್ ನಿಶ್ಚಲಾನಂದನಾಥ ಸ್ವಾಮೀಜಿಗಳು ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿ ಪ್ರತಿ ಗ್ರಾಮಗಳಲ್ಲೂ ಮಾದಹಳ್ಳಿ ಬ್ರಿಗೇಡ್ ಸಂಸ್ಥೆ ಮಾದರಿಯಲ್ಲಿ ಯುವಪಡೆ ಮುಂದೆ ಬಂದು ಈ ರೀತಿ ಗ್ರಾಮದ ಅಭಿವೃದ್ಧಿಗೆ ಶ್ರಮವಹಿಸಿ ನಿಲ್ಲಬೇಕು,

ಆಗ ಮಾತ್ರ ಗ್ರಾಮದ ಅಭಿವೃದ್ಧಿ , ಪ್ರಗತಿಗೆ ಸಾಧ್ಯವಾಗುತ್ತದೆ, ಕಾರ್ಯಕ್ರಮದಲ್ಲಿ ಡಾ. ನಿಶ್ಚಲಾನಂದ ಮಹಾಸ್ವಾಮೀಜಿ ರವರು, ಖ್ಯಾತ ಜಾನಪದ ಗಾಯಕರಾದ ಅಪ್ಪಗೆರೆ ತಿಮ್ಮರಾಜುರವರು, ಎನ್ ರಾಜಣ್ಣನವರು, ರಾಮಕೃಷ್ಣಪ್ಪ ರವರು, ಯುವ ಮುಖಂಡರು ಅಧ್ಯಕ್ಷರಾದ ಮಂಜುನಾಥ್.ಎಲ್.ಎನ್, ದಿವಾಕರ್ ರವರು ಯೋಜನಾಧಿಕಾರಿಗಳು, ಕುಮಾರಿ ವೈನವಿ.ಬಿ.ಸಿ ಹಾಗೂ ಸಂಘದ ಪದಾಧಿಕಾರಿಗಳು, ಸಮಾಜಸೇವಕರು ಸಮಾರಂಭದಲ್ಲಿ ಉಪಸ್ಥಿತರಿದ್ದರು.



☛ ಉದಯವಾಹಿನಿ ಚಿತ್ರ

**ನೋಟ್ ಪುಸ್ತಕ ವಿತರಣೆ**

### ವೈನವಿ.ಬಿ.ಸಿಗೆ ಸನ್ಮಾನ

**ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಭಾಗವಹಿಸಿದ ವೈನವಿ. ಬಿ.ಸಿ ರವರಿಗೆ ಎಲ್. ಎನ್. ಮಂಜುನಾಥ್ ರವರ ಅಧ್ಯಕ್ಷತೆಯಲ್ಲಿ ಮಾದಹಳ್ಳಿ ಬ್ರಿಗೇಡ್ ಟ್ರಸ್ಟ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು, ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಆಯೋಜನೆಯಲ್ಲಿ ಪ್ರಮುಖರಾದ ರಾಮಕೃಷ್ಣಪ್ಪನವರು ಮಾತನಾಡಿ ವೈನವಿ.ಬಿ.ಸಿ ತನ್ನ ಕಿರಿಯ ವಯಸ್ಸಿಗೆ ರಾಷ್ಟ್ರಮಟ್ಟದಲ್ಲಿ ಸಾಧನೆಗೈದಿರುವುದು ನಮಗೆಲ್ಲರಿಗೂ ಸಂತೋಷದ ವಿಷಯವಾಗಿದೆ, ಮುಂದಿನ ದಿನಗಳಲ್ಲಿ ಇನ್ನು ಅಮೋಘ ಸಾಧನೆಯ ಕೀರ್ತಿ ಪತಾಕೆ ಮುಗಿಲೆತ್ತರಕ್ಕೆ ಹಾರಲಿ ಎಂದು ಆಶಿಸುತ್ತೇನೆ, ಹಾಗಾಗಿ ಮಕ್ಕಳಿಗೆ ಬೆಳವಣಿಗೆಯ ಹಂತದಲ್ಲೆ ವಿದ್ಯಾಭ್ಯಾಸದ ಜೊತೆಗೆ ಶಿಸ್ತು,ಸಂಯಮ, ಆಚಾರ, ವಿಚಾರ,ಸಂಸ್ಕೃತಿ ಜೊತೆಗೆ ಕಲಿತಲ್ಲಿ ನೀವು ಕೂಡ ವೈನವಿ. ಬಿ.ಸಿ ಮಾದರಿಯಲ್ಲಿ ಉನ್ನತ ಸ್ಥಾನಕ್ಕೇರುತ್ತೀರಿ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು**

# ಸಾಮಾಜಿಕ ನ್ಯಾಯಕ್ಕೆ ಎಚ್‌ಡಿಡಿ ಕೊಡುಗೆ ಅಪಾರ

• ಉದಯವಾಹಿನಿ, ಕೊರಟಗೆರೆ

ರಾಜ್ಯದಲ್ಲಿ ದೇವೇಗೌಡರು ನೀಡಿದ ಮಹಿಳಾ ಮೀಸಲಾತಿಯಿಂದಾಗಿ ಇಂದು ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯರು, ಎಲ್ಲಾ ವರ್ಗದವರಿಗೂ ಸಾಮಾಜಿಕ ನ್ಯಾಯ ಸಿಕ್ಕಂತಾಗಿದೆ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅಭಿಪ್ರಾಯಪಟ್ಟರು. ಪಟ್ಟಣದಲ್ಲಿ ನಡೆದ ಜೆಡಿಎಸ್ ಸದಸ್ಯತ್ವ ನೋಂದಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಾಡು, ನುಡಿ, ಜಲ, ಅಸ್ಮಿತೆ ಉಳಿಯ ಬೇಕಾದರೆ ಪ್ರಾದೇಶಿಕ ಪಕ್ಷಗಳು ರಾಜ್ಯದಲ್ಲಿ ಅಧಿಕಾರಕ್ಕೆ ಬರಬೇಕು. ರಾಜ್ಯದ ಭದ್ರತೆಗೆ ಜೆಡಿಎಸ್ ಅನಿವಾರ್ಯ. ರಾಷ್ಟ್ರೀಯ ಪಕ್ಷಗಳು ಪ್ರಾದೇಶಿಕ ಸಮಸ್ಯೆಗಳ ಬಗ್ಗೆ ಗಮನ ನೀಡುವುದಿಲ್ಲ. ರಾಜ್ಯದಲ್ಲಿ ಜೆಡಿಎಸ್‌ಗೆ ಬಲಿಷ್ಠ ಕಾರ್ಯಕರ್ತರ ಪಡೆ ಇದೆ. ಮುಂಬರುವ ದಿನಗಳಲ್ಲಿ ಮತ್ತಷ್ಟು ಶಕ್ತಿಯುತಗೊಳಿಸಲಾಗುವುದು. ಪಕ್ಷದ ಕಾರ್ಯಕರ್ತರು ಎಲ್ಲಾ ಬೂತ್‌ಗಳಲ್ಲೂ ಸದಸ್ಯತ್ವ ನೋಂದಣಿ ಮಾಡಿ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಿಗೆ ಸಿದ್ಧರಾಗಿ ಎಂದರು. ಮಾಜಿ ಶಾಸಕ ಪಿ.ಆರ್. ಸುಧಾಕರಲಾಲ್ ಮಾತನಾಡಿ, ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದಾಗ ರೈತರು, ಬಡವರು. ಮಹಿಳೆಯರಿಗೆ ನೀಡಿದ ಕಾರ್ಯಕ್ರಮಗಳನ್ನು ಯಾವ ಮುಖ್ಯಮಂತ್ರಿಗಳು ಮಾಡಿಲ್ಲ. ಕೇಂದ್ರ ಸಚಿವರಾದ ಮೇಲೆ ಆಂಧ್ರಪ್ರದೇಶದ ವಿಶಾಖಪಟ್ಟಣ ಜಿಲ್ಲೆಯಲ್ಲಿ ಸರ್ಕಾರದ ಸ್ಟೀಲ್ ಕಾರ್ಖಾನೆ ಉಳಿಸಿ 11 ಸಾವಿರ ಕಾರ್ಮಿಕರಿಗೆ ಕೆಲಸ ನೀಡಿ ಮತ್ತೆ ಜೀವನ ಕಟ್ಟಿಕೊಟ್ಟಿದ್ದಾರೆ ಎಂದು ಬಣ್ಣಿಸಿದರು. ಪಟ್ಟಣದ ಮುಖ್ಯ ರಸ್ತೆಯಲ್ಲಿ ಪಕ್ಷದ ಯುವ ಕಾರ್ಯಕರ್ತರಿಂದ ಬೈಕ್ ರ‍್ಯಾಲಿ ನಡೆಯಿತು. ವಿಧಾನ ಪರಿಷತ್ ಸದಸ್ಯ ತಿಪ್ಪೆಸ್ವಾಮಿ, ಜಿಲ್ಲಾ ಜೆಡಿಎಸ್ ಅಧ್ಯಕ್ಷ ಆರ್.ಸಿ ಅಂಜಿನಪ್ಪ, ತಾಲ್ಲೂಕು ಅಧ್ಯಕ್ಷ ಕಾಮರಾಜು, ಯುವ ಅಧ್ಯಕ್ಷ ವೆಂಕಟೇಶ್, ತುಮುಲ್ ನಿರ್ದೇಶಕ ಸಿದ್ದಗಂಗಪ್ಪ, ಪ.ಪಂ.ಸದಸ್ಯ ಲಕ್ಷ್ಮಿನಾರಾಯಣ್ ಹಾಗೂ ಸ್ಥಳೀಯ ಮುಖಂಡರು ಪಾಲ್ಗೊಂಡಿದ್ದರು.


☛ ಉದಯವಾಹಿನಿ ಚಿತ್ರ

# ಶಾರ್ಟ್ ಸರ್ಕಿಟ್: ಎಟಿಎಂ ಕೇಂದ್ರದಲ್ಲಿ ಬೆಂಕಿ

• ಉದಯವಾಹಿನಿ, ಮುಳಬಾಗಿಲು

ನಗರದ ತಿಮ್ಮರಾವುತ್ತನಹಳ್ಳಿ ರಸ್ತೆಯಲ್ಲಿರುವ ಇಂಡಿಯನ್ ಎಟಿಎಂ ಯಂತ್ರದ ವಿದ್ಯುತ್ ಪೆಟ್ಟಿಗೆಯಲ್ಲಿ ಮಂಗಳವಾರ ರಾತ್ರಿ ಶಾರ್ಟ್ ಸರ್ಕಿಟ್ ಆಗಿ, ಬೆಂಕಿ ಹೊತ್ತುಕೊಂಡಿದೆ. ಇದರಿಂದಾಗಿ ಎಟಿಎಂ ಯಂತ್ರದ ಕೇಂದ್ರದಲ್ಲಿದ್ದ ಮರದ ಕಬೋರ್ಡ್ ಸುಟ್ಟು ಕರಕಲು ಆಗಿದೆ.



ಎಟಿಎಂ ಒಳಗಿನ ಬ್ಯಾಟರಿ ಪೆಟ್ಟಿಗೆಯಲ್ಲಿ ಶಾರ್ಟ್ ಸರ್ಕಿಟ್ ಆಗಿ, ಬ್ಯಾಟರಿ ಪೆಟ್ಟಿಗೆಯಲ್ಲಿ ಬೆಂಕಿ ಹೊತ್ತುಕೊಂಡಿದೆ. ಕೂಡಲೇ ಎಚ್ಚೆತ್ತುಕೊಂಡ ಸ್ಥಳೀಯರು, ಬೆಂಕಿ ನಂದಿಸಲು ಹರಸಾಹಸಪಟ್ಟರು. ಜೊತೆಗೆ ಘಟನೆ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ದೌಡಾಯಿಸಿದ ಪೊಲೀಸರು ಬೆಂಕಿ ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಇದರಿಂದಾಗಿ ಎಟಿಎಂ ಮಿಷನ್‌ಗೆ ಯಾವುದೇ ಹಾನಿಯಾಗಿಲ್ಲ ಎಂದು ಸ್ಥಳೀಯರು ಮಾಹಿತಿ ನೀಡಿದರು.

### ಶಾಲೆ, ಅಂಗನವಾಡಿಗೆ ನರೇಗಾ ಬಲ

• ಉದಯವಾಹಿನಿ, ಬಾಗೇಪಲ್ಲಿ

ಗ್ರಾಮಸ್ಥರು, ನಿರುದ್ಯೋಗಿಗಳಿಗೆ ಆಸರೆಯಾಗಿರುವ ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆ(ಮನರೇಗಾ) ಸರ್ಕಾರಿ ಶಾಲೆ ಅಂಗನವಾಡಿಗಳಿಗೂ ಬಲ ತುಂಬಿದೆ. ಸ್ಥಳೀಯ ಗ್ರಾಮ ಪಂಚಾಯಿತಿಗಳು ನರೇಗಾ ಯೋಜನೆಯಡಿ ಸರ್ಕಾರಿ ಶಾಲೆಗಳ ಹಾಗೂ ಅಂಗನವಾಡಿ ಕೇಂದ್ರಗಳಲ್ಲಿ ಕೊಠಡಿ, ಶೌಚಾಲಯ, ತಡೆಗೋಡೆ, ಆಟದ ಮೈದಾನ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿ ಕಲ್ಪಿಸಲಾಗುತ್ತಿದೆ. ಗ್ರಾಮೀಣ ಮಕ್ಕಳಿಗೆ ಸೌಲಭ್ಯ ಕಲ್ಪಿಸಲು ಸರ್ಕಾರಿ ಶಾಲೆಗಳಲ್ಲಿ ಹೈಟೆಕ್ ಕಟ್ಟಡ, ಅಂಗವಾಡಿ ಕೇಂದ್ರಗಳಿಗೆ ಹೊಸ ಕಟ್ಟಡ, ಶೌಚಾಲಯ, ಆಟದ ಮೈದಾನ, ಮಳೆ ಕೊಯ್ಲು, ಎರೆಹುಳುತೊಟ್ಟಿ, ಅಡುಗೆ ಕೋಣೆಯನ್ನು ನಿರ್ಮಿಸಲಾಗುತ್ತಿದೆ. ತಾಲ್ಲೂಕಿನಲ್ಲಿ 10 ಶಾಲೆಗಳಲ್ಲಿ ರೂ.25 ಲಕ್ಷ ವೆಚ್ಚದಲ್ಲಿ ತಡೆಗೋಡೆ, ರೂ.14 ಲಕ್ಷ ವೆಚ್ಚದಲ್ಲಿ ಶೌಚಾಲಯ, ರೂ.15 ಲಕ್ಷ ವೆಚ್ಚದಲ್ಲಿ ಅಡುಗೆ ಕೋಣೆ, ಮಳ ನೀರು ಸಂಗ್ರಹ ಘಟಕ ನಿರ್ಮಿಸಲಾಗಿದೆ. ಚಿನ್ನಓಬಯ್ಯಗಾರಿಪಲ್ಲಿ ಸರ್ಕಾರಿ ಶಾಲೆ, ಪಾತಬಾಗೇಪಲ್ಲಿ ಸರ್ಕಾರಿ ಶಾಲೆ, ಗೌನಪಲ್ಲಿ ಸರ್ಕಾರಿ ಶಾಲೆ, ತಿಮ್ಮಂಪಲ್ಲಿ ಸರ್ಕಾರಿ, ಮಿಟ್ಟೇಮರಿ ಸರ್ಕಾರಿ ಶಾಲೆ, ಪಾತಪಾಳ್ಯ ಸರ್ಕಾರಿ ಶಾಲೆ, ಚಂಚುರಾಯನಪಲ್ಲಿ ಸರ್ಕಾರಿ ಶಾಲೆ ಶೌಚಾಲಯ ನಿರ್ಮಿಸಲಾಗಿದೆ. ತಾಲ್ಲೂಕಿನ ಪೈಪಾಳ್ಯ, ಚಿನ್ನ ಓಬಯ್ಯಗಾರಿಪಲ್ಲಿ, ತೋಳ್ಳಪಲ್ಲಿ ಗ್ರಾಮಗಳಲ್ಲಿ ಗ್ರಾಮ ಪಂಚಾಯಿತಿಯಿಂದ ನರೇಗಾದ ಅನುದಾನದಲ್ಲಿ ಅಡುಗೆಕೋಣೆ ನಿರ್ಮಿಸಲಾಗಿದೆ.

### ಉಪ ಲೋಕಾಯುಕ್ತರಿಂದ ದಿಢೀರ್ ದಾಳಿ: 32ಸಿಬ್ಬಂದಿ ವಿರುದ್ಧ ದೂರು

• ಉದಯವಾಹಿನಿ, ಬಂಗಾರಪೇಟೆ

ವಿವಿಧ ಇಲಾಖೆಗಳ ಮೇಲೆ ದಾಳಿ ನಡೆಸಿದ ಉಪ ಲೋಕಾಯುಕ್ತರು, ಕರ್ತವ್ಯಲೋಪ ಸೇರಿದಂತೆ ಇನ್ನಿತರ ಕಾರಣಗಳಿಗಾಗಿ ತಾಲ್ಲೂಕಿನ 32 ಸಿಬ್ಬಂದಿ ವಿರುದ್ಧ ಸ್ವಯಂಪ್ರೇರಿತವಾಗಿ ದೂರು ದಾಖಲಿಸಿಕೊಂಡಿದ್ದಾರೆ. ವಾರ್ಷಿಕ ವೇತನಕ್ಕಿಂತ ಹೆಚ್ಚು ವ್ಯವಹಾರ ನಡೆಸಿದ ಆರೋಪದ ಮೇರೆಗೆ ಭೂ ದಾಖಲೆಗಳ ಸಹಾಯಕ ನಿರ್ದೇಶಕ ಪರಶಿವಮೂರ್ತಿ, ಸಿಬ್ಬಂದಿ ಜಿ.ಶ್ರೀವೇಣಿ, ವಿ.ಕೆ.ಹರೀಶ್, ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಪ್ರತಿಭಾ, ಮೇಘಮಾಲ, ದ್ವಿತೀಯ ದರ್ಜೆ ಸಹಾಯಕ ಶ್ರೀನಿವಾಸ್, ಪ್ರಭಾರ ಉಪ ನೋಂದಣಾಧಿಕಾರಿ, ದ್ವಿತೀಯ ದರ್ಜೆ ಸಹಾಯಕ ಮುರಳೀಧರ್ ಆರ್ ಮತ್ತು ಡೇಟಾ ಎಂಟ್ರಿ ಆಪರೇಟರ್ ವಿಜಯ್ ಕುಮಾರ್, ಕಾರ್ಯನಿರ್ವಾಹಕ ಕಚೇರಿಯ ಶೀಘ್ರಲಿಪಿಗಾರರಾದ ಲಲಿತಮ್ಮ ಅವರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಜೊತೆಗೆ ತಾವು ಮಾಡಿರುವ ಹಣದ ವ್ಯವಹಾರಕ್ಕೆ ಪೂರಕ ದಾಖಲೆಗಳನ್ನು ಸಲ್ಲಿಸುವಂತೆಯೂ ಸೂಚಿಸಲಾಗಿದೆ ಎಂದು ತಿಳಿದುಬಂದಿದೆ. ಈ ಎಲ್ಲಾ ಅಧಿಕಾರಿಗಳ ಬ್ಯಾಂಕ್ ವಹಿವಾಟು, ಯುಪಿಐವಹಿವಾಟುಗಳನ್ನು ಪರಿಶೀಲಿಸಿದಾಗ, ಅಧಿಕಾರಿಗಳು ತಮ್ಮ ವೇತನಕ್ಕಿಂತಲೂ ಹೆಚ್ಚಿನ ಹಣ ವಹಿವಾಟು ನಡೆಸಿರುವುದು ಗೊತ್ತಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

### ಲಂಚ ಪಡೆಯುತ್ತಿದ್ದ ವೇಳೆ ಸೆಸ್ಕ್ ಎಇಇ ಲೋಕಾಯುಕ್ತ ಬಲೆಗೆ

• ಉದಯವಾಹಿನಿ, ಮೈಸೂರು

ಇಲ್ಲಿನ ಹೋಟೆಲ್‌ನಲ್ಲಿ ಸೆಸ್ಕ್ ಎಇಇ ದೀಪಕ್ ಲಂಚ ಸ್ವೀಕರಿಸುತ್ತಿದ್ದಾಗ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿದ್ದು, ಪ್ರಕರಣ ದಾಖಲಾಗಿದೆ. ದೀಪಕ್ ಸೆಸ್ಕ್ ವಿಜಿಲೆನ್ಸ್ ಅಧಿಕಾರಿಯಾಗಿದ್ದು, ಅನಧಿಕೃತ ವಿದ್ಯುತ್ ಸಂಪರ್ಕದ ದಂಡ ಕಡಿಮೆ ಮಾಡಲು 73 ಲಕ್ಷ ಲಂಚ ಸ್ವೀಕರಿಸುತ್ತಿದ್ದರು. ಈ ವೇಳೆ ದಾಳಿ ನಡೆಸಿ ಹಣ ವಶಕ್ಕೆ ಪಡೆಯಲಾಗಿದೆ ಎಂದು ಮೂಲಗಳು ತಿಳಿಸಿವೆ. ಲೋಕಾಯುಕ್ತ ಎಸ್‌ಪಿ ಟಿ.ಜೆ. ಉದೇಶ್ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಮ್ಯಾಥು ಥಾಮಸ್, ಇನ್ಸ್‌ಪೆಕ್ಟರ್ ರವಿಕುಮಾರ್ ಮತ್ತು ತಂಡ ಕಾರ್ಯಾಚರಣೆ ನಡೆಸಿದೆ.

# ಶಾಸನ ವಿಧಿಸಿಕೊಂಡ ಕಾವ್ಯಕ್ಕಿಲ್ಲ ಉಳಿಗಾಲ

## ಪ್ರಗತಿ ಗ್ರಾಫಿಕ್ಸ್ ಪ್ರಕಟಿತ ಕವಿ ಗಟ್ಟಿಗುಂದ ಮಹದೇವ್ ಅವರ ಮಿಥುನ ಪಕ್ಷಿಗಳು ಕವನ ಸಂಕಲನ ಬಿಡುಗಡೆ

• ಉದಯವಾಹಿನಿ, ಕನಕಪುರ

ಹೀಯೇ ಇರಬೇಕೆಂದು ಶಾಸನ ವಿಧಿಸಿಕೊಂಡು ಬರೆಯುವ ಕಾವ್ಯಕ್ಕೆ ಯಾವತ್ತೂ ಉಳಿಗಾಲವಿಲ್ಲ. ಪ್ರಾಸಗಳನ್ನು ನೆಚ್ಚಿಸಿಕೊಂಡ ಕವಿತೆಗಳು ಗುಡಿಸುವಿಕೆ ಸರಕಾಗಿ ಪಕ್ಕಕ್ಕೆ ತಳ್ಳಲ್ಪಡುತ್ತವೆ. ಭಾಷಾ ಸೂಕ್ಷ್ಮತೆ, ಸಂವೇದನೆ, ತನ್ನದೇ ಆದ ಪಾರಿಭಾಷಿಕ ಪದಕೋಶಗಳಿಂದ ರಚಿತವಾದ ಕಾವ್ಯ ಸಮೃದ ಹಾಗೂ ಸಾರ್ವಕಾಲಿಕವಾಗಿರುತ್ತದೆ' ಎಂದು ಕವಿ ಹಾಗೂ ವಿಮರ್ಶಕ ಎಸ್.ಜಿ. ಸಿದ್ದರಾಮಯ್ಯ ಅಭಿಪ್ರಾಯಟಪ್ಪರು.

ಪಟ್ಟಣದ ರೂರಲ್ ಕಾಲೇಜು ಆವರಣದ ಎಸ್.ಕೆ. ಹಾಲ್ ನಲ್ಲಿ ಕೃಷ್ಣಾಪುರದೊಡ್ಡಿಯ ಕೆ.ಎಸ್. ಮುದ್ರಪ್ಪ ಸ್ಮಾರಕ ಟ್ರಸ್ಟ್ ಹಾಗೂ ರೂರಲ್ ಎಜುಕೇಷನ್ ಸೊಸೈಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬೆಂಗಳೂರಿನ ಪ್ರಗತಿ ಗ್ರಾಫಿಕ್ಸ್ ಪ್ರಕಟಿತ ಕವಿ ಗಟ್ಟಿಗುಂದ ಮಹದೇವ್ ಅವರ 'ಮಿಥುನ ಪಕ್ಷಿಗಳು' ಕವನ ಸಂಕಲನ ಬಿಡುಗಡೆ ಮಾಡಿ ಅವರು ಮಾತನಾಡಿದರು.

**ಪದಾರ್ಥ ಕಾವ್ಯ:** ಪದಗಳ ಅರ್ಥಕ್ಕೆ ಸೀಮಿತಗೊಳಿಸಿಕೊಂಡು ರಚನೆಯಾಗುವ ಕಾವ್ಯವು ಪದಾರ್ಥ ಕಾವ್ಯವಾಗುತ್ತದೆ.

ಬದಲಿಗೆ ಬಹು ಅರ್ಥಸಾಧ್ಯತೆಗಳೊಂದಿಗೆ ರಚನೆಯಾಗುವ ಕಾವ್ಯ ಮಾತ್ರ ಪದಕಾವ್ಯವಾಗುತ್ತದೆ. ವಿಮರ್ಶಾ ಪ್ರಜ್ಞೆಯುಳ್ಳ ಕವಿಯಿಂದ ಮಾತ್ರ ಉತ್ಕೃಷ್ಟ ಪದಗಳ ಸಾಲುಗಳು ಮೂಡುತ್ತವೆ.



☛ ಉದಯವಾಹಿನಿ ಚಿತ್ರ

ಗಟ್ಟಿಗುಂದ ಮಹದೇವು ಅವರ ಮಿಥುನ ಪಕ್ಷಿಗಳು ಕೃತಿಯಲ್ಲಿ ಅಂತಹ ಪದಸಾಲುಗಳನ್ನು ಕಾಣಬಹುದು' ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕವಿತೆಗಳಲ್ಲಿನ ವಿಶೇಷತೆಗಳನ್ನು ದೀರ್ಘವಾಗಿ ವಿವರಿಸಿದ ಸಿದ್ಧರಾಮಯ್ಯ ಆಕೃತಿಗಳ ಸರಳ ವ್ಯಾಖ್ಯಾನ ಕವಿತೆಯನ್ನು ಉದಾಹರಿಸುತ್ತಾ, ಬಹುಶಃ ಯಾವ ಪಂಡಿತ ಕವಿಯೂ ರೇಖಾಗಣಿತದ ಸಂಕೇತಗಳನ್ನು ಬಳಸಿಕೊಂಡು ಈ ಬಗೆಯ ಕವಿತೆಯೊಂದನ್ನು ರಚಿಸಿಲ್ಲ ಬಿಂದು, ವಕ್ರರೇಖೆ, ಸರಳರೇಖೆ ಇತ್ಯಾದಿ ಇಪ್ಪತ್ತೆರಡು ರೇಖಾಗಣಿತದ

ಸಂಕೇತಗಳನ್ನು ಕಾವ್ಯದೊಳಗೆ ತಂದು ಹೆಣ್ಣಿನ ಚಿತ್ರವೊಂದನ್ನು ಕಟ್ಟಿಕೊಟ್ಟಿರುವ ಅವರ ಪ್ರತಿಭೆಗೆ ಸಲಾಂ ಎಂದು ಶ್ಲಾಘಿಸಿದರು.

ಕೃತಿ ಪರಿಚಯಿಸಿದ ಕವಿ ಅರುಣ್ ಕವಣಾಪುರ, ಮಹದೇವ್ ಅವರು ತಮ್ಮ ಕೃತಿಯಲ್ಲಿ ಶೀಲ-ಅಶ್ಲೀಲದ ಹಂಗು ತೊರೆದು, ಧ್ಯಾನಸ್ಥ ಸ್ಥಿತಿ ಮತ್ತು ತಾಧ್ಯಾತ್ಮತೆಯನ್ನು ಮಿಳಿತಗೊಳಿಸಿ ಹದವಾದ ಕವಿತೆಗಳನ್ನು ಭಟ್ಟಿ ಇಳಿಸಿದ್ದಾರೆ. ಪ್ರತಿ ಕವಿತೆಯನ್ನು ಓದುತ್ತಿದ್ದಂತೆ ಅದರ ಅನುಭವವಾಗುತ್ತದೆ' ಎಂದು ತಿಳಿಸಿದರು. ದೀಕ್ಷಾ ಮತ್ತು ದೀಪ್ತಿ ಪೊನ್ನಾಚಿ ಅವರ ಶಿವತಾಂಡವ ನೃತ್ಯ ಗಮನ ಸೆಳೆಯಿತು. ಗಾಯಕರಾದ ಚಂದ್ರಾಜ್, ಶಿವವೆಂಕಟಯ್ಯ, ಹೊಳಸಾಲಯ್ಯ ಅವರು ಮಹದೇವು ಅವರ ಕವಿತೆಗಳಿಗೆ ಸಂಗೀತ ಸಂಯೋಜಿಸಿ ಹಾಡಿದರು.

ಆರ್.ಇ.ಎಸ್ ಆಡಳಿತ ಮಂಡಳಿ ಅಧ್ಯಕ್ಷ ಎಚ್.ಸಿ. ಶ್ರೀಕಂಠಯ್ಯ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ತಾಲ್ಲೂಕಿನ ವಿವಿಧ ಕ್ಷೇತ್ರಗಳ 10 ಸಾಧಕರನ್ನು ಸನ್ಮಾನಿಸಲಾಯಿತು. ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಕೀರಣಗೆರೆ ಜಗದೀಶ್, ಕತೆಗಾರ ಸ್ವಾಮಿ ಪೊನ್ನಾಚಿ, ರಾಮನಗರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ಟಿ. ನಾಗೇಶ್, ಮಾಜಿ ಅಧ್ಯಕ್ಷ ಬಿ.ಟಿ. ಚಿಕ್ಕಪುಟ್ಟೇಗೌಡ ಇದ್ದರು. ಉಪನ್ಯಾಸಕ ತುಳಸಿರಾಮ್ ಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.

### ಸಮಾಜ ಕೇಂದ್ರಿತವಾಗಲಿ

**ಭಾಷಾ ಅಸ್ಮಿತೆಯಿಂದ ಮಹದೇವು ಅವರು ಸಮೃದ್ಧ ಕಾವ್ಯ ರಚಿಸಿದ್ದಾರೆ. ಮುಂದಿನ ದಿನಗಳಲ್ಲಿ ಅವರು ವ್ಯಕ್ತಿ ಕೇಂದ್ರಿತ ನೆಲೆಯಿಂದ ಸಮಾಜದ ಆಗುಹೋಗುಗಳನ್ನು ಕೇಂದ್ರವಾಗಿಸಿಕೊಂಡು ಕಾವ್ಯ ರಚಿಸುವಂತಾಗಲಿ, ಕವಿಯಾದವನು ಸಮಾಜಕ್ಕೆ ಮುಖಾಮುಖಿಯಾಗಿ ಕಾವ್ಯ ರಚಿಸಿದಾಗ ಮಾತ್ರ ಪರಿಪೂರ್ಣನಾಗುತ್ತಾನೆ ಎಂದು ಕಿವಿಮಾತು ಹೇಳಿದರು.**

**ವಿಮರ್ಶಕ ಅನುಕರಣೆಯ ಕಾವ್ಯಕ್ಕೆ ಆಯಸ್ಸು ಕಮ್ಮಿ ಅದು ಮೇರು ಕವಿಗಳದ್ದೇ ಆಗಿದ್ದರೂ ಕೆಲವೇ ಕವಿತೆಗಳಿಗೆ ಸೀಮಿತವಾಗಿ ಬರವಣಿಗೆಯೇ ನಿಂತು ಹೋಗುತ್ತದೆ ತನ್ನೊಳಗೆ ಅಂತರ್ಗತವಾಗಿರುವ ಶೈಲಿಯಲ್ಲಿ ಬರೆಯಬಲ್ಲವನು ಮಾತ್ರ ಕಾವ್ಯ ಜಗತ್ತಿನಲ್ಲಿ ಗಟ್ಟಿಯಾಗಿ ನಿಲ್ಲಬಲ್ಲ ಜಿ.ಡಿ. ಮಹದೇವ್ ಗಟ್ಟಿಗುಂದ ಕವಿನಾನು ಹೆಚ್ಚು ಓದಿಕೊಂಡವನಲ್ಲ. ಯಾವುದೋ ಘಳಿಗೆಯಲ್ಲಿ ಉಂಟಾಗುವ ನನ್ನೊಳಗಿನ ತುಮುಲಗಳಿಗೆ ಪದಗಳ ಮಾಲೆ ಕಟ್ಟುತ್ತೇನೆ.**

**- ಎಸ್.ಜಿ. ಸಿದ್ದರಾಮಯ್ಯ**

ಅಂತರಾಳದಿಂದ..
EDITORIAL

# ಕ್ಯಾನ್ಸರ್‌ಬಾಧಿತ ಮಕ್ಕಳಿಗೆ ವಸತಿಶಾಲೆ- ಯೋಜನೆ ದಕ್ಷವಾಗಿ ಜಾರಿಯಾಗಲಿ



ಕ್ಯಾನ್ಸರ್‌ಬಾಧಿತ ಮಕ್ಕಳಿಗಾಗಿ ಬೆಂಗಳೂರಿನ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಸಮೀಪದಲ್ಲಿ ವಸತಿಸಹಿತ ಶಾಲೆ ಸ್ಥಾಪಿಸುವ ನಿರ್ಧಾರವನ್ನು ಕರ್ನಾಟಕ ಸರ್ಕಾರ ಕೈಗೊಂಡಿದೆ. ಆರೋಗ್ಯ ರಕ್ಷಣೆ ಮತ್ತು ಶಿಕ್ಷಣವು ಎಲ್ಲರನ್ನೂ ಒಳಗೊಳ್ಳಬೇಕು ಎಂಬ ದಿಸೆಯಲ್ಲಿ ಇದೊಂದು ಶ್ಲಾಘನೆಗೆ ಅರ್ಹವಾದ ಕ್ರಮ. ಎಳೆ ವಯಸ್ಸಿನ ಮಕ್ಕಳು ಆರೋಗ್ಯ ಮತ್ತು ಭವಿಷ್ಯ ಈ ಎರಡರಲ್ಲಿ ಒಂದನ್ನು ಆಯ್ಕೆ ಮಾಡುವ ಸಂದಿಗ್ಧಕ್ಕೆ ಒಳಗಾಗದಂತೆ ಈ ಯೋಜನೆಯು ಖಾತರಿ ನೀಡುತ್ತದೆ. ಈ ಮಾದರಿಯಲ್ಲಿ ಹಲವು ಅನುಕೂಲಗಳು ಇವೆ ಎಂಬುದು ಮೇಲ್ನೋಟಕ್ಕೇ ಕಾಣಿಸುತ್ತದೆ. ನಿರಂತರ ವೈದ್ಯಕೀಯ ಆರೈಕೆಯ ಜೊತೆಗೆ ವ್ಯವಸ್ಥಿತ ಶಿಕ್ಷಣವನ್ನೂ ಒಂದೇ ಕಡೆಯಲ್ಲಿ ನೀಡುವ ಮೂಲಕ ಕ್ಯಾನ್ಸರ್ ಇರುವ ಮಕ್ಕಳ ಸಮಗ್ರ ಅಭಿವೃದ್ಧಿಯನ್ನು ಬೆಂಬಲಿಸುವುದು ಸಾಧ್ಯವಾಗುತ್ತದೆ.

**ರಾಜ್ಯದಲ್ಲಿ ಶಾಲೆಗೆ ಹೋಗುವ ವಯಸ್ಸಿನ 3,500 ಮಕ್ಕಳು ಕ್ಯಾನ್ಸರ್ ಬಾಧಿತರಾಗಿದ್ದಾರೆ. ಸರ್ಕಾರ ಸ್ಥಾಪಿಸಲು ಉದ್ದೇಶಿಸಿರುವ ವಸತಿಸಹಿತ ಶಾಲೆಯಲ್ಲಿ ಒಮ್ಮೆಗೆ 1,500 ಮಕ್ಕಳಿಗೆ ಅವಕಾಶ ಇದೆ. ಇಲ್ಲಿ ಉಚಿತ ವಸತಿ, ಪೌಷ್ಟಿಕ ಆಹಾರ, ವಿಶೇಷ ಆರೈಕೆ ಮತ್ತು ಅನಿರ್ಬಂಧಿತ ಕಲಿಕೆಗೆ ಅವಕಾಶ ಇದೆ ಎಂಬ ಭರವಸೆಯನ್ನು ಸರ್ಕಾರ ನೀಡಿದೆ. ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಸಚಿವ ಮಧು ಬಂಗಾರಪ್ಪ ಅವರು ಈ ಯೋಜನೆಯನ್ನು ಘೋಷಿಸಿದ್ದಾರೆ.**

ಸಮನ್ವಯದಿಂದಾಗಿ ಮಕ್ಕಳ ಜೀವನ ಗುಣಮಟ್ಟವು ಗಮನಾರ್ಹ ಪ್ರಮಾಣದಲ್ಲಿ ಉತ್ತಮಗೊಳ್ಳುತ್ತದೆ. ಕಿದ್ವಾಯಿ ಸಂಸ್ಥೆಯ ಸಮೀಪದಲ್ಲಿಯೇ ಶಾಲೆಯು ಸ್ಥಾಪನೆ ಆಗಲಿರುವುದರಿಂದ ಕ್ಯಾನ್ಸರ್ ತಜ್ಞರು ತಕ್ಷಣವೇ ಲಭ್ಯರಾಗುತ್ತಾರೆ. ಇದರಿಂದಾಗಿ ಕುಟುಂಬದ ಮೇಲಿನ ಹೊರೆ ತಗ್ಗುತ್ತದೆ.


ಇದೂ ಅಲ್ಲದೆ, ತಮ್ಮಂತಹುದೇ ಸವಾಲು ಎದುರಿಸುತ್ತಿರುವ ಸಹವರ್ತಿಗಳ ಜೊತೆಗಿನ ಬದುಕು ಮಕ್ಕಳಲ್ಲಿ ಭಾವನಾತ್ಮಕ ಒಗ್ಗಟ್ಟು, ಪರಸ್ಪರ ಗ್ರಹಿಕೆ ಮತ್ತು ಸಹಪಯಣದ ಭಾವವನ್ನು ಮೂಡಿಸುತ್ತದೆ. ಆಗಾಗ ಆಸ್ಪತ್ರೆಗೆ ಹೋಗುವುದು ಮತ್ತು ಸುದೀರ್ಘ ಅವಧಿಗೆ ಶಾಲೆಯಿಂದ ಹೊರಗೆ ಉಳಿಯುವುದು ತಪ್ಪಿ ಕಲಿಕೆಯು ನಿರಂತರವಾಗುತ್ತದೆ. ಎಷ್ಟೇ ಸದುದ್ದೇಶ ಇದ್ದರೂ ಪ್ರಸ್ತಾವವನ್ನು ಸಮಗ್ರವಾದ ಪರಿಶೀಲನೆಗೆ ಒಳಪಡಿಸಬೇಕು. ವಸತಿ ಶಾಲೆಯಲ್ಲಿ ಇರುವುದರಿಂದ ಮಕ್ಕಳಲ್ಲಿ ಒಬ್ಬಂಟಿ ಭಾವ ಮೂಡಬಹುದು ಎಂಬುದು ತಕ್ಷಣದ ಕಳವಳವಾಗಿದೆ. ವಸತಿಯುತ ಶಾಲೆಯ ಪ್ರತ್ಯೇಕ ವಾತಾವರಣಕ್ಕೆ ಸೀಮಿತವಾಗುವ ಮಕ್ಕಳಿಗೆ ಶಾಲೆಯ ಹೊರಗಿನ ಸಹವರ್ತಿಗಳ ಜೊತೆಗೆ ಸಂವಹನ ಇಲ್ಲವಾಗುತ್ತದೆ. ಇದರಿಂದಾಗಿ ಅವರಿಗೆ ಸಾಮಾಜಿಕ ಒಡನಾಟ ತಪ್ಪಿಹೋಗಬಹುದು. ಕ್ಯಾನ್ಸರ್‌ನ ವೇದನೆಯಿಂದ ಬಳಲುತ್ತಿರುವ ಮಕ್ಕಳು ಕುಟುಂಬದಿಂದಲೂ ಬೇರ್ಪಟ್ಟು ಭಾವನಾತ್ಮಕ ಒತ್ತಡಕ್ಕೆ ಒಳಗಾಗಬಹುದು. ಸಣ್ಣ ವಯಸ್ಸಿನ ಮಕ್ಕಳಲ್ಲಿ ಈ ಸಮಸ್ಯೆ ಇನ್ನೂ ಹೆಚ್ಚಾಗಬಹುದು. ಸರ್ಕಾರಿ ವ್ಯವಸ್ಥೆಯಲ್ಲಿನ ಶಿಕ್ಷಣದ ಗುಣಮಟ್ಟವೂ ಕಳವಳದ ವಿಚಾರವೇ ಆಗಿದೆ. ಈ ಬಾರಿ ಸರ್ಕಾರಿ ಶಾಲೆಗಳ ಎಸ್‌ಎಸ್‌ಎಲ್‌ಸಿ ಫಲಿತಾಂಶವು ಶೇ 62.7ರಷ್ಟು ಮಾತ್ರ ಇದೆ. ಹಾಗಾಗಿ, ವಸತಿಯುತ ಶಾಲೆಯೊಂದನ್ನು ಸ್ಥಾಪಿಸುವುದರಿಂದ ಮಾತ್ರ ಹೆಚ್ಚಿನದನ್ನು ಸಾಧಿಸಿದಂತಾಗದು. ಸ್ಪರ್ಧಾತ್ಮಕವಾದ ಶಿಕ್ಷಣಕ್ಕೆ ಈ ಮಕ್ಕಳು ಅರ್ಹರು ಮತ್ತು ಅದು ಅವರಿಗೆ ಸಿಗಲೇಬೇಕು. ಮಕ್ಕಳ ಆರೋಗ್ಯ ಮತ್ತು ಶೈಕ್ಷಣಿಕ ಕ್ಷಮತೆ ಈ ಎರಡರಲ್ಲೂ ಅತ್ಯುತ್ತಮ ಸಾಧನೆ ದಾಖಲಿಸುವ ಮೂಲಕ ಇಂತಹ ಮಾದರಿ ಶಾಲೆಯ ಸ್ಥಾಪನೆಯು ಸಮರ್ಥನೀಯ ಎನಿಸಿಕೊಳ್ಳಬೇಕು. ಇಂತಹ ಕೇಂದ್ರವೊಂದನ್ನು ನಡೆಸಿಕೊಂಡು ಹೋಗಲು ಗಣನೀಯ ಮೊತ್ತದ ನಿಧಿಯೂ ಬೇಕಾಗುತ್ತದೆ. ಹಣಕಾಸಿನ ಕೊರತೆ ಆಗುವುದಿಲ್ಲ ಎಂಬುದನ್ನು ಸರ್ಕಾರ ಖಾತರಿಪಡಿಸಬೇಕು. ವಸತಿಸಹಿತ ಶಾಲೆಯ ಸ್ಥಾಪನೆ ಉದ್ದೇಶವು ಸರಿಯಾದ ದಿಕ್ಕಿನಲ್ಲಿ ಇರಿಸಲಾದ ಹೆಜ್ಜೆ. ಹಾಗಿದ್ದರೂ ಇತರ ಅಂಶಗಳ ಕುರಿತು ಕೂಡ ಸರ್ಕಾರ ಗಮನ ಹರಿಸಬೇಕು. ಆರೋಗ್ಯ ಸೇವೆಗಳ ಅತಿಯಾದ ಕೇಂದ್ರೀಕರಣದ ಸಮಸ್ಯೆಗೂ ಪರಿಹಾರ ಕಂಡುಕೊಳ್ಳಬೇಕಾಗಿದೆ. ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯು ಅತಿಯಾದ ಹೊರೆಯಿಂದ ಬಳಲುತ್ತಿದೆ. ಹಾಗಾಗಿ, ರಾಜ್ಯದ ವಿವಿಧ ಭಾಗಗಳಲ್ಲಿ ಪ್ರಾದೇಶಿಕ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರವು ಚಿಂತನೆ ನಡೆಸಬೇಕು. ಇದರಿಂದ ಕ್ಯಾನ್ಸರ್ ಬಾಧಿತರಾದ ಎಲ್ಲಾ ರೋಗಿಗಳಿಗೂ ನೆರವಾಗುತ್ತದೆ. ಜೊತೆಗೆ, ಮಹತ್ವದ ಚಿಕಿತ್ಸೆಗಳನ್ನು ಪಡೆಯುವಾಗ ಮಕ್ಕಳು ಹೆತ್ತವರ ಜೊತೆಯಲ್ಲಿಯೇ ಇರುವುದು ಸಾಧ್ಯವಾಗುತ್ತದೆ. ಕುಟುಂಬವು ಅನಗತ್ಯವಾಗಿ ತೊಂದರೆ ಎದುರಿಸುವುದು ತಪ್ಪುತ್ತದೆ ಜೊತೆಯಲ್ಲಿಯೇ ಇರುವುದು ಸಾಧ್ಯವಾಗುತ್ತದೆ. ಕುಟುಂಬವು ಅನಗತ್ಯವಾಗಿ ತೊಂದರೆ ಎದುರಿಸುವುದು ತಪ್ಪುತ್ತದೆ. ಸರ್ಕಾರವು ಇಂತಹ ಅತ್ಯಗತ್ಯ ಕ್ರಮಗಳನ್ನು ದಕ್ಷವಾಗಿ ಜಾರಿಗೆ ತರುವುದರ ಮೂಲಕ ಕ್ಯಾನ್ಸರ್‌ಬಾಧಿತ ಮಕ್ಕಳ ಭವಿಷ್ಯವನ್ನು ಉಜ್ವಲವೂ. ಆರೋಗ್ಯಪೂರ್ಣವೂ ಆಗಿಸಬಹುದು.

---



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

# ಮುಂಗಾರಿನ ಮೊದಲ ಹಬ್ಬ- ಕಾರ ಹುಣ್ಣಿಮೆ..!



ಕಾರ ಹುಣ್ಣಿಮೆ ಮುಂಗಾರು ಆರಂಭದ ಮೊದಲ ಹಬ್ಬ. ಜತೆಗೆ ಸಾಂಸ್ಕೃತಿಕವಾಗಿ ವೈಶಿಷ್ಟ್ಯ ಹೊಂದಿದೆ. ಬೇಸಗೆಯಲ್ಲಿ ಹೊಲವನ್ನು ಉತ್ತು, ಹದ ಮಾಡಿದ ಎತ್ತುಗಳಿಗೆ ಈ ಹಬ್ಬದ ಅನಂತರ ವಿಶ್ರಾಂತಿ ನೀಡಲಾಗುತ್ತದೆ. ಕಾರ ಹುಣ್ಣಿಮೆಯೂ ಮನುಷ್ಯ ಮತ್ತು ಪಶುಗಳ ನಡುವಿನ ಅನೂಹ್ಯ ಸಂಬಂಧವನ್ನು ತಿಳಿಸುತ್ತದೆ. ಅಲ್ಲದೇ ಕೃಷಿ ಸಂಸ್ಕೃತಿಯ ದ್ಯೋತಕವಾಗಿದೆ. ಕಾರ ಹುಣ್ಣಿಮೆಯ ದಿನದಂದು ಸೂರ್ಯನ ತೇಜೋರಶ್ಮಿ ಕಿರಣಗಳನ್ನು ಸ್ವಾಗತಿಸಿದ ಬಳಿಕ ಎತ್ತುಗಳನ್ನು ಸ್ನಾನಕ್ಕೆಂದು ಹಳ್ಳ, ನದಿ, ಕೆರೆಗೆ ಕರೆದೊಯ್ಯಲಾಗುತ್ತದೆ. ಎತ್ತುಗಳಿಗೆ ಸ್ನಾನ ಮಾಡಿಸಿ, ವಿಧ ವಿಧವಾದ ಬಣ್ಣಗಳಲ್ಲಿ ಗುಲಾಲ್ ಹಚ್ಚಲಾಗುತ್ತದೆ. ಹಣೆಗಳಿಗೆ ಬಾಸಿಂಗ, ಹಣೆಪಟ್ಟಿ, ಕೊರಳಲ್ಲಿ ಘಂಟೆ, ಕೊರಳಿಗೆ ಚೆಂದದ ಫರಾರಿಯನ್ನು ಕಟ್ಟಿ ಮನೆಯವರೆಲ್ಲ ಸೇರಿ ಎತ್ತಿಗೂ ಪೂಜೆ ಮಾಡುತ್ತಾರೆ. ಬಳಿಕ ಸಂಜೆ ಊರಿನ ಪ್ರಮುಖ ಬೀದಿಗಳಲ್ಲಿ ಎತ್ತುಗಳ ಮೆರವಣಿಗೆ ಮಾಡಲಾಗುತ್ತದೆ. ಇಡೀ ಊರಿಗೆ ಊರೇ ಸೇರಿ ಒಗ್ಗಟ್ಟಾಗಿ ಸಂಭ್ರಮವನ್ನು ಕಣ್ತುಂಬಿಕೊಳ್ಳುತ್ತದೆ.

**ಕರಿ ಹರಿಯುವ ವಿಶೇಷತೆ:** ಉತ್ತರ ಕರ್ನಾಟಕದಲ್ಲಿ, ಕಾರ ಹಬ್ಬದ ವಿಶೇಷತೆಯಲ್ಲಿ ಕರಿ ಹರಿಯುವ ಕಾರ್ಯಕ್ರಮವೂ ಒಂದು. ಕಾರಹುಣ್ಣಿಮೆಯಂದು ಸಂಜೆಯಾಗುತ್ತಿದಂತೆ ಕರಿ ಹರಿಯುವ ಸಮಾರಂಭ ಹಮ್ಮಿಕೊಳ್ಳಲಾಗಿರುತ್ತೆ. ಊರ ಅಗಸಿಯಲ್ಲಿ ಬೇವಿನ ತಪ್ಪಲಿನ ತೋರಣದ ನಡುವೆ ಕೊಬ್ಬರಿಯನ್ನು ಕಟ್ಟಲಾಗಿರುತ್ತೆ. ಕರಿ ಹರಿಯಲು ಬಿಳಿ, ಹಾಗೂ ಕೆಂದು ಬಣ್ಣದ ಎತ್ತುಗಳಿಗೆ ಮಾತ್ರ ಅವಕಾಶ ನೀಡಲಾಗುತ್ತೆ. ಹಲಗೆ ಸದ್ದು ಮಾಡುತ್ತಿದ್ದಂತೆ ಅಗಸಿ ಎದುರಿಗೆ ಕರಿ ಹರಿಯಲು ಎತ್ತುಗಳೊಂದಿಗೆ ರೈತರು ತಾ ಮುಂದು ನೀ ಮುಂದು ಎಂದು ಎತ್ತುಗಳನ್ನು ಓಡಿಸಿಕೊಂಡು ಬಂದು ಕರಿ ಹರಿಯುತ್ತಾರೆ. ಕರಿಯುವ ಓಟದಲ್ಲಿ ಇತರೆ ರೈತರು ಕೇಕೆ ಹಾಕಿ ಉತ್ಸಾಹ ತುಂಬುತ್ತಾರೆ. ಯಾವ ಬಣ್ಣದ ಎತ್ತು ಕರಿಹರಿಯುತ್ತೋ ಆ ಬಣ್ಣದ ಬೆಳೆ ಚೆನ್ನಾಗಿ ಬರುತ್ತೆ ಅನ್ನುವ ನಂಬಿಕೆ ರೈತರದ್ದಾಗಿದೆ. ಬಿಳಿ ಎತ್ತು ಮೊದಲು ಕರಿ ಹರಿದ್ರೆ ಬಿಳಿಜೋಳ, ಅಂದರೆ ಹಿಂಗಾರು ಮಳೆ–ಬೆಳೆ ಚೆನ್ನಾಗಿ ಆಗುತ್ತೆ ಅನ್ನುವ ನಂಬಿಕೆ. ಇನ್ನು ಕೆಂದು ಬಣ್ಣದ ಕರಿ ಹರಿದ್ರೆ ಮುಂಗಾರು ಮಳೆ–ಬೆಳೆ ಚೆನ್ನಾಗಿ ಆಗುತ್ತೆ ಅನ್ನುವ ನಂಬಿಕೆಯನ್ನು ರೈತರು ಹೊಂದಿದ್ದಾರೆ. ಇನ್ನು ಮೊದಲು ಕರಿ ಹರಿದ ಎತ್ತಿಗೆ ರೈತರೆಲ್ಲರೂ ಸೇರಿ ಮೆರವಣಿಗೆ ಮಾಡುತ್ತಾರೆ. ಕರಿ ಹರಿದ ಬಳಿಕ ಗುಂಡು ಎತ್ತುವ ಸ್ಪರ್ಧೆ ಏರ್ಪಡಿಸಲಾಗಿರುತ್ತೆ. ವರ್ಷವಿಡೀ ಕೃಷಿಯಲ್ಲಿ ತೊಡಗಿದ ರೈತರು ದೈಹಿಕ ಕಸರತ್ತು ನಡೆಸುವ ಮೂಲಕ ಕ್ರೀಡಾ ಮನೋಭಾವ ಮೆರೆಯುತ್ತಾರೆ. ಆನಂತರ ಶಕ್ತಿ ದೇವತೆಗಳ ದೇಗುಲಗಳಿಗೆ ತೆರಳಿ ರೈತರು ಮಳೆ ಕುರಿತಾಗಿ ದೇವರ ಹೇಳಿಕೆಯನ್ನು ಕೇಳುತ್ತಾರೆ.

ಮಣ್ಣಿನ ಮಕ್ಕಳ ಸಂಭ್ರಮದ ಹಬ್ಬವಾದ ಕಾರಹುಣ್ಣಿಮೆ, ಮುಂಬರುವ ಹಬ್ಬಗಳ ಸಾಲಿಗೆ ಹೊಸ್ತಿಲು ಎಂದೇ ಹೇಳಬಹುದು.

---

# ಎಸ್.ಸಿ / ಎಸ್.ಟಿ ಅನುದಾನ ದುರ್ಬಳಕೆಗೆ ತಡೆ

## ಪೌರ ನೇಮಕಾತಿ ಸರಳೀಕರಣ ಮಾಡಿ ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಬೃಹತ್ ಪ್ರತಿಭಟನೆ, ತಮಟೆ ಚಳುವಳಿ. ಬಿಬಿಎಂಪಿ ಆಡಳಿತದಲ್ಲಿ ಭ್ರಷ್ಟಾಚಾರ ಎಸ್.ಸಿ./ಎಸ್.ಟಿ. ಅನುದಾನ ದುರ್ಬಳಕೆ ಹಾಗೂ ಪೌರ ಕಾರ್ಮಿಕರ ನೇಮಕಾತಿ ಸರಳ ರೀತಿಯಲ್ಲಿ ನೇಮಕಾತಿ, ಒಂಟಿ ಮನೆಗಳಿಗೆ ಅನುದಾನ ನೀಡಲು ಕ್ರಮ ಕೈಗೊಳ್ಳಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಬೃಹತ್ ಪ್ರತಿಭಟನೆ,ತಮಟೆ ಚಳುವಳಿ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷರಾದ ಚಳುವಳಿ ಅಯ್ಯಪ್ಪ ಕೆ , ಜಿಲ್ಲಾಧ್ಯಕ್ಷ ಎನ್ ಪ್ರಸಾದ್ ರವರ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಪ್ರತಿಭಟನೆ ಪಾಲ್ಗೊಂಡಿದ್ದರು ರಾಜ್ಯಾಧ್ಯಕ್ಷ ಚಳುವಳಿ ಅಯ್ಯಪ್ಪ ಕೆ ರವರು ಮಾತನಾಡಿ ಬೆಂಗಳೂರುನಗರ ಇಂದು ವಿಶ್ವ ಮಟ್ಟದಲ್ಲಿ ಗುರುತಿಸಿಕೊಂಡಿದೆ ಎಲ್ಲರು ನಗರವನ್ನು ಇಷ್ಟಪಡುತ್ತಿದ್ದಾರೆ. ನಾಗರಿಕರ ವೇಗಕ್ಕೆ ಬೆಂಗಳೂರುನಗರ ಅಭಿವೃದ್ಧಿಯಾಗುತ್ತಿಲ್ಲ. ಇದೆಕ್ಕಲ್ಲ ಕಾರಣ ಆಡಳಿತ ವೈಫಲ್ಯ ಮತ್ತು ಭ್ರಷ್ಟಾಚಾರ ಕಾರಣ. ಎಸ್.ಸಿ/ಎಸ್.ಟಿ. ಮತ್ತು ಟಿ.ಎಸ್.ಪಿ.ದಲಿತ ಸಮುದಾಯಕ್ಕೆ ಅಭಿವೃದ್ಧಿ ಇಟ್ಟ ಅನುದಾನವನ್ನು ದುರ್ಬಳಕೆ ಮಾಡಿಕೊಂಡು ಅನ್ಯ ಕಾಮಗಾರಿಗಳಿಗೆ ಬಳಕೆ ಮಾಡಿಕೊಂಡಿದ್ದಾರೆ. 12692ಪೌರ ಕಾರ್ಮಿಕರನ್ನು ನೇರ ನೇಮಕಾತಿಯಲ್ಲಿ ಕಠಿಣ ಷರತ್ತು ವಿಧಿಸದೇ ನೇಮಕಾತಿ ಮಾಡಿ.

**ಒಂಟಿ ಮನೆ ಯೋಜನೆ ಅನುದಾನ ಬಿಡುಗಡೆ**

ಆರ್ಥಿಕವಾಗಿ ಹಿಂದುಳಿದ ವರ್ಗ ಮತ್ತು ಎಸ್.ಸಿ/ಎಸ್.ಟಿ. ಸಮುದಾಯಕ್ಕೆ ಕಳೆದ ನಾಲ್ಕು ವರ್ಷಗಳಿಂದ ಒಂಟಿ ಮನೆ ಯೋಜನೆ ಅನುದಾನ ನೀಡಿಲ್ಲ ಅನುದಾನ ಬಿಡುಗಡೆ ಮಾಡಿ.ಭ್ರಷ್ಟಾಚಾರದಲ್ಲಿ ತೊಡಗಿರುವ ಮತ್ತು ಎಸ್.ಸಿ/ಎಸ್.ಟಿ.ಅನುದಾನ ದುರ್ಬಳಕೆ ಮಾಡಿಕೊಂಡಿರುವ ಅಧಿಕಾರಗಳ ಮೇಲೆ ಉಗ್ರ ಕ್ರಮವಾಗಬೇಕು, ನಿಷ್ಠಾವಂತ ಅಧಿಕಾರಿಗಳನ್ನು ನೇಮಕ ಮಾಡಿ ಬೆಂಗಳೂರು ನಗರವನ್ನು ಉಳಿಸಬೇಕು ಎಂದು ಮುಖ್ಯಮಂತ್ರಿಗಳಿಗೆ, ಉಪಮುಖ್ಯಮಂತ್ರಿಗಳಿಗೆ, ಮುಖ್ಯ ಆಯುಕ್ತರು ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

**ಜಿಲ್ಲಾಧ್ಯಕ್ಷ ಪ್ರಸಾದ್ ಎನ್ ರವರು ಮಾತನಾಡಿ ಬಿಬಿಎಂಪಿಯಲ್ಲಿ ಭ್ರಷ್ಟಾಚಾರ ಕಡಿವಾಣ ಹಾಕಬೇಕು, ಭ್ರಷ್ಟಚಾರದಿಂದ ಬೆಂಗಳೂರು ನಗರ ಅಭವೃದ್ಧಿಗೆ ಮಾರಕವಾಗಿದೆ. ಎಸ್.ಸಿ/ಎಸ್.ಟಿ ಅನುದಾನ ದುರ್ಬಳಕೆ ಮಾಡಿಕೊಂಡ ಅಧಕಾರಿಗಳನ್ನು ವಜಾ ಮಾಡಬೇಕು ಮತ್ತು ಒಂಟಿ ಮನೆ ಯೋಜನೆಯ ಫಲಾನುಭವಿಗಳಿಗೆ ಕೊಡಲೆ ಹಣ ಬಿಡುಗಡೆ ಮಾಡಬೇಕು ಎಂದು ಹೇಳಿದರು.**


---

ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

## ಗೌಡ್ರು ನಮ್ಮೆಲ್ಲರ ಹೊಂಬೇಗೌಡ್ರು



ಬಂದರು, ಬಂದರು ನೋಡಿ ಗೌಡ್ರು
ನಮೆಲ್ಲರ ಪ್ರೀತಿಯ ಪಾತ್ರರು ಹೊಂಬೇಗೌಡ್ರು
ಪತ್ರಿಕಾ ಕ್ಷೇತ್ರದಲ್ಲೂ ಅವರು
ಸಮಾಜಸೇವೆಯಲ್ಲೂ ಮುಂದವರು....
ಸರಳ,ಸಜ್ಜನಿಕೆಯ ಸ್ವಭಾವದವರು
ಅನ್ಯಾಯ ಕಂಡರೆ ಬಿಡದವರು
ಪ್ರೀತಿ ವಿಶ್ವಾಸಕ್ಕೆ ತಲೆಬಾಗುವರು
ಕುಟುಂಬದವರಿಗೆ ನಂಬಿಕಸ್ತರು....
ಹುಟ್ಟು ಹಬ್ಬದ ಶುಭಾಶಯಗಳು ನಿಮಗೆ
ಸಂತಸದಲ್ಲಿ ಬಾಳುವಂತಾಗಲಿ ನೀವು
ಜನಸೇವೆಯೇ ಜನಾರ್ಧನ ಸೇವೆ ಎಂದು
ಸಾಗುತಿರಲು ಸದಾಕಾಲ ನಿಮ್ಮ ಜೀವನದಲ್ಲಿ
ಸಂತೋಷ ಮೂಡುತ್ತಿರಲಿ ಹೀಗೆ ಏನಲು.....
ಕಾರ್ಯವೈಖರಿಗಳ ಕಂಡು ನಿಮ್ಮನ್ನು
ಸನ್ಮಾನಿಸುತಿರಲಿ
ಬದುಕು ಬಂಗಾರವಾಗಲಿ ಸದಾ ಕಾಲ
ಉದಯವಾಹಿನಿ ಪತ್ರಿಕೆಯು
ಎಲ್ಲಡೆಯೂ ಪಸರಿಸಲಿ
ನಿಮ್ಮ ಸೇವೆ ಎಲ್ಲರಿಗೂ
ಸಿಗುವಂತಾಗಲಿ .....

---

# ದಕ್ಷಿಣ ಕನ್ನಡ ಜಿಲ್ಲಾ ಪೊಲೀಸರಿಗೆ ನೋಟೀಸ್ ಜಾರಿ!

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಬ್ದುಲ್ ರೆಹಮಾನ್ ಇವರ ಹತ್ಯೆಯ ನಂತರ, ತನಿಖೆಯ ನೆಪದಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸರು, ಮೇ ತಿಂಗಳಿನಲ್ಲಿ ಕಡಬ, ಉಜಿರೆ, ಸುಳ್ಯ ಈ ಠಾಣಾ ವ್ಯಾಪ್ತಿಯಲ್ಲಿನ ಅಮಾಯಕ ಹಿಂದೂಗಳ ಮನೆಗಳಿಗೆ ರಾತ್ರೋರಾತ್ರಿ ಹೋಗಿ ಕಿರುಕುಳ ನೀಡಿದ ಪ್ರಕರಣದಲ್ಲಿ ಇಂದು, 17 ಜೂನ್ ರಂದು ರಾಜ್ಯ ಪೊಲೀಸ್ ದೂರು ಪ್ರಾಧಿಕಾರದಲ್ಲಿ ವಿಚಾರಣೆ ನಡೆಯಿತು. ರಾಜ್ಯ ಪೋಲಿಸ್ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾಯಮೂರ್ತಿ ಶ್ರೀ. ಕೆ.ಎನ್ ಸುಧೀಂದ್ರರಾವ್ ವಿಚಾರಣೆ ನಡೆಸಿ, ಅಮಾಯಕ ಹಿಂದೂಗಳಿಗೆ ಕಿರುಕುಳ ನೀಡಿದ ಪ್ರಕರಣದಲ್ಲಿ ದಕ್ಷಿಣ ಕನ್ನಡ ಜಿಲ್ಲಾ ವರಿಷ್ಠ ಪೊಲೀಸ್ ಅಧಿಕಾರಿಗಳಿಗೆ ನೋಟೀಸ್ ಹೊರಡಿಸಿದರು. ಮುಂದಿನ ವಿಚಾರಣೆ ಜುಲೈ 15 ರಂದು ನಡೆಯಲಿದೆ.


**ಪೊಲೀಸ್ ದೂರು ಪ್ರಾಧಿಕಾರದಲ್ಲಿ ವಿಚಾರಣೆ**

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸಮಸ್ತ ಹಿಂದೂ ಸಂಘಟನೆಗಳು ಒಟ್ಟಾಗಿ ರಾಜ್ಯವ್ಯಾಪಿ ಕಾನೂನು ಹೋರಾಟ ಪ್ರಾರಂಭಿಸಿದ್ದರು. ಜೂನ್ 4, 2025 ರಂದು ಹಿಂದೂ ರಾಷ್ಟ್ರ ಸಮನ್ವಯ ಸಮಿತಿಯ ನೇತೃತ್ವದಲ್ಲಿ ಬೆಂಗಳೂರಿನ ಪೊಲೀಸ್ ದೂರು ಪ್ರಾಧಿಕಾರದ ಅಧ್ಯಕ್ಷರಾದ ಸನ್ಮಾನ್ಯ ನ್ಯಾಯಮೂರ್ತಿ ಎನ್. ಕೆ. ಸುಧೀಂದ್ರ ರಾವ್ ಇವರಿಗೆ ದೂರು ನೀಡಲಾಗಿತ್ತು. ಈ ವೇಳೆ ಹಿಂದೂ ಜನಜಾಗೃತಿ ಸಮಿತಿಯ ರಾಜ್ಯ ವಕ್ತಾರರಾದ ಶ್ರೀ. ಮೋಹನ ಗೌಡ, ಕರ್ನಾಟಕ ಉಚ್ಚ ನ್ಯಾಯಾಲಯದ ಹಿರಿಯ ವಕೀಲರಾದ ನ್ಯಾಯವಾದಿ ಅಮೃತೇಶ್ ಎನ್ ಪಿ, ರಾಷ್ಟ್ರ ರಕ್ಷಣಾ ಪಡೆಯ ಶ್ರೀ. ಪುನೀತ್ ಕೆರೆಹಳ್ಳಿ ಸೇರಿದಂತೆ ಅನೇಕ ವಕೀಲರು, ಹಿಂದೂ ಸಂಘಟನೆಗಳ ಕಾರ್ಯಕರ್ತರು ಉಪಸ್ಥಿತರಿದ್ದರು.

ಅಷ್ಟೇ ಅಲ್ಲದೇ ಎಲ್ಲಾ ಹಿಂದೂ ಸಂಘಟನೆಗಳು ಸೇರಿ ಈ ವಿಷಯವಾಗಿ ರಾಜ್ಯದ ವಿಜಯಪುರ, ಹುಬ್ಬಳ್ಳಿ, ಕಾರವಾರ, ಶಿವಮೊಗ್ಗ, ಹಾಸನ, ಉಡುಪಿ ಮತ್ತು ಮಂಗಳೂರಿನಲ್ಲಿ ಸಹ ಅಲ್ಲಿನ ಜಿಲ್ಲಾಧಿಕಾರಿಗಳ ಮೂಲಕ ಮಾನ್ಯ ರಾಜ್ಯಪಾಲರಿಗೆ ಪೊಲೀಸರ ಈ ತಾರತಮ್ಯದ ಕೃತ್ಯ ಕೂಡಲೇ ನಿಲ್ಲಬೇಕೆಂದು ಮನವಿ ಮಾಡಲಾಗಿತ್ತು.

---

# ದಷ್ಟಪುಷ್ಟವಾಗಿ ಚೆನ್ನಾಗಿ ಇರುವ ಜನರಲ್ಲೂ ವೀಕ್ ನೆಸ್ ಸಮಸ್ಯೆ ಬರುತ್ತಿರುತ್ತದೆ ಯಾಕೆ ಹೀಗೆ?



ದೇಹದಲ್ಲಿ ಹಠಾತ್ ಆಗಿ ವೀಕ್ ನೆಸ್ ಕಾಣಿಸಿಕೊಳ್ಳುವುದು ಒಳ್ಳೆಯ ಲಕ್ಷಣವಲ್ಲ. ಈ ಆರೋಗ್ಯ ಸಮಸ್ಯೆಯನ್ನು ಹಗುರವಾಗಿ ಪರಿಗಣಿಸಬಾರದು, ಏಕೆಂದರೆ ಅದು ನಿಮ್ಮ ದೇಹದಲ್ಲಿನ ಯಾವುದೋ ಪೋಷಕಾಂಶಗಳ ಕೊರತೆ ಅಥವಾ ಕಾಯಿಲೆಯ ಸಂಕೇತವಾಗಿರಬಹುದು. ಹೀಗಾಗಿ ಈ ಸಮಸ್ಯೆಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಪಡೆಯುವುದು ಬಹಳ ಮುಖ್ಯ. ನಮ್ಮ ನಡುವೆ ಇರುವವರಲ್ಲಿ ಹೆಚ್ಚಿನವರನ್ನು ನಾವು ಗಮನಿಸಿರುವ ಹಾಗೆ ನೋಡಲು ದಷ್ಟಪುಷ್ಟವಾಗಿ ಆರೋಗ್ಯಕಾರಿ ವ್ಯಕ್ತಿಯಂತೆ ಕಾಣುತ್ತಾರೆ ಆದರೆ ತಮ್ಮ ಕೆಲಸಗಳನ್ನು ತಾವು ಮಾಡಿಕೊಳ್ಳಲು ಮಾತ್ರ ಕಷ್ಟಪಡುತ್ತಾ ಇರುತ್ತಾರೆ! ನಾಲ್ಕು ಹೆಜ್ಜೆ ಇಟ್ಟರೂ ಸಾಕು ವೀಕ್ ನೆಸ್ ಕಾಣಿಸಿಕೊಂಡು ಸುಸ್ತು, ಆಯಾಸ ಆಗುತ್ತಿದೆ ಎನ್ನುತ್ತಾರೆ. ನಮ್ಮಲ್ಲಿ ಹೆಚ್ಚಿನವರು ಈ ಸಮಸ್ಯೆಯನ್ನು ನಿರ್ಲಕ್ಷ್ಯ ಮಾಡುತ್ತಾ ಬರುತ್ತಾರೆ. ಆದರೆ ನಿಮಗೆ ಗೊತ್ತಿರಲಿ, ಈ ರೀತಿಯಾಗಿ ಆರೋಗ್ಯ ಸಮಸ್ಯೆಗಳು ಪದೇ ಪದೇ ಆಗುತ್ತಿದ್ದರೆ ನಾವು ಅದನ್ನು ನಿರ್ಲಕ್ಷ್ಯ ಮಾಡಲು ಹೋಗಬೇಡಿ, ಯಾಕೆಂದ್ರೆ ಹಿಂಗೆಲ್ಲಾ ಆರೋಗ್ಯದಲ್ಲಿ ಸಮಸ್ಯೆಗಳು ಕಾಣಿಸಿಕೊಳ್ಳುವುದು ಯಾವುದೋ ಗಂಭೀರ ಸಮಸ್ಯೆಯ ಸಂಕೇತವೂ ಆಗಿರುವ ಸಾಧ್ಯತೆ ಇರಬಹುದು ಎನ್ನುತ್ತಾರೆ ಆರೋಗ್ಯ ತಜ್ಞರು.

**ಈ ರೀತಿ ಆರೋಗ್ಯ ಸಮಸ್ಯೆಗಳಿಗೆ ಕಾರಣಗಳೇನು? :** ಕೆಲವರಿಗೆ ಇದ್ದಕ್ಕಿದಂತೆ ವೀಕ್ ನೆಸ್ ಅಥವಾ ದೇಹದ ದೌರ್ಬಲ್ಯ ಎಂದರೆ ದೇಹದಲ್ಲಿ ಶಕ್ತಿಯ ಕೊರತೆ ಕಾಣಿಸಿಕೊಳ್ಳುವುದು, ಇದರಿಂದಾಗಿ ದಿನವಿಡೀ ಆಯಾಸ ಕಾಣಿಸಿಕೊಳ್ಳುತ್ತದೆ,

ಯಾವುದೇ ಕೆಲಸ ಕಾರ್ಯಗಳನ್ನು ಮಾಡಲು ಕೂಡ ಮನಸ್ಸಿರುವುದಿಲ್ಲ. ಈ ಬಗ್ಗೆ ಆರೋಗ್ಯ ತಜ್ಞರು ಹೇಳುವ ಪ್ರಕಾರ, ಕೆಲವೊಮ್ಮೆ ಜನರು ಅನುಸರಿಸುತ್ತಿರುವ ಜೀವನಶೈಲಿ ಆಹಾರ ಪದ್ಧತಿಗಳ ಕಾರಣಗಳಿಂದಾಗಿ ರಕ್ತದಲ್ಲಿನ ಸಕ್ಕರೆ ಮಟ್ಟದಲ್ಲಿ ಬದಲಾವಣೆ ಕಾಣಿಸಿಕೊಂಡರೆ ಕಬ್ಬಿಣಾಂಶದಲ್ಲಿ ಕೊರತೆ ಕಾಣಿಸಿಕೊಂಡರೆ, ಮೆಗ್ನೀಸಿಯಮ್ ಮಟ್ಟದಲ್ಲಿ ಏರುಪೇರಾದರೆ ಕೂಡ ಈ ರೀತಿಯ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುತ್ತದೆಯಂತೆ!

**ಈ ಬಗ್ಗೆ ವೈದ್ಯರು ಏನು ಹೇಳುತ್ತಾರೆ:** ದೆಹಲಿಯ ಆರ್‌ಎಂಎಲ್ ಆಸ್ಪತ್ರೆಯ ವೈದ್ಯಕೀಯ ವಿಭಾಗದ ಡಾ. ಪುಲೀನ್ ಕುಮಾರ್ ಅವರು ಹೇಳುವ ಪ್ರಕಾರ, ದೇಹದಲ್ಲಿ ವೀಕ್ ನೆಸ್ ಕಾಣಿಸಿಕೊಂಡಾಗ ಅದರ ಹಲವಾರು ಲಕ್ಷಣಗಳು ಕಾಣಿಸಿಕೊಳ್ಳಲು ಪ್ರಾರಂಭಿಸುತ್ತವೆ. ಕೆಲವು ಮುಖ್ಯ ಲಕ್ಷಣಗಳು ಈ ಕೆಳಗಿನಂತಿವೆ. ಸಣ್ಣ ಕೆಲಸಗಳನ್ನು ಮಾಡಿದ ನಂತರವೂ ಆಯಾಸ ಉಂಟಾಗುವುದು, ಮನೆಯಲ್ಲಿ ಹಾಗೆಯೇ ರೆಸ್ಟ್ ತೆಗೆದುಕೊಂಡಾಗಲೂ ಕೂಡ, ಆಗಾಗ ಸುಸ್ತು – ಆಯಾಸ ಆಗುವುದು, ಇದರ ಹೊರತಾಗಿ, ಇನ್ನೂ ಅನೇಕ ಲಕ್ಷಣಗಳು ಕಂಡುಬರಬಹುದು. ಅವುಗಳು ಈ ಕೆಳಗಿ ನಂತಿವೆ.

---



# ರಾಮಾಯಣ

## ಅರಣ್ಯ ಮಾರ್ಗವನ್ನು ಕ್ರಮ ಪಡಿಸಿದ್ದು

• ಹಿಂದಿನ ಸಂಚಿಕೆಯಿಂದ

### 78ನೆಯ ಅಧ್ಯಾಯ

ಆಮೇಲೆ ಮಾರ್ಗದಲ್ಲಿರುವ ಹಳ್ಳತಿಟ್ಟುಗಳನ್ನು ತಿಳಿದು ತಮ್ಮ ವಿನಿಯೋಗಗಳಲ್ಲಿ ಚತುರರಾದ ದುರ್ಗದ ಪಾರುಪತ್ರಗಾರರೂ ಊಳಿಗದವರೂ ಮರಕಡಿಯುವವರೂ ತಮ್ಮ ಊಳಿಗಕ್ಕೆ ತಕ್ಕ ಹಾಗೆ ಗುದ್ದಲಿ ಕೊಡಲಿ ಮಚ್ಚು ಕತ್ತಿ ಕಡಗತ್ತಿ ಕುಡುಗೋಲು ಮೊದಲಾದ ಆಯುಧಗಳನ್ನು ತೆಗೆದುಕೊಂಡು ಶ್ರೀರಾಮನು ಹೋದ ಮಾರ್ಗದಲ್ಲಿದ್ದ ಕೊರಡು ಕಿರುಗಿಡ ಮೊದಲಾದವನ್ನು ಸವರಿ ಹಳ್ಳತಿಟ್ಟುಗಳನ್ನು ಸಮವಾಗಿ ಮಾಡಿದರು. ಹೆಮ್ಮರದ ಕೊರಡು ಕಿರುಗಿಡ ಬಳ್ಳಿಗಳನ್ನು ತೆಗೆದುಹಾಕಿ ಅಲ್ಲಲ್ಲಿದ್ದ ಗುಂಡುಕಲ್ಲುಗಳನ್ನು ಕೆಳಕ್ಕೆ ಉರುಳಿಸಿ ಅಲ್ಲಲ್ಲಿ ನೆರಳಾಗುವಂತೆ ಚಪ್ಪರಗಳನ್ನು ನಿರ್ಮಿಸಿದರು. ಸಣ್ಣ ದೊಡ್ಡ ಕಲ್ಲುಗಳನ್ನು ಚೂರ್ಣಮಾಡಿ ನೆರಳು ನೀರು ಬಹಳವಾದ ಮಾರ್ಗದಲ್ಲಿ ಕಟ್ಟೆಯನ್ನು ಕಟ್ಟಿಸಿದರು. ನೀರಿಲ್ಲದ ಸ್ಥಳದಲ್ಲಿ ಕೊಳಗಳನ್ನು ಕಟ್ಟಿಸಿ ಅಲ್ಲಲ್ಲಿ ನಾನಾವಿಧವಾದ ಜಗಲಿಗಳನ್ನು ನಿರ್ಮಿಸಿದರು. ಪಯಣವಾಗಿ ನಿಲ್ಲುವ ಸ್ಥಳಗಳಲ್ಲಿ ಬಿಡಾರಗಳನ್ನು ಕಟ್ಟಿಸಿ ಬಿಡಾರದ ಗೋಡೆಗಳಿಗೆ ಹಾಲುಗಾರೆಗಳನ್ನು ಮಾಡಿಸಿದರು. ದಾರಿಯನ್ನು ಸುಲಭವಾಗಿ ಮಾಡಿದರು. ತಳಿರುಗಳಿಂದಲೂ ಪುಷ್ಪಮಾಲಿಕೆಗಳಿಂದಲೂ ತೋರಣಗಳನ್ನು ಕಟ್ಟಿಸಿ ತೋರಣಗಳಲ್ಲಿ ರೇಕುಗಳನ್ನಿಟ್ಟು ಅಲಂಕರಿಸಿದರು. ಹೀಗೆ ಆ ಮಾರ್ಗವು ಎಲ್ಲಿನೋಡಿದರೂ ಪುಷ್ಪಿತವಾದ ವೃಕ್ಷಗಳಿಂದಲೂ ಗಿಣಿ ಕೋಗಿಲೆ ನವಿಲು ಹಂಸ ಮೊದಲಾದ ಪಕ್ಷಿಗಳ ಧ್ವನಿಗಳಿಂದಲೂ ಮನೋಹರವಾಗಿ ಅಮರಾವತಿಯ ರಾಜಬೀದಿಯ ರೀತಿಯಲ್ಲಿ ಒಪ್ಪುತ್ತಿತ್ತು. ಭರತನು ಎಲ್ಲೆಲ್ಲಿರಬೇಕೋ ಅಲ್ಲಲ್ಲಿ ಆ ಅಧಿಕಾರಿಗಳು ಉಪ್ಪರಿಗೆ ಗಳಿಂದಲೂ ಮೇಲುಕಟ್ಟುಗಳಿಂದಲೂ ಒಪ್ಪುತ್ತಿದ್ದ ಬಿಡಾರಗಳನ್ನು ನಿರ್ಮಿಸಿ ಕೋಟೆಗಳನ್ನೂ ಕೋಟೆಯ ಬಾಗಿಲುಗಳಿಗೆ ಇಂದ್ರನೀಲರತ್ನಗಳಿಂದ ದ್ವಾರಬಂಧಗಳನ್ನೂ ನಿರ್ಮಿಸಿ ಅಲ್ಲಲ್ಲಿ ಪತಾಕೆಗಳನ್ನು ಕಟ್ಟಿಸಿ ಅಲಂಕಾರಗಳನ್ನು ಮಾಡಿಸಿದರು. ಭರತನ ಸೇನೆಯು ಗಂಗಾನದೀತೀರಕ್ಕೆ ಹೋಗಿ ಅದನ್ನು ಸುಲಭವಾಗಿ ದಾಟಿ ಹೋಗುವ ಹಾಗೆ ಏರ್ಪಾಡನ್ನು ಆ ಅಧಿಕಾರಿಗಳು ಮಾಡಿದರು.

### ಭರತ ನ ಆ ಸ್ಥಾನ ಮಂಟಪ

ಆಮೇಲೆ ಪ್ರಾತಃಕಾಲದಲ್ಲಿ ಮಂಗಳಪಾಠಕರು ಅನೇಕ ಮಂಗಳಸೂಕ್ತಗಳಿಂದಲೂ ಭರತನನ್ನು ಕೊಂಡಾಡುತ್ತಿದ್ದರು. ಚಿನ್ನದ ಕೋಲಿನಿಂದ ಹೊಡೆಯಲ್ಪಟ್ಟು ಭೇರಿಗಳು ಧ್ವನಿಗೈದವು. ಶಂಖಗಳು ಅತ್ಯಂತ ವೆಗ್ಗಳವಾಗಿ ಸ್ವರಗೈಯುತ್ತಿದ್ದವು. ಈ ರೀತಿಯಲ್ಲಿ ಸ್ವರ್ಗ ಲೋಕಕ್ಕೆ ಕೇಳಿಸುವಹಾಗಿದ್ದ ವಾದ್ಯಧ್ವನಿಯನ್ನು ಕೇಳಿ ಭರತನು ಅತ್ಯಂತ ದುಃಖಾಕ್ರಾಂತನಾಗಿ ನಾನು ಹೊರಡುವಾಗ ವಾದ್ಯ ಘೋಷಮಾಡುವುದಕ್ಕೆ ನಾನೇನಾದರೂ ದೊರೆಯೆ! ನನಗೆ ಈ ವಾದ್ಯಘೋಷವು ಏತಕ್ಕೆ ಎಂದು ಹೇಳಿ ಅದನ್ನು ನಿಲ್ಲಿಸಿದನು.ಅವನು ಶತ್ರುಘ್ನನನ್ನು ಕುರಿತು ಶತ್ರುಘ್ನ, ಕೈಕೇಯಾದೇವಿಯು ಮಾಡಿದ ಅಪಕಾರದಿಂದ ದಶರಥರಾಯನು ಧರ್ಮಾತ್ಮನಾದ ಶ್ರೀರಾಮನನ್ನು ವನಕ್ಕೆ ಕಳುಹಿಸಿ ಪುತ್ರಶೋಕದಿಂದ ಶರೀರವನ್ನು ಬಿಟ್ಟು ಸ್ವರ್ಗಸ್ಥನಾದನು.

ಮುಂದುವರಿಯುವುದು...

---

# ಪರಿಸರ ವಿರೋಧಿ ರೋಪ್ ಕೈಬಿಡದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು



ಭಾರತದಲ್ಲೇ ಅತಿ ಎತ್ತರದ ಜೀವ ವೈವಿಧ್ಯತೆಯ ತಾಣ ನಂದಿಬೆಟ್ಟದಲ್ಲಿ ಪರಿಸರ ವಿರೋಧಿ ರೋಪ್‌ವೇ ಯೋಜನೆ ರದ್ದುಪಡಿಸದಿದ್ದರೆ ಉಗ್ರ ಹೋರಾಟ ನಡೆಸುವುದಾಗಿ ರೈತ, ವಿದ್ಯಾರ್ಥಿ ಸಂಘಟನೆಗಳು, ಚಲನ ಚಿತ್ರೋದ್ಯಮ ಸಾಮಾಜಿಕ ಕಾರ್ಯಕರ್ತರು ಪರಿಸರವಾದಿಗಳು ಎಚ್ಚರಿಕೆ ನೀಡಿದ್ದಾರೆ. ಜೊತೆಗೆ ಕಾನೂನು ಹೋರಾಟ ತೀವ್ರಗೊಳಿಸುವುದಾಗಿ ಹೇಳಿದ್ದಾರೆ.

ನಗರದಲ್ಲಿ ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಪಾಲ್ಗೊಂಡ ವಿವಿಧ ಸಂಘಟನೆಗಳ ಮುಖಂಡರು ಪರಿಸರ ಸಂರಕ್ಷಣೆಗಾಗಿ ಹೋರಾಟವೊಂದೇ ಮಾರ್ಗ. ಸರ್ಕಾರ ನಮ್ಮ ಮನವಿಗೆ ಸ್ಪಂದಿಸಿ ನಂದಿ ಬೆಟ್ಟದಲ್ಲಿ ರೋಪ್ ವೇ ನಿರ್ಮಿಸುವುದನ್ನು ರದ್ದುಪಡಿಸಬೇಕು. ಪಂಚ ನದಿಗಳ ಉಗಮ ಸ್ಥಾನವನ್ನು ಸಂರಕ್ಷಿಸಬೇಕು ಎಂದು ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಪರಿಸರ ತಜ್ಞ ಡಾ.ಎ.ಎನ್. ಯಲ್ಲಪ್ಪ ರೆಡ್ಡಿ, ಪ್ರಾಣವಾಯು ಒದಗಿಸುವ ನಂದಿಬೆಟ್ಟ ಭಾರೀ ಕುಲುಷಿತವಾಗಿದ್ದು, ಕಳೆದ ಕೆಲ ವರ್ಷಗಳಲ್ಲಿ 500 ಟ್ರ್ಯಾಕ್ಟರ್ ಪ್ಲಾಸ್ಟಿಕ್, ಮದ್ಯದ ಬಾಟೆಲ್‌ಗಳು, ನಿರೋಧ್ ಮತ್ತಿತರೆ ತ್ಯಾಜ್ಯವನ್ನು ಸಂಗ್ರಹಿಸಲಾಗಿದೆ. ನಂದಿ ಬೆಟ್ಟ ತ್ಯಾಜ್ಯ ಸುರಿಯುವ ತಿಪ್ಪೆಯನ್ನಾಗಿ ಮಾಡಬಾರದು. ಪಂಚನದಿಗಳ ಉಗಮಸ್ಥಾನವಾದ ಇಲ್ಲಿ ಜಲ ಮೂಲ ಬತ್ತಿಹೋಗಿದ್ದು, ಇಲ್ಲಿನ ಶುದ್ಧ ಪರಿಸರ ಹಾಳಾಗಿದೆ. ಮೋಜು, ಮಸ್ತಿ ಮಾಡಲು ಜನ ಇಲ್ಲಿಗೆ ಹೋಗುತ್ತಿದ್ದಾರೆ.

**ಬೆಂಗಳೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಕೆ.ಆರ್. ವೇಣುಗೋಪಾಲ್ ಮಾತನಾಡಿ, ಪರಿಸರ ಸರಂಕ್ಷಣೆ ಪ್ರತಿಯೊಬ್ಬರ ಹೊಣೆ. ತಾವು ಕುಲಪತಿಯಾಗಿದ್ದಾಗ ವಿವಿ ಆವರಣದಲ್ಲಿ ಸಸ್ಯ ಸಂಕುಲ ರಕ್ಷಣೆಗೆ ಒತ್ತು ನೀಡಿದ್ದೆ. ಇದೀಗ ಶೈಕ್ಷಣಿಕ ವಲಯದಿಂದ ಹೋರಾಟಕ್ಕೆ ಬಂಬಲ ನೀಡುವುದಾಗಿ ಹೇಳಿದರು. ಹಿರಿಯ ವಕೀಲ ಶಿವಪ್ರಕಾಶ್ ಮಾತನಾಡಿ, ನಂದಿ ಉಳಿಸಿ ಕುರಿತು ಕಾನೂನು ಹೋರಾಟ ನಡೆಸಿದ್ದು, ಇದನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯುತ್ತೇವೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸರ್ಕಾರಗಳು ಜನಪರವಾಗಿರಬೇಕು. ಜನವಿರೋಧಿ, ಪರಿಸರ ವಿರೋಧಿ ನಿರ್ಧಾರಗಳ ವಿರುದ್ಧ ಜನಾಭಿಪ್ರಾಯದ ಮೂಲಕ ಹೋರಾಟ ಆರಂಭವಾಗಬೇಕು ಎಂದು ಹೇಳಿದರು. ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಮಂಜುನಾಥ್ ಹೆಗಡೆ ಮತ್ತಿತರರು ಉಪಸ್ಥಿತರಿದ್ದರು.**

**500 ಟ್ರ್ಯಾಕ್ಟರ್ ಪ್ಲಾಸ್ಟಿಕ್ ತ್ಯಾಜ್ಯ**

ನಂದಿ ಬೆಟ್ಟದ ಮೇಲೆ ವಾಹನಗಳ ಸಂಚಾರ ನಿಷೇಧಿಸಬೇಕು. ಇಲ್ಲಿನ ಪರಿಸರ ಬೇಕಿದ್ದರೆ ನಡೆದುಕೊಂಡು ಹೋಗಿ ಆಸ್ವಾದಿಸುವ ಪರಿಸ್ಥಿತಿ ನಿರ್ಮಾಣವಾಗಬೇಕು. ನಂದಿ ಬೆಟ್ಟ ರಕ್ಷಿಸಲು ಅಭಿಯಾನಕ್ಕೆ ಹೋರಾಟದ ಸ್ವರೂಪ ನೀಡಬೇಕು ಎಂದು ಹೇಳಿದರು.

ವಿಶ್ವಮಾನವ ಹಕ್ಕುಗಳ ಸೇವಾ ಪ್ರತಿಷ್ಠಾನದ ಅಧ್ಯಕ್ಷ ಸಿ.ಡಿ. ಕಿರಣ್ ಮಾತನಾಡಿ, ನಂದಿಬೆಟ್ಟ ಉಳಿಸಲು ಭಾರೀ ಪ್ರಮಾಣದಲ್ಲಿ ಅಭಿಯಾನ ನಡೆಸುತ್ತಿದ್ದು, ಕಾನೂನು ಹೋರಾಟವನ್ನೂ ಸಹ ಮಾಡುತ್ತಿದ್ದೇವೆ. ರೋಪ್ ವೇ ಯೋಜನೆ ಕೈಬಿಡಬೇಕು. ಇಲ್ಲವಾದಲ್ಲಿ ಸಾರ್ವಜನಿಕ ಸಂವಾದ ನಡೆಸಬೇಕು. ಪರಸರಕ್ಕೆ ಮಾರಕವಾಗುವ ನಿರ್ಧಾರಗಳಿಗೆ ಅವಕಾಶ ನೀಡುವುದಿಲ್ಲ.

ಇಲ್ಲಿನ ಜಲ ಸಂಪತ್ತು ರಕ್ಷಿಸುವ ಜೊತೆಗೆ ನಂದಿ ಭಾಗದ ಜೀವ ವೈವಿಧ್ಯತೆಯ ಸಂರಕ್ಷಣೆಗೆ ನಮ್ಮ ಪ್ರತಿಷ್ಠಾನ ಟೊಂಕಕಟ್ಟಿ ನಿಂತಿದೆ. ಬೇಕಿದ್ದರೆ ಇಲ್ಲಿ ಪರಿಸರ ಸ್ನೇಹಿ ಚಾರಣ, ಸುಸ್ಥಿರ ಪ್ರವಾಸೋದ್ಯಮ ಚಟುವಟಿಕೆ ಗಳು, ನೈಸರ್ಗಿಕ ಸೌಂದರ್ಯ ರಕ್ಷಣೆಗೆ ಸರ್ಕಾರ ಮುಂದಾಗಬೇಕು ಎಂದು ಹೇಳಿದರು. ಬಾರ್ಕೂರು ಸಂಸ್ಥಾನ ಮಠದ ಸಂತೋಷ್ ಗುರೂಜಿ ಮಾತನಾಡಿ, ನಮ್ಮ ಹೋರಾಟ ಯಾವುದೇ ಪಕ್ಷದ ವಿರುದ್ಧವಲ್ಲ. ಪ್ರಕೃತಿ ನಾಶದಿಂದ ಉತ್ತರ ಕನ್ನಡ, ಕೊಡಗು ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾನದಲ್ಲಿ ಭೂ ಕುಸಿತ ಸಂಭವಿಸಿದೆ. ನಂದಿಬೆಟ್ಟದ ಮೇಲೆ ಇದೇ ರೀತಿ ದೌರ್ಜನ್ಯ ನಡೆಸಿದರೆ ಬೆಟ್ಟ ಕುಸಿಯಲಿದೆ. ಇಲ್ಲಿ ಔಷಧೀಯ ಸಸ್ಯಗಳನ್ನು ಬೆಳೆಸಬೇಕು. ಆರೋಗ್ಯಕರ ಪರಿಸರ ವಾತಾವರಣ ನಿರ್ಮಾಣ ಮಾಡಬೇಕು ಎಂದರು.

ಚಿತ್ರನಿರ್ದೇಶಕ ರಾಜೇಂದ್ರ ಸಿಂಗ್ ಬಾಬು ಮಾತನಾಡಿ, ಕನ್ನಡದ ನಾಡು ನುಡಿ, ಜಲ. ಸಂಸ್ಕೃತಿ ವಿಚಾರ ಬಂದಾಗ ಚಿತ್ರೋದ್ಯಮ ಸದಾ ಕಾಲ ಬೆಂಬಲವಾಗಿ ನಿಂತಿದೆ. ನಂದಿ ಬೆಟ್ಟದ ವಿಚಾರದಲ್ಲೂ ಚಿತ್ರೋದ್ಯಮ ಅಖಂಡ ಬೆಂಬಲ ನೀಡಲಿದ್ದು, ಹೋರಾಟದಲ್ಲಿ ನಾವೂ ಕೂಡ ಭಾಗಿಯಾಗುತ್ತೇವೆ. ನಂದಿ ಬೆಟ್ಟದಲ್ಲಿ ಪರಿಸರ ವಿರೋಧಿ ಕ್ರಮಗಳನ್ನು ಕೈಗೊಂಡರೆ ಆಗಬಹುದಾದ ದುಷ್ಪರಿಣಾಮಗಳ ಬಗ್ಗೆ ನಟ, ನಟಿಯರಿಂದ ಸಣ್ಣ ಸಣ್ಣ ವಿಡಿಯೋಗಳನ್ನು ಮಾಡಿ, ಜನ ಸಮುದಾಯದಲ್ಲಿ ಜನಜಾಗೃತಿ ಮೂಡಿಸುವುದಾಗಿ ಹೇಳಿದರು.

**ರೈತ ನಾಯಕಿ ಸುನಂದಾ ಜಯರಾಂ ಮಾತನಾಡಿ, ಕೆ.ಆರ್.ಎಸ್ ಅನ್ನು ಡಿಸ್ನಿಲ್ಯಾಂಡ್ ಮಾದರಿಯಲ್ಲಿ ಅಭಿವೃದ್ಧಿಪಡಿಸುವ ಸರ್ಕಾರದ ತೀರ್ಮಾನದ ವಿರುದ್ಧ ಹೋರಾಟ ಮಾಡಿ ಗೆಲುವು ಸಾಧಿಸಿದ್ದೇವೆ. 93 ಕೋಟಿ ರೂ ವೆಚ್ಚದಲ್ಲಿ ಕಾವೇರಿ ಆರತಿ ಮಾಡುವ ಅವೈಜ್ಞಾನಿಕ ನಿರ್ಧಾರದ ವಿರುದ್ಧ ಇದೀಗ ಹೋರಾಟಕ್ಕೆ ಅಣಿಯಾಗಿದ್ದೇವೆ. ಹೋರಾಟದಿಂದ ಮಾತ್ರ ಸರ್ಕಾರವನ್ನು ಮಣಿಸಲು ಸಾಧ್ಯ. ಹೀಗಾಗಿ ನಂದಿ ಉಳಿಸಿ ಹೋರಾಟಕ್ಕೆ ನಮ್ಮ ಬೆಂಬಲವಿದೆ ಎಂದರು.**

## ಜನರ ಸಮಸ್ಯೆಗೆ ಸ್ಪಂದಿಸಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಪುತ್ತೂರು

ತಳಮಟ್ಟದ ಜನರ ಬಹಳಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಅವರ ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಪಕ್ಷದ ಕಾರ್ಯಕರ್ತರು ಕೆಲಸ ಮಾಡಬೇಕು. ರೇಷನ್ ಕಾರ್ಡ್ ಸಮಸ್ಯೆ, ಅನಾರೋಗ್ಯ ಸಮಸ್ಯೆ ಮೊದಲಾದ ವಿಚಾರಗಳಿಗೆ ಸ್ಪಂದನೆ ನೀಡುವ ಮೂಲಕ ಜನರ ಪ್ರೀತಿ ಗಳಿಸಬೇಕು' ಎಂದು ಶಾಸಕ ಅಶೋಕ್ ಕುಮಾರ್ ರೈ ಹೇಳಿದರು. ಪುತ್ತೂರು ತಾಲ್ಲೂಕಿನ ಮಾಡೂರು ಗ್ರಾಮ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳಿಗೆ ಚಾಲನೆ, ಶಿಲಾನ್ಯಾಸ ನೆರವೇರಿಸಿ ಅವರು ಮಾತನಾಡಿದರು.

ಕ್ಷೇತ್ರದಲ್ಲಿ 16 ಕೋಟಿಯ ಕಾಮಗಾರಿಗಳಿಗೆ ಶಿಲಾನ್ಯಾಸ ಮಾಡಲಾಗುತ್ತಿದ್ದು, ಈಗಾಗಲೇ ಹಲವು ಕಡೆಗಳಲ್ಲಿ ಕಾಮಗಾರಿಗಳು ಆರಂಭಗೊಂಡಿದೆ. ಮುಂದಿನ ದಿನಗಳಲ್ಲಿ 15 ಕೋಟಿ ಅನುದಾನದ ಜತೆಗೆ ಅಲ್ಪಸಂಖ್ಯಾತ ನಿಗಮ ಸೇರಿದಂತೆ ಬೇರೆ ಬೇರೆ ಅನುದಾನಗಳು ಬರಲಿದ್ದು, ಅದನ್ನು ವ್ಯವಸ್ಥಿತವಾಗಿ ಹಂಚುವ ಕೆಲಸ ಮಾಡಲಾಗುವುದು ಎಂದರು.

**ವಿವಿಧ ಕಾಮಗಾರಿಗಳ ಉದ್ಘಾಟನೆ, ಶಿಲಾನ್ಯಾಸ:** 30 ಲಕ್ಷ ಅನುದಾನದಲ್ಲಿ ನಡೆದ ಮಾಡನ್ನೂರು–ಅಂಕೋತ್ತಿಮಾರ್ ಕಾಂಕ್ರಿಟ್ ರಸ್ತೆ, 5 ಲಕ್ಷ ವೆಚ್ಚದ ಕಾವು ರಿಕ್ಷಾ ತಂಗುದಾಣ, 15 ಲಕ್ಷ ಅನುದಾನದಲ್ಲಿ ಕೈಗೊಂಡ ಕಾವು–ಸಸ್ಪೇಟಿ ಕಾಂಕ್ರಿಟ್ ರಸ್ತೆಯನ್ನು ಉದ್ಘಾಟಿಸಲಾಯಿತು.

ಕೊಳ್ತಿಗೆ ಗ್ರಾಮದ ಬದಿಯಡ್ಕ ಅಲ್ಪಸಂಖ್ಯಾತ ಕಾಲೊನಿಯ ರಸ್ತೆ, ಕಾವು–ಉಜಿರುಗುರಿ ಕಾಲೋನಿ ರಸ್ತೆ ಕಾಮಗಾರಿಗಳಿಗೆ ಶಿಲಾನ್ಯಾಸ ನೆರವೇರಿಸಲಾಯಿತು.

• ಮೂಲ ಸೌಕರ್ಯ ವಂಚಿತ ಕೌಜಲಗಿ ಗ್ರಾಮ, ಗಮನ ಕೊಡದ ಪಂ. ಅಧಿಕಾರಿಗಳು

# ದೊಡ್ಡ ಊರಿನಲ್ಲಿ ಸಮಸ್ಯೆಗಳೇ ದೊಡ್ಡವು

• ಉದಯವಾಹಿನಿ, ಕೌಜಲಗಿ

ಗೋಕಾಕ ತಾಲ್ಲೂಕಿನ ಅತಿ ದೊಡ್ಡ ಗ್ರಾಮವಾದ ಕೌಜಲಗಿ ಹೋಬಳಿ ಕೇಂದ್ರವೂ ಆಗಿದೆ. ಶಿಕ್ಷಣ ಹಾಗೂ ವಾಣಿಜ್ಯ ಕ್ಷೇತ್ರದಲ್ಲಿ ಬೆಳವಣಿಗೆ ಕಂಡರೂ, ಮೂಲಸೌಕರ್ಯಗಳಲ್ಲಿ ಮಾತ್ರ ಹಿಂದೆ ಬಿದ್ದಿದೆ. ಈ ಊರಿನ ರಸ್ತೆಗಳು, ಬಸ್ ನಿಲ್ದಾಣ, ಗ್ರಂಥಾಲಯಗಳ ಸ್ಥಿತಿಯೇ ಇದಕ್ಕೆ ಕನ್ನಡಿ ಹಿಡಿಯುತ್ತದೆ.

ಗ್ರಾಮದ ಪ್ರತಿಯೊಂದು ರಸ್ತೆ ದುರವಸ್ಥೆಯಿಂದ ಕೂಡಿದೆ. ಮಳೆಗಾಲದಲ್ಲಂತೂ ವಯಸ್ಸಾದವರು ಮತ್ತು ಚಿಕ್ಕ ಮಕ್ಕಳು ಮನೆಯನ್ನು ಬಿಟ್ಟು ಬರುವ ಹಾಗಿಲ್ಲ. ಬಸವೇಶ್ವರ ಪೇಟೆಯ ರಸ್ತೆಗೆ ಬಹಳ ವರ್ಷಗಳ ಹಿಂದೆ ಸಿಮೆಂಟ್ ಹಾಕಿದ್ದು, ಎಲ್ಲವೂ ಕಿತ್ತುಹೋಗಿದೆ. ತಗ್ಗುಗಳಲ್ಲಿ ನೀರು ಸಂಗ್ರಹಗೊಂಡು ಹಂದಿ, ನಾಯಿ, ಬಿಡಾಡಿ ದನಗಳಿಗೆ ಈಜುಗೊಳ ನಿರ್ಮಾಣವಾಗಿವೆ.

ಗ್ರಾಮ ಪಂಚಾಯಿತಿಯ ಕೆಲ ಸದಸ್ಯರ ಮನೆಗಳ ಮುಂದೆಯೂ ರಸ್ತೆ ಹಾಳಾಗಿದೆ. ಆದರೂ ಕಣ್ಣೆತ್ತಿ ನೋಡಲು ಸಿದ್ಧರಿಲ್ಲ. ರೈತಾಪಿ ಜನ ದಿನವೂ ಎತ್ತು ಚಕ್ಕಡಿ ಓಡಿಸಿಕೊಂಡು ಹೋಗುವುದು ಕಷ್ಟವಾಗಿದೆ. ದನಕರುಗಳಿಗೆ ಸೈಕಲ್, ಬೈಕುಗಳ ಮೇಲೆ ಮೇವಿನ ಹೊರೆ ತರುವುದು ಸರ್ಕಸ್ ಮಾಡಿದಂತೆಯೇ ಸರಿ.

ಇನ್ನೊಂದೆಡೆ, ಗ್ರಾಮ ಪಂಚಾಯಿತಿ ಮುಂದಿರುವ ಚರಂಡಿಗಳೇ ದುರ್ಗಂಧ ಬೀರುತ್ತಿವೆ. ಬಸ್ ನಿಲ್ದಾಣದಲ್ಲೂ ಸಾಕಷ್ಟು ತ್ಯಾಜ್ಯ ಸಂಗ್ರಹವಾಗಿದೆ. ಆದರೆ, ಅಧಿಕಾರಿಗಳು ಶುಚಿತ್ವಕ್ಕೆ ಗಮನ ಹರಿಸಿಲ್ಲ. ಶಾಲೆ– ಕಾಲೇಜಿಗೆ


ಉದಯವಾಹಿನಿ ಚಿತ್ರ

> ಗ್ರಾಮದ ಎಲ್ಲಾ ರಸ್ತೆಗಳಲ್ಲಿ ಸಿಮೆಂಟ್ ರಸ್ತೆಗಳು ನಿರ್ಮಾಣವಾದರೆ ವಾಹನ ಸಂಚಾರಕ್ಕೆ ಅನುಕೂಲವಾಗುತ್ತದೆ. ಪ್ರಮುಖ ರಸ್ತೆಗಳ ವಿಸ್ತರಣೆಯೂ ಅಗತ್ಯ.
> – ಅಜಯ ಲೋಕನ್ನವರ ,ಗ್ರಾಮಸ್ಥ

> ಕೌಜಲಗಿಯ ಕೆಲವು ಓಣಿಗಳಲ್ಲಿ ಗಟಾರು ರಸ್ತೆಗಳ ಸ್ವಚ್ಛತೆ ಮಾಡಿಲ್ಲ. ಇದರಿಂದ ಮಲಿನ ವಾತಾವರಣದಿಂದ ರೋಗ ಹರಡಬಹುದು.
> –ಮಾರುತಿ ಭಜಂತ್ರಿ ,ಗ್ರಾಮಸ್ಥ

ಹೋಗಬೇಕಾದ ವಿದ್ಯಾರ್ಥಿಗಳು ದಿನವೂ ದುರ್ನಾತದ ಸಂಕಷ್ಟ ಎದುರಿಸುವುದು ಸಾಮಾನ್ಯವಾಗಿದೆ.

**ಬೇಕಿದೆ ಸ್ವಚ್ಛ ನೀರು:** ಗ್ರಾಮದ ಜನರ ಕುಡಿಯುವ ನೀರಿಗಾಗಿ 'ಮಹಲಗುಂಡ' ಎಂಬ ಒಂದೇ ಬಾವಿ ಇದೆ. ಮೊದಲು ಗ್ರಾಮಸ್ಥರು ಈ ಬಾವಿ


ಉದಯವಾಹಿನಿ ಚಿತ್ರ

ಯಿಂದ ನೀರನ್ನು ಸೇದಿಕೊಂಡು ಕುಡಿಯಲು ಬಳಸುತ್ತಿದ್ದರು. ಈಗ ಕೆಲವೇ ಕೆಲವರಿಗೆ ಮಾತ್ರ ಈ ಬಾವಿಯ ನೀರು ಪೂರೈಕೆಯಾಗುತ್ತಿದೆ. ಕೆಲವು ಓಣಿಯ ಜನತೆಗೆ ಪೂರೈಕೆ ಸರಿಯಾಗಿ ಆಗುತ್ತಿಲ್ಲವೆಂದು ಸ್ಥಳೀಯರು ದೂರಿದ್ದಾರೆ.

ಶುಕ್ರವಾರ ವಾರದ ಸಂತೆಯಲ್ಲಿ ಅತ್ಯಂತ ಜನದಟ್ಟನೆ ಆಗುತ್ತದೆ. ದ್ವಿಚಕ್ರವಾಹನಗಳನ್ನು ಎಲ್ಲೆಂದರಲ್ಲಿ ಬೇಕಾಬಿಟ್ಟಿಯಾಗಿ ನಿಲ್ಲಿಸಲಾಗುತ್ತದೆ. ಇದರಿಂದ ವ್ಯಾಪಾರಿಗಳಿಗೂ, ಗ್ರಾಹಕರಿಗೂ ಸಂಕಷ್ಟ ತಪ್ಪಿಲ್ಲ. ಪೊಲೀಸ್ ಇಲಾಖೆ ಹಾಗೂ ಗ್ರಾಮ ಪಂಚಾಯಿತಿ ಆಡಳಿತದವರು ಈ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಗೋಜಿಗೂ ಹೋಗಿಲ್ಲ.

ಗ್ರಾಮದ ವ್ಯಾಪ್ತಿ ದೊಡ್ಡದಾಗಿದೆ. ತಾಲ್ಲೂಕು ಕೇಂದ್ರವಾಗುವಷ್ಟು ವಿಶಾಲವಾಗಿದೆ. ಸಾರ್ವಜನಿಕ ಶಾಂತಿ– ಸುವ್ಯವಸ್ಥೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ಅದಕ್ಕಾಗಿ ಒಂದು ಪ್ರತ್ಯೇಕ ಪೊಲೀಸ್ ಠಾಣೆಗೆ ಮಂಜೂರು ಮಾಡಬೇಕು ಎಂಬ ದಶಕದ ಬೇಡಿಕೆಗೂ ಸರ್ಕಾರ ಸ್ಪಂದಿಸಿಲ್ಲ. ಇದರಿಂದ ಅಕ್ರಮ ಹಾಗೂ ಅಪರಾಧ ಪ್ರಕರಣಗಳಿಗೆ ಕಡಿವಾಣ ಬಿದ್ದಿಲ್ಲ ಎಂಬುದು ಜನರ ಆರೋಪ.

### ಮೂಲಸೌಕರ್ಯಕ್ಕೆ ಆದ್ಯತೆ

ಪಿಡಿಒ ಗ್ರಾಮದ ಮೂಲ ಸೌಕರ್ಯಗಳಿಗೆ ಪ್ರಾಮಾಣಿಕವಾಗಿ ಪ್ರಯತ್ನಿಸುತಿದ್ದೇವೆ. ಸ್ವಚ್ಛತೆ ಮತ್ತು ಕುಡಿಯುವ ನೀರಿಗಾಗಿ ಹೆಚ್ಚಿನ ಗಮನಹರಿಸುತ್ತೇವೆ ಎಂದು ಪಿಡಿಪ ಪರಶುರಾಮ ಇಟಗೌಡರ ಪ್ರತಿಕ್ರಿಯೆ ನೀಡಿದ್ದಾರೆ. ಸರ್ಕಾರಿ ಆಸ್ಪತ್ರೆ ಮತ್ತು ಪಶು ಆಸ್ಪತ್ರೆ ವೈದ್ಯರು ಸಿಬ್ಬಂದಿ ಸರಿಯಾಗಿ ಸ್ಪಂದಿಸುತ್ತಿಲ್ಲ. ಸಾರ್ವಜನಿಕರಿಗೆ ಸೂಕ್ತವಾದ ಮಾಹಿತಿಗಳನ್ನು ಒದಗಿಸಿಕೊಡುತ್ತಿಲ್ಲ. ಆಸ್ಪತ್ರೆಗಳಲ್ಲಿ ಕೆಲ ಅಕ್ರಮಗಳು ನಡೆದ ಸಂಶಯವಿದೆ. ಅಧಿಕಾರಿಗಳ ಗಮನಹರಿಸಬೇಕು ಎಂದು ಮಾಹಿತಿ ಹಕ್ಕು ಕಾರ್ಯಕರ್ತ ಸಂಜೀವ ಮಿರ್ಜಿ ಆಗ್ರಹಿಸುತ್ತಾರೆ.

## ಮಿನಿ ನ್ಯೂಸ್

### ಬಸ್ ಮಾರ್ಗಕ್ಕೆ ಶಾಸಕರಿಂದ ಚಾಲನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಹಿರೀಸಾವೆ

ಚನ್ನರಾಯಪಟ್ಟಣದಿಂದ ತುರುವೇಕೆರೆ ಮಾರ್ಗದ ಬಸ್ ಸಂಚಾರಕ್ಕೆ ಶಾಸಕ ಸಿ.ಎನ್. ಬಾಲಕೃಷ್ಣ ಹೋಬಳಿಯ ದಿಡಗ ಗ್ರಾಮದಲ್ಲಿ ಚಾಲನೆ ನೀಡಿದರು.

ಶಾಸಕರು ಮಾತನಾಡಿ, ಗಡಿ ಗ್ರಾಮಗಳ ಜನರು ಚನ್ನರಾಯಪಟ್ಟಣ ಮತ್ತು ತುರುವೇಕೆರೆ ಹೋಗಿ ಬರಲು ಸಾರಿಗೆ ಸೌಲಭ್ಯ ಕಲ್ಪಿಸುವಂತೆ ಹಲವು ವರ್ಷಗಳ ಬೇಡಿಕೆಯಾಗಿತ್ತು. ಅದರಂತೆ ಪ್ರತಿ ನಿತ್ಯ ಬೆಳಗ್ಗೆ ಮತ್ತು ಸಂಜೆ ಹಿರೀಸಾವೆ–ದಿಡಗ ಮಾರ್ಗವಾಗಿ ಬಸ್ ಸಂಚಾರ ಮಾಡಲಿದೆ. ಸುರಕ್ಷತೆ ದೃಷ್ಟಿಯಿಂದ ಸಾರ್ವಜನಿಕರು ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ರಯಾಣ ಮಾಡಬೇಕು ಎಂದರು.

## ತರಗತಿಗಳು ಏಳು – ಕೋಣೆ ಒಂದು: ಸರಕಾರಿ ಶಾಲೆಯ ದುಸ್ಥಿತಿ

• ಉದಯವಾಹಿನಿ, ಇಂಡಿ

ಇಂಡಿ ತಾಲ್ಲೂಕಿನ ಚಿಕ್ಕಮಣೂರದ ಭೀಮ ನಗರ ಸರಕಾರಿ ಶಾಲೆಯ ಸ್ಥಿತಿ ದುಸ್ಥಿತಿಯಲ್ಲಿದೆ. ಇಲ್ಲಿ ಒಂದರಿಂದ ಏಳನೆಯ ತರಗತಿಯ ವರೆಗೆ ವರ್ಗಗಳು ಇವೆ. ಈ ಶಾಲೆಯಲ್ಲಿ 105 ಮಕ್ಕಳು ಓದುತ್ತಿದ್ದಾರೆ. ಇಲ್ಲಿ ಆರು ಕೊಠಡಿಗಳಿವೆ. ಅದರಲ್ಲಿ ಒಂದು ಮಾತ್ರ ಒಳ್ಳೆಯ ಸ್ಥಿತಿಯಲ್ಲಿದ್ದು ಎರಡು ಕೋಣೆಗಳು ಪೂರ್ಣವಾಗಿ ಬಿದ್ದಿವೆ. ಮತ್ತು ಎರಡು ಕೋಣೆಗಳು ಮಳೆ ಬಂದರೆ ಸಂಪೂರ್ಣ ಸೋರುತ್ತಿವೆ. ಒಂದು ಮೇಲ್ಛಾವಣೆಯಿಂದ ಸಿಮೆಂಟ ಉದುರಿ ಬೀಳುತ್ತಿದೆ. ಹೀಗಾಗಿ ಒಂದೇ ಕೋಣೆಯಲ್ಲಿ ಮಾತ್ರ ಎಲ್ಲಾ ವಿದ್ಯಾರ್ಥಿಗಳು ಓದುವ ಅನಿವಾರ್ಯತೆ ಎದುರಾಗಿದೆ. ಒಂದು ಕೋಣೆಯಲ್ಲಿ ತರಗತಿಗಳು ತೆಗೆದುಕೊಂಡು 2 ತರಗತಿಗಳಿಗೆ ಕೋಣೆಗೆ ಹತ್ತಿದ ಕಂಪೌಂಡದಲ್ಲಿ ಮತ್ತು ಎರಡು ತರಗತಿಗಳಿಗೆ ಗಿಡದ ಕೆಳಗೆ ತರಗತಿ ನಡೆಸುತ್ತಿದ್ದಾರೆ. ಇಲ್ಲಿ ಮಳೆಯಾದರೆ ಮೊದಲು ಶಿಕ್ಷಕರು ವಿದ್ಯಾರ್ಥಿಗಳನ್ನು ಮನೆಗೆ ಕಳುಹಿಸುತ್ತಾರೆ. ಶಾಲೆಯ ಎಸ್.ಡಿ.ಎಂ.ಸಿ ಅಧ್ಯಕ್ಷ ಗಡ್ಡಿಲಿಂಗ ಪೂಜಾರಿ ಶಾಲೆಗೆ ಕೋಣೆ ಕಟ್ಟಿಸಿ ಕೊಡುವಂತೆ ಗ್ರಾ.ಪಂ ಅಧ್ಯಕ್ಷರಿಗೆ, ಗ್ರಾ.ಪಂ ಪಿಡಿಒ, ತಾಪಂ ಇಒ ಮತ್ತು ಶಿಕ್ಷಣ ಇಲಾಖೆ ಅಧಿಕಾರಿ ಹಲವಾರು ಬಾರಿ ಮನವಿ ಮಾಡಿದ್ದಾರೆ. ಆದರೆ ಏನೂ ಪ್ರಯೋಜನವಾಗಿಲ್ಲ.




ಉದಯವಾಹಿನಿ ಚಿತ್ರ

> ಈ ಹಿಂದಿನ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಹಲವಾರು ಬಾರಿ ಲಿಖಿತ ಮತ್ತು ಮೌಖಿಕ ಮನವಿ ಮಾಡಿದ್ದೇವೆ. ಅವರು ಸೌಜನ್ಯಕ್ಕೂ ಶಾಲೆಯ ಪರಿಸ್ಥಿಯ ಕುರಿತು ಮೇಲಾಧಿಕಾರಿಗಳಿಗೆ ಪತ್ರ ಬರೆಯದೇ ಇರುವದು ಅತ್ಯಂತ ದುರ್ದೈವ.
> –ಬಾದಶಹಾ ಶೇಖ, ಎಸ್.ಡಿ.ಎಂ.ಸಿ ಸದಸ್ಯರು ಸರಕಾರಿ ಪ್ರೌಢಶಾಲೆ ಭೀಮ ನಗರ ಚಿಕ್ಕಮಣೂರ

> ಈ ಶಾಲೆಗೆ ಕೋಣೆಗಳನ್ನು ಕಟ್ಟಿಸಿ ಕೊಡಬೇಕು. ಇಲ್ಲದಿದ್ದರೆ ಎಲ್ಲಾ ಎಸ್.ಡಿ.ಎಂ.ಸಿ ಸದಸ್ಯರು ಮತ್ತು ಪಾಲಕರ ಜೊತೆ ಗ್ರಾಮಸ್ಥರ ಸಹಕಾರದೊಂದಿಗೆ ಶಾಲೆಯ ಎದುರು ಇಲ್ಲವೆ ಶಿಕ್ಷಣ ಇಲಾಖೆ ಎದುರು ಧರಣಿ ಸತ್ಯಾಗ್ರಹ ಮಾಡಲಾಗುವದು.
> –ಗಡ್ಡಿಲಿಂಗ ಪೂಜಾರಿ, ಎಸ್.ಡಿ.ಎಂ.ಸಿ ಅಧ್ಯಕ್ಷರು ಸರಕಾರಿ ಪ್ರೌಢಶಾಲೆ ಭೀಮ ನಗರ ಚಿಕ್ಕಮಣೂರ

## ಕಟ್ಟಡ ಕಾರ್ಮಿಕರಿಗೆ ಸಹಾಯ ಧನ ಸೌಲಭ್ಯ ಒದಗಿಸಲು ಒತ್ತಾಯ

• ಉದಯವಾಹಿನಿ ಸಂಡೂರು

ಕಟ್ಟಡ ಕಾರ್ಮಿಕರ ವಸತಿ ನಿರ್ಮಾಣಕ್ಕೆ 5ಲಕ್ಷ ಸಹಾಯ ಧನ, ವಿದ್ಯಾರ್ಥಿ ವೇತನ, ಹೆರಿಗೆ, ಮದುವೆ ಸೇರಿದಂತೆ ಇತರೆ ಸೌಲಭ್ಯಗಳಿಗೆ ಸರ್ಕಾರವು ಶೀಘ್ರವಾಗಿ ಸೂಕ್ತ ಸಹಾಯ ಧನವನ್ನು ಸಕಾಲಕ್ಕೆ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕ ಸಂಘದ ಸಂಡೂರು ತಾಲ್ಲೂಕು ಅಧ್ಯಕ್ಷ ವಿ.ದೇವಣ್ಣ ಮಾತನಾಡಿದರು.

ತಾಲ್ಲೂಕಿನ ಹೊಸದರೋಜಿ ಗ್ರಾಮದಲ್ಲಿ ಬುಧವಾರ ಕರ್ನಾಟಕ ರಾಜ್ಯ, ಕಟ್ಟಡ, ಇತರೆ ನಿರ್ಮಾಣ ಕಾರ್ಮಿಕ ಸಂಘದ ಸಂಡೂರು ತಾಲ್ಲೂಕು ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಸಭೆಯಲ್ಲಿ ತಾಲ್ಲೂಕು ಸಮಾವೇಶದ ಕರ ಪತ್ರ ಬಿಡುಗಡೆಗೊಳಿಸಿ ಮಾತನಾಡಿದರು. ನೈಜ ಕಟ್ಟಡ ಕಾರ್ಮಿಕರಿಗೆ ಹೊಸ ನೊಂದಾವಣೆಗಾಗಿ ಸೂಕ್ತ ಕ್ರಮವಹಿಸಬೇಕು. ಬಡ ಕಾರ್ಮಿಕರು ಸುಂದರ ಬದುಕನ್ನು ಕಟ್ಟಿಕೊಳ್ಳಲು 1996 ರ ಸರ್ಕಾರದ ಕಾರ್ಮಿಕ ಕಾನೂನುಗಳನ್ನು ಸಮರ್ಪಕವಾಗಿ ಜಾರಿಗೊಳಿಸಬೇಕು. ಮುಂದಿನ ದಿನಗಳಲ್ಲಿ ಕಾರ್ಮಿಕರ ಸಾಮಾವೇಶವನ್ನು ಹಮ್ಮಿಕೊಳ್ಳಲಾಗುವುದು' ಎಂದರು. ಹಾಲಸ್ವಾಮಿ, ತಿಮ್ಮಪ್ಪ, ಸಣ್ಣರಂಗಸ್ವಾಮಿ, ವಿವಿಧ ಗ್ರಾಮಗಳ ಸದಸ್ಯರು ಪಾಲ್ಗೊಂಡಿದ್ದರು.

## ಕುಟುಂಬಕ್ಕಾಗಿ ಮುಡಿಪಾಗಿರುವ ಜೀವ ತಂದೆ

• ಉದಯವಾಹಿನಿ ಮುದ್ದೇಬಿಹಾಳ

ಜೀವನದಲ್ಲಿಯ ತನ್ನ ಆಸೆ ಆಕಾಂಕ್ಷೆಗಳನ್ನು ಪಕ್ಕಕ್ಕಿಟ್ಟು ತನ್ನ ಜವಾಬ್ದಾರಿಗಳನ್ನು ಪೂರೈಸುತ್ತಾ ಮಕ್ಕಳ ಶ್ರೇಯೋಭಿವೃದ್ದಿಗಾಗಿ ಹಗಲಿರುಳು ಶ್ರಮಿಸುವ ತನ್ನ ಜೀವಿತ ಅವಧಿಯ ಆಯುಷ್ಯವನ್ನು ಮಕ್ಕಳಿಗಾಗಿ ತನ್ನ ಕುಟುಂಬಕ್ಕಾಗಿ ಮುಡಿಪಾಗಿಡುವ ತ್ಯಾಗಮಯಿ ಜೀವ ಎಂದರೆ ಅದು ಅಪ್ಪ ಎಂದು ಡಾ. ವಿರೇಶ ಪಾಟೀಲ್ ಹೇಳಿದರು.

ಅವರು ತಾಲ್ಲೂಕಿನ ಕೇಸಾಪೂರ ಗ್ರಾಮದ ಸಿದ್ದಾರ್ಥ ಪಬ್ಲಿಕ್ ಸ್ಕೂಲ್‌ನಲ್ಲಿ ವಿಶ್ವ ತಂದೆಯರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು ಮಕ್ಕಳ ಸುಖ ಸಂತೋಷಕ್ಕಾಗಿ ಅವರ ಭವಿಷ್ಯವನ್ನು ರೂಪಿಸಲು ಪ್ರತಿಯೊಬ್ಬ ತಂದೆ ತಾಯಿ ಶ್ರಮಿಸುತ್ತಾರೆ ಅವರ ತ್ಯಾಗವನ್ನು ಮಕ್ಕಳು ಅರಿಯಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಎಲ್ ಕೆ ಜಿ ಯುಕೆಜಿ ಮಕ್ಕಳು ತಮ್ಮ ತಂದೆಯರ ಪಾದಪೂಜೆಯನ್ನು ಮಾಡಿ ವಿಶ್ವ ತಂದೆಯರ ದಿನಾಚರಣೆಯ ಶುಭಾಶಯ ಕೋರುವ ಮೂಲಕ ಗಮನಸಳೆದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷೆ ಶ್ರೀಮತಿ ಸರಸ್ವತಿ ಖಾನಾಪುರ ಹಾಗೂ ಪಾಲಕರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಶಿಕ್ಷಕಿ ರಿಹಾನಾ ಆಲೂರ ನಿರೂಪಿಸಿದರು.ಶಿಕ್ಷಕಿ ಅಂಬಿಕಾ ವೀರಕಂತಮಠ ಸ್ವಾಗತಿಸಿ ವಂದಿಸಿದರು.



ಉದಯವಾಹಿನಿ ಚಿತ್ರ

> ಸಿದ್ದಾರ್ಥ ಶಿಕ್ಷಣ ಸಂಸ್ಥೆ ಕಾರ್ಯದರ್ಶಿ ರಾಮಣ್ಣ ಖಾನಾಪುರ, ಪ್ರಾಂಶುಪಾಲ ಮಾರುತಿ ರುದ್ರಾಪೂರ ಮಾತನಾಡಿ ಪ್ರತಿಯೊಬ್ಬ ಪಾಲಕರು ತಮ್ಮ ಮಕ್ಕಳ ಶ್ರೇಯೋಭಿವೃದ್ದಿಗೆ ಶ್ರಮಿಸಿ ವಿದ್ಯಾವಂತರನ್ನಾಗಿ ಉತ್ತಮ ನಾಗರಿಕರನ್ನಾಗಿ ಮಾಡುತ್ತಾರೆ ಇಂದಿನ ಯುವ ಪೀಳಿಗೆ ತಮ್ಮನ್ನು ಹೆತ್ತವರ ಪ್ರೀತಿ ವಾತ್ಸಲ್ಯವನ್ನು ಅರಿತು ಅವರನ್ನು ಗೌರವಯುತವಾಗಿ ಕಾಣಬೇಕು ಹಾಗೂ ಹೆತ್ತವರ ಗೌರವಕ್ಕೆ ಚ್ಯುತಿ ಬರದಂತೆ ಜೀವನ ನಡೆಸಬೇಕು.
> -ಮಾರುತಿ ರುದ್ರಾಪೂರ, ಪ್ರಾಂಶುಪಾಲ

## ಬದಲಾವಣೆ ಬಂದೂಕಿನಿಂದಲ್ಲ, ಹೋರಾಟದಿಂದ: ಲೋಕೇಶ್

• ಉದಯವಾಹಿನಿ, ಚಿಕ್ಕಮಗಳೂರು

ಜನರಲ್ಲಿ ಕ್ರಾಂತಿಕಾರಿ ಬದಲಾವಣೆ ಮೂಡಿಸುವುದು ಬಂದೂಕಿನಿಂದಲ್ಲ, ಹೊಸ ರಾಜಕೀಯ ಬದಲಾವಣೆ ಅರ್ಥೈಸಿಕೊಂಡು, ನಿವೇಶನ ಹಾಗೂ ಭೂ ರಹಿತರು ಹೋರಾಟ ರೂಪಿಸಿದಾಗ ಸಮಾಜದಲ್ಲಿ ಕ್ರಾಂತಿಕಾರಿ ಬದಲಾವಣೆ ಸಾಧ್ಯ ಎಂದು ಸಿಪಿಐ ರಾಷ್ಟ್ರೀಯ ಮಂಡಳಿ ಸದಸ್ಯ ಪಿ.ವಿ.ಲೋಕೇಶ್ ಹೇಳಿದರು. ನಗರದ ಸಿಪಿಐ ಕಚೇರಿಯಲ್ಲಿ ಬುಧವಾರ ನಡೆದ ಭಾರತ ಕಮ್ಯೂನಿಸ್ಟ್ ಪಕ್ಷದ ಶತಮಾನ ಸಂಭ್ರಮ ಹಾಗೂ ತಾಲ್ಲೂಕು ಸಮಾವೇಶ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನೋವು, ನಿರಾಸೆ ಹಾಗೂ ಶೋಷಿತರ ಪರವಾಗಿ ನಿರಂತರವಾಗಿ ಹೋರಾಡುತ್ತಿರುವ ಪಕ್ಷ ಸಿಪಿಐ. ಎರಡು ರಾಷ್ಟ್ರೀಯ ಪಕ್ಷಗಳು ರೈತರು, ಕಾರ್ಮಿಕ ವರ್ಗವನ್ನು ಅಡಿಯಾಳಾಗಿ ಮಾಡಿಕೊಂಡು ವೈಯಕ್ತಿಕವಾಗಿ ಸಿರಿ ಸಂಪತ್ತು ಹೆಚ್ಚಿಸಿಕೊಳ್ಳುತ್ತಿವೆ ಎಂದು ಆರೋಪಿಸಿದರು. ದೇಶದಲ್ಲಿ ಶೇ 80ರಷ್ಟು ದುಡಿಯುವ ವರ್ಗದಿಂದ ರಾಜಕೀಯ ವ್ಯಕ್ತಿಗಳು, ಉದ್ಯಮಿಗಳು, ಆಸ್ತಿ–ಅಂತಸ್ತು ಹೆಚ್ಚಿಸಿಕೊಂಡಿದ್ದಾರೆ. ಜಾತಿ ತಾರತಮ್ಯ, ಬಡವ– ಶ್ರೀಮಂತರ ಅಂತರ ಹೆಚ್ಚಾಗುತ್ತಿದೆ. ಇದರ ವಿರುದ್ಧ ಕಮ್ಯೂನಿಸ್ಟ್ ಪಕ್ಷ ಹೋರಾಟ ರೂಪಿಸಿದ ಕಾರಣ ಶೋಷಿತರು ಸ್ವಾಭಿಮಾನದ ಜೀವನಕ್ಕೆ ದಾರಿಯಾಗಿದೆ ಎಂದರು.

ದೇಶದ ಬಹುಸಂಖ್ಯಾತರನ್ನು ಮುಂಚೂಣಿಗೆ ತರಲು ಜಾತಿ ಸಮೀಕ್ಷೆ ಮುಖ್ಯ. ಈ ಹಿಂದೆ 1932ರಲ್ಲಿ ಬ್ರಿಟಿಷರ ಆಳ್ವಿಕೆಯಲ್ಲಿ ಜಾತಿ ಸಮೀಕ್ಷೆ ನಡೆದಿತ್ತು. ಇದಾದ ಬಳಿಕ ಇಂದಿಗೂ ದೇಶದಲ್ಲಿ ಸಮೀಕ್ಷೆಗೆ ಯಾವ ಸರ್ಕಾರಗಳು ಆಸಕ್ತಿ ತೋರಿಲ್ಲ. ಬಹು ಜನರನ್ನು ತುಳಿಯುತ್ತಿದೆ ಎಂದರು. ಮುಂದಿನ ದಿನಗಳಲ್ಲಿ ರಾಜಕಾರಣ ಬಹಳಷ್ಟು ಕಠಿಣತೆಯಿಂದ ಕೂಡಿದೆ. ತೆರಿಗೆ, ರೈತರ ಸಮಸ್ಯೆ, ವಸತಿ, ಶಿಕ್ಷಣ, ಆಹಾರ ಪದ್ಧತಿ ಅಪಾಯದಲ್ಲಿದೆ. ಹಣವಿದ್ದವರಿಗೆ ಮಾತ್ರ ಅಧಿಕಾರ ಎಂಬಂತಾಗಿದೆ. ಜಾತಿ ಪ್ರಾಬಲ್ಯವೇ ದೊಡ್ಡ ಶಕ್ತಿ ಎಂಬಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.


ಉದಯವಾಹಿನಿ ಚಿತ್ರ


> ಮುಂದಿನ ದಿನಗಳಲ್ಲಿ ಕಾರ್ಮಿಕರು, ರೈತರು ಎಚ್ಚೆತ್ತುಕೊಂಡು ಶಕ್ತಿ ಬೆಳೆಸಿಕೊಂಡರೆ ಮಾತ್ರ ಸಮಾಜದಲ್ಲಿ ಘನತೆಯಿಂದ ಜೀವಿಸಲು ಸಾಧ್ಯ. ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ ಚುನಾವಣೆಗಳಿಗೆ ಸಜ್ಜಾಗಬೇಕು. ದುಡಿವ ವರ್ಗವನ್ನು ಆಳುವ ವರ್ಗವಾಗಿ ರೂಪಿಸಬೇಕು -ರಾಧಾ ಸುಂದರೇಶ್
> ಸಿಪಿಐ ಜಿಲ್ಲಾ ಪ್ರಧಾನ ಕಾರ್ಯದರ್ಶಿ

## ರಾಜಕೀಯ ಲಾಭಕ್ಕಾಗಿ ತಾಲ್ಲೂಕು ಒಡೆಯದಿರಿ

• ಉದಯವಾಹಿನಿ ಹುನಗುಂದ

ರಾಜಕೀಯ ಲಾಭಕ್ಕಾಗಿ ತಾಲ್ಲೂಕು ಒಡೆಯುವ ಕಾರ್ಯಕ್ಕೆ ಮುಂದಾದರೆ ತಾಲ್ಲೂಕಿಗೆ ಮಾಡುವ ದ್ರೋಹ ಎಂದು ಪಟ್ಟಣದ ಮುಖಂಡ ಮಹಾಂತಯ್ಯ ಗಚ್ಚಿನಮಠ ಹೇಳಿದರು. ಬಾಗಲಕೋಟೆ ಶಾಸಕ ಎಚ್.ವೈ. ಮೇಟಿ ಹುನಗುಂದ ತಾಲ್ಲೂಕಿನ 20 ಗ್ರಾಮಗಳನ್ನು ಗುಳೇದಗುಡ್ಡ ಅಥವಾ ಬಾಗಲಕೋಟೆಗೆ ಸೇರ್ಪಡೆ ಮಾಡಬೇಕು ಎಂಬ ಹೇಳಿಕೆ ಹಿನ್ನಲೆಯಲ್ಲಿ ಸಂಜೆ ಪಟ್ಟಣದ ಗಚ್ಚಿನಮಠದಲ್ಲಿ ನಡೆದ ಚಿಂತನ ಮಂಥನ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲ್ಲೂಕು ನೂರಾರು ವರ್ಷಗಳ ಇತಿಹಾಸ ಹೊಂದಿದೆ. ಷಡ್ಯಂತ್ರ ಮಾಡಿ ತಾಲ್ಲೂಕು ಒಡೆಯುವುದು ಸರಿಯಲ್ಲ. ಈ ರೀತಿ ಮಾಡುವುದರಿಂದ ಮುಂದಿನ ದಿನಗಳಲ್ಲಿ ಸಮಗ್ರ ತಾಲ್ಲೂಕಿನ ಅಸ್ತಿತ್ವಕ್ಕೆ ದಕ್ಕೆ ಬರಲಿದೆ ಎಂಬ ಸಂಶಯ ಮೂಡುತ್ತಿದೆ. ಹೀಗಾಗಿ ಜಾತಿ, ಮತ, ಪಂಥ ಬೇಧ ಮರೆತು ಎಲ್ಲರೂ ಒಗ್ಗಟ್ಟಿನಿಂದ ಧ್ವನಿ ಎತ್ತಬೇಕು. ಜೊತಗೆ ಈ ವಿಷಯವನ್ನು ಕ್ಷೇತ್ರದ ಶಾಸಕ ವಿಜಯಾನಂದ ಕಾಶಪ್ಪನವರ ಗಮನಕ್ಕೆ ತರುವ ಕೆಲಸ ಆಗಬೇಕಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಪಟ್ಟಣದ ನಾಗರಿಕ ಸೇವಾ ಸುಧಾರಣಾ ಸಮಿತಿ ಪ್ರಧಾನ ಕಾರ್ಯದರ್ಶಿ ಜಿ.ಬಿ. ಕಂಬಾಳಿಮಠ ಮಾತನಾಡಿ, ಶಾಸಕ ಎಚ್.ವೈ. ಮೇಟಿ ಅವರ ಹೇಳಿಕೆಯನ್ನು ಖಂಡಿಸೋಣ. ಅಖಂಡ ಕರ್ನಾಟಕ ರಾಜ್ಯದಲ್ಲಿ ಹೆಚ್ಚು ಹಳ್ಳಿಗಳನ್ನು ಒಳಗೊಂಡ ತಾಲ್ಲೂಕು ನಮ್ಮದಾಗಿತ್ತು. ನಂತರ ಇಳಕಲ್ ತಾಲ್ಲೂಕನ್ನು ಮಾಡಿದ್ದರಿಂದ ಕೇವಲ 80 ಹಳ್ಳಿಗಳು ಉಳಿದಿವೆ. ಮತ್ತೆ 20 ಗ್ರಾಮಗಳು ಒಡೆದು ಹೋದರೆ ವ್ಯಾಪಾರ ವಹಿವಾಟು ಕುಂಠಿತಗೊಳ್ಳಲಿದೆ. ಜೊತಗೆ ತಾಲ್ಲೂಕಿನ ಪ್ರಗತಿಗೆ ಹಿನ್ನಡೆಯಾಗಲಿದೆ ಎಂದರು.

## ಕಸ ವಿಲೇವಾರಿಗೆ ಜಾಗ ಗುರುತಿಸಲು ಸೂಚನೆ

• ಉದಯವಾಹಿನಿ ಸುಳ್ಯ

ಇಲ್ಲಿನ ಪಟ್ಟಣ ಪಂಚಾಯಿತಿ ಕಸ ವಿಲೇವಾರಿಗೆ ಸೂಕ್ತ ಜಾಗ ಗುರುತಿಸುವಂತೆ ಮುಖ್ಯಾಧಿಕಾರಿಗೆ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಸೂಚನೆ ನೀಡಿದರು.

ಪಟ್ಟಣ ಪಂಚಾಯಿತಿ ಮುಂಭಾಗದ ಶೆಡ್‌ನಲ್ಲಿರುವ ಕಸದ ರಾಶಿಗೆ ಪರಿಹಾರ ನೀಡಬೇಕು. ಶೆಡ್ ವೀಕ್ಷಿಸುವಂತೆ ಸಾರ್ವಜನಿಕರು ಕೇಳಿಕೊಂಡರು. ಸಚಿವ ದಿನೇಶ್ ಗುಂಡೂರಾವ್ ಕಸದ ರಾಶಿಯಿದ್ದ ಶೆಡ್ ಬಳಿ ಬಂದರು. ಈ ವೇಳೆ ಸ್ಥಳಕ್ಕೆ ಬಂದ ಪಟ್ಟಣ ಪಂಚಾಯಿತಿ ಅಧ್ಯಕ್ಷೆ ಶಶಿಕಲಾ ನೀರಬಿದಿರೆ, ಜಾಗದ ಅಭಾವವಿದ್ದು, ಸೂಕ್ತ ಜಾಗ ಗುರುತಿಸುವಂತೆ ಅಧಿಕಾರಿಗಳಿಗೆ ಸೂಚಿಸಬೇಕು ಎಂದು ಮನವಿ ಮಾಡಿದರು. ನಮ್ಮಲ್ಲಿ ಜಾಗದ ಕೊರತೆ ಇದೆ. ಅಧ್ಯಯನಕ್ಕಾಗಿ ನಾವು ಕೈಗೊಂಡ ಪ್ರವಾಸಕ್ಕೆ ಕೆಲವರು ಆಕ್ಷೇಪ ಮಾಡಿದ್ದಾರೆ. ಇಲ್ಲ–ಸಲ್ಲದ ಮಾತನಾಡಿದ್ದಾರೆ. ನನಗೆ ಅವಮಾನವಾಗಿದೆ. ಮಾನನಷ್ಟ ಹೂಡುತ್ತೇನೆ. ಮುಂದಿನ ಸಾಮಾನ್ಯ ಸಭೆಯಲ್ಲಿ ಈ ಕುರಿತು ನಿರ್ಣಯ ಕೈಗೊಳ್ಳುತ್ತೇವೆ' ಎಂದು ಶಶಿಕಲಾ ಬೇಸರ ವ್ಯಕ್ತಪಡಿಸಿದರು. ನಾವು ಆಕ್ಷೇಪಿಸಿದ್ದು ಪ್ರವಾಸದ ವಿಚಾರಕ್ಕಲ್ಲ. ರಾಜ್ಯದ ಸಭಾಪತಿಗಳ ಬಗ್ಗೆ ಅವರು ಆಡಿದ ಮಾತಿಗೆ ನಾವೂ ಆಕ್ಷೇಪಿಸಿದ್ದೇವೆ' ಎಂದು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಶಾಹುಲ್ ಹಮೀದ್ ಹೇಳಿದರು. ಆಗ ಸಚಿವರು, ಯಾರೂ ಸಯಾರಿಗೂ ಅವಮಾನ ಮಾಡಬಾರದು. ಕಸ ವಿಲೇವಾರಿಗೆ ತಹಶೀಲ್ದಾರ್ ಜತೆ ಚರ್ಚಿಸಿ ಸೂಕ್ತ ಜಾಗ ಗುರುತಿಸಿ ಎಂದು ಸ್ಥಳದಲ್ಲಿದ್ದ ಮುಖ್ಯಾಧಿಕಾರಿಗೆ ಸೂಚನೆ ನೀಡಿದರು.


ಉದಯವಾಹಿನಿ ಚಿತ್ರ

## ಕಡಲೊರೆತ ಪ್ರದೇಶಕ್ಕೆ ಸಂಸದ ಭೇಟಿ

• ಉದಯವಾಹಿನಿ ಬ್ರಹ್ಮಾವರ

ಕೋಟತಟ್ಟು ಗ್ರಾಮ ಪಂಚಾಯಿತಿ ಪಡುಕರೆಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ತೋಡು ಹೂಳೆತ್ತುವ ಕಾಮಗಾರಿ ನಡೆಯುವ ಸ್ಥಳ, ಕಡಲ್ಕೊರೆತ ಪ್ರದೇಶಕ್ಕೆ ಸಂಸದ ಕೋಟ ಶ್ರೀನಿವಾಸ ಪೂಜಾರಿ ಭೇಟಿ ನೀಡಿದರು. ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡುತ್ತಿರುವ ಮಹಿಳೆಯರ ಯೋಗಕ್ಷೇಮ ವಿಚಾರಿಸಿ ಕಾರ್ಯಕ್ಕೆ ಶ್ಲಾಘಿಸಿದರು. ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡುತ್ತಿರುವ ಮಹಿಳೆಯರು, ಉದ್ಯೋಗ ಖಾತ್ರಿ ಯೋಜನೆಯಡಿ ಕೂಲಿ ಮೊತ್ತ ಹೆಚ್ಚಿಸುವ ಬೇಡಿಕೆಯನ್ನು ಪ್ರಸ್ತಾಪಿಸಿ, ಈಡೇರಿಸುವ ಭರವಸೆ ನೀಡಿದರು.

## ದಲ್ಲಾಳಿ ವರ್ತಕರು, ರೈತರ ಸಹಕಾರದಿಂದ ಎಪಿಎಂಸಿ ಅಭಿವೃದ್ಧಿ: ಸಾವಿತ್ರಿ ಸುರೇಶ

• ಉದಯವಾಹಿನಿ ಕನಕಗಿರಿ

ಕೃಷಿ ಉತ್ಪನ್ನ ಮಾರುಕಟ್ಟೆಯು ರೈತರು ಹಾಗೂ ವರ್ತಕರಿಗಾಗಿ ಇದೆ. ವ್ಯಾಪಾರ ವಹಿವಾಟುಗಳಿಗೆ ಸಂಬಂಧಿಸಿದಂತೆ ವರ್ತಕರು, ರೈತರ ಸಮಸ್ಯೆಗಳಿಗೆ ತಾವು ಸ್ಪಂದಿಸುವುದಾಗಿ ಎಪಿಎಂಸಿ ಪ್ರಭಾರ ಕಾರ್ಯದರ್ಶಿ ಸಾವಿತ್ರಿ ಸುರೇಶ ಪಾಟೀಲ ತಿಳಿಸಿದರು.

ಇಲ್ಲಿನ ಎಪಿಎಂಸಿಯ ಉಪ ಮಾರುಕಟ್ಟೆಯ ಪ್ರಭಾರ ಕಾರ್ಯದರ್ಶಿಯಾಗಿ ಅಧಿಕಾರ ವಹಿಸಿಕೊಂಡು ಅವರು ಮಾತನಾಡಿದರು. ದಲ್ಲಾಳಿ ವರ್ತಕರು, ರೈತರ ಸಹಕಾರದಿಂದ ಎಪಿಎಂಸಿ ಅಭಿವೃದ್ಧಿ ಸಾಧ್ಯವಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರ ಸಹಕಾರ ಮುಖ್ಯವಾಗಿದೆ ಎಂದು ಹೇಳಿದರು.

## ಗೃಹಭಾಗ್ಯ ಹಕ್ಕುಪತ್ರ ವಿತರಣೆಗೆ ಸೂಚನೆ

• ಉದಯವಾಹಿನಿ ವಿಜಯಪುರ

ವಿಜಯಪುರ ನಗರದಲ್ಲಿ ನಡೆಯುತ್ತಿರುವ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಗುಂಪು ಮನೆಗಳ ನಿರ್ಮಾಣ, ನಗರದ ರಿಂಗ್ ರಸ್ತೆಯಲ್ಲಿ ವಿದ್ಯುತ್ ಕಂಬಗಳ ಅಳವಡಿಕೆ, ಯುಜಿಡಿ ಸ್ಥಳಾಂತರ, ಕುಡಿಯುವ ನೀರಿನ ಪೈಪ್ ಲೈನ್ ಸ್ಥಳಾಂತರಿಸುವ ಕಾಮಗಾರಿ, ಅರಕೇರಿ ಜಾಕವೆಲ್‌ನಿಂದ ಕೆರೆಗೆ ನೀರು ತುಂಬಿಸುವ ಕಾಮಗಾರಿ, ಪೌರಕಾರ್ಮಿಕರ ಗೃಹಭಾಗ್ಯ ಯೋಜನೆಯಡಿ ಮನೆ ನಿರ್ಮಾಣ ಕಾಮಗಾರಿ ಸ್ಥಳಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಬುಧವಾರ ಭೇಟಿ ನೀಡಿ ಪರಿಶೀಲಿಸಿದರು.

ಪೌರಕಾರ್ಮಿಕರ ಗೃಹಭಾಗ್ಯ (ಪಿ.ಕೆ.ಜಿ.ಬಿ)ಯೋಜನೆಯಡಿ ವಿಜಯಪುರ ನಗರದ ಹಂಚನಾಳ ಪಿ.ಎಚ್ ಗ್ರಾಮಕ್ಕೆ ಭೇಟಿ ನೀಡಿ, ಈಗಾಗಲೇ ನಿರ್ಮಾಣಗೊಂಡಿರುವ ಹಾಗೂ ಹಂಚಿಕೆ ಮಾಡಲಾದ ಜಿ + 2 ಮಾದರಿಯ 56 ಗುಂಪು ಮನೆಗಳಲ್ಲಿ ವಾಸವಾಗಿರುವ ಫಲಾನುಭವಿಗಳ ಸಮಸ್ಯೆಯನ್ನು ಆಲಿಸಿದರು.

ಮೂಲ ಸೌಕರ್ಯಗಳಾದ ಕುಡಿಯುವ ನೀರು, ಮನೆಗಳಿಗೆ ವಿದ್ಯುತ್ ಸಂಪರ್ಕ, ಬೀದಿ ದೀಪ ಹಾಗೂ ಒಳಚರಂಡಿ ವ್ಯವಸ್ಥೆಗೆ ಕ್ರಮ ವಹಿಸುವಂತೆ ತಿಳಿಸಿದರು. ನಿರ್ಮಾಣ ಹಂತದಲ್ಲಿರುವ 60 ಗುಂಪು ಮನೆಗಳ ನಿರ್ಮಾಣ ಕಾಮಗಾರಿಯನ್ನು ತುರ್ತಾಗಿ ಪೂರ್ಣಗೊಳಿಸಿ ಉಳಿದ ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಲು ಕ್ರಮಕೈಗೊಳ್ಳುವಂತೆ ಮಹಾನಗರ ಪಾಲಿಕೆ ಆಯುಕ್ತರಿಗೆ ಸೂಚಿಸಿದರು. ನಗರದ ಅಲ್ ಅಮೀನ್ ಮೆಡಿಕಲ್ ಕಾಲೇಜು ಹಿಂಭಾಗದಲ್ಲಿ ಪಿಎಂಎವೈ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ಜಿ + 1 ಮಾದರಿಯ 1493 ಗುಂಪು ಮನೆಗಳ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮನೆಗಳಿಗೆ ವಿದ್ಯುತ್ ಸಂಪರ್ಕ ಬೀದಿ ದೀಪ ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಒದಗಿಸಲು ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

# ಬೆಳಗಾವಿ ನಗರ ಪ್ರವೇಶ ದುಸ್ತರ: ಟ್ರಾಫಿಕ್ ಸಮಸ್ಯೆಗೆ ಸವಾರರು ಸುಸ್ತು

### ಎರಡನೇ ರಾಜಧಾನಿ ಖ್ಯಾತಿಯ ಬೆಳಗಾವಿ ದಿನದಿಂದ ದಿನಕ್ಕೆ ಬೆಳೆಯುತ್ತಿರುವಂತೆಯೇ ಸಂಚಾರ ಸಮಸ್ಯೆಯೂ ಹೆಚ್ಚುತ್ತಿದೆ

• ಉದಯವಾಹಿನಿ ಬೆಳಗಾವಿ

2ನೇ ರಾಜಧಾನಿ ಖ್ಯಾತಿಯ ಬೆಳಗಾವಿ ದಿನದಿಂದ ದಿನಕ್ಕೆ ಬೆಳೆಯುತ್ತಿರುವಂತೆಯೇ ಸಂಚಾರ ಸಮಸ್ಯೆಯೂ ಹೆಚ್ಚುತ್ತಿದೆ. ರಾಷ್ಟ್ರೀಯ ಹೆದ್ದಾರಿಯಿಂದ ನಗರ ಸಂಪರ್ಕಿಸುವ ಬೆಳಗಾವಿಯ ಎಲ್ಲಾ ರಸ್ತೆಗಳಲ್ಲೂ ಟ್ರಾಫಿಕ್ ಜಾಮ್ ಸಾಮಾನ್ಯ ಎಂಬಂತಾಗಿದೆ.

- ಬೆಳಗಾವಿಯ ಸಂಚಾರ ಸಮಸ್ಯೆ ದಿನದಿಂದ ದಿನಕ್ಕೆ ಹೆಚ್ಚು ಉಲ್ಬಣವಾಗುತ್ತಿದೆ
- ಅಶೋಕ ವೃತ್ತದಲ್ಲಿ ಮಾರ್ಗ ಬದಲಾವಣೆ ಹಾಗೂ ಬ್ಯಾರಿಕೇಡ್ ಅಳವಡಿಸುವ ಮೂಲಕ ಪ್ರಯತ್ನ ನಡೆಸಿದರೂ, ವಾಹನ ಸವಾರರು ಸಂಚಾರ ನಿಯಮಗಳನ್ನು ಪಾಲಿಸುತ್ತಿಲ್ಲ.
- ಮಹಾತ್ಮಾ ಫುಲೆ ಮಾರ್ಗದಿಂದ ಹಳೇ ಪಿ.ಬಿ. ರಸ್ತೆಗೆ ಸಂಪರ್ಕಿಸುವ ರಸ್ತೆ ಸ್ಥಗಿತಗೊಳಿದ್ದರಿಂದ ಬೆಳಗಾವಿಯ ದಕ್ಷಿಣ ಭಾಗದಲ್ಲಿಯೂ ಸಂಚಾರ ಸಮಸ್ಯೆ ಹೆಚ್ಚಾಗಿದೆ.


ಉದಯವಾಹಿನಿ ಚಿತ್ರ

ಮಹಾರಾಷ್ಟ್ರ ಹಾಗೂ ಗೋವಾ ರಾಜ್ಯದೊಂದಿಗೆ ಗಡಿ ಹಂಚಿಕೊಂಡಿರುವ ಬೆಳಗಾವಿಗೆ ನೆರೆ ರಾಜ್ಯಗಳಿಂದಲೂ ಸಾಕಷ್ಟು ಪ್ರಯಾಣಿಕರು ಬರುತ್ತಿದ್ದು, ಮಾರುಕಟ್ಟೆ ಪ್ರದೇಶದಲ್ಲಂತೂ ಜನಜಂಗುಳಿ ಆಗುತ್ತಿದೆ. ಸಂಚಾರ ದಟ್ಟಣೆಯಿಂದ ವಾಹನ ಸವಾರರು ಹಾಗೂ ಪ್ರಯಾಣಿಕರು ರೋಸಿ ಹೋಗಿದ್ದಾರೆ.

ಸಾಂಬ್ರಾ ವಿಮಾನ ನಿಲ್ದಾಣದಿಂದ ಗಾಂಧಿ ನಗರ ಮಾರ್ಗವಾಗಿ ಹಾಗೂ ಮಹಾಂತೇಶ ನಗರದ ಸೇತುವೆ, ಅಶೋಕ ವೃತ್ತ ಮಾರ್ಗವಾಗಿ ಕೇಂದ್ರ ಬಸ್ ನಿಲ್ದಾಣ ಸಂಪರ್ಕಿಸುವ ಮತ್ತು ಹಳೇ ಪಿ.ಬಿ.ರಸ್ತೆಯಿಂದ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಸಂಪರ್ಕಿಸುವ ಮಾರ್ಗದಲ್ಲಿ ಪ್ರತಿ ದಿನವೂ ವಾಹನ ದಟ್ಟಣೆ ಉಂಟಾಗುತ್ತಿದ್ದು, ಗಂಟೆಗಟ್ಟಲೇ ಪ್ರಯಾಣಿಕರು ರಸ್ತೆಯಲ್ಲೇ ಕಾಲ ಕಳೆಯುವಂತಾಗಿದೆ. ಇದರಿಂದಾಗಿ ಸರಕಾರಿ ಕಚೇರಿಗಳಿಗೆ ತೆರಳುವ ಸಿಬ್ಬಂದಿ ಹಾಗೂ ನಾಗರಿಕರಿಗೆ ಮತ್ತು ಶಾಲಾ ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳು ತೊಂದರೆ ಪಡುವಂತಾಗಿದೆ.

### ಸಮಸ್ಯೆ ಆಗಿದ್ದೆಲ್ಲಿ?

ಸಂಚಾರ ಸುಗಮಗೊಳಿಸಲೆಂದು ಪೊಲೀಸರು ಅಶೋಕ ವೃತ್ತದಲ್ಲಿ ಬ್ಯಾರಿಕೇಡ್ ಅಳವಡಿಸಿ ಮಾರ್ಗ ಬದಲಾವಣೆ ಮಾಡಿದ್ದಾರೆ. ಈ ಮೊದಲು ಅಶೋಕ ವೃತ್ತ ಮಾರ್ಗವಾಗಿ ಗಾಂಧಿ ನಗರದ ಸರ್ವಿಸ್ ರಸ್ತೆ ಮೂಲಕ ಹೆದ್ದಾರಿ ಸೇರುತ್ತಿದ್ದ ವಾಹನಗಳು ಇದೀಗ, ಮಹಾಂತೇಶ ನಗರದ ಸೇತುವೆ ಮೂಲಕ ಸೇರುವಂತಾಗಿದೆ. ಕಟ್ಟು ಇಟ್ಟಾಗಿ ಇದು ಪಾಲನೆಯಾಗಿದ್ದರೆ ಸಮಸ್ಯೆ ಪರಿಹಾರವಾಗುತ್ತಿತ್ತು. ಆದರೆ, ಬ್ಯಾರಿಕೇಡ್ ಅಳವಡಿಸಿರುವ ಕೂಗಳತೆ ದೂರದಲ್ಲೇ ತಿರುವು ಇದ್ದು, ಅಲ್ಲಿ ಬಹುತೇಕ ವಾಹನ ಚಾಲಕರು ಸಂಚಾರ ಮಾಡುತ್ತಾರೆ. ಇದರಿಂದಾಗಿ ಬ್ಯಾರಿಕೇಡ್ ಅಳವಡಿಸಿರುವ ಆಶಯ ಈಡೇರುತ್ತಿಲ್ಲ.

ಸುಗಮ ಸಂಚಾರಕ್ಕಾಗಿ ಪೊಲೀಸ್ ಇಲಾಖೆ ಮಾರ್ಗ ಬದಲಾವಣೆ ಹಾಗೂ ಏಕ ಮುಖ ಸಂಚಾರ ಸೇರಿದಂತೆ ಏನೇ ಕ್ರಮ ಕೈಗೊಂಡರು ಸಂಚಾರದಲ್ಲಿ ಶಿಸ್ತು ಕಾಣುತ್ತಿಲ್ಲ. ಸೂಚನಾ ಫಲಕಗಳಿದ್ದರೂ ಸವಾರರು ಪಾಲಿಸುತ್ತಿಲ್ಲ. ಬೇಕಾಬಿಟ್ಟಿಯಾಗಿ ವಾಹನಗಳ ನಿಲುಗಡೆ ಮಾಡುತ್ತಿದ್ದು, ಇದರಿಂದಾಗಿ ಕೇಂದ್ರ ಬಸ್ ನಿಲ್ದಾಣ, ಅಶೋಕ ವೃತ್ತ, ರೈಲ್ವೆ ನಿಲ್ದಾಣದ ಸುತ್ತಲಿನ ಪ್ರದೇಶ, ಕೊಲ್ಲಾಪುರ ರಸ್ತೆ, ಜೀಜಾಮಾತಾ ವೃತ್ತ, ಫೋರ್ಟ್ ರಸ್ತೆ, ಸಾಂಬ್ರಾ ರಸ್ತೆ, ಗಾಂಧಿ ನಗರ, ಹಣ್ಣಿನ ಮಾರುಕಟ್ಟೆ, ಹಳೆ ಭಾಜಿ ಮಾರುಕಟ್ಟೆ, ಖಡೇಬಜಾರ್ ಸೇರಿದಂತೆ ಇಡೀ ನಗರದಲ್ಲಿಯೇ ಸಂಚಾರ ಸಮಸ್ಯೆ ತಾಂಡವ ಆಡುತ್ತಿದೆ. ಭೂಸ್ವಾಧೀನ ಪರಿಹಾರ ತಾರತಮ್ಯ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿವಾಜಿ ಉದ್ಯಾನ ಸಮೀಪದ ಮಹಾತ್ಮಫುಲೆ ಮಾರ್ಗದಿಂದ ಹಳೇ ಪಿಬಿ ರಸ್ತೆ ಸಂಪರ್ಕಿಸುವ ಎಸ್‌ಪಿಎಂ ರಸ್ತೆಯಲ್ಲಿ ಸಂಚಾರ ಸ್ಥಗಿತಗೊಳಿಸಿದ್ದರಿಂದ ಬೆಳಗಾವಿ ದಕ್ಷಿಣ ಭಾಗದಲ್ಲಿಯೂ ಸಂಚಾರ ಸಮಸ್ಯೆ ಮತ್ತಷ್ಟು ಉಲ್ಬಣಿಸಿದೆ. ಈ ಮಾರ್ಗದಲ್ಲಿನ ರಸ್ತೆ ಆರಂಭವಾದಾಗಿನಿಂದ ಶಿವಾಜಿ ಉದ್ಯಾನ, ಕಪಿಲೇಶ್ವರ ಮಂದಿರ, ಶನಿಮಂದಿರ ಹಾಗೂ ಹೇಮುಕಲಾನಿ ಚೌಕ್ ಮಾರ್ಗವಾಗಿ ನಗರದಲ್ಲಿನ ಮುಖ್ಯ ಮಾರುಕಟ್ಟೆ ಪ್ರವೇಶಕ್ಕೂ ಅನುಕೂಲವಾಗಿತ್ತು.

ಆದರೆ, ಇದೀಗ ಈ ರಸ್ತೆ ಬಂದ್ ಮಾಡಿದ್ದರಿಂದ ಹಳೇ ಬೆಳಗಾವಿ ಪ್ರದೇಶದಿಂದ ಮಾರುಕಟ್ಟೆ ಪ್ರದೇಶಕ್ಕೆ ಆಗಮಿಸುವವರು ಹಾಗೂ ನಗರದ ಮುಖ್ಯ ರಸ್ತೆಗಳನ್ನೇ ಬಳಸುವಂತಾಗಿದೆ.

### ನನೆಗುದಿಗೆ ಬಿದ್ದ ಫ್ಲೈ ಓವರ್

ರಾಷ್ಟ್ರೀಯ ಹೆದ್ದಾರಿಯಿಂದ ಅಶೋಕ ವೃತ್ತ, ಕೇಂದ್ರ ಬಸ್ ನಿಲ್ದಾಣ ಹಾಗೂ ಚನ್ನಮ್ಮ ವೃತ್ತ ಮಾರ್ಗವಾಗಿ ಫ್ಲೈ ಓವರ್ ನಿರ್ಮಾಣ, ನಗರದಲ್ಲಿ ಎರಡು ಕಡೆ ಬಹುಮಹಡಿ ಪಾರ್ಕಿಂಗ್ ಸೌಲಭ್ಯ ಒದಗಿಸುವ ಯೋಜನೆ ರೂಪಿಸಲಾಗಿದೆ ಎಂದು ಜನಪ್ರತಿನಿಧಿಗಳು ವರ್ಷದಿಂದ ಹೇಳುತ್ತಿದ್ದಾರೆ. ಈ ವರೆಗೂ ಉಭಯ ಯೋಜನೆಗಳ ಬಗ್ಗೆ ಸ್ಪಷ್ಟತೆಯಿಲ್ಲ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ.

**ವೃಷಭ** ಚಿಂತನೆ ಮತ್ತು ಶಕ್ತಿಯನ್ನು ನೀವು ವಾಸ್ತವವಾಗಿ ಏನನ್ನು ನೋಡ ಬಯಸುತ್ತೀರೋ ಅದನ್ನು ಸಾಧಿಸುವಲ್ಲಿ ನಿರ್ದೇಶಿಸಿ. ಇದುವರೆಗೆ ನಿಮ್ಮ ಸಮಸ್ಯೆಯಂದರೆ ನೀವು ಪ್ರಯತ್ನಿಸದೇ ಕೇವಲ ಆಸೆಪಡುತ್ತೀರಿ.

**ಮಿಥುನ** ಸಂಘರ್ಷವು ನಿಮ್ಮ ಅನಾರೋಗ್ಯವನ್ನು ಇನ್ನಷ್ಟು ಹಾಳುಮಾಡಬಹುದಾದ್ದರಿಂದ ಅದನ್ನು ತಪ್ಪಿಸಿ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು.

**ಕರ್ಕಾಟಕ** ನಗು ನಿಮ್ಮ ಎಲ್ಲಾ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ಸಿಂಹ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ. ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ. ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

**ಕನ್ಯಾ** ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ಯಾವುದೇ ದೀರ್ಘಕಾಲೀನ ಹೂಡಿಕೆಗಳನ್ನು ತಪ್ಪಿಸಿ ಮತ್ತು ನಿಮ್ಮ ಸ್ನೇಹಿತರ ಜೊತೆ ಕೆಲವು ಆಹ್ಲಾದಕರ ಕ್ಷಣಗಳನ್ನು ಕಳೆಯಲು ಪ್ರಯತ್ನಿಸಿ.

**ತುಲಾ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ವೃಶ್ಚಿಕ** ಒಂದು ಲಾಭಕರ ದಿನ, ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ.

**ಧನಸ್ಸು** ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ.

**ಮಕರ** ಹಾಸ್ಯ ಪ್ರಜ್ಞೆಯಿರುವ ಸಂಬಂಧಿಕರ ಸಂಗ ನಿಮ್ಮ ಉದ್ವೇಗವನ್ನು ಕಡಿಮೆ ಮಾಡುತ್ತದೆ. ನಿಮಗೆ ತುಂಬಾ ಅಗತ್ಯವಾಗಿರುವ ಶಮನವನ್ನು ನೀಡುತ್ತದೆ. ಈ ರೀತಿಯ ಸಂಬಂಧಿಗಳನ್ನು ಹೊಂದಿದ ನೀವೇ ಅದೃಷ್ಟವಂತರು.

**ಕುಂಭ** ನಿಮ್ಮ ದೇಹದ ಪುನಃಶ್ಚೇತನಕ್ಕಾಗಿ ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳದಿದ್ದರೆ ನೀವು ಆಯಾಸ ಹಾಗೂ ನಿರಾಸೆಯಲ್ಲಿ ಸಿಲುಕುತ್ತೀರಿ. ಯೋಜಿತವಲ್ಲದ ಮೂಲಗಳಿಂದ ಹಣದ ಲಾಭ ನಿಮ್ಮ ದಿನವನ್ನು ಬೆಳಗಿಸುತ್ತದೆ.

**ಮೀನ** ನೀವು ಭರವಸೆಯ ಮಾಯಾಜಾಲದಲ್ಲಿದ್ದೀರಿ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

---

● ಕಾಡುಪ್ರಾಣಿಗಳ ಸುರಕ್ಷತೆ ನಿಟ್ಟಿನಲ್ಲಿ ಈ ಚಟುವಟಿಕೆಯನ್ನು ಗಂಭೀರವಾಗಿ ಪರಿಗಣಿಸಿರುವ ತನಿಖಾ ದಳ

# ಕಾಡಂಚಿನಲ್ಲಿ ವಿಷಕಾರಿ ಕೈಗಾರಿಕಾ ತ್ಯಾಜ್ಯ: ತನಿಖೆಗೆ ಮುಂದಾದ ಅರಣ್ಯ ಇಲಾಖೆ

• ಉದಯವಾಹಿನಿ, ಶಿವಮೊಗ್ಗ

ಅಪಾಯಕಾರಿ ರಾಸಾಯನಿಕಗಳ ಒಳಗೊಂಡ ಕೈಗಾರಿಕಾ ತ್ಯಾಜ್ಯವನ್ನು ಅರಣ್ಯ ಪ್ರದೇಶದಲ್ಲಿ ಎಸೆಯುತ್ತಿರುವ ಅಘಾತಕಾರಿ ಸಂಗತಿಯನ್ನು ಸಿಐಡಿ ಅರಣ್ಯ ತನಿಖಾ ದಳ ಪತ್ತೆ ಮಾಡಿದೆ.

ಕಾಡುಪ್ರಾಣಿಗಳ ಸುರಕ್ಷತೆ ನಿಟ್ಟಿನಲ್ಲಿ ಈ ಚಟುವಟಿಕೆಯನ್ನು ಗಂಭೀರವಾಗಿ ಪರಿಗಣಿಸಿರುವ ತನಿಖಾ ದಳದ ಅಧಿಕಾರಿಗಳು, ಹೊಸನಗರ ಆರ್‌ಎಫ್‌ಒ ಮೂಲಕ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಂಡಿದ್ದಾರೆ ಆರೋಪಿಗಳ ಪತ್ತೆಗೆ ಮುಂದಾಗಿದ್ದಾರೆ.

ಹೊಸನಗರ ತಾಲ್ಲೂಕಿನ ಪುರಪ್ಪೆಮನೆ ಹಾಗೂ ಹರಿದ್ರಾವತಿ ಗ್ರಾಮಗಳ ವ್ಯಾಪ್ತಿಯ ಕಾಡಂಚಿನಲ್ಲಿ ತ್ಯಾಜ್ಯ ಎಸೆಯಲಾಗಿದೆ. ಹೊಸನಗರ -ಸಾಗರ ನಡುವಿನ ಈ ರಸ್ತೆ ದಟ್ಟ ಅರಣ್ಯವನ್ನು ಒಳಗೊಂಡಿದೆ. ಕಾಡು ಪ್ರಾಣಿಗಳ ಓಡಾಟವೂ ಇಲ್ಲಿ ನಿರಂತರವಾಗಿದೆ.

ಒಂದೇ ಕಡೆ ತ್ಯಾಜ್ಯ ರಾಶಿ ಹಾಕಿದರೆ ಸಿಕ್ಕಿಬೀಳಬಹುದು ಎಂಬ ಕಾರಣಕ್ಕೆ ನಾಲ್ಕು ಕಡೆ ಹಾಕಲಾಗಿದೆ. ಪುರಪ್ಪೆಮನೆ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಪುರಪ್ಪೆಮನೆ ಹಾಗೂ ದೇವರಕೊಪ್ಪ ಗ್ರಾಮಗಳ ಬಳಿ ಹಾಗೂ ಹರಿದ್ರಾವತಿ ಗ್ರಾಮದ ಸಮೀಪ ಎರಡು ಕಡೆ ತ್ಯಾಜ್ಯ ಎಸೆಯಲಾಗಿದೆ ಎಂದು ಸಿಐಡಿ ಅರಣ್ಯ ತನಿಖಾದಳದ ಪಿಎಸ್‌ಐ ಕೆ.ವಿನಾಯಕ ಹೇಳುತ್ತಾರೆ.

**ಆಹಾರ ಸರಪಳಿಗೆ ಕುತ್ತು**

**ಕೈಗಾರಿಕಾ ತ್ಯಾಜ್ಯವನ್ನು ಸುಲಭವಾಗಿ ಸಿಗುವ ಆಹಾರ ಎಂದು ಪ್ರಾಣಿಗಳು ಸೇವಿಸಬಹುದು. ಅದರಲ್ಲಿನ ರಾಸಾಯನಿಕವು ಹೊಟ್ಟೆಯೊಳಗೆ ಹೋದರೆ ಅವುಗಳ ಕರುಳಲ್ಲಿ ಊತ ಬರಬಹುದು. ಜೀರ್ಣ ಆದರೂ ವಿಷ ದೇಹದೊಳಗೆ ಸೇರಿ ಸಾಯಲೂಬಹುದು. ಜಿಂಕೆಗಳು ಈ ತ್ಯಾಜ್ಯ ತಿಂದರೆ ಅವುಗಳನ್ನು ಬೇಟೆಯಾಡುವ ಚಿರತೆಗಳ ದೇಹಕ್ಕೂ ಈ ವಿಷ ಸೇರಲಿದೆ. ಪ್ರಾಣಿಗಳ ಪ್ರಾಣಕ್ಕೂ ಕುತ್ತು. ಪರಿಸರಕ್ಕೂ ಹಾನಿ.**


ಉದಯವಾಹಿನಿ ಚಿತ್ರ

ಈ ತ್ಯಾಜ್ಯ ಮಳೆ ನೀರಿನ ಮೂಲಕ ಹಳ್ಳ-ಕೊಳ್ಳ, ನದಿಗಳ ಸೇರಿದರೆ ಮೀನುಗಳು ಮತ್ತು ನೀರು ಕುಡಿಯುವ ಪ್ರಾಣಿ, ಮನುಷ್ಯರ ಮೇಲೂ ಪರಿಣಾಮ ಬೀರುತ್ತದೆ. ಒಟ್ಟಾರೆ ಆಹಾರ ಸರಪಳಿಯೇ ಅಸಮತೋಲನವಾಗಲಿದೆ. ಹೀಗಾಗಿಯೇ ಇದನ್ನು ಗಂಭೀರವಾಗಿ ಪರಿಗಣಿಸಿದ್ದೇವೆ.

ಸಂಬಂಧಿಸಿದ ಗ್ರಾಮ ಪಂಚಾಯ್ತಿಗಳಿಗೂ ಪತ್ರ ಬರೆದು ಮಾಹಿತಿ ನೀಡಿ ಮುಂದೆ ಇಂತಹದ್ದು ಪುನರಾರ್ತನೆಯಾಗದಂತೆ ಎಚ್ಚರವಹಿಸಲು ಹೇಳಿದ್ದೇವೆ ಎಂದು ವಿನಾಯಕ ತಿಳಿಸಿದರು.

ತ್ಯಾಜ್ಯ ವಾಸನೆಯಿಂದ ಕೂಡಿದೆ. ಅದನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಿದ್ದೇವೆ. ಜಿಲ್ಲೆಯ ಕೈಗಾರಿಕಾ ಪ್ರದೇಶಗಳಿಂದ ರಾತ್ರಿ ವೇಳೆ ಅರಣ್ಯದಂಚಿಗೆ ತಂದು ಹಾಕಿರಬಹುದು ಎಂಬ ಅನುಮಾನವಿದೆ. ಆ ನಿಟ್ಟಿನಲ್ಲಿ ತನಿಖೆ ಕೈಗೊಂಡಿದ್ದೇವೆ ಎಂದು ಹೇಳಿದರು.

ಜಿಲ್ಲೆಯಲ್ಲಿ ನಗರ-ಪಟ್ಟಣಗಳಿಗೆ ಹತ್ತಿರವಿರುವ ಕಾಡಂಚಿನ ಪ್ರದೇಶಗಳಲ್ಲಿ ನಿಗಾ ಇಟ್ಟಿದ್ದೇವೆ. ಕೈಗಾರಿಕಾ ತ್ಯಾಜ್ಯ ಮಾತ್ರವಲ್ಲ ಘನತ್ಯಾಜ್ಯ ವಿಲೇವಾರಿ ಮಾಡಿದರೂ ಪ್ರಕರಣ ದಾಖಲಿಸಲಿದ್ದೇವೆ. ಕೆ.ವಿನಾಯಕ್ ಪಿಎಸ್‌ಐ ಸಿಐಡಿ ಅರಣ್ಯ ತನಿಖಾ ದಳ.

**ಕೈಗಾರಿಕಾ ತ್ಯಾಜ್ಯಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಸಂಬಂಧಿಸಿದವರಿಗೆ ತಿಳಿವಳಿಕೆ ಕೊಟ್ಟಿರುತ್ತೇವೆ. ಲೈಸೆನ್ಸ್ ಕೊಡುವಾಗಲು ನಿಬಂಧನೆ ವಿಧಿಸಿರುತ್ತೇವೆ. ಇದನ್ನು ಪರಿಶೀಲಿಸಲಾಗುವುದು**
**-ವಿ.ರಮೇಶ್, ಶಿವಮೊಗ್ಗ ಜಿಲ್ಲಾ ಮಾಲಿನ್ಯ ನಿಯಂತ್ರಣಾಧಿಕಾರಿ**

**ಪ್ರಾಣಕ್ಕೂ ಕುತ್ತು ಪರಿಸರಕ್ಕೂ ಹಾನಿ**

ಪ್ರಾಣಿ-ಮನುಷ್ಯರ ಆರೋಗ್ಯಕ್ಕೆ ತೊಂದರೆ.. ಅದು ಕೈಗಾರಿಕಾ ತ್ಯಾಜ್ಯ ಆಗಿದ್ದರೆ ಅದರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಭಾರ ಲೋಹದ ಅಂಶಗಳಾದ ಸೀಸ ಪಾದರಸ ಅಲ್ಯೂಮಿನಿಯಂ ಕೀಟನಾಶಕ ಮೈಕ್ರೋ ಪ್ಲಾಸ್ಟಿಕ್ ಇರುತ್ತವೆ. ಅದನ್ನು ಸೇವಿಸುವ ಪ್ರಾಣಿ ಜಲಚರ ಹಾಗೂ ಮನುಷ್ಯನ ನರ ವ್ಯವಸ್ಥೆ ಹಾಗೂ ಮೆದುಳಿಗೆ ತೊಂದರೆ ಆಗಲಿದೆ. ಪ್ರಾಣಿಗಳ ಸಂತಾನೋತ್ಪತ್ತಿಗೂ ಅಡ್ಡಿಯಾಗಲಿದೆ. ಬಯೋ ಮ್ಯಾಗ್ನಿಫಿಕೇಶನ್ ಹಾಗೂ ಬಯೋ ಅಕಿಮಿಲೇಶನ್ ಆದರೆ ಆಹಾರ ಸರಪಳಿ ಮೂಲಕ ಪ್ರಾಣಿಗಳು ಮೀನು ತಿನ್ನುವ ಹದ್ದು ಕೂಡ ಈ ವಿಷದಿಂದ ಬಳಲುತ್ತದೆ ಎಂದು ವನ್ಯಜೀವಿ ತಜ್ಞ ಡಾ.ಮುರಳಿ ಮನೋಹರ್ ಹೇಳುತ್ತಾರೆ.

---

## ತೀವ್ರ ಅತಿಸಾರ ಬೇದಿ ನಿಯಂತ್ರಣಕ್ಕೆ ಓಆರ್‌ಎಸ್.ದ್ರಾವಣ ಮತ್ತು ಸತು ( ಜಿಂಕ್ ) ಮಾತ್ರೆ ಪರಿಣಾಮಕಾರಿ: ಮಹೇಶ್ ಡಿ.

• ಉದಯವಾಹಿನಿ, ಚಿತ್ರದುರ್ಗ

ದಿನಾಂಕ 17-06-2025 ರಂದು ಬೆಳಗಟ್ಟ ಪ್ರಾಥಮಿಕ ಆರೋಗ್ಯ ಕೇಂದ್ರದ ಸಭಾಂಗಣದಲ್ಲಿ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಚಿತ್ರದುರ್ಗ ಇವರ ಸಹಯೋಗದೊಂದಿಗೆ ಡಯೇರಿಯಾ ತಡೆಗಟ್ಟುವ ಅಭಿಯಾನ, ತೀವ್ರ ಅತಿಸಾರ ಬೇದಿ ನಿಯಂತ್ರಣ ಪಾಕ್ಷಿಕ ಕಾರ್ಯಕ್ರಮದಲ್ಲಿ ಅರೋಗ್ಯ ನೀರಿಕ್ಷಣಾಧಿಕಾರಿ ಮಹೇಶ ಡಿ. ಮಾತನಾಡಿ ಅತಿಸಾರ ರೋಗವು 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳಲ್ಲಿ ಸಾವಿಗೆ ಮೂರನೇ ಪ್ರಮುಖ ಕಾರಣವಾಗಿದೆ ಅತಿಸಾರವು ಹಲವಾರು ದಿನಗಳವರೆಗೆ ಇರುತ್ತದೆ,

ಮತ್ತು ಬದುಕುಳಿಯಲು ಅಗತ್ಯವಾದ ನೀರು ಮತ್ತು ಲವಣಗಳು ಮುಖ್ಯ. ಹಿಂದೆ, ಹೆಚ್ಚಿನ ಜನರಿಗೆ, ತೀವ್ರವಾದ ನಿರ್ಜಲೀಕರಣ ಮತ್ತು ದ್ರವದ ನಷ್ಟವು ಅತಿಸಾರ-ಸಂಬಂಧಿತ ಸಾವುಗಳಿಗೆ ಮುಖ್ಯ ಕಾರಣಗಳಾಗಿವೆ. ಈಗ, ಸೆಪ್ಟಿಕ್ ಬ್ಯಾಕ್ಟೀರಿಯಾದ ಸೋಂಕುಗಳಂತಹ ಇತರ ಕಾರಣಗಳು ಎಲ್ಲಾ ಅತಿಸಾರ-ಸಂಬಂಧಿತ ಸಾವುಗಳ ಹೆಚ್ಚುತ್ತಿರುವ ಅನುಪಾತಕ್ಕೆ ಕಾರಣವಾಗುತ್ತವೆ. ಅತಿಸಾರವನ್ನು ಮೌಖಿಕ ಪುನರ್ಜಲೀಕರಣ ದ್ರಾವಣ , ಶುದ್ಧ ನೀರು, ಸಕ್ಕರೆ ಮತ್ತು ಉಪ್ಪಿನ ದ್ರಾವಣದೊಂದಿಗೆ ಚಿಕಿತ್ಸೆ ನೀಡಬೇಕು. ಇದರ ಜೊತೆಗೆ, 10-14 ದಿನಗಳ ಪೂರಕ ಚಿಕಿತ್ಸಾ ಕೋರ್ಸ್ ಸತು (ಜಿಂಕ್) ಮಾತ್ರೆಗಳು ಅತಿಸಾರದ ಅವಧಿಯನ್ನು ಕಡಿಮೆ ಮಾಡುತ್ತದೆ , ಫಲಿತಾಂಶಗಳನ್ನು ಸುಧಾರಿಸುತ್ತದೆ ಎಂದರು. ಅತಿಸಾರವನ್ನು ದಿನಕ್ಕೆ 3 ಅಥವಾ ಹೆಚ್ಚು ಸಡಿಲವಾದ ಅಥವಾ ದ್ರವ ಮಲಗಳ ಅಂಗೀಕಾರ ಎಂದು ವ್ಯಾಖ್ಯಾನಿಸಲಾಗಿದೆ ಅತಿಸಾರವು ಸಾಮಾನ್ಯವಾಗಿ ಕರುಳಿನಲ್ಲಿನ ಸೋಂಕಿನ ಲಕ್ಷಣವಾಗಿದೆ, ಇದು ವಿವಿಧ ಬ್ಯಾಕ್ಟೀರಿಯಾ, ವೈರಲ್ ಮತ್ತು ಪರಾವಲಂಬಿ ಜೀವಿಗಳಿಂದ ಉಂಟಾಗಬಹುದು. ಸೋಂಕು ಕಲುಷಿತ ಆಹಾರ ಅಥವಾ ಕುಡಿಯುವ ನೀರಿನ ಮೂಲಕ ಅಥವಾ ಕಳಪೆ ನೈರ್ಮಲ್ಯದ ಪರಿಣಾಮವಾಗಿ ವ್ಯಕ್ತಿಯಿಂದ ವ್ಯಕ್ತಿಗೆ ಹರಡುತ್ತದೆ. ಸುರಕ್ಷಿತ ಕುಡಿಯುವ ನೀರು, ಸುಧಾರಿತ ನೈರ್ಮಲ್ಯದ ಬಳಕೆ ಮತ್ತು ಸಾಬೂನಿನಿಂದ ಕೈ ತೊಳೆಯುವುದು ಸೇರಿದಂತೆ ಅತಿಸಾರವನ್ನು ತಡೆಗಟ್ಟುವ ಮಧ್ಯಸ್ಥಿಕೆಗಳು ರೋಗದ ಅಪಾಯವನ್ನು ಕಡಿಮೆ ಮಾಡಬಹುದು ಎಂದರು.


ಉದಯವಾಹಿನಿ ಚಿತ್ರ

**ಅತಿಸಾರವನ್ನು ಮೌಖಿಕ ಪುನರ್ಜಲೀಕರಣ ದ್ರಾವಣ , ಶುದ್ಧ ನೀರು, ಸಕ್ಕರೆ ಮತ್ತು ಉಪ್ಪಿನ ದ್ರಾವಣದೊಂದಿಗೆ ಚಿಕಿತ್ಸೆ ನೀಡಬೇಕು. ಇದರ ಜೊತೆಗೆ, 10-14 ದಿನಗಳ ಪೂರಕ ಚಿಕಿತ್ಸಾ ಕೋರ್ಸ್ ಡಿಸ್ಪರ್ಸಿಬಲ್ ಸತು (ಜಿಂಕ್) ಮಾತ್ರೆಗಳು ಅತಿಸಾರದ ಅವಧಿಯನ್ನು ಕಡಿಮೆ ಮಾಡುತ್ತದೆ ಮತ್ತು ಫಲಿತಾಂಶಗಳನ್ನು ಸುಧಾರಿಸುತ್ತದೆ.**
**-ಮಹೇಶ್ ಡಿ., ಅರೋಗ್ಯ ನೀರಿಕ್ಷಣಾಧಿಕಾರಿ**

---

## ದೇಶವನ್ನು ವಿಶ್ವದ ಗಮನಸೆಳೆದ ಮೋದಿ: ಮಾಜಿ ಸಚಿವ ಹಾಲಪ್ಪ

• ಉದಯವಾಹಿನಿ, ಯಲಬುರ್ಗಾ


ಮೋದಿ ದೇಶದ ಪ್ರಧಾನಿಯಾದಾಗಿನಿಂದಲೂ ಹಂತ ಹಂತವಾಗಿ ಅಭಿವೃದ್ಧಿಗೊಳ್ಳುತ್ತ ದೇಶದ ಚಿತ್ರಣವೇ ಬದಲಾಗಿದೆ. ವಿಶ್ವದ ಗಮನ ಸೆಳೆಯುವಂತೆ ಮಾಡಿದ್ದಲ್ಲದೇ ಆರ್ಥಿಕವಾಗಿ ಸಧೃಢವಾಗಿರುವಂತೆ ಮಾಡುತ್ತಿರುವುದು ಹೆಮ್ಮೆಪಡುವ ಸಂಗತಿ ಎಂದು ಮಾಜಿ ಸಚಿವ ಹಾಲಪ್ಪ ಅಚಾರ ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಜರುಗಿದ ಹನ್ನೊಂದು ವರ್ಷಗಳ ಮೋದಿಯವರ ಸಾಧನೆ ಹಾಗೂ ವಿಕಸಿತ ಭಾರತ ಸಂಕಲ್ಪ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು. 'ಮೋದಿ ನೇತೃತ್ವದ ಕೇಂದ್ರ ಸರ್ಕಾರದಲ್ಲಿ ಬಡತನ ಹೊಗಲಾಡಿಸಲು ಅನೇಕ ಯೋಜನೆಗಳನ್ನು ಹಮ್ಮಿಕೊಂಡಿದೆ. ಮುಂದೆಯೂ ಇನ್ನೂ ಅನೇಕ ಯೋಜನೆಗಳ ಮೂಲಕ ಬಡತನವನ್ನು ಸಂಪೂರ್ಣ ನಿರ್ಮೂಲನೆಗೆ ಬದ್ಧವಾಗಿದೆ. ಮೋದಿಯವರ ದೂರದೃಷ್ಟಿ ಹಾಗೂ ಮಾಹಿತಿ ತಂತ್ರಜ್ಞಾನವನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುತ್ತಿರುವುದರಿಂದ ದೇಶದ ಡಿಜಿಟಲ್ ವ್ಯವಹಾರ 24 ಲಕ್ಷ ಕೋಟಿ ದಾಟಿದೆ. ಇದು ದೇಶದ ಆರ್ಥಿಕ ಕ್ಷೇತ್ರದಲ್ಲಿ ದೊಡ್ಡ ಸ್ಥಾನಮಾನ ಲಭಿಸುವಂತೆ ಮಾಡಿದೆ' ಎಂದರು.


ಉದಯವಾಹಿನಿ ಚಿತ್ರ

---

## ನಿರ್ಲಕ್ಷ್ಯದ ಚಾಲನೆ: ಖಾಸಗಿ ಬಸ್ ಚಾಲಕನ ಬಂಧನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಉಡುಪಿ

ನಗರದ ಬನ್ನಂಜೆಯಲ್ಲಿ ನಿರ್ಲಕ್ಷ್ಯದಿಂದ ಬಸ್ ಚಲಾಯಿಸಿದ ಆರೋಪದಲ್ಲಿ ಖಾಸಗಿ ಬಸ್ ಚಾಲಕನನ್ನು ಬಂಧಿಸಿ, ಬಸ್ ಅನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಶ್ರೀ ದುರ್ಗಾಂಬ ಬಸ್ ಚಾಲಕ ದೇವರಾಜ್ ಬಂಧಿತ ಆರೋಪಿ. ಕರಾವಳಿ ಜಂಕ್ಷನ್ -ಉಡುಪಿ ರಾಷ್ಟ್ರೀಯ ಹೆದ್ದಾರಿ-169 ಎ ಯ ಬನ್ನಂಜೆ ಬಳಿ ಈತ ಮಂಗಳವಾರ ಅಪಾಯಕರ ರೀತಿಯಲ್ಲಿ ಬಸ್ ಚಾಲನೆ ಮಾಡಿಕೊಂಡು ಬಂದಿದ್ದು, ಬನ್ನಂಜೆ ಜಯಲಕ್ಷ್ಮಿ ಸಿಲ್ಕ್ ಬಳಿ ಬಸ್ ನಿಯಂತ್ರಣ ತಪ್ಪಿ ತಿರುಗಿ ನಿಂತಿದೆ. ಬಳಿಕ ಆರೋಪಿ ಬಸ್ ಅನ್ನು ವಿರುದ್ಧ ದಿಕ್ಕಿನಲ್ಲಿ ಚಲಾಯಿಸಿಕೊಂಡು ಉಡುಪಿ ಕಡೆಗೆ ಹೋಗಿರುವುದು ವಿಡಿಯೊದಲ್ಲಿ ಸೆರೆಯಾಗಿತ್ತು. ಅದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ವೀಡಿಯೋ ಹರಿದಾಡಿತ್ತು. ಈ ಬಗ್ಗೆ ಉಡುಪಿ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

---

## ಬಸ್‌ನಲ್ಲಿ ಕಿಟಕಿ ಸೀಟಿಗಾಗಿ ಗಲಾಟೆ ಯುವಕನಿಗೆ ಚಾಕು ಇರಿತ


• ಉದಯವಾಹಿನಿ, ಬೆಳಗಾವಿ

ಇಲ್ಲಿನ ನಗರ ಬಸ್ ನಿಲ್ದಾಣ (ಸಿಬಿಟಿ)ದಲ್ಲಿ ಪಂತಬಾಳೇಕುಂದ್ರಿ-ಸಿಬಿಟಿ ಮಾರ್ಗದ ಬಸ್‌ನಲ್ಲಿ ಕಿಟಕಿ ಸೀಟಿಗಾಗಿ ಅಪರಿಚಿತ ಯುವಕರು ಮತ್ತು ವಿದ್ಯಾರ್ಥಿ ಮಧ್ಯೆ ಬುಧವಾರ ನಡೆದಿದ್ದು, ವಿದ್ಯಾರ್ಥಿಗೆ ಚಾಕುವಿನಿಂದ ಇರಿಯಲಾಗಿದೆ. ಈ ಘಟನೆಯಲ್ಲಿ ಮಾಜ್ ರಶೀದ್ ಸನದಿ(19) ಎಂಬುವರು ಗಾಯಗೊಂಡಿದ್ದು, ವೈದ್ಯಕೀಯ ಚಿಕಿತ್ಸೆಗಾಗಿ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಪಂತಬಾಳೇಕುಂದ್ರಿ-ಸಿಬಿಟಿ ಬಸ್‌ನಲ್ಲಿ ಬೆಳಗಾವಿ ನಗರಕ್ಕೆ ಬರುತ್ತಿದ್ದಾಗ, ಕಿಟಕಿ ಸೀಟಿನ ವಿಚಾರವಾಗಿ ಮಾಜ್ ಮತ್ತು ಕೆಲವು ಅಪರಿಚಿತ ಯುವಕರ ಮಧ್ಯೆ ವಾಗ್ವಾದ ನಡೆದಿತ್ತು. ಇದು ವಿಕೋಪಕ್ಕೆ ಹೋಗಿದ್ದರಿಂದ ವಿದ್ಯಾರ್ಥಿಗೆ ಚಾಕುವಿನಿಂದ ಇರಿದು ಪರಾರಿಯಾಗಿದ್ದಾರೆ. ಅಪರಿಚಿತ ಯುವಕರು ವಿದ್ಯಾರ್ಥಿಗೆ ಚಾಕುವಿನಿಂದ ಇರಿದಿದ್ದಾರೆ. ಆರೋಪಿಗಳ ಪತ್ತೆಗೆ ಕ್ರಮವಹಿಸಿದ್ದೇವೆ. ಎಲ್ಲಾ ಆಯಾಮಗಳಲ್ಲಿ ತನಿಖೆ ಮಾಡುತ್ತಿದ್ದೇವೆ ಎಂದು ನಗರ ಪೊಲೀಸ್ ಉಪ ಆಯುಕ್ತ ರೋಹನ್ ಜಗದೀಶ ತಿಳಿಸಿದರು.

---

## ಎಲ್ಲಾ ವರ್ಗದವರನ್ನು ಒಗ್ಗೂಡಿಸುವ ಕೆಲಸ ಆರ್‌ಎಸ್‌ಎಸ್ ಸಂಘಟನೆ ಮಾಡುತ್ತಿದೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ನಾವೆಲ್ಲ ಹಿಂದೂ ನಾವೆಲ್ಲ ಒಂದು ಎಂಬ ಘೋಷ ವಾಕ್ಯದೊಂದಿಗೆ ಎಲ್ಲಾ ವರ್ಗದವರನ್ನು ಒಗ್ಗೂಡಿಸಿ ದೇಶ ಕಟ್ಟುವ ಕೆಲಸ ರಾಷ್ಟ್ರೀಯ ಸ್ವಯಂ ಸೇವಕ ಸಂಘ ಮಾಡುತ್ತಿದೆ ಎಂದು ಉತ್ತರ ಕರ್ನಾಟಕದ ಆರ್.ಎಸ್.ಎಸ್ ಸಾಮಾಜಿಕ ಸಾಮರಸ್ಯದ ಪ್ರಾಂತ ಸಂಯೋಜಕ ಸೂ.ಕೃಷ್ಣಮೂರ್ತಿ ಹೇಳಿದರು.

ಪಟ್ಟಣದ ಬಿಜೆಪಿ ಪಕ್ಷದ ಮುಖಂಡ ಗೋಪಾಲರಾವ ಕಟ್ಟಿಮನಿಯವರ ಮನೆಗೆ ಆರ್.ಎಸ್.ಎಸ್.ಪ್ರಮುಖರ ನಿಯೋಗ ಭೇಟಿ ನೀಡಿ ಮಾತನಾಡಿದ ಅವರು,ದೇಶ ಮುಖ್ಯ ಧರ್ಮ ಮುಖ್ಯ ಅನ್ನುವುದು ಜನರಿಗೆ ಅರಿವು ಬಂದಿದೆ ಇನ್ನು ಬಹಳಷ್ಟು ಸಂಘಟನೆ ಮಾಡುವ ಅವಶ್ಯಕತೆಯಿದೆ.

ದೇಶದಲ್ಲಿ ನೂರಾರು ಜಾತಿಧರ್ಮಗಳಿವೆ,ಆದರೆ ಕಳೆದ ನೂರು ವರ್ಷಗಳಿಂದ ಆರ್.ಎಸ್.ಎಸ್.ಸಂಘವು ಹಿಂದೂ ಧರ್ಮದ ಸಂಘಟನೆಗಾಗಿ ಕೆಲಸ ಮಾಡುತ್ತಿದೆ,ದೇಶದ ಮೂಲನಿವಾಸಿಗಳು ಹಿಂದೂಗಳು,ಕೆಲ ಸರ್ಕಾರಗಳು ಅಧಿಕಾರಕ್ಕೆ ಬಂದಮೇಲೆ ಹಿಂದೂಗಳಲ್ಲಿ ಒಡೆಯಲು ಜಾತಿಜನಗಣತಿ ನೆಪದಲ್ಲಿ ಹಿಂದೂಗಳು ಒಡೆಯುವ ಕೆಲಸ ಮಾಡುತ್ತಿದೆ ಅದನ್ನು ಒಗ್ಗೂಡಿಸುವ ಕೆಲಸ ನಮ್ಮ ಸಂಘ ಮಾಡುತ್ತಿದೆ.

ಗೋಪಾಲರಾವ ಕಟ್ಟಿಮನಿ, ಕೆ.ಎಂ.ಬಾರಿ, ಸೂರ್ಯಕಾಂತ ಚಿಂಚೋಳಿಕರ್, ರೇವಣಸಿದ್ದ ಮೋಘಾ, ನರಸಪ್ಪ ಕಿವಣೋರಕರ್,ಅವಿರೋಧ ಕಟ್ಟಿಮನಿ, ಮಲ್ಲು ಕೊಡಂಬಲ್, ವಿಜಯಕುಮಾರ ಕೊಡಂಪಳ್ಳಿ, ಸುನೀಲ ಸಲಗಾರ್, ಅನೇಕರಿದ್ದರು.

**ಆರ್.ಎಸ್.ಎಸ್.ಸಂಘವು 1925ಪ್ರಾರಂಭವಾಗಿ 1930ರಲ್ಲಿ ಮೊಟ್ಟಮೊದಲು ಕ್ಯಾಂಪ್ ಆರಂಭಿಸಲಾಯಿತು, ಸಂಘವು ಸ್ವತಃ ಶಕ್ತಿ ಮೇಲೆ ಬೆಳೆದು ಬಂದು ಈಗ ಶತಭಿಮಾನೋತ್ಸವ ಆಚರಣೆಗೆ ಸಿದ್ದವಾಗಿದೆ, ಈ ಕಾರ್ಯಕ್ರಮದಲ್ಲಿ ಎಲ್ಲಾ ಜಾತಿಜನಾಂಗದವರಿಗೆ ಅಹ್ವಾನ ಇರಲಿದ್ದು ಒಗ್ಗೂಡಿಸುವ ಕೆಲಸ ಮಾಡಲಿದ್ದು ದೇಶ ಕಟ್ಟುವ ನಿಟ್ಟನಲ್ಲಿ ಕೆಲಸ ಮಾಡುತ್ತಿದ್ದೇವೆ, ನಾವೆಲ್ಲರೂ ಒಂದು ಕಾನೂನು ಸರ್ವರಿಗೂ ಒಂದೇ ಎಂಬುವುದು ಅರಿವು ಜನರಿಗೆ ಗೋತ್ತಾಗಿದೆ ಆದರೆ ಮನಸ್ಸಿನಿಂದ ಎಲ್ಲಾ ಧರ್ಮದವರು ನಾವೆಲ್ಲರೂ ಒಂದೇ ಎಂಬುವುದು ಬರಬೇಕು.**
**-ಸೂ.ಕೃಷ್ಣಮೂರ್ತಿ, ಆರ್.ಎಸ್.ಎಸ್ ಸಾಮಾಜಿಕ ಸಾಮರಸ್ಯದ ಪ್ರಾಂತ ಸಂಯೋಜಕ**

---

## ಹಾನಾಡಿ ಸೇತುವೆ ಶಿಥಿಲ: ಅಧಿಕಾರಿಗಳಿಂದ ಪರಿಶೀಲನೆ

• ಉದಯವಾಹಿನಿ, ಹೆಬ್ರಿ

ಕುಚೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹಾನಾಡಿ ಸಂಪರ್ಕಿಸುವ ಸೇತುವೆ ಸಂಪೂರ್ಣ ಶಿಥಿಲಗೊಂಡಿದ್ದು, ಸಂಚಾರಕ್ಕೆ ಯೋಗ್ಯವಾಗಿಲ್ಲ ಎಂಬ ಕಾರ್ಕಳ ಕಾಂಗ್ರೆಸ್ ನಾಯಕ ಮುನಿಯಾಲು ಉದಯ ಕುಮಾರ್ ಶೆಟ್ಟಿ ಅವರ ಮನವಿಯಂತೆ ಸಣ್ಣ ನೀರಾವರಿ ಇಲಾಖೆ ಎಂಜಿನಿಯರ್ ರಾಜೇಶ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕುಚೂರು ಕಾಂಗ್ರೆಸ್ ಅಧ್ಯಕ್ಷ ಸನತ್ ಕುಮಾರ್ ಶೆಟ್ಟಿ ಮಾತನಾಡಿ, ಸೇತುವೆ ಶಿಥಿಲಗೊಂಡು ಸಮಸ್ಯೆಯಾಗಿದೆ. ಆಟೊ, ಕಾರು ಮಾತ್ರ ಸಂಚರಿಸಬಹುದು. ಇಲ್ಲಿ ಸೇತುವೆ ಸಹಿತ ಕಿಂಡಿ ಅಣೆಕಟ್ಟೆ ನಿರ್ಮಾಣ ಆಗಬೇಕು. ಸೇತುವೆ ಎರಡೂ ಭಾಗದಲ್ಲಿ ಹ್ಯಾಂಡ್ ರೈಲಿಂಗ್ಸ್ ಇಲ್ಲದಿರುವುದರಿಂದ ವಿದ್ಯಾರ್ಥಿಗಳು ಸೇತುವೆ ದಾಟುವಾಗ ಭಯಪಡುತ್ತಾರೆ. ಶೀಘ್ರ ಹ್ಯಾಂಡ್ ರೈಲಿಂಗ್ ದುರಸ್ತಿ ಮಾಡಬೇಕು ಎಂದು ಮನವಿ ಮಾಡಿದರು. ಕುಚೂರು ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ಮಹೇಶ ಶೆಟ್ಟಿ ಬಾದ್ದು, ಕುಚೂರು ಕಾಂಗ್ರೆಸ್ ಅಧ್ಯಕ್ಷ ಸನತ್ ಕುಮಾರ್ ಶೆಟ್ಟಿ, ಪ್ರಮುಖರಾದ ಶ್ರೀಶ ಶೆಟ್ಟಿ, ರೋಷನ್ ಕುಮಾರ್ ಶೆಟ್ಟಿ ಜೊತೆಗಿದ್ದರು.


ಉದಯವಾಹಿನಿ ಚಿತ್ರ

ಇಲ್ಲಿ ಮರದ ಹಲಗೆಗಳನ್ನು ಕಿಂಡಿ ಅಣೆಕಟ್ಟೆಗೆ ಉಪಯೋಗಿಸುತ್ತಿದ್ದು, ಬೇಡಿಕೆಯಂತೆ ಮೇಲಧಿಕಾರಿಗಳಕ ಗಮನಕ್ಕೆ ತಂದು ಫೈಬರ್ ಗೇಟ್‌ಗಳನ್ನು ಅಳವಡಿಸಲಾಗುವುದು. ಸೇತುವೆಗಾಗಿ ಮೇಲಧಿಕಾರಿಗೆ ಪತ್ರ ಬರೆಯುತ್ತೇವೆ ಎಂದು ಎಇಇ ರಾಜೇಶ್ ಭಂಡಾರಿ ತಿಳಿಸಿದರು.

---

## ರಸ್ತೆ ಗುಂಡಿ ಮುಚ್ಚಿದ ಆಟೊ ಚಾಲಕರು

• ಉದಯವಾಹಿನಿ ತೇರದಾಳ

ಇಲ್ಲಿನ ಬಸ್ ನಿಲ್ದಾಣದ ಮುಂಭಾಗದ ಜಮಖಂಡಿ- ಕುಡಚಿ ರಾಜ್ಯ ಹೆದ್ದಾರಿಯಲ್ಲಿ ಮಳೆಯಿಂದ ರಸ್ತೆ ಟಾರು ಕಿತ್ತು ಹೋಗಿ ಗುಂಡಿಯಾಗಿ ಸಂಚಾರಿಗಳಿಗೆ ತೊಂದರೆಯಾಗುತ್ತಿದ್ದ ಸಗುಂಡಿಗಳನ್ನು ಆಟೊ ಚಾಲಕರಿಬ್ಬರು ಮುಚ್ಚುವ ಮೂಲಕ ತಮ್ಮ ಸಾಮಾಜಿಕ ಕಳಕಳಿ ಮೆರೆದರು. ಬಸ್ ನಿಲ್ದಾಣದಿಂದ ಹೊರಬರುತ್ತಿದ್ದಂತೆ ಎರಡು ಆಳವಾದ ಗುಂಡಿಗಳು ರಸ್ತೆಯಲ್ಲಿ ಉಂಟಾಗಿದ್ದವು. ಅವು ವಾಹನ ಸವಾರರಿಗೆ ತೊಂದರೆಯನ್ನುಂಟು ಮಾಡುತ್ತಿರುವುದನ್ನು ಆಟೋ ಚಾಲಕರಾದ ದಾವುದ ನಾಯಕವಾಡಿ, ರಿಯಾಜ ಸಂಗತ್ರಾಸ ಗಮನಿಸಿದರು. ಭಾನುವಾರ ಬೆಳಗಿನ ಜಾವ ರಸ್ತೆ ಬದಿ ಬಿದ್ದಿದ್ದ ಸಣ್ಣ ಸಣ್ಣ ಕಲ್ಲುಗಳನ್ನು ಹಾಕಿ ಗುಂಡಿ ಮುಚ್ಚಿ ವಾಹನ ಸವಾರರಿಗೆ ಅನುಕೂಲ ಮಾಡಿದರು. ಇವರ ಈ ಕಾರ್ಯಕ್ಕೆ ಸಾರ್ವಜನಿಕರಿಂದ ಪ್ರಶಂಸೆಗಳು ವ್ಯಕ್ತವಾದವು.

---

## ಪ್ರಕೃತಿ ವಿಕೋಪ ಎದುರಿಸಲು ಸಜ್ಜಾಗಿರಿ: ತಹಶೀಲ್ದಾರ್ ಸೂಚನೆ

• ಉದಯವಾಹಿನಿ ಆಲೂರು

ಮಳೆಗಾಲ ತೀವ್ರ ಆಗಿರುವುದರಿಂದ ಪ್ರಕೃತಿ ವಿಕೋಪದಲ್ಲಿ ಆಕಸ್ಮಿಕವಾಗಿ ಎದುರಾಗುವ ದುಷ್ಪರಿಣಾಮಗಳನ್ನು ಎದುರಿಸಲು ಎಲ್ಲ ಇಲಾಖೆ ಅಧಿಕಾರಿಗಳು ಸದಾ ಸಿದ್ದರಾಗಿರಬೇಕು ಎಂದು ತಹಶೀಲ್ದಾರ್ ಮಲ್ಲಿಕಾರ್ಜುನ ಸೂಚನೆ ನೀಡಿದರು.

ಪಟ್ಟಣದ ಮಿನಿ ವಿಧಾನಸೌಧ ಸಭಾಂಗಣದಲ್ಲಿ ಬುಧವಾರ ನಡೆದ ಪ್ರಕೃತಿ ವಿಕೋಪ ಮುನ್ನೆಚ್ಚರಿಕೆ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ಪತ್ರ ಬರೆದು, ಉತ್ತರಕ್ಕಾಗಿ ಕಾಯದೇ ಕೆಲಸ ಕಾರ್ಯಗತವಾಗಿರುವ ಬಗ್ಗೆ ಮನದಟ್ಟು ಮಾಡಿಕೊಳ್ಳಬೇಕು ಎಂದು ಒತ್ತಿ ಹೇಳಿದರು.


ಉದಯವಾಹಿನಿ ಚಿತ್ರ

ಮುಂಜಾಗ್ರತೆಗಾಗಿ ಆರೋಗ್ಯ ಇಲಾಖೆಯಲ್ಲಿ ತುರ್ತು ಪ್ರಥಮ ಚಿಕಿತ್ಸೆ ತಂಡ ಸದಾ ಸಿದ್ದವಿರಬೇಕು. ಈಜುಗಾರರ ತಂಡವನ್ನು ಗುರುತಿಸಿಕೊಂಡಿರಬೇಕು. ವಾಟೆಹೊಳೆ ಜಲಾಶಯದಿಂದ ನೀರನ್ನು ಹೊರಬಿಡುವ ಮುನ್ನ, ಜಲಾಶಯ ಮತ್ತು ಕಾಲುವೆ ಪಾತ್ರದ ಅಕ್ಕಪಕ್ಕದಲ್ಲಿರುವ ಹಳ್ಳಿಗಳಿಗೆ ಧ್ವನಿವರ್ಧಕ ಮೂಲಕ ಜನ-ಜಾನುವಾರುಗಳು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳ್ಳಲು ಸಲಹೆ ಮತ್ತು ಸೂಚನೆ ನೀಡಬೇಕು ಎಂದರು. ಕೆರೆಗಳ ಹೆಚ್ಚುವರಿ ನೀರು ತೂಬಿನಲ್ಲಿ ಹರಿಯುವಾಗ ಮೀನುಗಳು ಹೊರ ಹೋಗುತ್ತವೆ ಎಂಬ ಉದ್ದೇಶದಿಂದ ಸ್ಥಳೀಯರು ಜಾಲರಿ ಬಳಸುತ್ತಿರುವುದು ಗಮನಕ್ಕೆ ಬಂದಿದೆ. ಜಾಲರಿಗೆ ಕಸಕಡ್ಡಿ ತುಂಬಿಕೊಂಡು ತೂಬಿನ ಮೂಲಕ ಮೂಲಕ ಹೊರಹರಿಯದೆ ಅಚ್ಚುಕಟ್ಟು ಪ್ರದೇಶಕ್ಕೆ ಹರಿಯುತ್ತದೆ. ಏರಿ ತುಂಡಾಗುವ ಸಾಧ್ಯತೆ ಇರುತ್ತದೆ. ಕೆರೆಗೆ ಜಾಲರಿ ಹಾಕಿದ್ದರೆ ತೆರವುಗೊಳಿಸಿ, ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

---

## ಬಾಲಕಿಯ ಮೇಲೆ ಅತ್ಯಾಚಾರ ಅಪರಾಧಿಗೆ 21 ವರ್ಷ ಜೈಲು

• ಉದಯವಾಹಿನಿ ದಾವಣಗೆರೆ

15 ವರ್ಷದ ಬಾಲಕಿಯನ್ನು ಮದುವೆಯಾಗಿ ಅತ್ಯಾಚಾರ ಎಸಗಿದ ಅಪರಾಧಿಗೆ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ 21 ವರ್ಷ ಜೈಲು ಹಾಗೂ 30,000 ದಂಡ ವಿಧಿಸಿ ಆದೇಶಿಸಿದೆ. ಹರಿಹರ ನಗರದ ಸಚಿನ್ (23) ಶಿಕ್ಷೆಗೆ ಗುರಿಯಾದ ಅಪರಾಧಿ. ಸಂತ್ರಸ್ತ ಬಾಲಕಿಗೆ ಸರ್ಕಾರ 5 ಲಕ್ಷ ಪರಿಹಾರ ನೀಡುವಂತೆ ನ್ಯಾಯಾಧೀಶ ಶ್ರೀರಾಮ ನಾರಾಯಣ ಹೆಗಡೆ ಆದೇಶದಲ್ಲಿ ಶಿಫಾರಸು ಮಾಡಿದ್ದಾರೆ.

ದಾವಣಗೆರೆಯ ಶಾಲೆಯೊಂದರಲ್ಲಿ 9ನೇ ತರಗತಿ ವ್ಯಾಸಂಗ ಮಾಡುತ್ತಿದ್ದ ಬಾಲಕಿ 2022ರ ಡಿ.21ರಂದು ಕಾಣೆಯಾಗಿದ್ದರು. ನಾಪತ್ತೆ ದೂರು ದಾಖಲಿಸಿಕೊಂಡ ಮಹಿಳಾ ಠಾಣೆಯ ಪೊಲೀಸರು, ಬಾಲಕಿ ಚಿಕ್ಕಮಗಳೂರಿನ ಗ್ರಾಮವೊಂದರಲ್ಲಿ ವಿವಾಹವಾಗಿದ್ದನ್ನು ಪತ್ತೆ ಮಾಡಿದ್ದರು. ಪುಸಲಾಯಿಸಿ ಮದುವೆಯಾದ ಸಚಿನ್, ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ್ದು ತನಿಖೆಯಿಂದ ದೃಢಪಟ್ಟಿತ್ತು. ತನಿಖಾಧಿಕಾರಿಯಾಗಿದ್ದ ಡಿವೈಎಸ್‌ಪಿ ಮಲ್ಲೇಶ್ ದೊಡ್ಡಮನಿ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

---

# ಮದರಿ ಗ್ರಾಮದಲ್ಲಿ ನಿಧಿಗಳ್ಳರು: ಆರು ಜನರ ಬಂಧನ

### ಎಲ್ಲರನ್ನೂ ಗ್ರಾಮದೇವತೆ ದೇವಸ್ಥಾನಕ್ಕೆ ಕರೆತಂದು ವಿಚಾರಣೆ ನಡೆಸಿದಾಗ ಸತ್ಯಾಂಶ ಬಾಯಿ ಬಿಟ್ಟಿದ್ದಾರೆ

• ಉದಯವಾಹಿನಿ ಮುದ್ದೇಬಿಹಾಳ

ತಾಲ್ಲೂಕಿನ ಮದರಿ ಗ್ರಾಮದ ಕೃಷ್ಣಾ ನದಿ ದಂಡೆಯಲ್ಲಿರುವ ಹಳೆಯ ಮದರಿ ಮುಳುಗಡೆ ಗ್ರಾಮದ ದೇವಸ್ಥಾನವೊಂದರ ಹಿಂಭಾಗ ನಿಧಿಗಾಗಿ ಭೂಮಿ ತೋಡುತ್ತಿದ್ದ ತಂಡದ ಮೇಲೆ ಗ್ರಾಮಸ್ಥರು ದಾಳಿ ನಡೆಸಿ, ಕೆಲವರನ್ನು ಬಂಧಿಸಿ ಊರಿಗೆ ಕರೆತಂದು ನಂತರ ಪೊಲೀಸರ ವಶಕ್ಕೆ ನೀಡಿದ ಘಟನೆ ರಾತ್ರಿ ನಡೆದಿದ್ದು ಬುಧವಾರ ಬೆಳಕಿಗೆ ಬಂದಿದೆ. ರಾತ್ರಿ 8 ಗಂಟೆ ಸುಮಾರಿಗೆ ಅಂದಾಜು 20-25 ಜನರ ತಂಡ ಜನಸಂಚಾರ ಇಲ್ಲದ, ಮುಳ್ಳುಕಂಟಿ ಬೆಳೆದ ಹಳೆಯ ನಾಶವಾದ ಕಟ್ಟಡದಲ್ಲಿ ಜೆಸಿಬಿ ಯಂತ್ರ ಬಳಸಿ ಅಗೆಯುತ್ತಿರುವುದನ್ನು ಕಂಡ ಶಿವರಾಯ ಕನ್ನೊಳ್ಳಿ ಮತ್ತು ಗ್ರಾಮದ ಯುವಕರು ಸ್ಥಳಕ್ಕೆ ಧಾವಿಸಿ ವಿಚಾರಿಸಿದ್ದಾರೆ.

ಹಾಳುಮಣ್ಣಿಗಾಗಿ ಅಗೆಯುತ್ತಿದ್ದೇವೆ ಎಂದು ತಂಡದವರು ಸುಳ್ಳು ಹೇಳಿದ್ದಾರೆ. ಅದೇ ಸಮಯದಲ್ಲಿ ವ್ಯಕ್ತಿಯೊಬ್ಬನ ಕೈಯಲ್ಲಿ ನೆಲದ ಆಳದಲ್ಲಿರುವ ಖನಿಜ ಅಥವಾ ನಿಕ್ಷೇಪ ಪತ್ತೇ ಹಚ್ಚುವ ಯಂತ್ರ ಇರುವುದು ಗೊತ್ತಾಗಿ ತೀವ್ರವಾಗಿ ವಿಚಾರಣೆ ನಡೆಸಿದಾಗ ನಿಧಿ ಶೋಧಿಸಲು ಬಂದಿದ್ದಾಗಿ ಒಪ್ಪಿಕೊಂಡಿದ್ದಾರೆ.

ದಾಳಿ ನಡೆದ ಕೂಡಲೇ ನಿಧಿಗಾಗಿ ಅಗೆಯುತ್ತಿದ್ದವರು ಓಡಿ ಹೋಗಿದ್ದರಿಂದ 6 ಜನರ ಯುವಕರ ತಂಡದ ಕೈಗೆ ಸಿಕ್ಕಿ ಹಾಕಿಕೊಂಡಿದ್ದಾರೆ. ಎಲ್ಲರನ್ನೂ ಗ್ರಾಮದೇವತೆ ದೇವಸ್ಥಾನಕ್ಕೆ ಕರೆತಂದು ವಿಚಾರಣೆ ನಡೆಸಿದಾಗ ಸತ್ಯಾಂಶ ಬಾಯಿ ಬಿಟ್ಟಿದ್ದಾರೆ. ನಿಧಿ ಶೋಧಿಸುವ ತಂಡದ ನಾಯಕ ಹಡಲಗೇರಿ ಗ್ರಾಮದ ವಿಠ್ಠಲ ಇಂಡಿ ಎಂಬಾತ ಊರಿನ ಧಣಿಗಳು ಸ್ಥಳಕ್ಕೆ ಬಂದು ಜಾಗ ತೋರಿಸಿದ್ದರಿಂದ ಅಲ್ಲಿ ಅಗೆಯಲು ಮುಂದಾಗಿದ್ದೆವು ಎಂದು ಹೇಳಿದ್ದು ಮತ್ತು ಯಂತ್ರವನ್ನು ಹೊಂದಿದ್ದ ವ್ಯಕ್ತಿ ತನ್ನದು ತಪ್ಪಾಯಿತು. ನನಗೆ ಇವರೇ ಫೋನ್ ಮಾಡಿ ಬಾ ಎಂದು ಕರೆಸಿದ್ದರು.

ನನ್ನನ್ನು ಬಿಟ್ಟುಬಿಡಿ ಎಂದು ಅಂಗಲಾಚುತ್ತಿರುವುದು ಗ್ರಾಮಸ್ಥರು ಘಟನೆ ನಡೆದ ಕೂಡಲೇ ಮಾಡಿಕೊಂಡ ವಿಡಿಯೋದಲ್ಲಿ ದಾಖಲಾಗಿದೆ. ತಡರಾತ್ರಿಯೇ ಮುದ್ದೇಬಿಹಾಳ ಪೊಲೀಸ್ ಠಾಣೆಯಿಂದ ಪೊಲೀಸರು ಸ್ಥಳಕ್ಕೆ ಬಂದು ಎಲ್ಲ ಆರು ಆರೋಪಿಗಳನ್ನು, ಆಲೂರ ಆಯಂಡ್ ಕಂಪನಿ ಹೆಸರಿನಲ್ಲಿದ್ದ ಜೆಸಿಬಿ ಯಂತ್ರವನ್ನು, 3-4 ಬೈಕ್‌ಗಳನ್ನು ವಶಪಡಿಸಿಕೊಂಡು ಠಾಣೆಗೆ ಒಯ್ದರು. ನಿಧಿ ಶೋಧನಾ ತಂಡದ ನಾಯಕ ವೃತ್ತಿಯಲ್ಲಿ ಸೆಂಟ್ರಿಂಗ್ ಕೆಲಸ ಮಾಡುತ್ತಿರುವ ಹಡಲಗೇರಿ ಗ್ರಾಮದ ವಿಠ್ಠಲ ನಿಂಗಪ್ಪ ಇಂಡಿ, ಜೆಸಿಬಿ ಚಾಲಕ ಮುದ್ದೇಬಿಹಾಳದ ಶಾರೂಖ ದಸ್ತಗೀರ ಮುಲ್ಲಾ, ಇವರಿಗೆ ಸಹಾಯಕರಾಗಿದ್ದ ಬಾಗಲಕೋಟ ಜಿಲ್ಲೆ ಕಮತಗಿಯ ನಿಂಗಯ್ಯ ಗಂಗಾಧರಯ್ಯ ಪಾಪನಾರಮಠ (ನಿಧಿ ಶೋಧಿಸುವ ಯಂತ್ರ ಹೊಂದಿದ್ದ ವ್ಯಕ್ತಿ), ಕೃಷ್ಣಪ್ಪ ಭೀಮರಾಯಪ್ಪ ಹುಗ್ಗಿ, ಮುದ್ದೇಬಿಹಾಳದಲ್ಲಿ ಗೌಂಡಿ ಕೆಲಸ ಮಾಡುವ ರಮೇಶ ಶಾಂತಪ್ಪ ವಡ್ಡರ, ಕುಂಟೋಜಿ ಗ್ರಾಮದ ಯಲ್ಲಪ್ಪ ಲಕ್ಷ್ಮಿಬಾಯಿ ಚಲವಾದಿ ಇವರನ್ನು ಬಂಧಿಸಿ, ಪ್ರಕರಣ ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಿದ್ದಾರೆ. ನದಿಯ ಆಚೆ ದಡದಿಂದ (ಹುನಗುಂದ ತಾಲೂಕು) ತೆಪ್ಪದಲ್ಲಿ ಬಂದಿದ್ದ ಕೆಲವರು ಗ್ರಾಮಸ್ಥರು ದಾಳಿ ನಡೆಸುತ್ತಿದ್ದಂತೆಯೇ ಮುಳ್ಳುಕಂಟಿಗಳಲ್ಲಿ ತಪ್ಪಿಸಿಕೊಂಡು ಓಡಿ ಹೋಗಿದ್ದಾರೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.




ಉದಯವಾಹಿನಿ ಚಿತ್ರ

**ಪ್ರಕರಣ ದಾಖಲಿಸಿ ಕಾನೂನು ಕ್ರಮ**

**ಗ್ರಾಮಸ್ಥರ ಆರೋಪ**

**ನಿಧಿ ಶೋಧಿಸಲು ನಮ್ಮನ್ನು ಕರೆಸಿದ್ದು ಊರಿನ ಧಣಿಗಳಾದ ಮಲಕೇಂದ್ರರಾವ್ ಮಲ್ಲನಗೌಡ ನಾಡಗೌಡರ ಎನ್ನುವುದನ್ನು ಆರೋಪಿಗಳೇ ತಿಳಿಸಿದ್ದಾರೆ. ನಿಧಿ ಶೋಧಿಸಿದ ಜಾಗ ರಕ್ಕಸ ತಂಗಡಗಿ ಯುದ್ಧ ನಡೆದ ಸ್ಥಳವಾಗಿದೆ. ಅಲ್ಲಿ ಊರಿನ ಹಿರಿಯರೆನ್ನಿಸಿಕೊಂಡವರು ಮುಳುಗಡೆ ಆಗುವುದಕ್ಕೂ ಮೊದಲು ವಾಸವಾಗಿದ್ದರು. ಆದರೆ ಪೊಲೀಸ್‌ರು ಯಾರದೋ ಒತ್ತಡಕ್ಕೆ ಮಣಿದು ಪ್ರಮುಖ ಆರೋಪಿಯ ಮೇಲೆ ಪ್ರಕರಣ ದಾಖಲಿಸುವ ಬದಲು ಅವರನ್ನೇ ಸಂಪರ್ಕಿಸಿ ಅವರ ಕಡೆಯ ಜನರಿಂದಲೇ ಸ್ಥಳ ಪಂಚನಾಮೆ ನಡೆಸಿದ್ದಾರೆ. ಈ ಬಗ್ಗೆ ಪ್ರಶ್ನಿಸಿದರೆ ನನ್ನ ಮೇಲೆಯೇ ಪ್ರಕರಣ ದಾಖಲಿಸುವುದಾಗಿ ಬೆದರಿಸುತ್ತಾರೆ. ಪ್ರತ್ಯಕ್ಷದರ್ಶಿಗಳಿಂದ ಸ್ಥಳ ಪಂಚನಾಮೆ ನಡೆಸುವ ಬದಲು ಧಣಿಗಳ ಕಡೆಯವರನ್ನು ಕರೆಸಿ ಪಂಚನಾಮೆ ನಡೆಸಿದ್ದಾರೆ. ಈ ಕುರಿತು ಬೆಳಗಾವಿ ವಲಯ ಐಜಿಪಿಯವರಿಗೆ ನಾವೆಲ್ಲ ಗ್ರಾಮಸ್ಥರು ಮಾಹಿತಿ ನೀಡಿದ್ದೇವೆ. ಇದಲ್ಲದೆ ನಿಧಿ ಶೋಧಿಸುವಲ್ಲಿ ದೊಡ್ಡವರ ಕೈವಾಡ ಇದ್ದು ನಿಷ್ಪಕ್ಷಪಾತ ತನಿಖೆ ನಡೆಸಿ ಸತ್ಯ ಬಹಿರಂಗಪಡಿಸುವಂತೆ ಒತ್ತಾಯಿಸಿದ್ದೇವೆ ಎಂದು ನಿಧಿ ಶೋಧಿಸುವ ತಂಡವನ್ನು ಹಿಡಿದು ಹೆಡಮುರಿ ಕಟ್ಟುವಲ್ಲಿ ಯಶಸ್ವಿಯಾಗಿರುವ ಗ್ರಾಮದ ಯುವ ಮುಖಂಡ ಶಿವರಾಯ ಕನ್ನೊಳ್ಳಿ ಮಾಧ್ಯಮಗಳಿಗೆ ತಿಳಿಸಿದ್ದಾರೆ.**

# ಕೇರಳದಲ್ಲಿ ಸಿಲುಕಿದ ಬ್ರಿಟನ್ನ ಆಗಸದ ಮಾಂತ್ರಿಕ, ಅತಿ ದುಬಾರಿ ಎಫ್-35ಬಿ ಫೈಟರ್ ಜೆಟ್

**ನಾಲ್ಕು ದಿನಗಳಿಂದ ಸ್ಟ್ರಕ್**

**ತಿರುವನಂತಪುರಂ:** ಬ್ರಿಟನ್‌ನ ರಾಯಲ್ ನೌಕಾಪಡೆಯ ಎಫ್-35ಬಿ ಯುದ್ಧ ವಿಮಾನ 4 ದಿನಗಳ ಹಿಂದೆ ತಿರುವನಂತಪುರಂನಲ್ಲಿ ಎಮರ್ಜೆನ್ಸಿ ಲ್ಯಾಂಡ್ ಆಗಿತ್ತು. ಇದು ಜಗತ್ತಿನ ಅತ್ಯಂತ ದುಬಾರಿ ಹಾಗೂ ಅತ್ಯಾಧುನಿಕ ಫೈಟರ್ ಜೆಟ್. ಇದನ್ನು ಆಗಸದ ಮಾಂತ್ರಿಕ ಎಂತಲೂ ಕರೆಯುತ್ತಾರೆ. ಆದರೆ, ತಿರುವನಂತಪುರಂ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಳೆದ ನಾಲ್ಕು ದಿನಗಳಿಂದ ಈ ವಿಮಾನ ಸ್ಟ್ರಕ್ ಆಗಿದೆ. ಈ ಫೈಟರ್ ಜೆಟ್‌ನ ಬೆಲೆ ಬರೋಬ್ಬರಿ 100 ಮಿಲಿಯನ್ ಡಾಲರ್‌ಗಿಂತಲೂ ಹೆಚ್ಚು ಅಂದ್ರೇ ಭಾರತದ ರೂಪಾಯಿಗೆ ಕನ್ವರ್ಟ್ ಮಾಡಿದರೆ ಸುಮಾರು 924 ಕೋಟಿ ರೂ. ಆಗುತ್ತೆ. ಇಂತಹ ಯುದ್ಧ ವಿಮಾನ ಕೇರಳದಲ್ಲಿಯೇ ನಾಲ್ಕು ದಿನದಿಂದ ಉಳಿದಿರೋದು ಏಕೆ, ತಾಂತ್ರಿಕ ದೋಷ ಕಾರಣವಾ ಅಥವಾ ಬ್ರಿಟನ್ ತನ್ನ ಫೈಟರ್ ಜೆಟ್ ಅನ್ನು ವಾಪಸ್ ತೆಗೆದುಕೊಂಡು ಹೋಗದಿರುವುದಕ್ಕೆ ಮತ್ತೇನಾದ್ರೂ ಕಾರಣ ಇದೆಯಾ? ಎಂಬುದನ್ನು ಇಲ್ಲಿ ನೋಡೋಣ ಬನ್ನಿ.

ಹೌದು, ಬ್ರಿಟನ್‌ನ ರಾಯಲ್ ನೌಕಾಪಡೆಯ ಯುದ್ಧ ವಿಮಾನ ಅಂತಾರಾಷ್ಟ್ರೀಯ ಜಲ ಪ್ರದೇಶದಲ್ಲಿ ರಾತ್ರಿ ಹಾರಾಟ ನಡೆಸುತ್ತಿದ್ದಾಗ ತಾಂತ್ರಿಕ ತೊಂದರೆ ಕಾಣಿಸಿಕೊಂಡಿದೆ. ಹೈಡ್ರಾಲಿಕ್ ವ್ಯವಸ್ಥೆಯಲ್ಲಿ ದೋಷ ಕಂಡುಬಂದಿದ್ದರಿಂದ ವಿಮಾನವನ್ನು ತುರ್ತಾಗಿ ತಿರುವನಂತಪುರದಲ್ಲಿ ಲ್ಯಾಂಡಿಂಗ್ ಮಾಡಲಾಗಿತ್ತು. ಕೇರಳ ಕರಾವಳಿಯಿಂದ 100 ನಾಟಿಕಲ್ ಮೈಲಿ ದೂರದಲ್ಲಿದ್ದ ಬ್ರಿಟನ್‌ನ ಪ್ರಿನ್ಸ್ ಆಫ್ ವೇಲ್ಸ್ ಎಂಬ ಯುದ್ಧ ನೌಕೆಯಿಂದ ಈ ಫೈಟರ್ ಜೆಟ್ ಟೇಕ್ ಆಫ್ ಆಗಿತ್ತು. ದೋಷದ ಬೆನ್ನಲ್ಲೇ ತಿರುವನಂತಪುರಂ ಏರ್‌ಪೋರ್ಟ್‌ನಲ್ಲಿ ಫೈಟರ್



ಜೆಟ್ ಅನ್ನು ಎಮರ್ಜೆನ್ಸಿ ಲ್ಯಾಂಡಿಂಗ್ ಮಾಡಲಾಗಿದೆ.

ವಿಮಾನದಲ್ಲಿ ತೊಂದರೆ ಕಾಣಿಸಿಕೊಂಡ ತಕ್ಷಣ ರಾಯಲ್ ನೌಕಾಪಡೆಯ ತಂತ್ರಜ್ಞರು ಹೆಲಿಕಾಪ್ಟರ್ ಮೂಲಕ ಆಗಮಿಸಿ ರಿಪೇರಿ ಕಾರ್ಯ ನಡೆಸಿದ್ದಾರೆ. ಆದರೆ, ತಾಂತ್ರಿಕ ಸಮಸ್ಯೆಗಳು ಬಗೆಹರಿಯದ ಕಾರಣ ವಿಮಾನ ಏರ್‌ಪೋರ್ಟ್‌ನಲ್ಲಿಯೇ ನಿಂತಿದೆ. ಮಂಗಳವಾರ ಬೆಳಗ್ಗೆ ಫೈಟರ್ ಜೆಟ್ ಟೇಕ್ ಆಫ್ ಆಗುವ ನಿರೀಕ್ಷೆ ಇತ್ತು. ಆದರೆ, ಎಫ್-35ಬಿ ಫೈಟರ್ ಜೆಟ್ ಮಾತ್ರ ತಿರುವನಂತಪುರಂನಲ್ಲಿಯೇ ನಿಂತಿದೆ.

**ಎಮರ್ಜೆನ್ಸಿಯನ್ನು ಐಎಎಫ್ ನಿರ್ವಹಿಸಿದ್ದು ಹೇಗೆ?**

ಜೂನ್ 14ರ ರಾತ್ರಿ 9.30ಕ್ಕೆ ಈ ಘಟನೆ ಸಂಭವಿಸಿದೆ. ಹವಾಮಾನ ಬಹಳ ಹದಗೆಟ್ಟಿದ್ದರಿಂದ ಎಫ್-35ಬಿ ಫೈಟರ್ ಜೆಟ್ ವಾಪಸ್ ಯುದ್ಧನೌಕೆಗೆ ಹೋಗಲು ಆಗಿಲ್ಲ. ಆ ವೇಳೆ ಮಧ್ಯಪ್ರವೇಶಿಸಿದ ಭಾರತೀಯ ವಾಯುಸೇನೆ ತನ್ನ ರಾಡಾರ್ ನೆಟ್ ವರ್ಕ್ ಬಳಸಿ, ಏರ್ ಟ್ರಾಫಿಕ್ ಕಂಟ್ರೋಲ್ ಜೊತೆ ಕಮ್ಯುನಿಕೇಷನ್ ಎಸ್ಟಾಬ್ಲಿಷ್ ಮಾಡಿದೆ.

## ಪಾಕ್ ಸೇನಾ ಮುಖ್ಯಸ್ಥನಿಗೆ ಭೋಜನ ಕೂಟ ಏರ್ಪಡಿಸಿದ ಟ್ರಂಪ್

**ವಾಷಿಂಗ್ಟನ್:** ಮತ್ತೆ ಅಮೆರಿಕದ ನರಿ ಬುದ್ದಿ ಬಯಲಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶ್ವೇತಭವನದಲ್ಲಿ ಇಂದು ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರಿಗೆ ಭೋಜನ ಕೂಟ ಆಯೋಜಿಸಿದ್ದಾರೆ. ಅಧ್ಯಕ್ಷರು ಪಾಕಿಸ್ತಾನ ಇಸ್ಲಾಮಿಕ್ ಗಣರಾಜ್ಯದ ಸೇನಾ ಮುಖ್ಯಸ್ಥರೊಂದಿಗೆ ಊಟ ಮಾಡುತ್ತಾರೆ ಎಂದು ಶ್ವೇತಭವನ ಹೊರಡಿಸಿದ ಹೇಳಿಕೆಯಲ್ಲಿ ತಿಳಿಸಲಾಗಿದೆ. ಕೂಟವು ಮಧ್ಯಾಹ್ನ 1 ಗಂಟೆಗೆ (ಸ್ಥಳೀಯ ಸಮಯ) ಶ್ವೇತಭವನದ ಕ್ಯಾಬಿನೆಟ್ ಕೊಠಡಿಯಲ್ಲಿ ನಡೆಯಲಿದೆ.

ಜಿ7 ನಾಯಕರ ಶೃಂಗಸಭೆಗಾಗಿ ಕೆನಡಾದ ಕನನಾಸ್ಕಿಸ್‌ಗೆ ತಮ್ಮ ಪ್ರವಾಸವನ್ನು ಟ್ರಂಪ್ ಮೊಟಕುಗೊಳಿಸಿದ್ದರು, ಇತ್ತೀಚಿನ ಇಸ್ರೇಲ್-ಇರಾನ್ ಸಂಘರ್ಷದೊಂದಿಗೆ ಮಧ್ಯಪ್ರಾಚ್ಯದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ನಿನ್ನೆ ಬೆಳಿಗ್ಗೆ ವಾಷಿಂಗ್ಟನ್‌ಗೆ ಮರಳಿದರು.

## ಲಾರಿ ಉರುಳಿ ನಾಲ್ವರ ದುರ್ಮರಣ

**ಆಗ್ರಾ:** ಆಗ್ರಾದ ರಾಷ್ಟ್ರೀಯ ಹೆದ್ದಾರಿ-9 ರಲ್ಲಿ ಬೆಳಿಗ್ಗೆ ಮಾವು ತುಂಬಿದ ವಾಹನವೊಂದು ಫ್ಲೈಓವರ್‌ನಿಂದ ಬಿದ್ದು ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಟ್ರಾನ್ಸ ಯಮುನಾ ಪೊಲೀಸ್ ಠಾಣೆ ಪ್ರದೇಶದಲ್ಲಿ ಬೆಳಿಗ್ಗೆ 5 ಗಂಟೆ ಸುಮಾರಿಗೆ ಈ ಅಪಘಾತ ಸಂಭವಿಸಿದೆ ಎಂದು ಸಹಾಯಕ ಪೊಲೀಸ್ ಆಯುಕ್ತ ಹೇಮಂತ್ ಕುಮಾರ್ ತಿಳಿಸಿದ್ದಾರೆ.

ಫಿರೋಜಾಬಾದ್ ನಿಂದ ಮಾವು ತುಂಬುತ್ತಿದ್ದ ಲೋಡರ್ ವಾಹನವು ಫ್ಲೈಓವರ್ ಹತ್ತುತ್ತಿದ್ದಾಗ ನಿಯಂತ್ರಣ ತಪ್ಪಿತು. ವಾಹನವು ಅಂಚಿನಿಂದ ಉರುಳಿ ಎತ್ತರದಿಂದ ಬಿದ್ದಿತು.

ಫ್ಲೈ ಓವರ್ ಕೆಳಗೆ, ರಾಜೇಶ್ (65), ರಾಮೇಶ್ವರ್ (60) ಮತ್ತು ಹರಿಬಾಬು (63) ಎಂಬ ಮೂವರು ಪುರುಷರು ಬೆಳಗಿನ ನಡಿಗೆಯ ನಂತರ ಕುಳಿತಿದ್ದಾಗ ಅವರ ಮೇಲೆ ವಾಹನ ಬಿದ್ದು, ಮೂವರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿ ಹೇಳಿದರು.


## ಮೂವರು ಮಾವೋ ಉಗ್ರರ ಹತ್ಯೆ

**ರಂಪಚೋಡವರಂ:** ಆಂಧ್ರಪ್ರದೇಶದ ಅಲ್ಲೂರಿ ಸೀತಾರಾಮರಾಜು ಜಿಲ್ಲೆಯಲ್ಲಿ ಬೆಳಿಗ್ಗೆ ಮೂವರು ಮಾವೋವಾದಿಗಳನ್ನು ಹತ್ಯೆ ಮಾಡಲಾಗಿದೆ. ಜಿಲ್ಲೆಯಲ್ಲಿ ನಡೆದ ಶೋಧ ಕಾರ್ಯಾಚರಣೆಯ ಸಂದರ್ಭದಲ್ಲಿ ಪೊಲೀಸರೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಮೂವರು ಮಾವೋವಾದಿಗಳು ಸಾವನ್ನಪ್ಪಿದ್ದಾರೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಪೂರ್ವ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಶೋಧ ಕಾರ್ಯಾಚರಣೆ ನಡೆಸಲಾಗಿದ್ದು, ಮೃತರ ಗುರುತು ಇನ್ನೂ ಪತ್ತೆಯಾಗಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಪೊಲೀಸರೊಂದಿಗಿನ ಗುಂಡಿನ ಚಕಮಕಿಯಲ್ಲಿ ಮೂವರು ಮಾವೋವಾದಿಗಳು ಸಾವನ್ನಪ್ಪಿದ್ದಾರೆ ಎಂದು ಅಲ್ಲೂರಿ ಸೀತಾರಾಮರಾಜು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಪಿ) ಅಮಿತ್ ಬರ್ದಾರ್ ತಿಳಿಸಿದ್ದಾರೆ.

## ಜ್ವಾಲಮುಖಿ ಸ್ಫೋಟ, ದೆಹಲಿಗೆ ಹಿಂತಿರುಗಿದ ಏರ್ ಇಂಡಿಯಾ ವಿಮಾನ

**ಮುಂಬೈ:** ಇಂಡೋನೇಷ್ಯಾದ ಬಾಲಿ ವಿಮಾನ ನಿಲ್ದಾಣದ ಬಳಿ ಜ್ವಾಲಾಮುಖಿ ಸ್ಫೋಟದಿಂದಾಗಿ ಏರ್ ಇಂಡಿಯಾ ವಿಮಾನವನ್ನು ರಾಷ್ಟ್ರ ರಾಜಧಾನಿಗೆ ಹಿಂತಿರುಗಿಸಬೇಕಾಯಿತು. ದೆಹಲಿ-ಬಾಲಿ ವಿಮಾನವನ್ನು ರಾಷ್ಟ್ರೀಯ ರಾಜಧಾನಿಗೆ ಮಧ್ಯದಲ್ಲೇ ತಿರುಗಿಸಬೇಕಾಯಿತು ಎಂದು ವಿಮಾನಯಾನ ಸಂಸ್ಥೆ ಹೇಳಿಕೆಯಲ್ಲಿ ತಿಳಿಸಿದೆ.



ವಿಮಾನವು ದೆಹಲಿಯಲ್ಲಿ ಸುರಕ್ಷಿತವಾಗಿ ಇಳಿಯಿತು ಮತ್ತು ಎಲ್ಲಾ ಪ್ರಯಾಣಿಕರನ್ನು ಕೆಳಗಿಳಿಸಲಾಯಿತು ಎಂದು ಏರ್ ಇಂಡಿಯಾ ಹೇಳಿಕೆಯಲ್ಲಿ ತಿಳಿಸಿದೆ. ದೆಹಲಿಯಿಂದ ಬಾಲಿಗೆ ಪ್ರಯಾಣಿಸುತ್ತಿದ್ದ ಏರ್ ಇಂಡಿಯಾ ವಿಮಾನ 2145 ಅನ್ನು ಬಾಲಿ ವಿಮಾನ ನಿಲ್ದಾಣದ ಬಳಿ ಜ್ವಾಲಾಮುಖಿ ಸ್ಫೋಟದ ವರದಿಗಳ ಕಾರಣ ಸುರಕ್ಷತೆಯ ಹಿತದೃಷ್ಟಿಯಿಂದ ದೆಹಲಿಗೆ ಹಿಂತಿರುಗಲು ಸೂಚಿಸಲಾಯಿತು ಎಂದು ಅದು ಹೇಳಿದೆ. ಪ್ರಯಾಣಿಕರಿಗೆ ಹೋಟೆಲ್ ವಸತಿ ಒದಗಿಸಲಾಗಿದೆ ಎಂದು ಏರ್ ಇಂಡಿಯಾ ಹೇಳಿದೆ. ರದ್ದತಿ ಅಥವಾ ಉಚಿತ ಮರುಹೊಂದಿಸುವಿಕೆಯ ಸಂಪೂರ್ಣ ಮರುಪಾವತಿಯನ್ನು ಸಹ ಪ್ರಯಾಣಿಕರಿಗೆ ನೀಡಲಾಗಿದೆ.

## ಬೋಯಿಂಗ್ ನಿರ್ವಹಣೆ, ಮಸ್ಕ್ ಟೀಕೆ

**ವಾಷಿಂಗ್ಟನ್:** ಟೆಸ್ಲಾ ಮಾಲೀಕ ಎಲೋನ್ ಮಸ್ಕ್ ಇತ್ತೀಚೆಗೆ ಏರ್ ಇಂಡಿಯಾ ವಿಮಾನ ಅಪಘಾತಕ್ಕೆ ಸಂಬಂಧಿಸಿದಂತೆ ಬೋಯಿಂಗ್‌ನ ನಿರ್ವಹಣಾ ವ್ಯವಸ್ಥೆ ಕುರಿತು ಟೀಕಿಸಿದ್ದಾರೆ. ಬೋಯಿಂಗ್‌ನ ಸಮಸ್ಯೆಗೆ ಹಲವಾರು ವ್ಯವಸ್ಥಾಪಕರು ಇರುವುದೇ ಮುಖ್ಯ ಕಾರಣ ಸಾಕಷ್ಟು ಸಂಖ್ಯೆಯಲ್ಲಿ ಸಮರ್ಥ ನುರಿತ ಇಂಜಿನೀಯರ್‌ಗಳು ಇಲ್ಲದೆ ಇರುವುದು ಮೂಲ ಕಾರಣ ಎಂದು ಅವರು ಈ ಕುರಿತು ಪೋಸ್ಟ್ ಹಂಚಿಕೊಂಡಿದ್ದಾರೆ. 242 ಜನರನ್ನು ಹೊತ್ತೊಯ್ಯುತ್ತಿದ್ದ ಏರ್ ಇಂಡಿಯಾದ ಬೋಯಿಂಗ್ 787-8 ಡ್ರೀಮ್‌ಲೈನರ್ ವಿಮಾನ ಜೂನ್ 12, 2024ರಂದು ಅಹಮದಾಬಾದ್ ನಿಂದ ಟೇಕ್ ಆಫ್ ಆದ ಸ್ವಲ್ಪ ಸಮಯದ ನಂತರ ಪತನಗೊಂಡಿದೆ.

ವಿಮಾನದಲ್ಲಿದ್ದ ಒಬ್ಬ ವ್ಯಕ್ತಿಯನ್ನು ಹೊರತುಪಡಿಸಿ ಎಲ್ಲರೂ ಸಾವನ್ನಪ್ಪಿದ್ದಾರೆ. ಈ ಘಟನೆಯ ನಂತರ, ಏರ್ ಇಂಡಿಯಾ ವಿಮಾನಗಳ ಬಗ್ಗೆ ಹಲವು ಪ್ರಶ್ನೆಗಳು ಉದ್ಭವಿಸಲು ಪ್ರಾರಂಭಿಸಿವೆ. ಈ ಮಧ್ಯೆ, ಟೆಸ್ಲಾ ಮಾಲೀಕ ಎಲೋನ್ ಮಸ್ಕ್ ಅವರ ಹಳೆಯ ಟ್ವೀಟ್ ವೈರಲ್ ಆಗುತ್ತಿದೆ, ಬೋಯಿಂಗ್‌ನ ನಿರ್ವಹಣಾ ರಚನೆಯನ್ನು ಟೀಕಿಸಿರುವ ಎಲೋನ್ ಮಸ್ಕ್ ಅವರ ಟ್ವೀಟ್ ಬೆಳಕಿಗೆ ಬಂದಿದೆ.

ಬೋಯಿಂಗ್ ಗಗನಯಾತ್ರಿ ಕ್ಯಾಪ್ಸುಲ್ ಅಭಿವೃದ್ಧಿಪಡಿಸಲು 4.2 ಬಿಲಿಯನ್ ಪಡೆದಿದ್ದರೂ ಮತ್ತು ಸ್ಪೇಸ್ ಎಕ್ಸ್ ಕೇವಲ 2.6 ಬಿಲಿಯನ್ ಪಡೆದಿದ್ದರೂ, ಸ್ಪೇಸ್‌ಎಕ್ಸ್ 4 ವರ್ಷಗಳ ಹಿಂದೆಯೇ ಕೆಲಸವನ್ನು ಪೂರ್ಣಗೊಳಿಸಿದೆ. ಗಮನಿಸಿ, ಡ್ರ್ಯಾಗನ್ 2 ಸಿಬ್ಬಂದಿ ಕ್ಯಾಪ್ಸುಲ್ ವಿನ್ಯಾಸವು ಡ್ರ್ಯಾಗನ್ 1 ನೊಂದಿಗೆ ಯಾವುದೇ ಹೋಲಿಕೆಯನ್ನು ಹೊಂದಿಲ್ಲ. ಬೋಯಿಂಗ್ ಸಾಕಷ್ಟು ತಾಂತ್ರಿಕೇತರ ವ್ಯವಸ್ಥಾಪಕರನ್ನು ಹೊಂದಿದೆ ಎಂದು ಮಸ್ಕ್ ತಮ್ಮ ಪೋಸ್ಟ್‌ನಲ್ಲಿ ಹೇಳಿದ್ದಾರೆ.

ಬೋಯಿಂಗ್‌ನ ಸ್ಟಾರ್‌ಲೈನರ್ ಬಾಹ್ಯಾಕಾಶ ನೌಕೆಯಲ್ಲಿ 4.2 ಬಿಲಿಯನ್ ಹೂಡಿಕೆ ಮಾಡಿರುವುದನ್ನು ಮಸ್ಕ್ ತಮ್ಮ ಪೋಸ್ಟ್‌ನಲ್ಲಿ ಗಮನಸೆಳೆದಿದ್ದಾರೆ.

# ಅಮೆರಿಕ, ಅಕ್ರಮ ಮತ್ತು ಸಾಮೂಹಕ ವಲಸೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ: ಟ್ರಂಪ್

# ಸಾಮೂಹಿಕ ವಲಸೆಗೆ ಇಂಬು ಕೊಡುವವರ ಕೊಂಬು ಮುರಿತಿನಿ:ಅಮೆರಿಕ

**ಹೊಸ ವೀಸಾ ನಿರ್ಬಂಧ**

**ಅಮೆರಿಕ:** ಡೊನಾಲ್ಡ್ ಟ್ರಂಪ್ ಅವರು ಅಮೆರಿಕದ ಅಧ್ಯಕ್ಷರಾಗಿ ಎರಡನೇ ಬಾರಿ ಅಧಿಕಾರ ಸ್ವೀಕರಿಸಿದ ಬಳಿಕ, ಅಮೆರಿಕದ ವಲಸೆ ನೀತಿ ಬಹಳಷ್ಟು ಬದಲಾಗಿದೆ. ದಿನಕ್ಕೊಂದು ಹೊಸ ನಿಯಮಗಳು ಜಾರಿಯಾಗುತ್ತಿದ್ದು, ದೇಶವನ್ನು ವಲಸಿಗರಿಂದ ಮುಕ್ತಗೊಳಿಸುವ ಗುರಿಯನ್ನು ಹೊಂದಿರುವುದು ಸ್ಪಷ್ಟವಾಗುತ್ತಿದೆ. ಅದರಂತೆ ಇದೀಗ ಮತ್ತೆ ಹೊಸ ವೀಸಾ ನಿರ್ಬಂಧಗಳನ್ನು ಜಾರಿಗೊಳಿಸಿರುವ ಅಮೆರಿಕ, ಅಕ್ರಮ ಮತ್ತು ಸಾಮೂಹಕ ವಲಸೆಯನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಘೋಷಿಸಿದೆ.

ಈ ಕುರಿತು ರಾಜಧಾನಿ ಹೊಸದಿಲ್ಲಿಯಲ್ಲಿರುವ ಭಾರತಕ್ಕೆ ಅಮೆರಿಕ ರಾಯಭಾರ ಕಚೇರಿ ಮಾಹಿತಿ ನೀಡಿದ್ದು, ಅಕ್ರಮ ಮತ್ತು ಸಾಮೂಹಿಕ ವಲಸೆಯನ್ನು ತಡೆಗಟ್ಟಲು ಅಮೆರಿಕ ಸಾಧ್ಯವಾದ ಎಲ್ಲವನ್ನೂ ಮಾಡಲಿದೆ ಎಂದು ಸ್ಪಷ್ಟಪಡಿಸಿದೆ.

ಜಗತ್ತಿನಾದ್ಯಂತ ಇರುವ ಅಮೆರಿಕದ ರಾಯಭಾರ ಕಚೇರಿಗಳು, ಏಕಕಾಲದಲ್ಲಿ ಈ ಮಾಹಿತಿಯನ್ನು ಹಂಚಿಕೊಂಡಿವೆ. ಅಮೆರಿಕಕ್ಕೆ ಅಕ್ರಮ ಮತ್ತು ಸಾಮೂಹಿಕ ವಲಸೆಗೆ ಅನುಕೂಲ ಮಾಡಿಕೊಡುವವರನ್ನು ನಾವು ಸಹಿಸುವುದಿಲ್ಲ ಎಂದು ರಾಯಭಾರ ಕಚೇರಿಯ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಒಂದು ವೇಳೆ ಯಾವುದೇ ವಿದೇಶಿ ಸರ್ಕಾರಿ ಅಧಿಕಾರಿ ಸಾಮೂಹಕ ವಲಸೆಗೆ ಅವಕಾಶ ಮಾಡಿಕೊಡುತ್ತಿರುವುದು ಕಂಡುಬಂದರೆ, ಅಂತಹವರ ವಿರುದ್ಧವೂ ಕ್ರಮ ಕೈಗೊಳ್ಳಲು ಅನುವಾಗುವಂತೆ, ಹೊಸ ವೀಸಾ ನಿರ್ಬಂಧಗಳನ್ನು ಅಮೆರಿಕ ಜಾರಿಗೊಳಿಸಿದೆ.ಅಮೆರಿಕಕ್ಕೆ ಅಕ್ರಮ ಮತ್ತು ಸಾಮೂಹಿಕ ವಲಸೆಗೆ ಅನುಕೂಲ ಮಾಡಿಕೊಡುವವರನ್ನು ಸಹಿಸುವುದಿಲ್ಲ ಎಂದಿರುವ ಅಮೆರಿಕ, ಅಕ್ರಮ ಮತ್ತು ಸಾಮೂಹಿಕ ವಲಸೆಗೆ ಕುಮ್ಮಕ್ಕು ನೀಡುವ ವಿದೇಶಿ ಸರ್ಕಾರಿ ಅಧಿಕಾರಿಗಳನ್ನು ಗುರಿಯಾಗಿಸಿಕೊಂಡು ಹೊಸ ವೀಸಾ ನಿರ್ಬಂಧಗಳನ್ನು ಜಾರಿಗೊಳಿಸಿರುವುದಾಗಿ ಸ್ಪಷ್ಟಪಡಿಸಿದೆ. ಈ ಕುರಿತ ಸಂಪೂರ್ಣ ಮಾಹಿತಿಯನ್ನು ಅಮೆರಿಕ ರಾಯಭಾರ ಕಚೇರಿಯು ತನ್ನ ಅಧಿಕೃತ ಎಕ್ಸ್ ಅಕೌಂಟ್‌ನಲ್ಲಿ ಹಂಚಿಕೊಂಡಿದೆ.ಇತ್ತೀಚೆಗೆ ಕ್ಯಾಲಿಫೋರ್ನಿಯಾದ ಲಾಸ್ ಏಂಜಲೀಸ್‌ನಲ್ಲಿ, ಡೊನಾಲ್ಡ್ ಟ್ರಂಪ್ ಆಡಳಿತವು ವಲಸೆ ದಮನ ಕಾರ್ಯಾಚರಣೆ ನಡೆಸಿತ್ತು.



ಇದನ್ನು ವಿರೋಧಿಸಿ ವ್ಯಾಪಕ ಹಿಂಸಾತ್ಮಕ ಪ್ರತಿಭಟನೆಗಳು ಕೂಡ ನಡೆದಿದ್ದವು. ಈ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ವಿವಿಧ ದೇಶಗಳ ವಲಸಿಗರ ಮೂಲ ದೇಶಗಳು, ಅಮೆರಿಕಕ್ಕೆ ಅಕ್ರಮ ವಲಸೆಯನ್ನು ಬೆಂಬಲಿಸಿವೆ ಎಂಬುದು ಅಮೆರಿಕದ ಆರೋಪವಾಗಿದೆ. ಈ ಹಿನ್ನೆಲೆಯಲ್ಲಿ ಸಾಮೂಹಿಕ ವಲಸೆಗೆ ಅನುವು ಮಾಡಿಕೊಡುವ ವಿದೇಶಿ ಸರ್ಕಾರಿ ಅಧಿಕಾರಿಗಳ ವೀಸಾದ ಮೇಲೆ ನಿರ್ಬಂಧ ಹೇರುವ ಹೊಸ ನಿಯಮವನ್ನು ಅಮೆರಿಕ ಜಾರಿಗೆ ತಂದಿದೆ.

**ವಾಸ್ತವ್ಯದ ಕನಸು ನುಚ್ಚುನೂರು**

**ಅಕ್ರಮ ವಲಸೆಯನ್ನು ಬೆಂಬಲಿಸುವ ದೇಶಗಳ ಸಾಮಾನ್ಯ ಪ್ರಜೆಗಳಿಗೂ ಅಮೆರಿಕ ಪ್ರವೇಶದ ಮೇಲೆ ವ್ಯಾಪಕ ನಿರ್ಬಂಧಗಳನ್ನು ಹೇರಲಾಗುವುದು ಎಂದು ಡೊನಾಲ್ಡ್ ಟ್ರಂಪ್ ಆಡಳಿತ ಸ್ಪಷ್ಟಪಡಿಸಿದೆ. ಅಮೆರಿಕ ತನ್ನ ಕಠಿಣ ವಲಸೆ ನೀತಿಯಿಂದ ಜಾಗತಿಕ ಮಟ್ಟದಲ್ಲಿ ಭಾರೀ ಬದಲಾವಣೆಗಳಿಗೆ ಕಾರಣವಾಗಿದೆ. ಇದರಿಂದಾಗಿ ಲಕ್ಷಾಂತರ ಜನರ ಅಮೆರಿಕ ವಾಸ್ತವ್ಯದ ಕನಸು ನುಚ್ಚುನೂರಾಗಿದೆ.**

ಆದಾಗ್ಯೂ, ಇದು ಅಮೆರಿಕದ ಭದ್ರತೆಗೆ ಅಗತ್ಯ ಕ್ರಮ ಎಂಬ ಡೊನಾಲ್ಡ್ ಟ್ರಂಪ್ ಆಡಳಿತದ ವಾದವನ್ನು ತಿರಸ್ಕರಿಸುವುದು ಅಷ್ಟು ಸುಲಭದ ಮಾತಲ್ಲ. ಅಮೆರಿಕವು ತನ್ನ ದೇಶಕ್ಕೆ ಕಾನೂನುಬದ್ಧ ಪ್ರಯಾಣಿಕರನ್ನು ಸ್ವಾಗತಿಸುತ್ತದೆ. ಆದರೆ ಅಕ್ರಮ ಪ್ರವೇಶ ಮತ್ತು ವೀಸಾಗಳ ದುರುಪಯೋಗ ಅಥವಾ ಅಮೆರಿಕ ಕಾನೂನಿನ ಉಲ್ಲಂಘನೆಯನ್ನು ಸಹಿಸಲು ಸಾಧ್ಯವಿಲ್ಲ ಎಂಬ ಅದರ ಕಠಿಣ ಎಚ್ಚರಿಕೆ ಸಂದೇಶ, ಜಾಗತಿಕ ಮಟ್ಟದಲ್ಲಿ ಪ್ರತಿಧ್ವನಿಸುತ್ತಿದೆ ಎಂದು ಹೇಳಬಹುದು.

**ಕನಕಪುರ ಟ್ಯಾಕ್ಸ್**

**ಟ್ರಂಪ್ ಆಡಳಿತವು ಅಕ್ರಮ ವಲಸೆ ಮತ್ತು ವಿದೇಶಿಯರ ಕಳ್ಳಸಾಗಣೆ ಸುಗಮಗೊಳಿಸುವ ಹಲವಾರು ಕ್ರಿಮಿನಲ್ ಕಾರ್ಟೆಲ್‌ಗಳನ್ನು ಕೂಡ,ವಿದೇಶಿ ಭಯೋತ್ಪಾದಕ ಸಂಘಟನೆಗಳು ಎಂದು ಹೆಸರಿಸಿದೆ. ಅಕ್ರಮ ವಲಸೆ ಹೋಗಿರುವ ತಮ್ಮ ಪ್ರಜೆಗಳನ್ನು ಅಮೆರಿಕದಿಂದ ವಾಪಸ್ ಕರೆತರಲು ಅನುಕೂಲ ಮಾಡಿಕೊಡದ ವಿದೇಶಿ ಸರ್ಕಾರಗಳು,ಗಂಭೀರ ಪರಿಣಾಮಗಳನ್ನು ಎದುರಿಸಬೇಕಾಗುತ್ತದೆ ಎಂದು ಅಮೆರಿಕ ನೇರವಾಗಿ ಎಚ್ಚರಿಸಿದೆ.**

## ಮೋದಿ ನೀವು ದಿ ಬೆಸ್ಟ್, ನಿಮ್ಮಂತೆ ಆಗಲು ನಾ ಟ್ರೈ ಮಾಡ್ತಿದೀನಿ: ಮೆಲೋನಿ



**ಹೊಸದಿಲ್ಲಿ:** ಕೆನಡಾದಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಭಾರತ ಪ್ರಧಾನಿ ನರೇಂದ್ರ ಮೋದಿ ಮತ್ತು ಇಟಲಿಯ ಪ್ರಧಾನಿ ಜಾರ್ಜಿಯಾ ಮೆಲೋನಿ ಭೇಟಿಯಾದರು. ಮೆಲೋನಿಯವರು ಮೋದಿಯವರನ್ನು ನೀವು ಅತ್ಯುತ್ತಮರು ಎಂದು ಹೊಗಳಿದ್ದು, ಅದಕ್ಕೆ ಮೋದಿ ನಗುತ್ತಾ ಪ್ರತಿಕ್ರಿಯಿಸಿರುವ ವೀಡಿಯೋ ಮೆಲೋಡಿ ಮೂಮೆಂಟ್ಸ್ ಎಂದು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ. ಇನ್ನು ಸಭೆಗಳಲ್ಲಿ ಇಬ್ಬರೂ ನಾಯಕರು ಗಂಭೀರ ವಿಷಯಗಳ ಬಗ್ಗೆ ಚರ್ಚಿಸಿದರು.

- **ಕೆನಡಾದಲ್ಲಿ ನಡೆದ ಜಿ7 ಶೃಂಗಸಭೆಯಲ್ಲಿ ಭಾರತ ಪ್ರಧಾನಿ ಮತ್ತು ಇಟಲಿಯ ಪ್ರಧಾನಿ ಭೇಟಿ.**
- **ಮೆಲೋನಿಯವರು ಮೋದಿಯವರನ್ನು ನೀವು ಅತ್ಯುತ್ತಮರು ಎಂದು ಹೊಗಳಿದ್ದಾರೆ.**
- **ಮೋದಿ ನಗುತ್ತಾ ಪ್ರತಿಕ್ರಿಯಿಸಿರುವ ವಿಡಿಯೋ ಮೆಲೋಡಿ ಮೂಮೆಂಟ್ಸ್ ಎಂದ ವೈರಲ್ ಆಗಿದೆ.**

ಭಯೋತ್ಪಾದನೆ ಮತ್ತು ಜಾಗತಿಕ ಸಮಸ್ಯೆಗಳ ಬಗ್ಗೆ ಅವರು ಮಾತನಾಡಿದರು. ಇದಕ್ಕೂ ಮುನ್ನ ನಡೆದ ಇಬ್ಬರು ಪ್ರಧಾನಿಗಳ ಭೇಟಿಯು ಎಲ್ಲರ ಗಮನ ಸೆಳೆಯಿತು.

**ಮೋದಿ ಬಗ್ಗೆ ಏನಂದ್ರು ಮೆಲೋನಿ?:** ನೀವು ಅತ್ಯುತ್ತಮರು. ನಿಮ್ಮಂತೆ ಆಗಲು ನಾನು ಪ್ರಯತ್ನಿಸುತ್ತಿದ್ದೇನೆ ಎಂದು ಮೆಲೋನಿ ಹೇಳಿದ್ದಾರೆ. ಇದಕ್ಕೆ ಮೋದಿ ನಗುತ್ತಾ ಪ್ರತಿಕ್ರಿಯಿಸಿದ್ದಾರೆ. ಈ ಹಿಂದೆ ಜಿ 20 ಶೃಂಗ ಸಭೆಗಳಲ್ಲೂ ಮೋದಿ ಮೆಲೋನಿ ಭೇಟಿಯಾಗಿತ್ತು. ಆಗಲೂ ಮೆಲೋಡಿ ಹ್ಯಾಶ್‌ಟ್ಯಾಗ್ ಬಳಕೆ ಮಾಡಿದ ವಿಡಿಯೋ ಟ್ರೆಂಡ್ ಆಗಿತ್ತು. ಆಗ ಮೆಲೋನಿ ಅವರು ಮೋದಿಯೊಂದಿಗೆ ಸೆಲ್ಫಿ ತೆಗೆದು COP 28ರಲ್ಲಿ ಒಳ್ಳೆಯ ಸ್ನೇಹಿತರು, #Melodi'' ಎಂದು ಪೋಸ್ಟ್ ಮಾಡಿದ್ದರು. ಕೆಲವೇ ಗಂಟೆಗಳಲ್ಲಿ ಆ ಫೋಟೋ ಭಾರೀ ವೈರಲ್ ಆಗಿತ್ತು.

**ಟ್ವೀಟ್ ಮಾಡಿದ ಮೋದಿ - ಮೆಲೋನಿ**

ಜಿ7 ಶೃಂಗಸಭೆಯ ನಂತರ ಮೆಲೋನಿ ಎಕ್ಸ್ ನಲ್ಲಿ ಇಟಲಿ ಮತ್ತು ಭಾರತ, ಉತ್ತಮ ಸ್ನೇಹದಿಂದ ಬೆಸೆದುಕೊಂಡಿವೆ ಎಂದು ಬರೆದುಕೊಂಡಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಮೋದಿ, ಸಂಪೂರ್ಣವಾಗಿ ಒಪ್ಪುತ್ತೇನೆ ಪ್ರಧಾನಿ ಜಾರ್ಜಿಯಾ ಮೆಲೋನಿ. ಇಟಲಿಯೊಂದಿಗೆ ಭಾರತದ ಸ್ನೇಹವು ಮತ್ತಷ್ಟು ಬಲಗೊಳ್ಳುತ್ತದೆ. ಇದು ನಮ್ಮ ಜನರಿಗೆ ಬಹಳಷ್ಟು ಪ್ರಯೋಜನವನ್ನು ನೀಡುತ್ತದೆಎಂದು ಹೇಳಿದ್ದಾರೆ.

## ಮದುವೆಯಾಗಿ ನಂಬಿಸಿ ಗೆಳತಿ ಕೊಲೆ, ಯುವಕ ಅರೆಸ್ಟ್

**ಪಣಜಿ:** ಮದುವೆಯಾಗಿ ನಂಬಿಸಿ ತನ್ನ ಗೆಳತಿಯನ್ನೇ ಬರ್ಬರವಾಗಿ ಕೊಂದ ಆರೋಪದ ಮೇಲೆ ಬೆಂಗಳೂರು ಮೂಲದ ಯುವಕನನ್ನು ಗೋವಾದ ಪೊಲೀಸರು ಬಂಧಿಸಿದ್ದಾರೆ. ಗೋವಾದ ಪ್ರತಾಪ್‌ನಗರದ ಅರಣ್ಯ ಪ್ರದೇಶದಲ್ಲಿ ತನ್ನ ಗೆಳತಿಯನ್ನು ಕೊಂದಿದ್ದ ಆರೋಪದ ಮೇಲೆ ಉತ್ತರ ಬೆಂಗಳೂರಿನ ನಿವಾಸಿ ಸಂಜಯ್.ಕೆವಿನ್. ಎಂ ಎಂಬಾತನನ್ನು ಬಂಧಿಸಲಾಗಿದೆ. ಕೊಲೆಯಾದ ಯುವತಿಯನ್ನು ಇದೇ ಪ್ರದೇಶದ ರೋಶಿ (22) ಮೋಸೆಸ್ ಎಂದು ಹೇಳಲಾಗಿದೆ.

ಇಬ್ಬರೂ ಇತ್ತೀಚೆಗೆ ಗೋವಾಕ್ಕೆ ಆಗಮಿಸಿದ್ದರು. ಅವರು ಮದುವೆಯಾಗಲು ಬೆಂಗಳೂರಿನಿಂದ ಗೋವಾಕ್ಕೆ ಬಂದರು. ಆದರೆ ಯಾವುದೋ ಕಾರಣಕ್ಕಾಗಿ, ಇಬ್ಬರ ನಡುವೆ ಜಗಳ ಉಂಟಾಗಿ ಎರಡು ದಿನಗಳ ಹಿಂದೆ ಸಂಜಯ್ ರೋಕ್ಷಿ ಅವರನ್ನು ಕೊಂದು ಶವವನ್ನು ಕಾಡಿನಲ್ಲಿ ಎಸೆದಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ದಕ್ಷಿಣಗೋವಾದ ಪ್ರತಾಪ್ ನಗರದ ಆರಣ್ಯ ಪ್ರದೇಶದಲ್ಲಿ ರೋಶಿಯ ಶವ ಪತ್ತೆಯಾದಾಗ



ಕೊಲೆ ಪ್ರಕರಣ ಬೆಳಕಿಗೆ ಬಂದಿತು. ಶವ ಪತ್ತೆಯಾದ ನಂತರ ಸ್ಥಳಕ್ಕೆ ಭೇಟಿ ನೀಡಿದ ಪೊಲೀಸ್ ವರಿಷ್ಠಾಧಿಕಾರಿ (ದಕ್ಷಿಣ ಗೋವಾ) ಟಿಕಮ್ ಸಿಂಗ್ ವರ್ಮಾ, ಈ ಕೊಲೆ ಪ್ರೇಮ ಸಂಬಂಧ, ಮದುವೆ ಪ್ರಸ್ತಾಪ ಮತ್ತು ಅದರಿಂದ ಉಂಟಾದ ವಿವಾದದ ಪರಿಣಾಮವಾಗಿ ಸಂಭವಿಸಿದೆ ಎಂದು ಶಂಕಿಸಲಾಗಿದೆ.

ಮೃತದೇಹ ಪತ್ತೆಯಾದ ನಂತರ, ಪೊಲೀಸರು ತನಿಖೆ ಆರಂಭಿಸಿದ ಬಳಿಕ ಸಂಜಯ್ ಬಗ್ಗೆ ಸುಳಿವು ಸಿಕ್ಕಿತು. ಅಪರಾಧ ಪತ್ತೆಯಾದ 24 ಗಂಟೆಗಳ ಒಳಗೆ ಬೆಂಗಳೂರಿನಲ್ಲಿ ಆತನನ್ನು ಪತ್ತೆಹಚ್ಚಿ ಬಂಧಿಸಲಾಗಿದೆ. ಪ್ರಕರಣ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ .

## ಶುಕ್ಲಾ ಬಾಹ್ಯಾಕಾಶ ಪ್ರಯಾಣ ಮತ್ತೆ ಮುಂದೂಡಿಕೆ

**ನವದೆಹಲಿ:** ಭಾರತೀಯ ಗಗನಯಾತ್ರಿ ಶುಭಾಂಶು ಶುಕ್ಲಾ ಅವರ ಅಂತರರಾಷ್ಟ್ರೀಯ ಬಾಹ್ಯಾಕಾಶ ಪ್ರಯಾಣದ ಆಕ್ಸಿಯಮ್ -4 ಮಿಷನ್ ಅನ್ನು ಮತ್ತೆ ಜೂ. 22 ಕ್ಕೆ ಮುಂದೂಡಲಾಗಿದೆ. ಇದರಿಂದಾಗಿ ರಷ್ಯಾದ ವಿಭಾಗದಲ್ಲಿ ಇತ್ತೀಚೆಗೆ ದುರಸ್ತಿ ಮಾಡಿದ ಕಕ್ಷೆಯ ಪ್ರಯೋಗಾಲಯದಲ್ಲಿನ ಕಾರ್ಯಾಚರಣೆಗಳನ್ನು ಮೌಲ್ಯಮಾಪನ ಮಾಡಲು ನಾಸಾಗೆ ಅವಕಾಶ ಸಿಗುತ್ತದೆ ಎಂದು ಆಕ್ಸಿಯಮ್ ಸ್ಪೇಸ್ ಇಂದು ಪ್ರಕಟಿಸಿದೆ.



**ರಷ್ಯಾದ ವಿಭಾಗದಲ್ಲಿ ದುರಸ್ತಿ**

ಭಾರತ, ಹಂಗೇರಿ ಮತ್ತು ಪೋಲೆಂಡ್‌ಗೆ ಬಾಹ್ಯಾಕಾಶಕ್ಕೆ ಮರಳುವ ಆಕ್ಸಿಯಮ್ -4 ಮಿಷನ್ ಅನ್ನು ಜೂನ್ 19 ರಂದು ಫ್ಲೋರಿಡಾದ ನಾಸಾದ ಕೆನಡಿ ಬಾಹ್ಯಾಕಾಶ ಕೇಂದ್ರದಿಂದ ಸ್ಪೇಸ್ ಎಕ್ಸ್‌ನ ಫಾಲ್ಕನ್ 9 ರಾಕೆಟ್‌ನಲ್ಲಿ ಉಡಾವಣೆ ಮಾಡಲು ಮೊದಲೇ ನಿರ್ಧರಿಸಲಾಗಿತ್ತು.


ನಾಸಾ, ಆಕ್ಸಿಯಮ್ ಸ್ಪೇಸ್ ಮತ್ತು ಸ್ಪೇಸ್‌ಎಕ್ಸ್ ಈಗ ಜೂ. 22 ರ ಮುಂಚೆಯೇ ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣವಾದ ಆಕ್ಸಿಯಮ್ ಮಿಷನ್ 4 ಗೆ ನಾಲ್ಕನೇ ಖಾಸಗಿ ಗಗನಯಾತ್ರಿ ಕಾರ್ಯಾಚರಣೆಯನ್ನು ಉಡಾವಣೆ ಮಾಡಲು ಗುರಿಯನ್ನು ಹೊಂದಿವೆ ಎಂದು ಆಕ್ಸಿಯಮ್ ಸ್ಪೇಸ್ ಹೇಳಿಕೆಯಲ್ಲಿ ತಿಳಿಸಿದೆ. ಉದ್ದೇಶಿತ ಉಡಾವಣಾ ದಿನಾಂಕದಲ್ಲಿನ ಬದಲಾವಣೆಯು ಅಂತರರಾಷ್ಟ್ರೀಯ ಬಾಹ್ಯಾಕಾಶ ನಿಲ್ದಾಣದ ಜ್ವೆಜ್ಡಾ ಸೇವಾ ಮಾಡ್ಯೂಲ್‌ನ ಹಿಂಭಾಗದ ಹೆಚ್ಚಿನ ವಿಭಾಗದಲ್ಲಿ ಇತ್ತೀಚಿನ ದುರಸ್ತಿ ಕಾರ್ಯಗಳ ನಂತರ ಬಾಹ್ಯಾಕಾಶ ನಿಲ್ದಾಣ ಕಾರ್ಯಾಚರಣೆಗಳನ್ನು ಮೌಲ್ಯಮಾಪನ ಮಾಡುವುದನ್ನು ಮುಂದುವರಿಸಲು ನಾಸಾಗೆ ಸಮಯವನ್ನು ಒದಗಿಸುತ್ತದೆ ಎಂದು ಅದು ಹೇಳಿದೆ.

ಆಕ್ಸಿಯಮ್-4 ವಾಣಿಜ್ಯ ಕಾರ್ಯಾಚರಣೆಯನ್ನು ಕಮಾಂಡರ್ ಪೆಗ್ಗಿ ವಿಟ್ಸನ್ ನೇತೃತ್ವ ವಹಿಸಿದ್ದಾರೆ, ಶುಕ್ಲಾ ಮಿಷನ್ ಪೈಲಟ್ ಆಗಿ ಮತ್ತು ಹಂಗೇರಿಯನ್ ಗಗನಯಾತ್ರಿ ಟಿಬೋರ್ ಕಾಪು ಮತ್ತು ಪೋಲೆಂಡ್‌ನ ಸ್ಲಾವೋಸ್ಜ್ ಉಜ್ನಾನ್ಸ್ಕಿ-ವಿಸ್ನಿಯೆವ್ಸ್ಕಿ ಮಿಷನ್ ತಜ್ಞರಾಗಿ ಇದ್ದಾರೆ. ಈ ಕಾರ್ಯಾಚರಣೆಯನ್ನು ಮೂಲತಃ ಮೇ 29 ರಂದು ಲಿಫ್ಟ್-ಆಫ್ ಮಾಡಲು ನಿರ್ಧರಿಸಲಾಗಿತ್ತು ಆದರೆ ನಂತರ ಜೂನ್ 8, ನಂತರ ಜೂನ್ 10 ಮತ್ತು ಜೂನ್ 11 ರಂದು ಮುಂದೂಡಲಾಯಿತು.

## ಇಸ್ರೇಲ್ ಭೀಕರ ದಾಳಿಗೆ ನರಕದಂತಾಯ್ತು ಇರಾನ್

**ದುಬೈ:** ಇಸ್ರೇಲ್ ಮತ್ತು ಇರಾನ್ ನಡುವಿನ ಸಮರ ಭೀಕರ ಸ್ವರೂಪ ಪಡೆದುಕೊಂಡಿದ್ದು, ಇಂದು ಮುಂಜಾನೆ 5 ಗಂಟೆ ಸುಮಾರಿನಲ್ಲಿ ತೆಹರಾನ್‌ನಲ್ಲಿ ಕತ್ತಲು ಸರಿಯುವ ಮುಂಚೆ ಭಾರಿ ಸ್ಫೋಟ ಸಂಭವಿಸಿದ್ದು, ಇಸ್ರೇಲ್ ನಡೆಸಿದ ದಾಳಿಯಲ್ಲಿ ಹಲವಾರು ಪ್ರಮುಖ ಕಟ್ಟಡಗಳು ಧ್ವಂಸಗೊಂಡಿವೆ. ಅಪಾರ ಸಾವು- ನೋವು ಉಂಟಾಗಿವೆ. ಶದಾನಿ ಅವರು ಇಸ್ರೇಲ್ ದಾಳಿಯಲ್ಲಿ ಮೃತಪಟ್ಟ ಇರಾನ್‌ನ ಜನರಲ್ ಗುಲಾಮ್ ಅಲಿರಶೀದ್ ಅವರ ಸ್ಥಾನದಲ್ಲಿ ನೇಮಕಗೊಂಡಿದ್ದರು. ಈ ಪ್ರದೇಶದಲ್ಲಿ ಅನಿಶ್ಚಿತತೆ ತಲೆದೋರಿದ್ದು, ಜನರು ಸುರಕ್ಷತೆಗಾಗಿ ದಿಕ್ಕಾಪಾಲಾಗಿ ಓಡುತ್ತಿರುವ ದೃಶ್ಯ ಸರ್ವೇ ಸಾಮಾನ್ಯವಾಗಿದೆ.

ಈ ನಡುವೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಕೆನಡಾದಲ್ಲಿ ನಡೆಯುತ್ತಿರುವ ಜಿ-7 ಶೃಂಗಸಭೆಯಿಂದ ಅರ್ಧದಲ್ಲಿಯೇ ನಿರ್ಗಮಿಸಿದ್ದು, ಇರಾನ್ ಬೇಷರತ್ ಕ್ಷಮಾಯಾಚಿಸಿ ಶರಣಾಗಬೇಕು ಎಂದು ತಾಕೀತು ಮಾಡಿದ್ದಾರೆ. ಅಮೆರಿಕದ ತಾಳೆ ಮಿತಿಮೀರುತ್ತಿದೆ. ಈ ಪ್ರದೇಶದಲ್ಲಿ ಸದ್ಯದ ಮಟ್ಟಿಗೆ ಮಾತುಕತೆ ಹೊರತಾಗಿ ಶಾಂತಿ ಅಥವಾ ಕದನ ವಿರಾಮ ಉಂಟಾಗುವ ಬಗ್ಗೆ ಖಾತರಿಯಿಲ್ಲ.



ಇರಾನ್, ಇಸ್ರೇಲ್‌ಗೆ ಮಂಡಿಯೂರಬೇಕು. ನಾನು ಇರಾನ್ ಮುಖ್ಯಸ್ಥ ಖಮೇನಿ ಅವರನ್ನು ಸದ್ಯದ ಮಟ್ಟಿಗಾದರೂ ಹತ್ಯೆ ಮಾಡುವುದಿಲ್ಲ ಎಂಬ ಭರವಸೆ ಕೊಡುತ್ತೇನೆ.

ನಮ ಉಪಾಧ್ಯಕ್ಷರಾದ ಜೆ.ಡಿ. ವಾನ್ಸ್ ಮತ್ತು ವಿಶೇಷ ಪ್ರತಿನಿಧಿ ಸ್ಟೀವ್ ವಿಟ್‌ಕಾಫ್ ಅವರನ್ನು ಇರಾನೀಯರೊಂದಿಗೆ ಮಾತುಕತೆ ನಡೆಸಲು ಕಳುಹಿಸಲು ಸಿದ್ಧನಿದ್ದೇನೆ ಎಂದು ಟ್ರಂಪ್ ಹೇಳಿದ್ದಾರೆ. ಈ ನಡುವೆ ಅಮೆರಿಕವೂ ಮಧ್ಯಪ್ರಾಚ್ಯದ ಸುತ್ತಮುತ್ತ ಇರಾನ್ ದಾಳಿಗಳಿಂದ ಇಸ್ರೇಲ್ ಅನ್ನು ಸಂರಕ್ಷಿಸಲು ಯುದ್ಧ ವಿಮಾನಗಳು ಮತ್ತು ಸಮರ ನೌಕೆಗಳನ್ನು ಸಜ್ಜಾಗಿರಿಸಿದೆ.

ಟ್ರಂಪ್ ಮತ್ತು ಇಸ್ರೇಲ್ ಅಧ್ಯಕ್ಷ ಬೆಂಜಮಿನ್ ನೇತನ್ಯಾಹು ಅವರು ಪ್ರಸಕ್ತ ಸನ್ನಿವೇಶ ಮತ್ತು ಬೆಳವಣಿಗೆಗಳ ಬಗ್ಗೆ ದೂರವಾಣಿಯಲ್ಲಿ ಮಾತನಾಡಿದ್ದಾರೆ

**ಇಸ್ರೇಲ್ ಈ ಮುನ್ನ ಮೆಹರಾಬಾದ್ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಮತ್ತು ಸುತ್ತಮುತ್ತಲಿನ ವಸತಿ ಪ್ರದೇಶಗಳ ಮೇಲೆ ದಾಳಿ ನಡೆಸುವುದಾಗಿ ಎಚ್ಚರಿಕೆ ನೀಡಿತ್ತು. ಈ ಪ್ರದೇಶದಲ್ಲಿ ಮಿಲಿಟರಿ ಕಟ್ಟಡಗಳು, ಔಷಧ ಕಂಪೆನಿಗಳು ಮತ್ತು ಕೈಗಾರಿಕಾ ಸಂಸ್ಥೆಗಳು ನೆಲೆಗೊಂಡಿವೆ. ಇಸ್ರೇಲ್ ತಾನು ಇರಾನ್‌ನ ಜನರಲ್ ಅಲಿ ಶದಾನಿ ಅವರನ್ನು ಹತ್ಯೆಗೈದಿರುವುದಾಗಿ ಪ್ರತಿಪಾದಿಸಿದೆ.**

ಎಂದು ಮೂಲಗಳು ತಿಳಿಸಿವೆ. ಇರಾನ್‌ನಲ್ಲಿ ಅಂಗಡಿ, ಮುಂಗಟ್ಟುಗಳು ಮುಚ್ಚಿದ್ದು, ದಿನಸಿ, ಗ್ಯಾಸ್, ಇತ್ಯಾದಿ ದಿನಬಳಕೆ ವಸ್ತುಗಳಿಗಾಗಿ ಹಾಹಾಕಾರ ಉಂಟಾಗಿದೆ. ತೆಹರಾನ್‌ನಲ್ಲಿರುವ ಪ್ರತಿಯೊಬ್ಬ ಇಸ್ರೇಲಿಗರು ನಗರವನ್ನು ತೊರೆಯಬೇಕು ಎಂದು ಟ್ರಂಪ್ ತಾಕೀತು ಮಾಡಿದ್ದಾರೆ. ಇದರಿಂದ ಯುದ್ಧ ಸಂತ್ರಸ್ತ 3 ಲಕ್ಷ 30 ಸಾವಿರ ನಿವಾಸಿಗಳಿಗೆ ಸಂಕಷ್ಟ ಎದುರಾಗಿದೆ.

## • ತೇಜಸ್ವಿ ಯಾದವ್ ಜನಪ್ರಿಯತೆ ಕಾಂಗ್ರೇಸ್‌ಗಿಂತ ಜಾಸ್ತಿ, ಸಿಎಂ ಅಭ್ಯರ್ಥಿ ಘೋಷಿಸಲು ಒತ್ತಡ

# ತೇಜಸ್ವಿ ಸಿಎಂ ಅಭ್ಯರ್ಥಿ: ಜೊತೆಗಿರಿ ಇಲ್ಲಾಂದ್ರೆ ಬಿಟ್ಟು ಹೋಗಿ, ಕಾಂಗ್ರೇಸ್ಸಿಗೆ ಖಡಕ್ ಸಂದೇಶ

**ಪಾಟ್ನಾ :** ಕೆಲವೇ ತಿಂಗಳಲ್ಲಿ ಬಿಹಾರದ ವಿಧಾನಸಭೆಗೆ ಚುನಾವಣೆ ನಡೆಯಲಿದೆ. ನವೆಂಬರ್ ತಿಂಗಳಲ್ಲಿ ಹಾಲೀ ವಿಧಾನಸಭೆಯ ಅವಧಿ ಮುಕ್ತಾಯಗೊಳ್ಳಲಿದೆ. ಬಿಜೆಪಿ - ಜೆಡಿಯು - ಎಲ್‌ಜೆಪಿ ಒಂದು ಕಡೆಯಾದರೆ, ಮಹಾಘಟಬಂಧನ್ ಇನ್ನೊಂದು ಕಡೆ. ಇಲ್ಲಿ, ಕಾಂಗ್ರೆಸ್ ಮತ್ತು ಆರ್‌ಜೆಡಿ ಪ್ರಮುಖ ಪಾಲುದಾರ ಪಕ್ಷಗಳು.

ಬಿಜೆಪಿ ಮೈತ್ರಿಕೂಟವು ಈಗಾಗಲೇ ನಿತೀಶ್ ಕುಮಾರ್ ನಮ್ಮ ಸಿಎಂ ಅಭ್ಯರ್ಥಿ ಎಂದು ಹೇಳಿದೆ. ಹಾಗೆಯೇ, ಲಾಲೂ ಪ್ರಸಾದ್ ಯಾದವ್ ಹುಟ್ಟು ಹಾಕಿದ ಆರ್ಜೆಡಿಯು, ತೇಜಸ್ವಿ ಯಾದವ್ ನಮ್ಮ ಮುಖ್ಯಮಂತ್ರಿ ಅಭ್ಯರ್ಥಿ ಎಂದು ಹೇಳಿದೆ. ಆದರೆ, ಇದಕ್ಕೆ ಕಾಂಗ್ರೆಸ್ ಸಹಮತ ಇದ್ದಂತಿಲ್ಲ. ಇದು, ಮಹಾಘಟಬಂಧನ್ ನಲ್ಲಿ ಅಪಸ್ವರಕ್ಕೆ ಕಾರಣವಾಗಿದೆ.

ಅಸಲಿಗೆ, ತೇಜಸ್ವಿ ಯಾದವ್ ಅವರ ಪಾರ್ಟಿಯು, ಕಾಂಗ್ರೆಸ್ಸಿಗಿಂತ ಉತ್ತಮ ಸ್ಥಾನದಲ್ಲಿದೆ. 2015ರಲ್ಲಿ ಬಿಹಾರದಲ್ಲಿ ಮಹಾಘಟಬಂಧನ್ ರಚನೆಯಾಗಿತ್ತು. ಆರ್ಜೆಡಿ ಮತ್ತು ಕಾಂಗ್ರೆಸ್ ನಡುವೆ ಇದು ಸೈದ್ಧಾಂತಿಕ ಒಗ್ಗಟ್ಟು ಎನ್ನುವುದಕ್ಕಿಂತ ಬಿಜೆಪಿಯನ್ನು ಸೋಲಿಸಲೆಂದೇ ಆಗಿರುವ ರಾಜಕೀಯ ಅತ್ಯಗತ್ಯತೆ.

ತೇಜಸ್ವಿ ಯಾದವ್ ಅವರನ್ನು ಚುನಾವಣೆಗೆ ಮೊದಲೇ ಸಿಎಂ ಅಭ್ಯರ್ಥಿ ಎಂದು ಘೋಷಿಸಲು ಕಾಂಗ್ರೆಸ್ ಮನಸ್ಸು ಮಾಡದೇ ಇರುವುದು ಮಹಾಘಟಬಂಧನ್ ನಲ್ಲಿ ಹಲವರ ಹುಬ್ಬೇರುವಂತೆ ಮಾಡಿದೆ. ಹಾಗಾದರೆ, ಮೈತ್ರಿಯನ್ನು ಧಿಕ್ಕರಿಸಿ ಕಾಂಗ್ರೆಸ್ ಏಕಾಂಗಿಯಾಗಿ ಸ್ಪರ್ಧೆ ಮಾಡುವ ರಿಸ್ಕ್ ತೆಗೆದುಕೊಳ್ಳಲಿದೆಯಾ ಎನ್ನುವುದಿಲ್ಲಿ ಪ್ರಶ್ನೆ.



ತೇಜಸ್ವಿ ಯಾದವ್ ಅವರ ಜನಪ್ರಿಯತೆಯ ಗ್ರಾಫ್ ಕೂಡಾ ಏರುತ್ತಿದೆ. ತಮಿಳುನಾಡಿನಲ್ಲಿ ಡಿಎಂಕೆ ಹೇಗೆ ಕಾಂಗ್ರೆಸ್ಸಿಗೆ ಪ್ರಮುಖ ಪಕ್ಷವೋ, ಅದೇ ರೀತಿ ಬಿಹಾರದಲ್ಲಿ ಆರ್ಜೆಡಿ. ಲೋಕಸಭಾ ಚುನಾವಣೆಗೂ ಮುನ್ನ ನಿತೀಶ್ ಕುಮಾರ್, ಆರ್ಜೆಡಿ ಸಖ್ಯ ತೊರೆದು ಬಿಜೆಪಿ ಜೊತೆಗೆ ಬಂದರೋ, ಅಲ್ಲಿಂದ ತೇಜಸ್ವಿ ಯಾದವ್ ಅವರ ಜನಪ್ರಿಯತೆಯ ಗ್ರಾಫ್ ಕೂಡಾ ಏರುತ್ತಿದೆ ಎನ್ನುವುದೂ ಅಷ್ಟೇ ಸತ್ಯ.

ಕಳೆದ ಎರಡು ತಿಂಗಳಿನಿಂದ ಹಲವು ಸಂಸ್ಥೆಗಳ ಮಾಧ್ಯಮಗಳ ಸಹಕಾರದೊಂದಿಗೆ ಸಮೀಕ್ಷೆಯನ್ನು ನಡೆಸಿದ್ದವು. ಅದರಲ್ಲಿ ಮುಖ್ಯಮಂತ್ರಿಯಾಗಿ ಜನರ ಮೊದಲ ಆಯ್ಕೆ ತೇಜಸ್ವಿ ಯಾದವ್ ಅವರೇ ಹೊರತು,

- **ಬಿಹಾರದಲ್ಲಿ ಮತ್ತೆ ಒಂದಾಗಲಿದೆಯಾ ಕಾಂಗ್ರೆಸ್ ಮತ್ತು ತೇಜಸ್ವಿ ಯಾದವ್ ಅವರ ಆರ್ಜೆಡಿ**
- **ತೇಜಸ್ವಿ ಯಾದವ್ ಜನಪ್ರಿಯತೆ ಕಾಂಗ್ರೇಸ್‌ಗಿಂತ ಜಾಸ್ತಿ, ಸಿಎಂ ಅಭ್ಯರ್ಥಿ ಘೋಷಿಸಲು ಒತ್ತಡ**
- **ತಮಿಳುನಾಡಿನಲ್ಲಿ ಡಿಎಂಕೆ ಹೇಗೋ, ಬಿಹಾರದಲ್ಲಿ ಆರ್ಜೆಡಿ ಕಾಂಗ್ರೇಸ್‌ಗೆ ಮುಖ್ಯ**

ಟಾಪ್ 3 ನಲ್ಲಿ ಕಾಂಗ್ರೆಸ್ಸಿನ ನಾಯಕರು ಯಾರೂ ಇಲ್ಲ. ತೇಜಸ್ವಿ ಯಾದವ್, ನಿತೀಶ್ ಕುಮಾರ್, ಪ್ರಶಾಂತ್ ಕಿಶೋರ್, ಇದು ಕ್ರಮವಾಗಿ ಸಿಎಂ ರೇಸಿಗೆ ಜನರ ಆಯ್ಕೆಯಾಗಿತ್ತು.

ಬಿಹಾರದಲ್ಲಿ ರಾಹುಲ್ ಗಾಂಧಿಯವರ ನಿರಂತರ ಪ್ರಚಾರ, ಕಾಂಗ್ರೆಸ್ ಪಾರ್ಟಿಗೆ ಬಲವನ್ನಂತೂ ತುಂಬುತ್ತಿದೆ. ಆದರೆ, ಚುನಾವಣಾ ಪ್ರಚಾರದ ಕೊನೆಯ ಹಂತದಲ್ಲಿ ಪ್ರಧಾನಿ ಮೋದಿಯವರನ್ನು ಮುಂದಿಟ್ಟುಕೊಂಡು ಬಿಜೆಪಿ ಮೈತ್ರಿಕೂಟವು ನಡೆಸುವ ತಂತ್ರಗಾರಿಕೆಯೇ ಬೇರೆಯಾಗಿರುವುದರಿಂದ, ಪಕ್ಕಾ ಚುನಾವಣಾ ರಣತಂತ್ರ ರೂಪಿಸಬೇಕಾದ ಅನಿವಾರ್ಯತೆ ಮಹಾಘಟಬಂಧನ್ ನಾಯಕರಿಗಿದೆ.

ಕಾಂಗ್ರೆಸ್ 70 ಸ್ಥಾನದಲ್ಲಿ ಸ್ಪರ್ಧಿಸಿದ್ದರೂ ಗೆಲ್ಲಲು ಸಾಧ್ಯವಾಗಿದ್ದದ್ದು ಕೇವಲ 19 ಐದು ವರ್ಷಗಳ ಹಿಂದಿನ ಅಂಕಿಅಂಶವನ್ನು ಅವಲೋಕಿಸಿದರೆ, ಕಾಂಗ್ರೆಸ್ 70 ಸ್ಥಾನದಲ್ಲಿ ಸ್ಪರ್ಧಿಸಿದ್ದರೂ ಗೆಲ್ಲಲು ಸಾಧ್ಯವಾಗಿದ್ದದ್ದು ಕೇವಲ 19 ಸ್ಥಾನಗಳನ್ನು. ಇನ್ನು, 144 ಸ್ಥಾನಗಳಲ್ಲಿ ಸ್ಪರ್ಧಿಸಿದ್ದ ಆರ್ಜೆಡಿ 75 ಸ್ಥಾನವನ್ನು ಗೆಲ್ಲುವ ಮೂಲಕ, ಸಿಂಗಲ್ ಲಾರ್ಜೆಸ್ಟ್ ಪಾರ್ಟಿಯಾಗಿತ್ತು. ಸೋಲಿನ ನಂತರ ಕಾಂಗ್ರೆಸ್ - ಆರ್ಜೆಡಿ ಒಬ್ಬರನ್ನೊಬ್ಬರು ದೂರಿಕೊಂಡಿದ್ದವು.

ಒಂದು ವೇಳೆ, ಕಾಂಗ್ರೆಸ್ ಏಕಾಂಗಿಯಾಗಿ ಸ್ಪರ್ಧಿಸಲು ಹೊರಟರೆ ತೇಜಸ್ವಿ ಯಾದವ್ ಅವರಿಂದ ಯಾವುದೇ ತಕರಾರು ಇರುವುದಿಲ್ಲ ಎನ್ನುವುದು ಸದ್ಯದ ಬಿಹಾರದ ರಾಜಕೀಯ ಚಿತ್ರಣ.


**ಅಲ್ಪಸಂಖ್ಯಾತರು ಮತ್ತು ಯಾದವ ಸಮುದಾದ ಮತ**

**ತೇಜಸ್ವಿ ಯಾದವ್ ಅವರ ಪಾರ್ಟಿಯು, ಜಾತಿ ಆಧಾರಿತ ಚುನಾವಣೆಯನ್ನು ಮಾಡುವ ಮೂಲಕ ಕೇವಲ ಅಲ್ಪಸಂಖ್ಯಾತರು ಮತ್ತು ಯಾದವ ಸಮುದಾದ ಮತವನ್ನು ಮಾತ್ರ ಟಾರ್ಗೆಟ್ ಮಾಡುತ್ತದೆ ಎನ್ನುವುದು ಕಾಂಗ್ರೇಸ್‌ನ ಆರೋಪ. ಆದರೆ, ಇದನ್ನೂ ಮೀರಿ ಎಲ್ಲಾ ಸಮುದಾಯದ / ವರ್ಗಗಳ ಮತದಾರರನ್ನು ಸೆಳೆಯಬೇಕು ಎನ್ನುವುದು ಕಾಂಗ್ರೇಸ್‌ನ ಒತ್ತಡ. ಇದು, ಎರಡು ಪಕ್ಷಗಳ ನಡುವೆ ಎಲ್ಲೋ ಸಿಂಕ್ ಮಿಸ್ ಆಗುತ್ತಿದೆ.**

**ಲೋಕ ಚುನಾವಣೆಯಲ್ಲಿ ತೇಜಸ್ವಿ ಪಾರ್ಟಿ 4 ಸ್ಥಾನ ಗೆದ್ದಿತ್ತು**

**ಕಳೆದ ಲೋಕಸಭಾ ಚುನಾವಣೆಯಲ್ಲಿ ತೇಜಸ್ವಿ ಯಾದವ್ ಅವರ ಪಾರ್ಟಿ ನಾಲ್ಕು ಸ್ಥಾನವನ್ನು ಗೆದ್ದಿತ್ತು. ಆ ಮೂಲಕ, ಝೀರೊದಿಂದ ನಾಲ್ಕು ಸ್ಥಾನವನ್ನು ಪಡೆದಿತ್ತು. ಇದು ತೇಜಸ್ವಿ ಯಾದವ್ ಅವರಿಗಿದ್ದ ಜನಪ್ರಿಯತೆಗೆ ಇದ್ದ ಸಾಕ್ಷಿಯಾಗಿತ್ತು. ತಮಿಳುನಾಡಿನಂತೆ ಹಣೆಪಟ್ಟಿಯನ್ನು ಬಿಹಾರದಲ್ಲಿ ಕಟ್ಟಿಕೊಳ್ಳಲು ಕಾಂಗ್ರೇಸ್ ತಯಾರಿಲ್ಲದೇ ಇರುವುದು ಎಲ್ಲಾ ಗೊಂದಲಕ್ಕೆ ಕಾರಣವಾಗಿದೆ.**

# ನಟಿಗಾಗಿ ಬೆಂಗಳೂರಿನಿಂದ ಮುಂಬೈಗೆ ಲೊಕೇಶನ್ ಶಿಫ್ಟ್!



ಯಶ್ ನಟಿಸಿ ನಿರ್ಮಿಸುತ್ತಿರುವ ಟಾಕ್ಸಿಕ್ ಚಿತ್ರದ ಬಹುಭಾಗದ ಚಿತ್ರೀಕರಣ ಬೆಂಗಳೂರಿನಲ್ಲಿಯೇ ನಡೆಯುತ್ತಿದೆ. ಚಿತ್ರದಲ್ಲಿ ತೊಡಗಿರುವ ಬಹುಭಾಷಾ ಕಲಾವಿದರು ಹಾಗೂ ತಂತ್ರಜ್ಞರನ್ನು ಯಶ್ ಬೆಂಗಳೂರಿಗೆ ಕರೆಸಿ ಚಿತ್ರೀಕರಣ ಮಾಡಿದ್ದಾರೆ. ಆಗಾಗ ಮುಂಬೈಗೂ ಶಿಫ್ಟ್ ಆಗುತ್ತಾರೆ. ಆದರೂ ಬೆಂಗಳೂರಿನ ಹೆಚ್‌ಎಂಟಿಯಲ್ಲಿ ಹಾಕಲಾದ ಬೃಹತ್ ಸೆಟ್‌ನಲ್ಲಿ ಆಗಾಗ ಚಿತ್ರೀಕರಣ ನಡೆಯುತ್ತದೆ. ಆದರೆ ಚಿತ್ರದ ನಾಯಕಿಯಾಗಿ ಯಶ್ ಬೆಂಗಳೂರಿನಲ್ಲಿ ಮಾಡಲು ಪ್ಲ್ಯಾನ್ ಆಗಿದ್ದ ಚಿತ್ರೀಕರಣವನ್ನು ಮುಂಬೈಗೆ ಶಿಫ್ಟ್ ಮಾಡಿದ್ದಾರೆ ಎಂಬ ಸುದ್ದಿ ಹಬ್ಬಿದೆ.

ಟಾಕ್ಸಿಕ್ ಚಿತ್ರದಲ್ಲಿ ನಟಿಸುತ್ತಿರುವ ಬಾಲಿವುಡ್ ನಟಿ ಕಿಯಾರಾ ಅಡ್ವಾನಿಗಾಗಿ ಯಶ್ ಲೊಕೇಶನ್ ಶಿಫ್ಟ್ ಮಾಡಿದ್ದಾರೆ ಎನ್ನಲಾಗುತ್ತಿದೆ. ಈಗಾಗ್ಲೇ ಕಿಯಾರಾ ಅಡ್ವಾನಿ ಭಾಗದ ಬಹುಭಾಗದ ಚಿತ್ರೀಕರಣ ಬೆಂಗಳೂರಿನಲ್ಲಿ ಹಾಕಲಾದ ಸೆಟ್‌ನಲ್ಲಿಯೇ ಪೂರ್ಣಗೊಂಡಿದೆ. ಇದೀಗ ಬಾಕಿ ಇರುವ ಕೆಲವು ದೃಶ್ಯಗಳು ಹಾಗೂ ಪ್ಯಾಚ್‌ವರ್ಕ್ ದೃಶ್ಯಕ್ಕಾಗಿ ಅವರನ್ನ ಮುಂಬೈನಿಂದ ಬೆಂಗಳೂರಿಗೆ ಕರೆಸುವ ಬದಲು ಮುಂಬೈನಲ್ಲೇ ಚಿತ್ರೀಕರಣ ಮಾಡಲು ಚಿತ್ರತಂಡ ಪ್ಲ್ಯಾನ್ ಮಾಡಿಕೊಂಡಿದೆ ಎನ್ನಲಾಗುತ್ತಿದೆ. ಇಷ್ಟೊಂದು ಶ್ರಮ ತೆಗೆದುಕೊಂಡು ಚಿತ್ರತಂಡ ಚಿತ್ರೀಕರಣ ಮಾಡ್ತಿರೋದಕ್ಕೆ ಕಾರಣ ಕಿಯಾರಾ ಅಡ್ವಾನಿ ಈಗ ಗರ್ಭಿಣಿ.

ನಟಿ ಕಿಯಾರಾ ಅಡ್ವಾನಿ ಈಗ ಗರ್ಭಿಣಿಯಾಗಿದ್ದು ಅವರಿಗೆ ಈಗ ಪ್ರಯಾಣ ಮಾಡುವುದು ಕಷ್ಟದ ಕೆಲಸ. ಹೀಗಾಗಿ ಈ ನಾಯಕಿಗಾಗಿ 'ಟಾಕ್ಸಿಕ್' ಚಿತ್ರತಂಡ ಅವರಿರುವ ಜಾಗಕ್ಕೆ ಹೋಗಿ ಶೂಟಿಂಗ್ ಮಾಡಲು ತಯಾರಿ ಮಾಡಿಕೊಂಡಿದೆ. ಅಸಲಿಗೆ ಕಿಯಾರಾ ಭಾಗದ ಟಾಕ್ಸಿಕ್ ಚಿತ್ರೀಕರಣ ಮುಗಿದಿತ್ತು ಎನ್ನಲಾಗಿತ್ತು. ಆದರೆ ಸಿನಿಮಾ ಮುಗಿಯೋವರೆಗೂ ಕೆಲವೊಂದು ಬದಲಾವಣೆಗಳು, ದೃಶ್ಯಗಳನ್ನು ಸೇರಿಕೊಳ್ಳುವ ಪ್ರಕ್ರಿಯೆ ಸಾಮಾನ್ಯವಾಗಿದ್ದು ಈ ಚಿತ್ರೀಕರಣಕ್ಕಾಗಿ ಕಿಯಾರಾ ಡೇಟ್ ಅವಶ್ಯಕವಾಗಿತ್ತು. ಹೀಗಾಗಿ ಕಿಯಾರಾ ಭಾಗದ ಕೆಲ ದಿನಗಳ ಚಿತ್ರೀಕರಣವನ್ನ ಮುಂಬೈನಲ್ಲೇ ಮಾಡಲು ತಯಾರಿ ಮಾಡಲಾಗಿದೆ.



**ಕಿಯಾರಾ ಈಗ ಗರ್ಭಿಣಿ**

# ರಚಿತಾ ರಾಮ್ ವಿರುದ್ಧ ಮತ್ತೊಂದು ದೂರು




ಅಡ್ವಾನ್ಸ್ ಹಣ ವಾಪಸ್ ಕೊಡದ ಆರೋಪದಲ್ಲಿ ನಟಿ ರಚಿತಾ ರಾಮ್ ವಿರುದ್ಧ ಫಿಲ್ಮ್ ಚೇಂಬರ್‌ನಲ್ಲಿ ಮತ್ತೊಂದು ದೂರು ದಾಖಲಾಗಿದೆ.

'ಉಪ್ಪಿ ರುಪ್ಪಿ' ಸಿನಿಮಾಗಾಗಿ ಗುಳಿಕೆನ್ನೆ ಚೆಲುವೆ ರಚಿತಾ ರಾಮ್‌ಗೆ ಅಡ್ವಾನ್ಸ್ ನೀಡಲಾಗಿತ್ತು. ಈಗ ಹಣ ವಾಪಸ್ ಕೊಡದೇ ನಿರ್ಮಾಪಕಿಯನ್ನು ಸತಾಯಿಸುತ್ತಿದ್ದಾರೆಂದು ದೂರಲಾಗಿದೆ.

8 ವರ್ಷಗಳ ಹಿಂದೆ ಉಪ್ಪಿ ಮತ್ತು ರಚಿತಾ ನಟನೆಯಲ್ಲಿ ಸಿನಿಮಾ ಮೂಡಿಬರಬೇಕಿತ್ತು. 'ಉಪ್ಪಿ ರುಪ್ಪಿ' ಸಿನಿಮಾದಲ್ಲಿ ಉಪೇಂದ್ರ ಜೊತೆ ನಟಿಸಲು ನಟಿ ಒಪ್ಪಿಕೊಂಡಿದ್ದರು. ಈ ಸಿನಿಮಾವನ್ನು ವಿಜಯಲಕ್ಷ್ಮಿ ಅರಸ್ ನಿರ್ಮಾಣ ಮತ್ತು ಕೆ.ಮಾದೇಶ್ ನಿರ್ದೇಶನ ಮಾಡುವುದಿತ್ತು. 23 ಲಕ್ಷ ಸಂಭಾವನೆಗೆ ನಟಿ ಕಮಿಟ್ ಆಗಿದ್ದರು. ಮುಂಗಡವಾಗಿ 13 ಲಕ್ಷ ಅಡ್ವಾನ್ಸ್ ರೂಪದಲ್ಲಿ ಹಣ ಪಡೆದಿದ್ದರು. 2017 ರಲ್ಲಿ ಬ್ಯಾಂಕಾಕ್‌ನಲ್ಲಿ ಶೂಟಿಂಗ್‌ಗೆ ಚಿತ್ರತಂಡ ಪ್ಲ್ಯಾನ್ ಮಾಡಿಕೊಂಡಿತ್ತು. ಬರುವುದಾಗಿ ಒಪ್ಪಿಕೊಂಡು ರಚಿತಾ ರಾಮ್‌ಗೆ ಟಿಕೆಟ್ ಬುಕ್ ಮಾಡಿದ್ದರು. ಆದರೆ, ಬಂದಿರಲಿಲ್ಲ. 15 ದಿನಗಳ ಕಾಲ ಈಗ ಬರ್ತೀನಿ, ಆಗ ಬರ್ತೀನಿ ಅಂತಾ ಸತಾಯಿಸಿದ್ದಾರೆಂದು ದೂರಿನಲ್ಲಿ ತಿಳಿಸಲಾಗಿದೆ.

**ಅಡ್ವಾನ್ಸ್ ಹಣ ವಾಪಸ್ ಕೊಡದ ಆರೋಪ**

# ಕಲ್ಕಿ ಹಾದಿ ಹಿಡಿದ ರಾಜಮೌಳಿ



**ಹೈದರಾಬಾದ್‌ನಲ್ಲೇ ವಾರಣಾಸಿ ಸೃಷ್ಟಿಸಿದ ನಿರ್ದೇಶಕ**

ಎಸ್‌ಎಸ್ ರಾಜಮೌಳಿ ಹಾಗೂ ಮಹೇಶ್ ಬಾಬು ಅವರ ಸಿನಿಮಾ ಹಾಲಿವುಡ್ ಲೆವೆಲ್‌ನಲ್ಲಿ ಚಿತ್ರೀಕರಣಗೊಳ್ಳುತ್ತಿದೆ. ಇದೊಂದು ಸಾಹಸಮಯ ಪ್ರಯಾಣದ ಕತೆಯನ್ನು ಒಳಗೊಂಡಿದ್ದು, ಭಾರತ ಸೇರಿದಂತೆ ವಿಶ್ವದ ಹಲವು ನಗರಗಳಲ್ಲಿ ಸಿನಿಮಾದ ಶೂಟಿಂಗ್ ನಡೆಯಲಿದೆ. ಇದೀಗ ರಾಜಮೌಳಿ, ಹೈದರಾಬಾದ್‌ನಲ್ಲಿ ಬೀಡು ಬಿಟ್ಟಿದ್ದು, ವಾರಣಾಸಿಯನ್ನೇ ಹೈದರಾಬಾದ್‌ನಲ್ಲಿ ಸೃಷ್ಟಿಸಿದ್ದಾರೆ. ವಾರಣಾಸಿ ಭೂಮಿಯ ಮೇಲೆ ಸೃಷ್ಟಿಯಾದ ಮೊದಲ ನಗರ, ಎಂದೂ ಅಳಿಯದ ಎನ್ನುತ್ತದೆ ಪುರಾಣ. ಪ್ರಭಾಸ್ ನಟನೆಯ ಕಲ್ಕಿ 2898 ಎಡಿ ಸಿನಿಮಾನಲ್ಲಿ ವಾರಣಾಸಿ ನಗರದ ಬಗ್ಗೆ ಸಾಕಷ್ಟು ವಿಷಯವನ್ನು ಹೇಳಲಾಗಿತ್ತು.

ಆ ಸಿನಿಮಾದ ಕತೆ ನಡೆಯುವುದೇ ವಾರಣಾಸಿ ನಗರದಲ್ಲಿ. ಇದೀಗ ರಾಜಮೌಳಿ ಸಹ ವಾರಣಾಸಿ ನಗರದ ಪುರಾಣ ಐತಿಹ್ಯಕ್ಕೆ ಮನಸೋತಂತಿದೆ. ತಾವು ನಿರ್ದೇಶಿಸುತ್ತಿರುವ ಹೊಸ ಸಿನಿಮಾದ ಚಿತ್ರೀಕರಣವನ್ನು ಅವರು ವಾರಣಾಸಿಯಲ್ಲಿ ಮಾಡಲಿದ್ದಾರೆ. ಹಾಗೆಂದು ರಾಜಮೌಳಿ ವಾರಣಾಸಿ ನಗರಕ್ಕೆ ಹೋಗುತ್ತಿಲ್ಲ ಬದಲಿಗೆ ಹೈದರಾಬಾದ್‌ನಲ್ಲೇ ವಾರಣಾಸಿಯನ್ನು ಸೃಷ್ಟಿಸುತ್ತಿದ್ದಾರೆ!

# ಏನಿಲ್ಲ ಏನಿಲ್ಲ ಅನ್ನುತ್ತಲೇ ಗಪ್‌ಚುಪ್ ಪ್ರೇಮ




ರಶ್ಮಿಕಾ ಮಂದಣ್ಣ ಹಾಗೂ ವಿಜಯ್ ದೇವರಕೊಂಡ ನಡುವೆ ಗಪ್‌ಚುಪ್ ಪ್ರೇಮಕಥನ ರಹಸ್ಯವಾಗಿ ಉಳಿದಿಲ್ಲ. ಪ್ರೀತಿ ವಿಚಾರವನ್ನು ಈ ಜೋಡಿ ಅಧಿಕೃತ ಘೋಷಿಸಿಕೊಂಡಿಲ್ಲ. ಆದರೂ ನಡವಳಿಕೆಯಲ್ಲಿ ಪ್ರೇಮಿಗಳು ಎನ್ನುವುದನ್ನು ಪದೇ-ಪದೇ ಸಾಬೀತು ಮಾಡುತ್ತಾರೆ.

ಇದೀಗ ಒಟ್ಟಿಗೆ ಪ್ರಯಾಣ ಮಾಡುವ ವೇಳೆ ಕ್ಯಾಮೆರಾ ಕಣ್ಣಿಗೆ ಸೆರೆಸಿಕ್ಕಿದ್ದಾರೆ. ಮುಂಬೈ ವಿಮಾನ ನಿಲ್ದಾಣದಿಂದ ಒಂದೇ ಕಾರಿನಲ್ಲಿ ಒಟ್ಟಿಗೆ ಪ್ರಯಾಣ ಮಾಡಿದ್ದಾರೆ. ಈ ವೇಳೆ ರಶ್ಮಿಕಾ ಮುಖಕ್ಕೆ ಮಾಸ್ಕ್ ಧರಿಸಿ ವಿಜಯ್‌ಗೂ ಮುನ್ನವೇ ಕಾರ್‌ನಲ್ಲಿ ಕುಳಿತಿದ್ರು. ವಿಜಯ್ ದೇವರಕೊಂಡ ಕ್ಯಾಮೆರಾ ಕಣ್ಣಿಗೆ ತಪ್ಪಿಸಿಕೊಳ್ಳುವಂತೆ ಓಡೋಡಿ ಹೋಗಿ ಬಳಿಕ ಕಾರ್ ಹತ್ತಿದ್ದಾರೆ. 'ಕುಬೇರ' ಚಿತ್ರದ ಬಿಡುಗಡೆಯ ಪ್ರಚಾರದಲ್ಲಿ ರಶ್ಮಿಕಾ ಭಾಗಿಯಾಗಿದ್ದಾರೆ. ಮುಂಬೈ, ಹೈದ್ರಾಬಾದ್ ಸೇರಿದಂತೆ ಅನೇಕ ಕಡೆ ಸುತ್ತುತ್ತಿದ್ದಾರೆ. ಈ ವೇಳೆ ರಶ್ಮಿಕಾಗೆ ವಿಜಯ್ ಕೂಡ ಸಾಥ್ ಕೊಟ್ಟಿರುವುದು ವಿಶೇಷ. ಹಲವು ಬಾರಿ ಮುಂಬೈನಲ್ಲೇ ರಶ್ಮಿಕಾ ವಿಜಯ್ ರೆಡ್‌ಹ್ಯಾಂಡ್ ಆಗಿಯೇ ಸಿಕ್ಕಿಬಿದ್ದಿದ್ದಾರೆ. ರೆಸ್ಟೋರೆಂಟ್ ಸುತ್ತುತ್ತಾರೆ, ಪ್ರವಾಸಕ್ಕೆ ಹೋಗುತ್ತಾರೆ. ಈ ನಡುವೆ ಪ್ರೀತಿ ವಿಚಾರದ ಪ್ರಶ್ನೆ ಎದುರಾದಾಗೆಲ್ಲ ಅಡ್ಡಗೋಡೆ ಮೇಲಿ ದೀಪವಿಟ್ಟಂತೆ ಮಾತಾಡ್ತಾರೆ. ಇತ್ತೀಚೆಗೆ ಕುಬೇರ ಪ್ರಿರಿಲೀಸ್ ಇವೆಂಟ್‌ನಲ್ಲಿ ವಿಜಯ್ ಕುರಿತಾಗಿ ಕೇಳಲಾದ ಪ್ರಶ್ನೆಗೆ ರಶ್ಮಿಕಾ ಪ್ರೇಮಿ ಅನ್ನೋದು ಖಾತ್ರಿಯಾಗುವಂತೆ ಉತ್ತರ ಕೊಟ್ಟಿದ್ರು.

**ಒಂದೇ ಕಾರ್‌ನಲ್ಲಿ ಹೊರಟ ರಶ್ಮಿಕಾ, ದೇವರಕೊಂಡ**

# ಶಿವ ದೇಗುಲಕ್ಕೆ ನಟ ದರ್ಶನ್ ಭೇಟಿ

ಡೆವಿಲ್ ಚಿತ್ರೀಕರಣ ಮುಕ್ತಾಯದ ಬಳಿಕ ದೇವರ ಅನುಗ್ರಹ ಪಡೆಯಲು ನಟ ದರ್ಶನ್ ಟೆಂಪಲ್ ರನ್ ಶುರು ಮಾಡಿದ್ದಾರೆ. ದಕ್ಷಿಣ ಕಾಶಿ ಎಂದೇ ಪ್ರಸಿದ್ಧವಾಗಿರುವ ಕೊಟ್ಟಿಯೂರು ದೇವಸ್ಥಾನಕ್ಕೆ ನಟ ದರ್ಶನ್ ಕುಟುಂಬ ಸಮೇತರಾಗಿ ಭೇಟಿ ನೀಡಿದ್ದಾರೆ.



ಕೇರಳದ ಕೊಣ್ಣೂರು ಸಮೀಪದಲ್ಲಿರುವ ಕೊಟ್ಟಿಯೂರು ಶಿವ ದೇವಸ್ಥಾನಕ್ಕೆ ನಟ ದರ್ಶನ್, ಪತ್ನಿ ವಿಜಯಲಕ್ಷ್ಮಿ ಹಾಗೂ ನಟ ಧನ್ವೀರ್ ಕೂಡ ಸಾಥ್ ನೀಡಿದ್ದಾರೆ. ಈ ವೇಳೆ ವಿಶೇಷ ಪೂಜೆಯನ್ನು ಸಲ್ಲಿಸಿದ್ದಾರೆ. ಕೇರಳದ ಕೊಟ್ಟಿಯೂರು ಶಿವ ದೇವಾಲಯವು ಭಾರತದ ಅತ್ಯಂತ ಪ್ರಾಚೀನ ಮತ್ತು ಪವಿತ್ರ ತೀರ್ಥಕ್ಷೇತ್ರಗಳಲ್ಲಿ ಒಂದಾಗಿದೆ. ಪ್ರತಿವರ್ಷವೂ ವೈಶಾಖ ಮಹೋತ್ಸವದ ಸಂದರ್ಭದಲ್ಲಿ ಲಕ್ಷಾಂತರ ಭಕ್ತರನ್ನು ಆಕರ್ಷಿಸುತ್ತದೆ. ಈ ದೇವಸ್ಥಾನವು ದಕ್ಷಿಣ ಕಾಶಿ ಎಂದು ಕರೆಯಲ್ಪಡುವುದರಿಂದ ಅದರ ಧಾರ್ಮಿಕ ಮಹತ್ವವು ಅಪಾರವಾಗಿದೆ. ಕೊಟ್ಟಿಯೂರಿನಲ್ಲಿ ಎರಡು ದೇವಸ್ಥಾನಗಳಿವೆ. ಇಕ್ಕರೆ ಕೊಟ್ಟಿಯೂರು ಮತ್ತು ಅಕ್ಕರೆ ಕೊಟ್ಟಿಯೂರು. ಅಕ್ಕರೆ ಕೊಟ್ಟಿಯೂರು ದೇವಾಲಯವು ವೈಶಾಖ ಮಹೋತ್ಸವದ ಸಮಯದಲ್ಲಿ ಮಾತ್ರ ತೆರೆಯಲ್ಪಡುವ ತಾತ್ಕಾಲಿಕ ಮಂದಿರವಾಗಿದೆ. ಆದರೆ ಇಕ್ಕರೆ ಕೊಟ್ಟಿಯೂರು ದೇವಾಲಯವು ನಿಯಮಿತ ಪೂಜಾ ವಿಧಿಗಳನ್ನು ನಡೆಸುವ ಶಾಶ್ವತ ಮಂದಿರವಾಗಿದೆ. ಇಲ್ಲಿನ ವೈಶಾಖ ಮಹೋತ್ಸವ ಸುಮಾರು 28 ದಿನಗಳವರೆಗೆ ನಡೆಯುತ್ತದೆ. ಈ ವರ್ಷ ಜೂ.8ರಿಂದ ಪ್ರಾರಂಭವಾಗಿ ಜು.4ರವರೆಗೆ ದೇವಸ್ಥಾನ ತೆರೆದಿರುತ್ತದೆ. ಆದರೆ ಜೂ.30ರ ನಂತರ ಮಹಿಳಾ ಭಕ್ತಾದಿಗಳಿಗೆ ಪ್ರವೇಶ ನಿಷೇಧಿಸಲಾಗಿದೆ. ಜೊತೆಗೆ ಇಲ್ಲಿ ಬರುವ ಭಕ್ತಾದಿಗಳಿಗೆ ತಂಗಲು ವಸತಿ ಸೌಲಭ್ಯವು ಇರುತ್ತದೆ. ದೇವಸ್ಥಾನವು ಬೆಳಿಗ್ಗೆ 5ರಿಂದ ರಾತ್ರಿ 8:30ರವರೆಗೆ ಮಾತ್ರ ತೆರೆದಿರುತ್ತದೆ. ಇಲ್ಲಿ ನಡೆಯುವ ಜಾತ್ರೆ ''ಕೊಟ್ಟಿಯೂರು ಉತ್ಸವ'' ಎಂಬ ಹೆಸರಿನಿಂದ ಪ್ರಸಿದ್ಧವಾಗಿದ್ದು, ಇದು ದಕ್ಷಿಣ ಭಾರತದ ಅತ್ಯಂತ ಶ್ರದ್ಧಾ ಭಕ್ತಿಯಿಂದ ನಡೆಯುವ ಧಾರ್ಮಿಕ ಆಚರಣೆಗಳಲ್ಲಿ ಒಂದಾಗಿದೆ. ಪಾರ್ವತಿಯ ತಪಸ್ಸು, ದಕ್ಷಿಣ ಯಾಗ ಮತ್ತು ಶೈವ ಪರಂಪರೆಯ ಕಥೆಗಳ ಸ್ಮರಣಾರ್ಥವಾಗಿ ಈ ಉತ್ಸವ ಆಚರಿಸಲಾಗುತ್ತದೆ.

**ವರ್ಷಕ್ಕೆ 30 ದಿನ ಮಾತ್ರ ತೆರೆಯುವ ಕೊಟ್ಟಿಯೂರು**

# ಕೊಹ್ಲಿ ಬಗ್ಗೆ ಬೆನ್ ಸ್ಟೋಕ್ಸ್ ಮಾತು

ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿ ಆರಂಭಕ್ಕೆ ಇನ್ನು 2 ದಿನಗಳು ಮಾತ್ರ ಉಳಿದಿವೆ. ಉಭಯ ತಂಡಗಳು ಅಂತಿಮ ಸಿದ್ಧತೆಯಲ್ಲಿ ತೊಡಗಿಕೊಂಡಿವೆ. ಆದಾಗ್ಯೂ, ಈ ಟೆಸ್ಟ್ ಸರಣಿಯಲ್ಲಿ ವಿರಾಟ್ ಕೊಹ್ಲಿ ಆದಡಿರುವುದು ಭಾರತ ತಂಡಕ್ಕೆ ದೊಡ್ಡ ಹಿನ್ನಡೆಯಾಗಿದೆ. ತಂಡಕ್ಕೆ ಮಾತ್ರವಲ್ಲದೆ ಅಭಿಮಾನಿಗಳಿಗೂ ಕೊಹ್ಲಿಯ ಟೆಸ್ಟ್ ನಿವೃತ್ತಿ ಬೇಸರವನ್ನುಂಟು ಮಾಡಿದೆ. ಇದೀಗ ಈ ಟೆಸ್ಟ್ ಸರಣಿಗೂ ಮುನ್ನ, ಇಂಗ್ಲೆಂಡ್ ನಾಯಕ ಬೆನ್ ಸ್ಟೋಕ್ಸ್, 'ವಿರಾಟ್ ಕೊಹ್ಲಿಯಂತಹ ಪ್ರತಿಸ್ಪರ್ಧಿ ಈ ಟೆಸ್ಟ್ ಸರಣಿಯಲ್ಲಿ ಭಾಗವಹಿಸದಿರುವುದು ನಾಚಿಕೆಗೇಡಿನ ವಿಷಯ ಎಂದು ಹೇಳಿದ್ದಾರೆ.




**ಬಾಗಿಲು ತಟ್ಟಬೇಡಿ, ಒದೆಯಿರಿ**

**ಬೆನ್ ಸ್ಟೋಕ್ಸ್ ಹೇಳಿದ್ದೇನು**


ಇಂಗ್ಲೆಂಡ್ ಕ್ರಿಕೆಟ್ ಒಂದು ವಿಡಿಯೋ ಬಿಡುಗಡೆ ಮಾಡಿದ್ದು, ಅದರಲ್ಲಿ ವಿರಾಟ್ ಕೊಹ್ಲಿ ನಿವೃತ್ತಿಯ ಬಗ್ಗೆ ಬೆನ್ ಸ್ಟೋಕ್ಸ್ ಮಾತನಾಡಿದ್ದಾರೆ. ಅದರಲ್ಲಿ ಅವರು, 'ಆಟಕ್ಕಾಗಿ ವಿರಾಟ್ ಕೊಹ್ಲಿ ಹೋರಾಡಿದ ರೀತಿ ಮತ್ತು ಅವರಿಗಿದ್ದ ಗೆಲ್ಲುವ ಬಯಕೆಯನ್ನು ಖಂಡಿತವಾಗಿಯೂ ಭಾರತ ತಂಡ ಕಳೆದುಕೊಳ್ಳುತ್ತದೆ. ಕೊಹ್ಲಿ 18 ನೇ ನಂಬರ್ ಜೆರ್ಸಿ ತೊಟ್ಟು ಆಡುತ್ತಿದ್ದರು. ಹೀಗಾಗಿ ಭಾರತ ತಂಡದ ಶರ್ಟ್‌ನ ಹಿಂಭಾಗದಲ್ಲಿ 18 ನೇ ಸಂಖ್ಯೆಯನ್ನು ನೋಡದಿರುವುದು ಸ್ವಲ್ಪ ವಿಚಿತ್ರವಾಗಿದೆ. ವಿರಾಟ್ ಕ್ಲಾಸ್ ಆಟಗಾರ, ಅವರು ತಮ್ಮ ಅದ್ಭುತ ಟೆಸ್ಟ್ ಕ್ರಿಕೆಟ್ ವೃತ್ತಿಜೀವನದಲ್ಲಿ ಅನೇಕ ದಾಖಲೆಗಳನ್ನು ಮಾಡಿದ್ದಾರೆ.

'ಕೊಹ್ಲಿ ನಿವೃತ್ತಿ ಘೋಷಿಸಿದಾಗ ನಾನು ಅವರಿಗೆ ಸಂದೇಶ ಕಳುಹಿಸಿದ್ದೆ. ಆ ಸಂದೇಶದಲ್ಲಿ ನಾನು, 'ಈಗ ನಾನು ನಿಮ್ಮ ವಿರುದ್ಧ ಆಡಲು ಸಾಧ್ಯವಾಗುವುದಿಲ್ಲ, ಇದು ನಾಚಿಕೆಗೇಡಿನ ಸಂಗತಿ ಎಂದು ಬರೆದಿದ್ದೆ. ಏಕೆಂದರೆ ನಾನು ಯಾವಾಗಲೂ ವಿರಾಟ್ ವಿರುದ್ಧ ಆಡಲು ಇಷ್ಟಪಡುತ್ತೇನೆ. ಮೈದಾನದಲ್ಲಿದ್ದಾಗ ಯುದ್ಧ ಎಂದು ಭಾವಿಸುವ ಮನಸ್ಥಿತಿ ನಮಗಿರುವುದರಿಂದ ನಾವಿಬ್ಬರೂ ಪರಸ್ಪರ ವಿರುದ್ಧ ಆಡಲು ಇಷ್ಟಪಡುತ್ತೇವೆ' ಎಂದು ಸ್ಟೋಕ್ಸ್ ಹೇಳಿದ್ದಾರೆ.

**ವಿರಾಟ್ ಟೆಸ್ಟ್ ವೃತ್ತಿಜೀವನ:** ಟೆಸ್ಟ್ ಕ್ರಿಕೆಟ್‌ನಲ್ಲಿ ಟೀಂ ಇಂಡಿಯಾ ಪರ ಅತಿ ಹೆಚ್ಚು ರನ್ ಗಳಿಸಿದವರ ಪಟ್ಟಿಯಲ್ಲಿ ವಿರಾಟ್ ಕೊಹ್ಲಿ ನಾಲ್ಕನೇ ಸ್ಥಾನದಲ್ಲಿದ್ದಾರೆ. ಅವರು 123 ಪಂದ್ಯಗಳಲ್ಲಿ 46.85 ಸರಾಸರಿಯಲ್ಲಿ 9230 ರನ್ ಗಳಿಸಿದ್ದು, ಅವರ ಹೆಸರಿನಲ್ಲಿ 30 ಶತಕಗಳು ಮತ್ತು 31 ಅರ್ಧಶತಕಗಳಿವೆ. ವಿರಾಟ್ ಕೊಹ್ಲಿ ಇಂಗ್ಲೆಂಡ್‌ನಲ್ಲಿ ಆತಿಥೇಯರ ವಿರುದ್ಧ 17 ಪಂದ್ಯಗಳನ್ನಾಡಿದ್ದು ಅದರಲ್ಲಿ ಅವರು 33.21 ಸರಾಸರಿಯಲ್ಲಿ 1096 ರನ್ ಗಳಿಸಿದ್ದಾರೆ. ಇದರಲ್ಲಿ ಎರಡು ಟೆಸ್ಟ್ ಶತಕಗಳು ಸೇರಿವೆ.

**ವಿರಾಟ್ ಕ್ಲಾಸ್ ಆಟಗಾರ**

# ಕರುಣ್ ನಾಯರ್‌ಗೆ ರವಿಶಾಸ್ತ್ರಿ ನೀಡಿದ ಸಂದೇಶವೇನು





ಭಾರತ ಮತ್ತು ಇಂಗ್ಲೆಂಡ್ ನಡುವಿನ ಐದು ಪಂದ್ಯಗಳ ಟೆಸ್ಟ್ ಸರಣಿ ಇದೇ ಜೂನ್ 20 ರಿಂದ ಆರಂಭವಾಗಲಿದೆ. ಈ ಸರಣಿಗೆ ಭಾರತ ತಂಡದಲ್ಲಿ ಕನ್ನಡಿಗ ಕರುಣ್ ನಾಯರ್ ಕೂಡ ಆಯ್ಕೆಯಾಗಿದ್ದಾರೆ. ವಾಸ್ತವವಾಗಿ ವರ್ಷಗಳ ಹಿಂದೆಯೇ ಭಾರತ ಟೆಸ್ಟ್ ತಂಡಕ್ಕೆ ಆಯ್ಕೆಯಾಗಿ ಆಡಿದ ಮೊದಲ ಪಂದ್ಯದಲ್ಲೇ ತ್ರಿಶತಕ ಸಿಡಿಸಿದ್ದ ಕರುಣ್‌ಗೆ ಅದ್ಯಾಕೋ ಹೆಚ್ಚಿನ ಅವಕಾಶಗಳು ಸಿಗಲಿಲ್ಲ. ಆದಾಗ್ಯೂ ಛಲ ಬಿಡದ ಕರುಣ್ ದೇಶೀ ಅಂಗಳದಲ್ಲಿ ರನ್‌ಗಳ ಮಳೆ ಹರಿಸಿ, ಮತ್ತೆ ಟೀಂ ಇಂಡಿಯಾಕ್ಕೆ ಆಯ್ಕೆಯಾಗಿದ್ದಾರೆ. ಈ ನಡುವೆ ಭಾರತ ತಂಡದ ಮಾಜಿ ಮುಖ್ಯ ಕೋಚ್ ರವಿಶಾಸ್ತ್ರಿ ಇತ್ತೀಚೆಗೆ ಕರುಣ್ ನಾಯರ್ ಅವರೊಂದಿಗೆ ನಡೆಸಿದ ಸಂಭಾಷಣೆಯ ಬಗ್ಗೆ ಬಹಿರಂಗವಾಗಿ ಹೇಳಿಕೊಂಡಿದ್ದಾರೆ.

**ಕರುಣ್‌ಗೆ ರವಿಶಾಸ್ತ್ರಿ ನೀಡಿದ ಸಂದೇಶ**

'ದಿ ಐಸಿಸಿ ರಿವ್ಯೂ' ಕಾರ್ಯಕ್ರಮದಲ್ಲಿ ಮಾತನಾಡಿದ ರವಿಶಾಸ್ತ್ರಿ, 'ಕರುಣ್ ನಾಯರ್ ಟೀಂ ಇಂಡಿಯಾಗೆ ಮರಳುವ ಮೊದಲು, ನಾನು ಅವರೊಂದಿಗೆ ಮಾತನಾಡಿದ್ದೆ. ನೀವು ಬಾಗಿಲು ತಟ್ಟಬೇಡಿ, ಅದನ್ನು ಒದ್ದು ಆ ದಿಕ್ಕಿನಲ್ಲಿ ಮುಂದುವರಿಯಿರಿ ಎಂದು ಹೇಳಿದ್ದೆ ಎಂದು ಹೇಳಿಕೊಂಡಿದ್ದಾರೆ.

ಕರುಣ್ ನಾಯರ್ ಟೀಂ ಇಂಡಿಯಾ ಪರ ಇದುವರೆಗೆ ಆರು ಟೆಸ್ಟ್ ಪಂದ್ಯಗಳನ್ನಾಡಿದ್ದು, ಅದರಲ್ಲಿ ಅವರು 62.33 ಸರಾಸರಿಯಲ್ಲಿ 374 ರನ್ ಗಳಿಸಿದ್ದಾರೆ. ಅವರ ಅತ್ಯಧಿಕ ವೈಯಕ್ತಿಕ ಸ್ಕೋರ್ 303 ರನ್ ಆಗಿದ್ದು, ಅಚ್ಚರಿಯ ಸಂಗತಿಯೆಂದರೆ ಈ ತ್ರಿಶತಕವನ್ನು ಕರುಣ್ ಇಂಗ್ಲೆಂಡ್ ವಿರುದ್ಧವೇ ಬಾರಿಸಿದ್ದರು. ಇದೀಗ ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಯನ್ನು ಟೀಂ ಇಂಡಿಯಾ ಗೆಲ್ಲಬೇಕಾದರೆ, ನಾಯರ್ ಎಲ್ಲಾ ಪಂದ್ಯಗಳಲ್ಲಿ ಅದ್ಭುತವಾಗಿ ಬ್ಯಾಟಿಂಗ್ ಮಾಡಿ ಆತಿಥೇಯ ಬೌಲರ್‌ಗಳ ಮೇಲೆ ಒತ್ತಡ ಹೇರಬೇಕಾಗುತ್ತದೆ.

**ಜೂನ್ 20 ರಿಂದ ಟೆಸ್ಟ್ ಸರಣಿ ಆರಂಭ**

ಉಭಯ ತಂಡಗಳ ನಡುವಿನ ಈ ಟೆಸ್ಟ್ ಸರಣಿ ಜೂನ್ 20 ರಿಂದ ಆರಂಭವಾಗಲಿದೆ. ಮೊದಲ ಟೆಸ್ಟ್ ಪಂದ್ಯ ಲೀಡ್ಸ್‌ನಲ್ಲಿ ನಡೆಯಲಿದ್ದು, ಈ ಪಂದ್ಯದಲ್ಲಿ ಕರುಣ್ ನಾಯರ್‌ಗೂ ಅವಕಾಶ ಸಿಗಬೇಕು ಎಂದು ಅನೇಕ ಕ್ರಿಕೆಟ್ ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಈ ಟೆಸ್ಟ್ ಸರಣಿಗಾಗಿ ಟೀಂ ಇಂಡಿಯಾ ಕಠಿಣ ಅಭ್ಯಾಸ ನಡೆಸುತ್ತಿದ್ದು, ಮೊದಲ ಟೆಸ್ಟ್ ಗೆಲ್ಲುವ ಮೂಲಕ ಇಂಗ್ಲೆಂಡ್ ಮೇಲೆ ಒತ್ತಡ ಹೇರುವ ಇರಾದೆಯಲ್ಲಿದೆ. ಆದಾಗ್ಯೂ, ಇಂಗ್ಲೆಂಡ್ ತಂಡವನ್ನು ಅವರ ತವರಿನಲ್ಲಿ ಸೋಲಿಸುವುದು ಟೀಂ ಇಂಡಿಯಾಕ್ಕೆ ಅಷ್ಟು ಸುಲಭವಲ್ಲ.

# ಮೊದಲ ಟೆಸ್ಟ್‌ಗೂ ಮುನ್ನ ತಂಡ ಸೇರಿಕೊಂಡ ಗೌತಮ್ ಗಂಭೀರ್

ಜೂನ್ 20 ರಿಂದ ಇಂಗ್ಲೆಂಡ್ ವಿರುದ್ಧ ನಡೆಯಲಿರುವ ಐದು ಪಂದ್ಯಗಳ ಟೆಸ್ಟ್ ಸರಣಿಗೆ ಮುಂಚಿತವಾಗಿ ಮುಖ್ಯ ಕೋಚ್ ಗೌತಮ್ ಗಂಭೀರ್ ಭಾರತ ತಂಡವನ್ನು ಸೇರಿಕೊಂಡಿದ್ದಾರೆ. ಜೂನ್ 18 ರಂದು ತರಬೇತಿಯ ಸಮಯದಲ್ಲಿ ಗೌತಮ್ ಗಂಭೀರ್ ಟೀಂ ಇಂಡಿಯಾ ಜೊತೆ ಮಾತನಾಡುತ್ತಿರುವುದು ಕಂಡುಬಂದಿದೆ. ಗಂಭೀರ್ ಅವರು ತಂಡಕ್ಕೆ ಮತ್ತೆ ಸೇರ್ಪಡೆಗೊಂಡಿರುವುದು ಭಾರತೀಯ ಆಟಗಾರರ ಮನೋಬಲವನ್ನು ಮತ್ತಷ್ಟು ಹೆಚ್ಚಿಸಿದೆ. ಭಾರತ ಮತ್ತು ಇಂಗ್ಲೆಂಡ್ ನಡುವಿನ ಮೊದಲ ಟೆಸ್ಟ್ ಪಂದ್ಯ ಲೀಡ್ಸ್‌ನಲ್ಲಿ ನಡೆಯಲಿದೆ. ಈ ಟೆಸ್ಟ್ ಸರಣಿಯಲ್ಲಿ, ಟೀಂ ಇಂಡಿಯಾವನ್ನು ಶುಭ್‌ಮನ್ ಗಿಲ್ ಮುನ್ನಡೆಸುತ್ತಿದ್ದು, ರಿಷಭ್ ಪಂತ್ ಅವರನ್ನು ಉಪನಾಯಕರನ್ನಾಗಿ ಮಾಡಲಾಗಿದೆ.

ತಂಡ ಸೇರಿಕೊಂಡ ಗಂಭೀರ್ ಗೌತಮ್ ಗಂಭೀರ್ ಜೂನ್ 11 ರಂದು ಭಾರತಕ್ಕೆ ವಾಪಸ್ಸಾಗಿದ್ದರು. ವಾಸ್ತವವಾಗಿ ಅವರ ತಾಯಿಗೆ ಹೃದಯಾಘಾತವಾಗಿತ್ತು, ಇದರಿಂದಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಕಾರಣಕ್ಕಾಗಿ, ಭಾರತ ಎ ವಿರುದ್ಧ ನಡೆದ ಇಂಟ್ರಾ-ಸ್ಕ್ವಾಡ್ ಪಂದ್ಯದಲ್ಲಿ ಗೌತಮ್ ಗಂಭೀರ್ ಟೀಂ ಇಂಡಿಯಾ ಜೊತೆ ಇರಲಿಲ್ಲ. ಈಗ ಗೌತಮ್ ಗಂಭೀರ್ ಅವರ ತಾಯಿಯ ಆರೋಗ್ಯ ಮೊದಲಿಗಿಂತ ಉತ್ತಮವಾಗಿದ್ದು, ಅದಕ್ಕಾಗಿಯೇ ಅವರು ಮೊದಲ ಟೆಸ್ಟ್ ಪಂದ್ಯಕ್ಕೂ ಮೊದಲು ಮತ್ತೆ ಟೀಂ ಇಂಡಿಯಾವನ್ನು ಸೇರಿಕೊಂಡಿದ್ದಾರೆ. ಗೌತಮ್ ಗಂಭೀರ್ ತಂಡದೊಂದಿಗೆ ಇಲ್ಲದಿದ್ದಾಗ, ಸಹಾಯಕ ತರಬೇತುದಾರರಾದ ಸೀತಾಂಶು ಕೊಟಕ್ ಮತ್ತು ರಯಾನ್ ಟೆನ್ ಡೋಸ್ಚೇಟ್ ತರಬೇತಿಯ ಜವಾಬ್ದಾರಿಯನ್ನು ವಹಿಸಿಕೊಂಡಿದ್ದರು. ಅವರೊಂದಿಗೆ ಬೌಲಿಂಗ್ ಕೋಚ್ ಮೋರ್ನೆ ಮಾರ್ಕೆಲ್ ಕೂಡ ಪ್ರಮುಖ ಪಾತ್ರ ವಹಿಸಿದರು.



# ತಂಡದಲ್ಲಿಲ್ಲ ಸ್ಥಾನ ಭಾರತಕ್ಕೆ ಮರಳಿದ ಟೀಮ್ ಇಂಡಿಯಾ ಆಟಗಾರ

ಭಾರತ ಮತ್ತು ಇಂಗ್ಲೆಂಡ್ ನಡುವಣ ಟೆಸ್ಟ್ ಸರಣಿಯು ಜೂನ್ 20 ರಿಂದ ಶುರುವಾಗಲಿದೆ. ಇಂಗ್ಲೆಂಡ್‌ನಲ್ಲಿ ಜರುಗಲಿರುವ ಈ ಸರಣಿಯಲ್ಲಿ ಟೀಮ್ ಇಂಡಿಯಾ ಒಟ್ಟು 5 ಪಂದ್ಯಗಳನ್ನಾಡಲಿದೆ. ಈ ಸರಣಿಗಾಗಿ ಆಯ್ಕೆ ಮಾಡಲಾದ ಭಾರತ ತಂಡದಲ್ಲಿ ಸರ್ಫರಾಝ್ ಖಾನ್‌ಗೆ ಸ್ಥಾನ ನೀಡಲಾಗಿಲ್ಲ.

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿ ಆರಂಭಕ್ಕೆ ಇನ್ನು ದಿನಗಳು ಮಾತ್ರ ಉಳಿದಿದೆ. ಶುಕ್ರವಾರದಿಂದ ಶುರುವಾಗಲಿರುವ ಈ ಸರಣಿಗೂ ಮುನ್ನ ಭಾರತ ಎ ತಂಡದ ಆಟಗಾರರು ತವರಿಗೆ ಹಿಂತಿರುಗಿದ್ದಾರೆ. ಅದರಲ್ಲೂ ಟೀಮ್ ಇಂಡಿಯಾ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ಭರ್ಜರಿ ಸೆಂಚುರಿ ಸಿಡಿಸಿ ಮಿಂಚಿದ್ದ ಸರ್ಫರಾಝ್ ಖಾನ್ ಕೂಡ ಭಾರತಕ್ಕೆ ಮರಳಿದ್ದಾರೆ. ಆಸ್ಟ್ರೇಲಿಯಾ ವಿರುದ್ಧದ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯಲ್ಲಿ ಕಾಣಿಸಿಕೊಂಡಿದ್ದ ಸರ್ಫರಾಝ್ ಖಾನ್ ಅವರನ್ನು ಇಂಗ್ಲೆಂಡ್ ಸರಣಿಗೆ ಆಯ್ಕೆ ಮಾಡಲಾಗಿಲ್ಲ. ಇದಾಗ್ಯೂ ಯುವ ದಾಂಡಿಗನಿಗೆ ಭಾರತ ಎ ತಂಡದ ಪರ ಕಣಕ್ಕಿಳಿಯಲು ಅವಕಾಶ ನೀಡಲಾಗಿತ್ತು. ಅದರಂತೆ ಇಂಗ್ಲೆಂಡ್ ಲಯನ್ಸ್ ವಿರುದ್ಧದ ಪಂದ್ಯದಲ್ಲಿ ಭಾರತ ಎ ಪರ ಬ್ಯಾಟ್ ಬೀಸಿದ್ದ ಸರ್ಫರಾಝ್ ಖಾನ್ 92 ರನ್ ಬಾರಿಸಿ ಮಿಂಚಿದ್ದರು. ಆ ಬಳಿಕ ನಡೆದ ಟೀಮ್ ಇಂಡಿಯಾ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ಭಾರತ ಎ ಪರ ಬ್ಯಾಟ್ ಬೀಸಿದ್ದರು. ಈ ಅಭ್ಯಾಸ ಪಂದ್ಯದಲ್ಲಿ ಟೀಮ್ ಇಂಡಿಯಾದ ಪ್ರಮುಖ ಬೌಲರ್‌ಗಳ ಬೆಂಡೆತ್ತಿದ ಸರ್ಫರಾಝ್ ಖಾನ್ ಕೇವಲ ಎ76 ಎಸೆತಗಳಲ್ಲಿ 15 ಫೋರ್ ಹಾಗೂ 2 ಸಿಕ್ಸರ್‌ಗಳೊಂದಿಗೆ ಸ್ಫೋಟಕ ಶತಕ ಸಿಡಿಸಿದ್ದರು.




# ನೈಟ್ ರೈಡರ್ಸ್ ವಿರುದ್ಧ 11 ರನ್‌ಗಳಿಂದ ಗೆದ್ದ ಗ್ಲೆನ್ ಮ್ಯಾಕ್ಸ್‌ವೆಲ್!

ಮೇಜರ್ ಲೀಗ್ ಕ್ರಿಕೆಟ್ ಟೂರ್ನಿಯ 8ನೇ ಪಂದ್ಯದಲ್ಲಿ ವಾಷಿಂಗ್ಟನ್ ಫ್ರೀಡಂ ತಂಡವು ಅಮೋಘ ಜಯ ಸಾಧಿಸಿದೆ. ಕ್ಯಾಲಿಫೋರ್ನಿಯಾದ ಒಕ್‌ಲ್ಯಾಂಡ್ ಸ್ಟೇಡಿಯಂನಲ್ಲಿ ನಡೆದ ಲಾಸ್ ಏಂಜಲೀಸ್ ನೈಟ್ ರೈಡರ್ಸ್ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ವಾಷಿಂಗ್ಟನ್ ಫ್ರೀಡಂ ಪರ ಗ್ಲೆನ್ ಮ್ಯಾಕ್ಸ್‌ವೆಲ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದರು.

ಆರಂಭದಲ್ಲಿ ಎಚ್ಚರಿಕೆಯ ಬ್ಯಾಟಿಂಗ್ ಪ್ರದರ್ಶಿಸಿದ ಮ್ಯಾಕ್ಸ್‌ವೆಲ್ ಮೊದಲ 15 ಎಸೆತಗಳಲ್ಲಿ ಕಲೆಹಾಕಿದ್ದು ಕೇವಲ 11 ರನ್‌ಗಳು ಮಾತ್ರ. ಆದರೆ ಆ ಬಳಿಕ ಸಿಡಿಲಬ್ಬರ ಶುರು ಮಾಡಿದ ಮ್ಯಾಕ್ಸಿ 29 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಅಷ್ಟೇ ಅಲ್ಲದೆ 48 ಎಸೆತಗಳಲ್ಲಿ ಶತಕ ಸಿಡಿಸಿ ಬ್ಯಾಟ್ ಮೇಲೆತ್ತಿದರು.

ಈ ಪಂದ್ಯದಲ್ಲಿ ಕೇವಲ 49 ಎಸೆತಗಳನ್ನು ಎದುರಿಸಿದ ಮ್ಯಾಕ್ಸ್‌ವೆಲ್ 13 ಸಿಕ್ಸ್ ಹಾಗೂ 2 ಫೋರ್‌ಗಳೊಂದಿಗೆ 106 ರನ್ ಬಾರಿಸುವ ಮೂಲಕ ವಾಷಿಂಗ್ಟನ್ ಫ್ರೀಡಂ ತಂಡದ ಮೊತ್ತವನ್ನು 208 ಕ್ಕೆ ತಂದು ನಿಲ್ಲಿಸಿದರು.

ಈ ಗುರಿಯನ್ನು ಬೆನ್ನತ್ತಿದ ಲಾಸ್ ಏಂಜಲೀಸ್ ನೈಟ್ ರೈಡರ್ಸ್ ತಂಡವು 16.3 ಓವರ್‌ಗಳಲ್ಲಿ ಕೇವಲ 95 ರನ್‌ಗಳಿಸಿ ಆಲೌಟ್ ಆಗಿದೆ. ಈ ಮೂಲಕ ವಾಷಿಂಗ್ಟನ್ ಫ್ರೀಡಂ ತಂಡವು 113 ರನ್‌ಗಳ ಅಮೋಘ ಗೆಲುವು ದಾಖಲಿಸಿದೆ. ಕುತೂಹಲಕಾರಿ ವಿಷಯ ಎಂದರೆ ವಾಷಿಂಗ್ಟನ್ ಫ್ರೀಡಂ ಪರ ಮ್ಯಾಕ್ಸಿ ಏಕಾಂಗಿಯಾಗಿ ಕಲೆಹಾಕಿದ ಮೊತ್ತವನ್ನು ಸಹ ದಾಟಲು ಲಾಸ್ ಏಂಜಲೀಸ್ ನೈಟ್ ರೈಡರ್ಸ್ ಪಡೆಗೆ ಸಾಧ್ಯವಾಗಿಲ್ಲ. ಹೀಗಾಗಿಯೇ ಇದೀಗ ಗ್ಲೆನ್ ಮ್ಯಾಕ್ಸ್‌ವೆಲ್ ವಿರುದ್ಧ ಲಾಸ್ ಏಂಜಲೀಸ್ ನೈಟ್ ರೈಡರ್ಸ್ ತಂಡಕ್ಕೆ 11 ರನ್‌ಗಳಿಂದ ಸೋಲು ಎಂದು ಟ್ರೋಲ್ ಮಾಡಲಾಗುತ್ತಿದೆ.




Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news



ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966